ಸಂಪುಟ: 05 ಸಂಚಿಕೆ: 132 ಪುಟಗಳು: 08 ಶುಕ್ರವಾರ 25 ಜುಲೈ 2025

www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833 9448225696 +91 8035841833 ₹5

**ಮುಂಜಾನೆ ಮಾತು**
ನೀವು ಯಾವತ್ತು ನಿಮ್ಮನ್ನು ನೀವು ಪ್ರೀತಿಸಲು ಪ್ರಾರಂಭಿಸುತ್ತೀರೋ, ಯಾವತ್ತು ನೀವು ನಿಮ್ಮನ್ನು ನೀವು ನಂಬಲು ಪ್ರಾರಂಭಿಸುತ್ತೀರೋ ಅವತ್ತಿನಿಂದ ನಿಮ್ಮ ಜೀವನದಲ್ಲಿ ಮಿರಾಕಲಗಳಾಗಲು ಶುರುವಾಗುತ್ತವೆ?

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ತಲಾದಾಯದಲ್ಲಿ ಕರ್ನಾಟಕ ಪ್ರಥಮ ಎನ್ನಲು ಸರ್ಕಾರಕ್ಕೆ ನಾಚಿಕೆಯಾಗಬೇಕು : ಸೀತಾರಾಮ್

• ಉದಯವಾಹಿನಿ ಬೆಂಗಳೂರು

ಗ್ಯಾರಂಟಿ ಹಣವನ್ನೇ ಬಿಡುಗಡೆ ಮಾಡದೇ ತಲಾದಾಯದಲ್ಲಿ ರಾಜ್ಯವೇ ಪ್ರಥಮ ಎಂದು ಹೇಳಲು ಕಾಂಗ್ರೆಸ್ ನಾಯಕರುಗಳಿಗೆ ನಾಚಿಕೆಯಾಗುವುದಿಲ್ಲವೇ ಎಂದು ಆಮ್ ಆದಿ ಪಕ್ಷದ ರಾಜ್ಯ ಕಾರ್ಯಾಧ್ಯಕ್ಷ ಸೀತಾರಾಮ್ ಗುಂಡಪ್ಪ ಪ್ರಶ್ನೆ ಮಾಡಿದ್ದಾರೆ.

ಕಳೆದ ಫೆಬ್ರವರಿ ತಿಂಗಳಿನಿಂದ ರಾಜ್ಯದ ಅನೇಕ ಜಿಲ್ಲೆಗಳಲ್ಲಿ ಲಕ್ಷಾಂತರ ಮಹಿಳೆಯರಿಗೆ ಗೃಹಲಕ್ಷ್ಮಿಯ ಹಣವನ್ನೇ ಬಿಡುಗಡೆ ಮಾಡಿಲ್ಲ. ಎಲ್ಲಾ ಜಿಲ್ಲೆಗಳಲ್ಲಿಯೂ ಮಹಿಳೆಯರು ಸಾಕಷ್ಟು ಆಕ್ರೋಶ ಭರಿತರಾಗಿದ್ದಾರೆ. ಗ್ಯಾರೆಂಟಿ ಹಣವನ್ನು ರಾಜ್ಯ ಕಾಂಗ್ರೆಸ್ ಸರ್ಕಾರ ಕೇವಲ ಚುನಾವಣೆಗಳಿಗಾಗಿ, ತಮ ನಕಲಿ ಸಾಧನ ಸಮಾವೇಶಗಳ ಸಮಯದಲ್ಲಿ ಮಹಿಳೆಯರ ಪ್ರಲೋಭನೆಗಾಗಿ ಮಾತ್ರ ಹಣವನ್ನು ಬಿಡುಗಡೆ ಮಾಡುತ್ತಿದ್ದಾರೆ. ಇನ್ನು ಮಿಕ್ಕೆಲ್ಲಾ ಗ್ಯಾರಂಟಿಗಳು ಸಂಪೂರ್ಣ ಹಳ್ಳ ಹಿಡಿದಿವೆ ಎಂದು ಹೇಳಿದ್ದಾರೆ. ಆಹಾರ ಭದ್ರತಾ ಕಾಯ್ದೆಯ ಅಡಿಯಲ್ಲಿ ಕೇಂದ್ರ ಸರ್ಕಾರವು ಕಡ್ಡಾಯವಾಗಿ ಕುಟುಂಬದ ಪ್ರತಿಯೊಬ್ಬ ಸದಸ್ಯರಿಗೂ ತಲಾ 5 ಕೆ.ಜಿ. ಅಕ್ಕಿಯನ್ನು ಅನ್ನಭಾಗ್ಯ ಎಂಬ ಹೆಸರಿನಲ್ಲಿ ಕಾಂಗ್ರೆಸ್ ರಾಜ್ಯ ಸರ್ಕಾರವು ತನ್ನ ಕಾರ್ಯಕ್ರಮವೆಂದು ಬಿಂಬಿಸಿಕೊಳ್ಳುತ್ತಿರುವುದು ತೀರ ನಾಚಿಕೆಗೇಡಿನ ಸಂಗತಿ ಎಂದು ಕಿಡಿಕಾರಿದ್ದಾರೆ.

## ಕರ್ನಾಟಕದಲ್ಲಿ ಚುನಾವಣಾ ಅಕ್ರಮದ ಬಗ್ಗೆ ಆಯೋಗ ಗಮನ ಹರಿಸಲಿ: ಪರಂ

• ಉದಯವಾಹಿನಿ ಬೆಂಗಳೂರು

ಚುನಾವಣಾ ಅಕ್ರಮದ ಬಗ್ಗೆ ರಾಹುಲ್ ಗಾಂಧಿ ಅವರು ಮೊದಲಿನಿಂದಲೂ ಹೇಳ್ತಿದ್ದಾರೆ. ಚುನಾವಣಾ ಆಯೋಗ ಅದನ್ನು ತಿರಸ್ಕರಿಸುತ್ತಿತ್ತು. ಈಗ ಅದರ ಬಗ್ಗೆ ಆಯೋಗ ಗಮನ ಹರಿಸಬೇಕು ಎಂದು ರಾಜ್ಯ ಗೃಹಸಚಿವ ಜಿ.ಪರಮೇಶ್ವರ್ ಆಗ್ರಹಿಸಿದ್ದಾರೆ. ಕರ್ನಾಟಕದ ಒಂದು ಲೋಕಸಭಾ ಚುನಾವಣೆಯಲ್ಲಿ ಅಕ್ರಮವಾಗಿದೆ ಎಂಬ ರಾಹುಲ್ ಗಾಂಧಿ ಹೇಳಿಕೆ ವಿಚಾರವಾಗಿ ಅವರು ಮಾಧ್ಯಮದವರೊಂದಿಗೆ ಮಾತನಾಡಿದರು. ಚುನಾವಣೆ ಅಕ್ರಮದ ಬಗ್ಗೆ ಬಹಿರಂಗಪಡಿಸಿದ ನಂತರ ಅದನ್ನು ಗಂಭೀರವಾಗಿ ಪರಿಗಣಿಸಬೇಕು. ನಾವು ಸಹ ವೋಟರ್ ಲಿಸ್ಟ್ನಲ್ಲಿ ಏರುಪೇರಾಗಿದೆ ಅನ್ನೋದನ್ನ ಹೇಳ್ತಾನೆ ಬಂದಿದ್ದೇವೆ. ಚುನಾವಣಾ ಆಯೋಗವು ಇದನ್ನು ಸೀರಿಯಸ್ ಆಗಿ ಗಮನಹರಿಸಬೇಕು ಎಂದಿದ್ದಾರೆ.

## ಸ್ಮಾರ್ಟ್ ಮೀಟರ್ ಹಗರಣ ಆರೋಪ ಕೋರ್ಟ್ ತೀರ್ಪಿಗೆ ಬದ್ಧ: ಜಾರ್ಜ್

• ಉದಯವಾಹಿನಿ ಬೆಂಗಳೂರು

ಸ್ಮಾರ್ಟ್ ಮೀಟರ್ ವಿಚಾರದಲ್ಲಿ ಕೋರ್ಟ್ ಕೊಡೋ ತೀರ್ಪಿಗೆ ನಾನು ಬದ್ಧನಾಗಿರುತ್ತೇನೆ ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ಸ್ಪಷ್ಟಪಡಿಸಿದ್ದಾರೆ. ಸ್ಮಾರ್ಟ್ ಮೀಟಿಂಗ್ ಹಗರಣ ಆರೋಪದಲ್ಲಿ ಸಚಿವ ಜಾರ್ಜ್ ಮೇಲೆ ಎಫ್ಐಆರ್‌ಗೆ ಕೋರ್ಟ್ ಸೂಚನೆ ಕೊಟ್ಟಿದೆ ಎಂಬ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಕೋರ್ಟ್ ಎಫ್ಐಆರ್ ಹಾಕಿ ಅಂತ ಹೇಳಿರೋ ಆರ್ಡರ್ ಇದ್ದರೆ ಕೊಡಿ. ಜನಪ್ರತಿನಿಧಿಗಳ ಕೋರ್ಟ್ ಆದೇಶ ಮಾಡಿರೋದು ನಾನು ನೋಡಿಲ್ಲ. ಆದೇಶ ಪ್ರತಿ ಇದ್ದರೆ ಕೊಡಿ ನಾನು ಪ್ರತಿಕ್ರಿಯೆ ಕೊಡ್ತೀನಿ ಎಂದಿದ್ದಾರೆ. ಸ್ಮಾರ್ಟ್ ಮೀಟರ್ ಕುರಿತು ಅಶ್ವಥ್ ನಾರಾಯಣ ಮತ್ತು ಬಿಜೆಪಿಯವರು ಈ ಕೇಸ್ ಹಾಕಿದ್ದಾರೆ. ಹೈಕೋರ್ಟ್, ರಾಜ್ಯಪಾಲರು, ಜನಪ್ರತಿನಿಧಿಗಳ ಕೋರ್ಟ್ ಎಲ್ಲಾ ಕಡೆ ಅವರು ದೂರು ಕೊಟ್ಟಿದ್ದಾರೆ. ಕೋರ್ಟ್ ಏನಾದ್ರು ನನಗೆ ವಿವರಣೆ ಕೇಳಿದ್ರೆ ಕೊಡ್ತೀನಿ. ಸ್ಮಾರ್ಟ್ ಮೀಟರ್ ವಿಚಾರ ನಾವು ಕಾನೂನು ಪ್ರಕಾರವಾಗಿ ಮಾಡಿದ್ದೇವೆ. ಅಕ್ರಮದ ದಾಖಲೆ ಇದ್ದರೆ ಕೋರ್ಟ್‌ಗೆ ಅವರು ಕೊಡಲಿ. ಕೋರ್ಟ್ ಕೊಡುವ ತೀರ್ಪಿಗೆ ನಾನು ಬದ್ಧನಾಗಿರುತ್ತೇನೆ ಎಂದು ತಿಳಿಸಿದ್ದಾರೆ.

## ಕಾಲ್ತುಳಿತ ಘಟನೆಗೆ ಆರ್‌ಸಿಬಿ ಕಾರಣ, ಇದ್ಯಾವ ಸೀಮೆ ನ್ಯಾಯ ಸ್ವಾಮೀ: ಬೆಲ್ಲದ್

• ಉದಯವಾಹಿನಿ ಬೆಂಗಳೂರು

ಜೂನ್ 4 ರಂದು ನಡೆದ ಸಂಭ್ರಮಾಚರಣೆಯಲ್ಲಿ ಕಾಲ್ತುಳಿತಕ್ಕೆ ಒಳಗಾಗಿ 11 ಜನ ಸತ್ತಿದ್ದಕ್ಕೆ ರಾಜ್ಯ ಸಚಿವ ಸಂಪುಟ ಆರ್‌ಸಿಬಿ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹೂಡಲು ನಿರ್ಧರಿಸಿದೆ. ಸರ್ಕಾರದ ನಿಲುವನ್ನು ಬಿಜೆಪಿ ಶಾಸಕ ಅರವಿಂದ್ ಬೆಲ್ಲದ್ ಕಟುವಾಗಿ ಟೀಕಿಸಿದ್ದಾರೆ. ಯಾವ ಯ್ಯಾಂಗಲ್ ನಿಂದ ಆರ್‌ಸಿಬಿ ಆ ಘೋರ ಘಟನೆಗೆ ಕಾರಣೀಭೂತವಾಗುತ್ತದೆ? ಕಪ್ ಗೆದ್ದಿದ್ದು ಅವರ ತಪ್ಪೇ? ತಮ್ಮ ತಪ್ಪನ್ನು ಮುಚ್ಚಿಕೊಳ್ಳಲು ಪೊಲೀಸ್ ಕಮೀಷನರ್, ಇತರ ಹಿರಿಯ ಅಧಿಕಾರಿಗಳು ಸಸ್ಪೆಂಡ್ ಮಾಡಿ, ಸಿಎಂ ಅವರ ರಾಜಕೀಯ ಕಾರ್ಯದರ್ಶಿ ಗೋವಿಂದರಾಜುರನ್ನು ಜವಾಬ್ದಾರಿಯಿಂದ ವಿಮುಖಗೊಳಿಸಿದ ಸಿಎಂ ಮತ್ತು ಡಿಸಿಎಂ, ಸದನದಲ್ಲಿ ವಿರೋಧ ಪಕ್ಷಗಳಿಂದ ಬಚಾವಾಗಲು ಆರ್‌ಸಿಬಿ, ಕೆಎಸ್ಎ ಡಿಎನ್ಎ ಸಂಸ್ಥೆಗಳನ್ನು ಬಲಿಪಶು ಮಾಡುತ್ತಿದೆ, ಎಂದು ಹೇಳಿದರು.

# ಮತ್ತೆ ಮಹಾದಾಯಿ ಮಹಾಸಮರ



- ಮಹದಾಯಿ ವಿವಾದ: ಮತ್ತೆ ಕ್ಯಾತೆ ತೆಗೆದ ಗೋವಾ
- ಮಹದಾಯಿ ನದಿ ನೀರು ವಿವಾದ
- ಕರುನಾಡ ಜನತೆಗೆ ಕೇಂದ್ರ ದ್ರೋಹ
- ಮಹದಾಯಿ ವಿಚಾರದಲ್ಲಿ ಮತ್ತೆ ಗೋವಾ ಕ್ಯಾತೆ
- ಸಿಎಂ ಪ್ರಮೋದ್ ಸಾವಂತ್ ಹೇಳಿಕೆಗೆ ಕರ್ನಾಟಕ ಸರ್ಕಾರ ಕಿಡಿ
- ಮಹದಾಯಿ ಯೋಜನೆಗೆ ಗೋವಾ ಮತ್ತೆ ಅಡ್ಡಗಾಲು..

ಕೇಂದ್ರ ಸಚಿವರ ಹೆಸರೇಳಿ ಸಾವಂತ್ ತಗಾದೆ...!




• ಉದಯವಾಹಿನಿ ಬೆಂಗಳೂರು

ಮಹದಾಯಿ ನದಿ ವಿಚಾರದಲ್ಲಿ ಗೋವಾ ಸರ್ಕಾರ ಪದೇ ಪದೇ ಕ್ಯಾತೆ ತೆಗೆಯುತ್ತಲೇ ಬಂದಿದೆ. ಕರ್ನಾಟಕವು ಕಳಸಾ-ಬಂಡೂರಿ ನಾಲಾ ಯೋಜನೆಯಡಿ ಮಹದಾಯಿ ನದಿಯಿಂದ ನೀರನ್ನು ತಿರುಗಿಸಲು ಯೋಜಿಸಿದೆ. ಆದರೆ, ಗೋವಾ ಸರ್ಕಾರ ಇದಕ್ಕೆ ನಿರಂತರ ವಿರೋಧವನ್ನು ಮಾಡುತ್ತಲೇ ಬರುತ್ತಿದೆ. ಇದೀಗ ಮತ್ತೆ ಕ್ಯಾತೆ ತೆಗೆದಿದೆ. ಕೇಂದ್ರ ಸರ್ಕಾರವು ಮಹಾದಾಯಿ ಯೋಜನೆಗೆ ಯಾವುದೇ ಕಾರಣಕ್ಕೂ ಅನುಮೋದನೆ ನೀಡುವುದಿಲ್ಲವೆಂದು ಕೇಂದ್ರ ಪರಿಸರ ಮತ್ತು ಅರಣ್ಯ ಖಾತೆ ಸಚಿವರಾದ ಭೂಪೇಂದ್ರ ಯಾದವ್ ತಮಗೆ ತಿಳಿಸಿದ್ದಾರೆ ಎಂದು ಗೋವಾ ಸಿಎಂ ಪ್ರಮೋದ್ ಸಾವಂತ್ ಗೋವಾ ವಿಧಾನಸಭೆಯಲ್ಲಿ ಹೇಳಿಕೆ ನೀಡಿರುವುದು ಈಗ ಆಕ್ಷೇಪಕ್ಕೆ ಗುರಿಯಾಗಿದೆ.

**ಕರ್ನಾಟಕಕ್ಕೆ ಅಘಾತ ತಂದಿದೆ:** ಪ್ರಮೋದ್ ಸಾವಂತ್ ಮಹದಾಯಿ ಹೇಳಿಕೆಗೆ ಪ್ರತಿಕ್ರಿಯೆ ನೀಡಿರುವ ಕಾನೂನು, ಸಂಸದೀಯ ವ್ಯವಹಾರಗಳ ಸಚಿವ ಹೆಚ್‌ಕೆ ಪಾಟೀಲ್, ಕೇಂದ್ರ ಸಚಿವ ಭೂಪೇಂದ್ರ ಯಾದವ್ ಮಹದಾಯಿ ಯೋಜನೆ ಮಾಡಲು ಪರವಾನಿಗೆ ಕೊಡುವುದಿಲ್ಲ ಎಂದು ಗೋವಾ ಸಿಎಂ ವಿಧಾನಸಭೆಯಲ್ಲಿ ಹೇಳಿದ್ದಾರೆ. ಈ ಹೇಳಿಕೆ ಸಹಜವಾಗಿ ಕರ್ನಾಟಕಕ್ಕೆ ಆಗುವ ಅನ್ಯಾಯವನ್ನು ತೆರೆದಿಟ್ಟಿದೆ. ಇದರಿಂದ ಕರ್ನಾಟಕ್ಕೆ ಅಘಾತ ಆಗಿದೆ ಎಂದಿದ್ದಾರೆ. ಅಷ್ಟೇ ಅಲ್ಲದೆ, ಮಹಾದಾಯಿ ಜಲವಿವಾದ ಸಂಬಂಧ ಅಂತರರಾಜ್ಯ ಜಲವಿವಾದದ ಕಾಯ್ದೆಯನ್ವಯ ಒಂದು ನ್ಯಾಯಾಧೀಕರಣ ರಚನೆಯಾಗಿ ಅದು ಅಂತಿಮ ತೀರ್ಪು ನೀಡಿ, ಆ ತೀರ್ಪು ಕೇಂದ್ರ ಸರ್ಕಾರದ ಗೆಜೆಟ್ನಲ್ಲಿ ಪ್ರಕಟಣೆಯಾಗಿ ನ್ಯಾಯಾಧೀಕರಣದ ತೀರ್ಪು ಜಾರಿಗೆ ಬಂದಿದೆ ಎಂದಿದ್ದಾರೆ.

ಕರ್ನಾಟಕವು ಕಳಸಾ-ಬಂಡೂರಿ ಯೋಜನೆಗೆ 7.56 ಟಿಎಂಸಿ ಅಡಿ ನೀರನ್ನು ಮಲಪ್ರಭಾ ಕಣಿವೆಗೆ ತಿರುಗಿಸಿಕೊಳ್ಳಲು ತನ್ನ ಕೋರಿಕೆ ಸಲ್ಲಿಸಿತ್ತು. ಇದರಲ್ಲಿ 3.90 ಟಿಎಂಸಿ ನೀರನ್ನು ಕರ್ನಾಟಕದ ಪಾಲಿಗೆ ಹಂಚಿಕೆ ಮಾಡಿದೆ.

ಅಂತರ್ ಕಣಿವೆ ತಿರುಗಿಸುವಿಕೆಯನ್ನು ಕರ್ನಾಟಕದ ಕಡೆಯಿಂದ ಮಾಡಿಕೊಳ್ಳಲು ನ್ಯಾಯಾಧೀಕರಣ ಒಪ್ಪಿದೆ. ಈ ಯೋಜನೆ ಜಾರಿಗೊಳಿಸಲು ಪ್ರಸ್ತಾವನೆಯನ್ನು ರಾಷ್ಟ್ರೀಯ ಹುಲಿ ಸಂರಕ್ಷಣಾ ಪ್ರಾಧಿಕಾರಕ್ಕೆ ಕರ್ನಾಟಕ ಮಂಜೂರಿಗಾಗಿ /ತೀರುವಳಿಗಾಗಿ ಅರ್ಜಿ ಸಲ್ಲಿಸಿತ್ತು. 10.6 ಹೆಕ್ಟೇರ್ ಅರಣ್ಯ ಭೂಮಿ ಕಾಳಿ ಮತ್ತು ಸಹ್ಯಾದ್ರಿ ಹುಲಿ ಕಾಯ್ದಿಟ್ಟ ಪ್ರದೇಶದಲ್ಲಿ ಬರುತ್ತದೆ ಎಂದು ಗೋವಾ ಆಕ್ಷೇಪಿಸಲು ಪ್ರಾರಂಭಿಸಿತು. ಈ ಹಿನ್ನೆಲೆಯಲ್ಲಿ ದಿನಾಂಕ: 23.01.2024 ರಂದು ರಾಷ್ಟ್ರೀಯ ಹುಲಿ ಸಂರಕ್ಷಣಾ ಪ್ರಾಧಿಕಾರವು ಈ ಅರಣ್ಯ ಪ್ರದೇಶವನ್ನು ಬಳಕೆ ಮಾಡಿಕೊಳ್ಳಲು ಶಿಫಾರಸ್ಸು ಮಾಡಿದೆ. ಸರ್ವೋಚ್ಚ ನ್ಯಾಯಾಲಯವು ಕರ್ನಾಟಕದ ಮಹಾದಾಯಿ ತಡೆಹಿಡಿಯಬೇಕೆಂಬ ಯಾವುದೇ ಆದೇಶ ನೀಡಿಲ್ಲ ಎಂದು ಹೆಚ್ ಕೆ ಪಾಟೀಲ್ ಹೇಳಿದ್ದಾರೆ.

ನ್ಯಾಯಾಂಗದ ಯಾವುದೇ ಅಡೆತಡೆ ಇಲ್ಲದಿದ್ದರೂ ಕರ್ನಾಟಕದ ವಿರುದ್ಧ ಮಲತಾಯಿ ಧೋರಣೆ ಅನುಸರಿಸುತ್ತಾ ಇರುವುದು ಒಕ್ಕೂಟ ವ್ಯವಸ್ಥೆಗೆ ಮಾಡುತ್ತಿರುವ ಅನ್ಯಾ ಎಂದು ಸಚಿವ ಪಾಟೀಲ್ ಬೇಸರ ವ್ಯಕ್ತಪಡಿಸಿದ್ದಾರೆ.

ಅಂತರರಾಜ್ಯ ಜಲವಿವಾದ ಕಾಯ್ದೆಯಡಿಯಲ್ಲಿ ನ್ಯಾಯಾಧೀಕರಣದಿಂದ ಇತ್ಯರ್ಥಗೊಂಡಿರುವ ಯೋಜನೆಗಳನ್ನು ಅನುಷ್ಠಾನಗೊಳಿಸಲು ಕರ್ನಾಟಕಕ್ಕೆ ಕೇಂದ್ರ ಸರ್ಕಾರವು ತಾನು ನೀಡಬೇಕಾದ ಮಂಜೂರಾತಿಗಳನ್ನು ತಕ್ಷಣ ನೀಡದಿರುವುದು ಜನರ ಆಕ್ರೋಶಕ್ಕೆ ಕಾರಣವಾಗುತ್ತಿದೆ. ಇದರ ಜೊತೆಗೆ ಉತ್ತರ ಕರ್ನಾಟಕ ಜನರ ಹಾಗೂ ರೈತರ ಹಿತ ಗಮನಿಸಿ, ಯೋಜನೆಗೆ ತಕ್ಷಣ ಅನುಮತಿ ನೀಡಬೇಕೆಂದು ಸಚಿವ ಪಾಟೀಲ್ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ.

1. ಮಹದಾಯಿ ಯೋಜನೆ ಬಗ್ಗೆ ಮತ್ತೆ ಗೋವಾ ಸಿಎಂ ಕ್ಯಾತೆ
2. ಗೋವಾ ಸಿಎಂ ಹೇಳಿಕೆಗೆ ಕರ್ನಾಟಕ ಸಿಎಂ ಕಿಡಿ
3. ಕೇಂದ್ರ ಸರ್ಕಾರದ ನಡೆ ಬಗ್ಗೆ ಸಿದ್ದರಾಮಯ್ಯ ಗರಂ...!

## ಮಹದಾಯಿ ನಮ್ಮ ರಾಜ್ಯದ ಹಕ್ಕು

ಮಹದಾಯಿ ನಮ್ಮ ರಾಜ್ಯದ ಹಕ್ಕು ಕೇಂದ್ರ ಅನುಮತಿ ಕೊಡಲ್ಲ ಅನ್ನೋಕೆ ಗೋವಾ ಸಿಎಂ ಯಾರು ಎಂದು ಮಹದಾಯಿ ಹೋರಾಟಗಾರ, ಶಾಸಕ ಕೋನರೆಡ್ಡಿ ಕಿಡಿಕಾರಿದ್ದಾರೆ. ಮಹದಾಯಿಗೆ ಕೇಂದ್ರ ಅನುಮತಿ ಕೊಡಲ್ಲ ಎಂಬ ಗೋವಾ ಸಿಎಂ ಹೇಳಿಕೆ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು, ಮಹದಾಯಿ ವಿಚಾರದಲ್ಲಿ ಕರ್ನಾಟಕಕ್ಕೆ ಸುಪ್ರೀಂಕೋರ್ಟ್‌ನಲ್ಲಿ ಜಯ ಸಿಕ್ಕಿದೆ. ಗೋವಾ ಸಿಎಂ ಈ ರೀತಿ ಮಾತನಾಡಿರೋದು ಸರಿಯಲ್ಲ. ಕೇಂದ್ರ ಅನುಮತಿ ಕೊಡಲ್ಲ ಎಂದು ಹೇಳಿಕೆ ನೀಡೋಕೆ ಇವರು ಯಾರು, ಗೋವಾದಲ್ಲಿ ಇಬ್ಬರು ಸಂಸದರಿದ್ದಾರಷ್ಟೇ. ನಮ್ಮಲ್ಲಿ 28 ಸಂಸದರಿದ್ದಾರೆ. ಅವರ ಮಾತು ಕೇಂದ್ರ ಕೇಳುತ್ತಾ ಎಂದು ಪ್ರಶ್ನಿಸಿದ್ದಾರೆ. ನಾವು ಹಾಲು, ಕಾಯಿಪಲ್ಯ ನಿಲ್ಲಿಸಿದ್ರೆ ಗೋವಾಗೆ ಏನು ಸಿಗೋದಿಲ್ಲ, ನೆನಪಿರಲಿ. ಗೋವಾದವರು ಏನೇ ಮಾಡಿದ್ರು ಮಹದಾಯಿ ತಡೆಯೋಕೆ ಆಗೊಲ್ಲ. ಸಿಎಂ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದು ಸರ್ವಪಕ್ಷದ ಸಭೆ ಕರೆದು, ಪ್ರಧಾನಿಗಳ ಬಳಿ ನಿಯೋಗ ತೆಗೆದುಕೊಂಡು ಹೋಗುವಂತೆ ಮನವಿ ಮಾಡ್ತೇನೆ ಎಂದಿದ್ದಾರೆ.

## ಎಲ್ಲಾ ಸಂಸದರು ಒಟ್ಟಾಗಿ ಹೋರಾಡಬೇಕು

ಈ ವಿಚಾರವಾಗಿ ರಾಜ್ಯದ ಎಲ್ಲಾ ಸಂಸದರನ್ನು ಭೇಟಿ ಮಾಡುತ್ತೇನೆ. ಇದು ನಮ್ಮ ರಾಜ್ಯದ ಸ್ವಾಭಿಮಾನದ ಪ್ರಶ್ನೆ. ಈ ವಿಚಾರದಲ್ಲಿ ನಮ್ಮ ಸಂಸದರು ಬಾಯಿ ಮುಚ್ಚಿಕೊಂಡಿರುವುದೇ ದೊಡ್ಡ ತಪ್ಪು ಎಂದರು. ನಮ್ಮ ರಾಜ್ಯದ 28 ಲೋಕಸಭೆ ಸದಸ್ಯರು, 12 ರಾಜ್ಯಸಭೆ ಸದಸ್ಯರು ಒಗ್ಗಟ್ಟಿನಿಂದ ಹೋರಾಡಿ ರಾಜ್ಯದ ಗೌರವ ಕಾಪಾಡಬೇಕಾಗಿದೆ. ಗೋವಾದ ಕೇವಲ ಒಂದು ಸಂಸದರಿಗಾಗಿ ನಮ್ಮ ಕರ್ನಾಟಕವನ್ನು ಮಾರಿಕೊಳ್ಳಲು ಸಾಧ್ಯವಿಲ್ಲ. ಬಿಜೆಪಿ ಸಂಸದರು, ರಾಜ್ಯವನ್ನು ಪ್ರತಿನಿಧಿಸುತ್ತಿರುವ ಕೇಂದ್ರ ಸರ್ಕಾರದ ಸಚಿವರು, ಪ್ರಧಾನಮಂತ್ರಿಗಳ ಮೇಲೆ ಒತ್ತಡ ಹಾಕಬೇಕು. ನಾನು ಕೂಡ ಕೇಂದ್ರ ಜಲಶಕ್ತಿ ಸಚಿವರು, ಪ್ರಧಾನಮಂತ್ರಿಯನ ಭೇಟಿ ಮಾಡಲು ಸಮಯಾವಕಾಶ ಕೇಳುತ್ತೇನೆ. ಎಲ್ಲಾ ಸಂಸದರ ನಿಯೋಗವನ್ನು ಕರೆದೊಯ್ಯುವ ಪ್ರಯತ್ನ ಮಾಡುತ್ತೇನೆ ನಮ್ಮ ಜೊತೆ ಎಲ್ಲರೂ ಬರುವ ನಂಬಿಕೆ ಇದೆ.



ಮಹದಾಯಿ ಯೋಜನೆಗೆ ಅನುಮತಿ ನೀಡುವುದಿಲ್ಲ ಎಂಬ ಕೇಂದ್ರ ಸರ್ಕಾರದ ನಿರ್ಧಾರ ಕರ್ನಾಟಕದ ಜನತೆಗೆ ಬಗೆಯುವ ದ್ರೋಹ. ಇದನ್ನು ಕರ್ನಾಟಕ ಸರ್ಕಾರ ಅತ್ಯುಗ್ರವಾಗಿ ಖಂಡಿಸುತ್ತದೆ. ಅನ್ಯಾಯದ ವಿರುದ್ಧ ಸಮಸ್ತ ಕನ್ನಡಿಗರೊಂದಿಗೆ ಹೋರಾಟ ನಡೆಸಲಿದೆ. ಮಹದಾಯಿ ಯೋಜನೆಗೆ ಅನುಮತಿ ನೀಡುವುದಿಲ್ಲ ಎಂದು ಕೇಂದ್ರ ಪರಿಸರ ಮತ್ತು ಅರಣ್ಯ ಖಾತೆ ಸಚಿವ ಭೂಪೇಂದ್ರ ಯಾದವ್ ಅವರೇ ನನಗೆ ತಿಳಿಸಿದ್ದಾರೆ ಎಂದು ಸಾವಂತ್ ಗೋವಾ ವಿಧಾನಸಭೆಯಲ್ಲಿ ಹೇಳಿದ್ದಾರೆ. ಬೆಳಗಾವಿ, ಹುಬ್ಬಳ್ಳಿ, ಧಾರವಾಡ, ಗದಗ, ಬಾಗಲಕೋಟೆ ಪ್ರದೇಶದ ಜನತೆಯ ಕುಡಿಯುವ ನೀರಿಗಾಗಿ 40 ಟಿಎಂಸಿ ನೀರನ್ನು ಬಳಸಿಕೊಳ್ಳುವ ಕಳಸಾ-ಬಂಡೂರಿ ಯೋಜನೆ ಈಗಾಗಲೇ ಅನುಷ್ಠಾನಕ್ಕೆ ಸಿದ್ದಗೊಂಡಿದ್ದು, ಗೋವಾದ ಬಿಜೆಪಿ ಸರ್ಕಾರದ ಜೊತೆ ಶಾಮೀಲಾಗಿ ಕೇಂದ್ರ ಸರ್ಕಾರ ನಿರಂತರವಾಗಿ ಅಡ್ಡಗಾಲು ಹಾಕುತ್ತಿದೆ. -ಸಿದ್ದರಾಮಯ್ಯ, ಸಿಎಂ




ಮಹದಾಯಿ ಯೋಜನೆ ವಿಚಾರದಲ್ಲಿ ಒಗ್ಗಟ್ಟಾಗಿ ಹೋರಾಡಬೇಕು. ಇದು ನಮ್ಮ ಸ್ವಾಭಿಮಾನದ ಪ್ರಶ್ನೆ, 28 ಸಂಸದರು ಇದ್ದೇವೆ. ಇಂತಹ ಸಂದರ್ಭದಲ್ಲಿ ಬಾಯಿ ಮುಚ್ಚಿ ಕುಳಿತುಕೊಳ್ಳುವುದು ತಪ್ಪು. ಕರ್ನಾಟಕದ ಪರವಾಗಿ ಗೌರವ ಉಳಿಸಿಕೊಳ್ಳೋಕೆ ಒಂದಾಗಬೇಕು. ಒಂದು ಎಂಪಿಗಾಗಿ ನಾವು ರಾಜ್ಯವನ್ನು ಮಾರಿಕೊಳ್ಳಲು ಸಿದ್ಧವಿಲ್ಲ. ಗೋವಾ ಸಿಎಂ ಮಾನಸಿಕ ಸ್ಥಿಮಿತ ಕಳೆದುಕೊಂಡಿದ್ದಾರೆ.ಅವರಿಗೆ ಒಕ್ಕೂಟ ವ್ಯವಸ್ಥೆ ಬಗ್ಗೆ ಅರಿವು ಇಲ್ಲ. - ಡಿ.ಕೆ.ಶಿವಕುಮಾರ್, ಡಿಸಿಎಂ

## ಮೈಸೂರಿಗೆ ಕೇಂದ್ರದಿಂದ 20 ಕೋಟಿ ರೂ. ಅನುದಾನ : ಸಿಎಂಗೆ ಶಾಸಕ ಶ್ರೀವತ್ಸ ತಿರುಗೇಟು

• ಉದಯವಾಹಿನಿ ಮೈಸೂರು

ಕೇಂದ್ರ ಸರಕಾರ ಮೈಸೂರು ಜಿಲ್ಲೆಗೆ 20 ಸಾವಿರ ಕೋಟಿ ರೂ. ಅನುದಾನ ನೀಡಿದೆ. ಆದರೂ, ಸಿಎಂ ಸಿದ್ದರಾಮಯ್ಯ ಮೈಸೂರಿಗೆ ಏನೂ ಕೊಟ್ಟಿಲ್ಲ ಎಂದು ಸುಳ್ಳು ಹೇಳುತ್ತಿದ್ದಾರೆ ಎಂದು ಶಾಸಕ ಟಿ.ಎಸ್.ಶ್ರೀವತ್ಸ ಆಕ್ಷೇಪಿಸಿದ್ದಾರೆ. ನಗರದ ಬಿಜೆಪಿ ಕಚೇರಿಯಲ್ಲಿ ಜ್ಞ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಕೇಂದ್ರ ಸರಕಾರ ಜಿಲ್ಲೆಗೆ 20 ಸಾವಿರ ಕೋಟಿ ಅನುದಾನ ನೀಡಿದೆ. ಇದನ್ನು ಕಳೆದ ದಿಶಾ ಸಭೆಯಲ್ಲಿ ಜಿಲ್ಲಾಡಳಿತ ನೀಡಿರುವ ಅಂಕಿ ಅಂಶವೇ ಹೇಳಿದೆ. ಹೀಗಿದ್ದರೂ ಸಿದ್ದರಾಮಯ್ಯ ಕೇಂದ್ರ ಸರಕಾರ ಯಾವ ಹಣವನ್ನೂ ನೀಡುತ್ತಿಲ್ಲ ಎಂದು ಸುಳ್ಳು ಹೇಳುವ ಪ್ರವೃತ್ತಿ ಮುಂದುವರಿಸಿದ್ದಾರೆ. ಈ ಬಗ್ಗೆ ಬಹಿರಂಗ ಚರ್ಚೆಗೆ ಬರಲಿ, ಎಂದು ಸವಾಲು ಹಾಕಿದರು. ರಾಜ್ಯ ಸರಕಾರ ಮೈಸೂರಿನಲ್ಲಿ ಸರಕಾರಿ ಕಾರ್ಯಕ್ರಮ ಎಂದು ಹೇಳಿಕೊಂಡು ಶಕ್ತಿ ಪ್ರದರ್ಶನದ ಸಮಾವೇಶ ಮಾಡುವ ಮೂಲಕ ಬ್ಲ್ಯಾಕ್‌ಮೇಲ್ ಸಮಾವೇಶ ಮಾಡಿದೆ. ಪ್ರಧಾನಿ ಮೋದಿ ವಿರುದ್ಧ ಮಾತನಾಡಲು ಈ ಕಾರ್ಯಕ್ರಮ ಆಯೋಜಿಸಿ



ಶಿಷ್ಟಾಚಾರ ಉಲ್ಲಂಘಿಸಲಾಗಿದೆ. ಕಾರ್ಯಕ್ರಮದ ಆಹ್ವಾನ ಪತ್ರಿಕೆಯಲ್ಲಿ ಮಲ್ಲಿಕಾರ್ಜುನ ಖರ್ಗೆ, ರಣದೀಪ್ ಸಿಂಗ್ ಸುರ್ಜೇವಾಲ ಅವರ ಹೆಸರು ಹಾಕಲಾಗಿತ್ತು. ಆದರೆ, ಮಾಜಿ ಪ್ರಧಾನಿ ಹಾಗೂ ಹಿರಿಯ ರಾಜ್ಯಸಭಾ ಸದಸ್ಯರಾದ ಎಚ್.ಡಿ.ದೇವೇಗೌಡ ಅವರ ಹೆಸರನ್ನು ಏಕೆ ಹಾಕಿರಲಿಲ್ಲ? ಆಹ್ವಾನ ಪತ್ರಿಕೆಯಲ್ಲಿ ಶಿಷ್ಟಾಚಾರ ಉಲ್ಲಂಘನೆಯಾಗಿದೆ.

**ಬಹಿರಂಗ ಚರ್ಚೆಗೆ ಬರಲಿ**

ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಮತ್ತು ಪ್ರಲ್ಹಾದ್ ಜೋಶಿ ಅವರ ಹೆಸರು ಕೈಬಿಡಲಾಗಿದೆ. ಸರಕಾರಿ ಕಾರ್ಯಕ್ರಮ ಎಂದು ಹೇಳಿಕೊಂಡು ಶಕ್ತಿ ಪ್ರದರ್ಶನ ಮಾಡಲಾಗಿದೆ ಎಂದು ಕಿಡಿಕಾರಿದರು. ಈ ವೇಳೆ ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ, ಮಾಜಿ ಮೇಯರ್ ಶಿವಕುಮಾರ್, ಮಾಧ್ಯಮ ವಕ್ತಾರ ಮೋಹನ್, ಮಹೇಶ್ ರಾಜೇ ಅರಸ್ ಇದ್ದರು.

# ಆಸ್ತಿ ತೆರಿಗೆಯೊಂದಿಗೆ ಇನ್ಮುಂದೆ 1% ಅಗ್ನಿ ಸೆಸ್ ಕಡ್ಡಾಯ

• ಈ ತಿದ್ದುಪಡಿಯ ಪ್ರಕಾರ ಹೊಸದಾಗಿ ನಿರ್ಮಾಣವಾಗುವ ಬಹುಮಹಡಿ ಕಟ್ಟಡಗಳಿಗೆ ಮಾತ್ರ ಅಗ್ನಿ ಸೆಸ್ ಕಟ್ಟುವುದು ಅನ್ವಯ


• ಉದಯವಾಹಿನಿ ಬೆಂಗಳೂರು

ರಾಜ್ಯಾದ್ಯಂತ ಬಹುಮಡಿ ಕಟ್ಟಡಗಳ ನಿವಾಸಿಗಳು ಇನ್ಮುಂದೆ ಆಸ್ತಿ ತೆರಿಗೆಯೊಂದಿಗೆ ಶೇ 1 ರಷ್ಟು ಅಗ್ನಿ ಸೆಸ್ ಕಟ್ಟುವುದು ಕಡ್ಡಾಯವಾಗಿದೆ. ಸಚಿವ ಸಂಪುಟ ಸಭೆಯಲ್ಲಿ ಇಂತಹದ್ದೊಂದು ಮಹತ್ವದ ತೀರ್ಮಾನ ಕೈಗೊಳ್ಳಲಾಗಿದೆ. ಈ ನಿಟ್ಟಿನಲ್ಲಿ ಕರ್ನಾಟಕ ಅಗ್ನಿ ಶಾಮಕ (ತಿದ್ದಿಪಡಿ) ವಿಧೇಯಕ 2025 ಕ್ಕೆ ಸಂಪುಟ ಅಸ್ತು ಎಂದಿದೆ.

**ಯಾರಿಗೆಲ್ಲಾ ಅನ್ವಯ?:** ಸದ್ಯ ಈ ತಿದ್ದುಪಡಿಯ ಪ್ರಕಾರ ಹೊಸದಾಗಿ ನಿರ್ಮಾಣವಾಗುವ ಬಹುಮಹಡಿ ಕಟ್ಟಡಗಳಿಗೆ ಮಾತ್ರ ಅಗ್ನಿ ಸೆಸ್ ಕಟ್ಟುವುದು ಅನ್ವಯ ಆಗಲಿದೆ. ಈಗಾಗಲೇ ನಿರ್ಮಾಣವಾಗಿರುವ ಬಹುಮಹಡಿ ಕಟ್ಟಡಗಳಿಗೆ ಇದು ಅನ್ವಯ ಆಗುವುದಿಲ್ಲ ಎಂದು ಸಚಿವ ಎಚ್ ಕೆ ಪಾಟೀಲ್ ತಿಳಿಸಿದ್ದಾರೆ.

- ಕರ್ನಾಟಕದ ಬಹುಮಹಡಿ ಕಟ್ಟಡಗಳಿಗೆ ಆಸ್ತಿ ತೆರಿಗೆಯೊಂದಿಗೆ ಶೇ.1 ರಷ್ಟು ಅಗ್ನಿ ಸೆಸ್ ಕಡ್ಡಾಯ
- ಕರ್ನಾಟಕ ಅಗ್ನಿಶಾಮಕ (ತಿದ್ದಿಪಡಿ) ವಿಧೇಯಕ 2025 ರ ಅಡಿಯಲ್ಲಿ ಜಾರಿ
- 4 ಲಕ್ಷ ಜೀವವಿಮೆ ಒದಗಿಸಲು ಕರ್ನಾಟಕ ರಾಜ್ಯ ಗಿಗ್ ಕಾರ್ಮಿಕರ ವಿಮಾ ಯೋಜನೆ
- ಖಾಸಗಿ ಆಂಬ್ಯುಲೆನ್ಸ್ ಸೇವೆ ನಿಯಂತ್ರಿಸಲು 'ಕರ್ನಾಟಕ ರಾಜ್ಯ ಖಾಸಗಿ ವೈದ್ಯಕೀಯ ಸಂಸ್ಥೆಗಳ (ತಿದ್ದುಪಡಿ) ವಿಧೇಯಕ





**ಗಿಗ್ ಕಾರ್ಮಿಕರ ಸುಗ್ರೀವಾಜ್ಞೆ ವಿಧೇಯಕವಾಗಿ ಪರಿವರ್ತನೆ:** ಇನ್ನು ಕರ್ನಾಟಕ ಪ್ಲಾಟ್ ಫಾರ್ಮ್ ಆಧಾರಿತ ಗಿಗ್ ಕಾರ್ಮಿಕರ (ಸಾಮಾಜಿಕ ಭದ್ರತೆ ಮತ್ತು ಕಲ್ಯಾಣ) ವಿಧೇಯಕ 2025 ನ್ನು ಮುಂಬರುವ ವಿಧಾನಮಂಡಲ ಅಧಿವೇಶನದಲ್ಲಿ ಮಂಡಿಸಲು ಸಚಿವ ಸಂಪುಟ ಸಭೆಯಲ್ಲಿ ನಿರ್ಣಯ ಮಾಡಲಾಗಿದೆ.

ಪೂರ್ಣಕಾಲಿಕ, ಅರೆಕಾಲಿಕ ಡೆಲಿವರಿ ನೌಕರರಾಗಿ ಕಾರ್ಯನಿರ್ವಹಣೆ ಮಾಡುತ್ತಿರುವ ಗಿಗ್ ಕಾರ್ಮಿಕರ ಸಂಖ್ಯೆ ಕರ್ನಾಟಕದಲ್ಲಿ ಸುಮಾರು 2.30 ಲಕ್ಷ ಇದೆ. ದೇಶದಲ್ಲಿ ದುಡಿಯುವ ಶೇ 83 ಕ್ಕಿಂತ ಹೆಚ್ಚು ಕಾರ್ಮಿಕರು ಅಸಂಘಟಿತ ವಲಯದಲ್ಲಿ ಇದ್ದಾರೆ. ಈ ನಿಟ್ಟಿನಲ್ಲಿ ಗಿಗ್ ಕಾರ್ಮಿಕರಿಗೆ ಅಪಘಾತದಲ್ಲಿ ಮರಣ ಹೊಂದಿದರೆ ಅಪಘಾತ ಪರಿಹಾರ ಮತ್ತು ಜೀವ ವಿಮೆ ಸೇರಿ ಒಟ್ಟು 4 ಲಕ್ಷ ಜೀವವಿಮೆ ಒದಗಿಸಲು ಕರ್ನಾಟಕ ರಾಜ್ಯ ಗಿಗ್ ಕಾರ್ಮಿಕರ ವಿಮಾ ಯೋಜನೆ ಎಂದು ಹೊಸ ಯೋಜನೆಯನ್ನು ರೂಪಿಸಲಾಗಿದೆ.

ಆಂಬ್ಯುಲೆನ್ಸ್ ನಿರ್ವಹಣೆಗೆ ತಿದ್ದುಪಡಿ ವಿಧೇಯಕ ಕರ್ನಾಟಕ ರಾಜ್ಯ ಖಾಸಗಿ ವೈದ್ಯಕೀಯ ಸಂಸ್ಥೆಗಳ (ತಿದ್ದುಪಡಿ) ವಿಧೇಯಕ, 2025ಕ್ಕೆ ಅನುಮೋದನೆ ನೀಡಿದೆ. ಖಾಸಗಿ ಆಂಬ್ಯುಲೆನ್ಸ್ ಸೇವಾ ನಿರ್ವಾಹಕರನ್ನು ನಿಯಂತ್ರಿಸಲು ಸಂಚಾರಿ ವೈದ್ಯಕೀಯ ಘಟಕಗಳನ್ನು ಖಾಸಗಿ ವೈದ್ಯಕೀಯ ಸಂಸ್ಥೆಯೆಂದು ನೊಂದಾಯಿಸಲು ಅವಶ್ಯಕವಾಗಿರುವುದರಿಂದ್ತ ಮೂವತ್ತು ದಿನಗಳೊಳಗಾಗಿ ಖಾಯಂ ನೋಂದಣಿ ನೀಡಲು ತಿದ್ದುಪಡಿಯನ್ನು ಜಾರಿಗೆ ತರಲು ಪ್ರಸ್ತಾಪಿಸಲಾಗಿದೆ.

ಔಷಧಗಳ ದರ ಪರಿಗಣನೆಗಾಗಿ ಪ್ರಸಕ್ತ ಔಷಧಿಗಳಿಗೆ ಅನ್ವಯಿಸುವ ಹಿಂದಿನ ದರ ಹಾಗೂ ಅಂದಾಜು ದರವನ್ನು ಆಧಾರವಾಗಿಟ್ಟುಕೊಂಡು ದರ ನಿರ್ಧರಿಸಲಾಗಿದೆ. ಹೊಸ ಔಷಧಿಗಳಿಗೆ ಅನ್ವಯಿಸುವ ಇತರೆ ರಾಜ್ಯಗಳ ವೈದ್ಯಕೀಯ ಸರಬರಾಜು ನಿಗಮಗಳಲ್ಲಿ ಖರೀದಿಸಿದ ಕನಿಷ್ಠ ದರಗಳು ಅಥವಾ ಮಾರುಕಟ್ಟೆಯ ಶೇ.40ರ ದರದಂತೆ ಪರಿಗಣಿಸಿ, 883 ಔಷಧಗಳನ್ನು ರೂ.838.13 ಕೋಟಿಗಳ ಅಂದಾಜಲ್ಲಿ ಖರೀದಿಸಲು ಪ್ರಸ್ತಾಪಿಸಲಾಗಿದೆ.

### ಔಷಧ ಖರೀದಿಗೆ ಅನುಮೋದನೆ

2025-26ನೇ ಸಾಲಿಗೆ ಸಾರ್ವಜನಿಕ ಆರೋಗ್ಯ ಸಂಸ್ಥೆಗಳ ಬೇಡಿಕೆಗಳಿಗನುಸಾರವಾಗಿ 890 ಔಷಧಗಳು, ಉಪಭೋಗ್ಯ ವಸ್ತುಗಳು ಹಾಗೂ ರಾಸಾಯನಿಕಗಳನ್ನು ರೂ.880.68 ಕೋಟಿಗಳ ಅಂದಾಜು ವೆಚ್ಚದಲ್ಲಿ ಕೆಟಿಪಿಪಿ ಕಾಯ್ದೆ 1999 ಹಾಗೂ ಕೆಟಿಪಿಪಿ ನಿಯಮ 2000 ಗಳನ್ನು ಅನುಸರಿಸಿ ಟೆಂಡರ್ ಮೂಲಕ ಸಂಗ್ರಹಿಸಿ ಸರಬರಾಜು ಮಾಡಲು ಹಾಗೂ ಅಗತ್ಯವಿರುವ ಅನುದಾನವನ್ನು ಒದಗಿಸಲು ಸಚಿವ ಸಂಪುಟ ನಿರ್ಧರಿಸಿದೆ.

### ಏನಿದು ಅಗ್ನಿಸೆಸ್?

ಅಗ್ನಿಶಾಮಕ ಇಲಾಖೆಯ ಕಾರ್ಯಕ್ಷಮತೆಯನ್ನು ಹೆಚ್ಚಿಸುವ ನಿಟ್ಟಿನಲ್ಲಿ ಸರ್ಕಾರ ಇಂತಹದೊಂದು ತಿದ್ದುಪಡಿಯನ್ನು ತಂದಿದೆ. ಕರ್ನಾಟಕ ಫೈರ್ ಫೋರ್ಸ್ ಆಕ್ಟ್ 1964 ರ ಕಲಂ 15 ಕ್ಕೆ ತಿದ್ದುಪಡಿ ತರಲಾಗಿದೆ. ಈ ಮೂಲಕ ರಾಜ್ಯದಲ್ಲಿ ಬಹುಮಹಡಿ ಕಟ್ಟಡಗಳ ಆಸ್ತಿ ತೆರಿಗೆಯೊಂದಿಗೆ ಶೇ 1 ರಷ್ಟು ಅಗ್ನಿ ಸೆಸ್ ಕಟ್ಟುವುದು ಕಡ್ಡಾಯಾಗಿದೆ.

**ಈ ದಿನದ ದರ** ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹10,097 /Gram(24ct) ₹9,225/Gram(22ct) | ಬೆಳ್ಳಿ: ₹118.00/Gram

## ಪಡಿತರ ಖರೀದಿಸಲು ಹೋದಾಗ ಹಿಂಬಾಲಿಸಿ ಯುವತಿಗೆ ಕಿರುಕುಳ, ವ್ಯಕ್ತಿಯ ಬಂಧನ

• ಉದಯವಾಹಿನಿ, ಬೆಂಗಳೂರು

ಯುವತಿಯೊಬ್ಬಳ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪದ ಮೇಲೆ ಗೋವಿಂದಪುರ ಪೊಲೀಸರು ಗುರುವಾರ ವ್ಯಕ್ತಿಯೊಬ್ಬನನ್ನು ಬಂಧಿಸಿದ್ದಾರೆ. ಬಂಧಿತನನ್ನು ಮೊಹಮ್ಮದ್ ಮಾರುಫ್ ಷರೀಫ್ ಎಂದು ಗುರುತಿಸಲಾಗಿದೆ. ಮಹಿಳೆ ಪಡಿತರ ಖರೀದಿಸಲು ಹೊರಗೆ ಹೋದಾಗ ಆಕೆಯನ್ನು ಹಿಂಬಾಲಿಸಿದ ಆರೋಪಿ, ಸಾರ್ವಜನಿಕವಾಗಿ ಆಕೆಯ ಜೊತೆ ಅನುಚಿತವಾಗಿ ವರ್ತಿಸಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ಗೋವಿಂದಪುರ ಪೊಲೀಸ್ ಠಾಣೆಯಲ್ಲಿ ದಾಖಲಾಗಿದ್ದ ದೂರಿನ ಆಧಾರದ ಮೇಲೆ ಆರೋಪಿಯನ್ನು ಪತ್ತೆಹಚ್ಚಿ ಬಂಧಿಸಲಾಗಿದೆ. ಈ ಸಂಬಂಧ ಹೆಚ್ಚಿನ ತನಿಖೆ ನಡೆಯುತ್ತಿದೆ.

## ಜೈವಿಕ ಉದ್ಯಾನವನದಿಂದ ಜಪಾನ್‌ಗೆ 4 ಆನೆ ಕಳುಹಿಸಲು ಸಿದ್ಧತೆ

• ಉದಯವಾಹಿನಿ, ಬೆಂಗಳೂರು

ಪ್ರಾಣಿ ವಿನಿಮಯ ಕಾರ್ಯಕ್ರಮದ ಭಾಗವಾಗಿ, ನಾಲ್ಕು ಆನೆಗಳನ್ನು ಬನ್ನೇರುಘಟ್ಟ ಜೈವಿಕ ಉದ್ಯಾನವನದಿಂದ ಜಪಾನ್‌ನ ಹಿಮೇಜಿ ಸೆಂಟ್ರಲ್ ಸಫಾರಿ ಪಾರ್ಕ್‌ಗೆ ಕಳುಹಿಸಲಾಗುವುದು. ಆನೆಗಳನ್ನು ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಜಪಾನ್‌ನ ಒಸಾಕಾದ ಕನ್ಸೈ ಅಂತರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಸರಕು ವಿಮಾನದ ಮೂಲಕ ಕಳುಹಿಸಲಾಗುವುದು ಎಂದು BBP-ಕಾರ್ಯನಿರ್ವಾಹಕ ನಿರ್ದೇಶಕ AV ಸೂರ್ಯ ಸೇನ್ ತಿಳಿಸಿದ್ದಾರೆ.

ಪ್ರಾಣಿ ವಿನಿಮಯ ಕಾರ್ಯಕ್ರಮದಡಿಯಲ್ಲಿ, BBP ನಾಲ್ಕು ಚಿರತೆಗಳು, ನಾಲ್ಕು ಜಾಗ್ವಾರ್‌ಗಳು, ನಾಲ್ಕು ಪೂಮಾಗಳು, ಮೂರು ಚಿಂಪಾಂಜಿಗಳು ಮತ್ತು ಎಂಟು ಕಪ್ಪು-ಕ್ಯಾಪ್ಡ್ ಕ್ಯಾಪುಚಿನ್ ಕೋತಿಗಳನ್ನು ಸ್ವೀಕರಿಸಲಿದೆ. ಜಪಾನ್‌ಗೆ ಕಳುಹಿಸಬೇಕಾದ ಆನೆಗಳು 8 ವರ್ಷದ ಸುರೇಶ್, ಗೌರಿ (9), ಶ್ರುತಿ (7) ಮತ್ತು ತುಳಸಿ (5) ಆನೆಗಳನ್ನು ಕಳುಹಿಸಲಾಗುತ್ತಿದೆ. ಬನ್ನೇರುಘಟ್ಟ ಜೈವಿಕ ಉದ್ಯಾನದಿಂದ ಹಿಮೇಜಿ ಸಫಾರಿ ಪಾರ್ಕ್‌ಗೆ ತಲಪಲು ಸುಮಾರು 20 ಗಂಟೆಗಳ ಕಾಲ ಪ್ರಯಾಣಿಸಬೇಕಿದೆ. ಕಳೆದ 6 ತಿಂಗಳುಗಳಿಂದ ಈ ಸಾಗಣೆಗಾಗಿ ಪ್ರಾಣಿಗಳಿಗೆ ತರಬೇತಿ ನೀಡಲಾಗಿದೆ. ಆನೆಗಳು ಉತ್ತಮ ಆರೋಗ್ಯ ಹೊಂದಿದ್ದು, ಪ್ರಯಾಣ ಮಾಡಲು ಸಬಲವಾಗಿವೆ ಎಂಬುದನ್ನು ಖಾತರಿ ಪಡಿಸಿಕೊಳ್ಳಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ಆರೋಪಿ ಮೂಳೆ ಮುರಿತ: ಚಿಕಿತ್ಸೆಗೆ ಕೋರ್ಟ್ ಸೂಚನೆ

• ಉದಯವಾಹಿನಿ, ಬೆಂಗಳೂರು

ರೌಡಿ ಶೀಟರ್ ಶಿವಪ್ರಕಾಶ್ ಕೊಲೆ ಪ್ರಕರಣದಲ್ಲಿ ಬಂಧಿತನಾಗಿ ಪೊಲೀಸ್ ಕಸ್ಟಡಿಯಲ್ಲಿರುವ ಆರೋಪಿ ಕಿರಣ್ ಮೇಲೆ ಪೊಲೀಸರು ತೀವ್ರ ಹಲ್ಲೆ ನಡೆಸಿದ್ದಾರೆ ಎಂದು ಅವರ ಕುಟುಂಬಸ್ಥರು ಆರೋಪಿಸಿದ್ದಾರೆ. ಈ ಸಂಬಂಧ ಹೈಕೋರ್ಟ್ ಸೂಚನೆಯಂತೆ ವಿಚಾರಣೆ ನಡೆಸಿದ ನಗರದ 29ನೇ ಎಸಿಎಂಎಂ ನ್ಯಾಯಾಲಯವು ಕಿರಣ್‌ಗೆ ಹೆಚ್ಚಿನ ವೈದ್ಯಕೀಯ ಚಿಕಿತ್ಸೆ ಕೊಡಿಸುವಂತೆ ಆದೇಶಿಸಿದೆ 'ಪ್ರಕರಣದ ತನಿಖಾಧಿಕಾರಿ ಅವರು ತಮ್ಮ ಕಕ್ಷಿದಾರರಿಗೆ ತೊಂದರೆ ಕೊಟ್ಟಿಲ್ಲ. ಇತರೆ ಪೊಲೀಸರು ವಿಚಾರಣೆಯ ನೆಪದಲ್ಲಿ ಹಲ್ಲೆನಡೆಸಿ ಕಿರುಕುಳ ನೀಡಿದ್ದಾರೆ.

ಇದರಿಂದ ಕಿರಣ್‌ನ ಪಾದದ ಮೂಳೆ ಮುರಿದಿದೆ. ಆದ್ದರಿಂದ ಕಿರಣ್‌ನನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಬೇಕು ಎಂದು ಕಿರಣ್ ಪರ ವಕೀಲರು ನ್ಯಾಯಾಧೀಶರಲ್ಲಿ ಕೋರಿದರು. ತನಿಖಾಧಿಕಾರಿ ಹೊರತುಪಡಿಸಿ ಇತರ ಸಿಬ್ಬಂದಿ ಕಿರಣ್‌ನನ್ನು ವಿಚಾರಣೆ ನಡೆಸುವಂತಿಲ್ಲ, ಕಿರಣ್ ಗೆ ಹೆಚ್ಚಿನ ಚಿಕಿತ್ಸೆ ಕೊಡಿಸಬೇಕು' ಎಂದು ನ್ಯಾಯಾಲಯವು ಸೂಚಿಸಿದೆ.

## ನಮ್ಮ ಮೆಟ್ರೋ ನೀಲಿ ಮಾರ್ಗ ಆರಂಭ

• ಉದಯವಾಹಿನಿ, ಬೆಂಗಳೂರು

ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಸಂಪರ್ಕ ಕಲ್ಪಿಸುವ ಬಹು ನಿರೀಕ್ಷಿತ ಬೆಂಗಳೂರು ನಮ್ಮ ಮೆಟ್ರೋ ನೀಲಿ ಮಾರ್ಗದ ಕಾಮಗಾರಿ ಅರ್ಧದಷ್ಟು ಪೂರ್ಣವಾಗಿದೆ. ಅಂದುಕೊಂಡಂತೆ ಇನ್ನರ್ಧ ಕಾಮಗಾರಿಯೂ ನಿಗದಿ ಸಮಯದಲ್ಲಿ ಮುಗಿದರೆ 2026 ಅಂತ್ಯಕ್ಕೆ ಈ ಯೋಜನೆಯು ಪೂರ್ಣವಾಗಲಿದೆ. 2026 ಜೂನ್ ವೇಳೆಗೆ ಕೆಆರ್‌ಪುರಂ ಸಿಲ್ಕ್‌ಬೋರ್ಡ್ ನಡುವಿನ ಮಾರ್ಗ ಆರಂಭಿಸಲು ಸಿದ್ಧತೆ ನಡೆಸಲಾಗುದೆ. ಸದ್ಯ ಬೆಂಗಳೂರಿನಲ್ಲಿ ಉತ್ತರ ಭಾಗದಿಂದ ದಕ್ಷಿಣಕ್ಕೆ ಹಸಿರು ಮಾರ್ಗ, ಪೂರ್ವದಿಂದ ಪಶ್ಚಿಮಕ್ಕೆ ನೇರಳೆ ಮಾರ್ಗವು ಮೆಟ್ರೋ ಸಂಪರ್ಕ ಕಲ್ಪಿಸುತ್ತಿದೆ. ಮುಂದಿವರೆದು ದಕ್ಷಿಣ ಬೆಂಗಳೂರಿನಲ್ಲಿ ಹಳದಿ ಮಾರ್ಗ, ಬನ್ನೇರುಘಟ್ಟದಿಂದ ನಾಗಾವರ ನಡುವೆ ಗುಲಾಬಿ ಮಾರ್ಗ ಶೀಘ್ರದಲ್ಲಿಯೇ ಆರಂಭವಾಗುತ್ತಿದೆ. ಇನ್ನು ವಿಮಾನ ನಿಲ್ದಾಣಕ್ಕೆ ಸಂಪರ್ಕ ಕಲ್ಪಿಸುವ ನೀಲಿ ಮಾರ್ಗಕ್ಕೆ ಪ್ರಯಾಣಿಕರು ಎದುರು ನೋಡುತ್ತಿದ್ದಾರೆ. ಬೆಂಗಳೂರು ವಿಮಾನ ನಿಲ್ದಾಣಕ್ಕೆ ಸಂಪರ್ಕಿಸುವ ನಮ್ಮ ಮೆಟ್ರೋದ 58.19 ಕಿ.ಮೀ ವಿಸ್ತೀರ್ಣದ ನೀಲಿ ಮಾರ್ಗವನ್ನು 2 ಹಂತದಲ್ಲಿ ನಿರ್ಮಾಣ ಮಾಡಲಾಗುತ್ತಿದೆ. ಮೊದಲನೇ ಹಂತ 2 ಎ ಇದು ಸಿಲ್ಕ್‌ಬೋರ್ಡ್‌ನಿಂದ ಕೆಆರ್ ಪುರಂಗೆ ಸಂಪರ್ಕ ಕಲ್ಪಿಸುತ್ತದೆ. 2 ಬಿ ಕೆಆರ್ ಪುರಂನಿಂದ ವಿಮಾನ ನಿಲ್ದಾಣಕ್ಕೆ ಸಂಪರ್ಕಿಸುತ್ತದೆ. ಒಟ್ಟು 31 ನಿಲ್ದಾಣಗಳಿರಲಿವೆ.



**ಕಾಮಗಾರಿ ಎಲ್ಲಿಗೆ ಬಂತು?:** ನಮ್ಮ ಮೆಟ್ರೋ ನೀಲಿ ಮಾರ್ಗದ ಕಾಮಗಾರಿ ಸದ್ಯ ಹೆಚ್ಚು ಕಡಿಮೆ ಅರ್ಧದಷ್ಟು (ಶೇಕಡಾ 45) ಪೂರ್ಣವಾಗಿದೆ. ಸದ್ಯ ವಿಮಾನ ನಿಲ್ದಾಣದಿಂದ ಹೆಬ್ಬಾಳವರೆಗೂ ಕಾಮಗಾರಿ ವೇಗವಾಗಿ ನಡೆಯುತ್ತಿದೆ. ಉಳಿದಂತೆ ಹೆಬ್ಬಾಳದಿಂದ ಕೆಆರ್ ಪುರಂವರೆಗೂ, ಕೆಆರ್ ಪುರಂನಿಂದ ಸರ್ಜಾಪುರದವರೆಗೂ ನಡೆಯುತ್ತಿದೆ. ಮೊದಲಿಗೆ ಹೆಬ್ಬಾಳದಿಂದ ಏರ್‌ಪೋರ್ಟ್‌ಗೆ ಕಾಮಗಾರಿ ಪೂರ್ಣಗೊಳಿಸಿ ಸಂಚಾರ ಆರಂಭಿಸಬಹುದು ಎನ್ನಲಾಗಿದೆ.

# ಜಿಬಿಎ ವ್ಯಾಪ್ತಿಯಲ್ಲಿ 400 ವಾರ್ಡ್‌ಗಳಾಗಿ ವಿಂಗಡಿಸುವ ಕುರಿತು ಚರ್ಚೆ

### ಬೆಂಗಳೂರು ವ್ಯಾಪ್ತಿಯ ಪಂಚ ಪಾಲಿಕೆಗಳಲ್ಲಿ ಕೆಲವು ವಿಧಾನಸಭಾ ಕ್ಷೇತ್ರಗಳಲ್ಲಿನ ಬದಲಾವಣೆ ಸಾರ್ವಜನಿಕರಲ್ಲಿ ಗೊಂದಲ ಸೃಷ್ಟಿಸಿದೆ

• ಉದಯವಾಹಿನಿ, ಬೆಂಗಳೂರು

ಉತ್ತರ, ದಕ್ಷಿಣ, ಪೂರ್ವ, ಪಶ್ಚಿಮ, ಕೇಂದ್ರ ನಗರ ಪಾಲಿಕೆಗಳ ಗಡಿ ಗುರುತಿಸಿ, ರಾಜ್ಯ ಸರಕಾರ ಕರಡು ಅಧಿಸೂಚನೆ ಹೊರಡಿಸಿದೆ. ಪಾಲಿಕೆಗಳ ರಚನೆ, ಗಡಿ ಗುರುತಿಸಿರುವುದಕ್ಕೆ ತೀವ್ರ ಆಕ್ಷೇಪ ವ್ಯಕ್ತವಾಗಿದೆ.

ನಾಡಪ್ರಭು ಕೆಂಪೇಗೌಡರು ನಿರ್ಮಿಸಿದ ಬೆಂಗಳೂರಿನ ಪಾಲಿಕೆಗಳಲ್ಲಿ ಕನ್ನಡಿಗರಿಗಿಂತ ಇತರೆ ಭಾಷಿಕರ ಪ್ರಾಬಲ್ಯ ಹೆಚ್ಚಾಗಲಿದೆ ಎಂಬ ದೂರುಗಳು ಕೇಳಿ ಬಂದಿವೆ. ಬೆಂಗಳೂರು ನಗರ ಜಿಲ್ಲೆಯಲ್ಲಿ 28 ವಿಧಾನಸಭಾ ಕ್ಷೇತ್ರಗಳಿದ್ದು, ಪೈಕಿ 27 ಕ್ಷೇತ್ರಗಳು ಬಿಬಿಎಂಪಿ ಪರಿಧಿಯಲ್ಲಿದ್ದವು. ಆನೇಕಲ್ ಕ್ಷೇತ್ರದ ಸಿಂಗಸಂದ್ರ ವಾರ್ಡ್ ಮಾತ್ರ ನಗರಕ್ಕೆ ಸೇರ್ಪಡೆಯಾಗಿತ್ತು. 5 ಪಾಲಿಕೆ ರಚನೆ ವೇಳೆ ಆ ವಾರ್ಡ್ ಕೈಬಿಡಲಾಗಿದೆ. ಬಿಬಿಎಂಪಿ ವ್ಯಾಪ್ತಿಯ 197 ವಾರ್ಡ್‌ಗಳ ವ್ಯಾಪ್ತಿಯಲ್ಲೇ ಐದು ನಗರ ಪಾಲಿಕೆಗಳನ್ನು ರಚಿಸಲಾಗಿದೆ.

**ಕ್ಷೇತ್ರ, ವಾರ್ಡ್‌ಗಳು ಛಿದ್ರ ಛಿದ್ರ:** 5 ಪಾಲಿಕೆಗಳ ಗಡಿ ಗುರುತಿಸಿರುವ ಪ್ರಕಾರ, ವಿಧಾನಸಭಾ ಕ್ಷೇತ್ರಗಳು ಹಾಗೂ ಅವುಗಳ ವ್ಯಾಪ್ತಿಯಲ್ಲಿದ್ದ ವಾರ್ಡ್‌ಗಳು ಛಿದ್ರ ಛಿದ್ರವಾಗಿವೆ. ಒಂದೇ ವಿಧಾನಸಭಾ ಕ್ಷೇತ್ರದ ಪ್ರದೇಶಗಳನ್ನು ಎರಡು ಪಾಲಿಕೆಗಳಿಗೆ ಸೇರಿಸಲಾಗಿದೆ. ಐದು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಪ್ರದೇಶಗಳು



ಎರಡೆರಡು ಪಾಲಿಕೆಗಳಲ್ಲಿ ಹರಿದು ಹಂಚಿ ಹೋಗಿವೆ. ಮಹದೇವಪುರ ವಿಧಾನಸಭಾ ಕ್ಷೇತ್ರವು ಪೂರ್ವ ದಕ್ಷಿಣ, ಯಶವಂತಪುರ, ಪದ್ಮನಾಭನಗರ, ರಾಜ ರಾಜೇಶ್ವರಿನಗರ ಕ್ಷೇತ್ರಗಳು ಪಶ್ಚಿಮ ಮತ್ತು ದಕ್ಷಿಣ, ದಾಸರಹಳ್ಳಿ ಕ್ಷೇತ್ರವು ಪಶ್ಚಿಮ ಮತ್ತು ಉತ್ತರ ನಗರ ಪಾಲಿಕೆಗೆ ಸೇರುತ್ತದೆ. ಹಾಗೆಯೇ, ವಾರ್ಡ್‌ಗಳು ಕೂಡ ಒಂದೇ ಕ್ಷೇತ್ರ ವ್ಯಾಪ್ತಿಯಲ್ಲಿ ಉಳಿದಿಲ್ಲ. ಪೂರ್ವ ನಗರ ಪಾಲಿಕೆಗೆ ಮಹದೇವಪುರ ಹಾಗೂ ಕೆ.ಆರ್.ಪುರ ಕ್ಷೇತ್ರವಷ್ಟೇ ಸೇರುತ್ತದೆ. ಇದರಿಂದ ಆಡಳಿತಾತ್ಮಕವಾಗಿ ಸಾಕಷ್ಟು ಸಮಸ್ಯೆಗಳು ಸೃಷ್ಟಿಯಾಗಲಿವೆ.

ಮೇಯರ್, ಉಪ ಮೇಯರ್ ಚುನಾವಣೆಯಲ್ಲಿ ಶಾಸಕರು ಎರಡೂ ಪಾಲಿಕೆಗಳಲ್ಲಿ ಮತದಾನ ಮಾಡುವ ಹಕ್ಕು ಹೊಂದಲಿದ್ದಾರೆ. ಅಲ್ಲದೆ, ಅನುದಾನ ಹಂಚಿಕೆಯಲ್ಲಿ ಸಮಸ್ಯೆಯಾಗಲಿದೆ. ಸಾರ್ವಜನಿಕರು ಕೂಡ ಸೇವೆಗಳನ್ನು ಪಡೆಯಲು ಅಲೆದಾಡುವಂತಹ ಪರಿಸ್ಥಿತಿ ನಿರ್ಮಾಣವಾಗಲಿದೆ.

**ಜಿಬಿಎ ವ್ಯಾಪ್ತಿಯಲ್ಲಿ 400 ವಾರ್ಡ್:** ಪ್ರತಿಯೊಂದು ನಗರ ಪಾಲಿಕೆಯಲ್ಲಿ 80 ವಾರ್ಡ್‌ಗಳಂತೆ ಒಟ್ಟು 400 ವಾರ್ಡ್‌ಗಳನ್ನು ವಿಂಗಡಿಸಲು ಉದ್ದೇಶಿಸಲಾಗಿದೆ. ಪ್ರತಿ ನಗರ ಪಾಲಿಕೆಯಲ್ಲಿ 35-40 ವಾರ್ಡ್‌ಗಳ ಮೇಲ್ವಿಚಾರಣೆಗೆ ತಲಾ ಎರಡು ವಲಯಗಳನ್ನು ರಚಿಸಲಾಗುತ್ತದೆ. ಈ ವಲಯಗಳ ಆಯುಕ್ತರು ಯೋಜನೆಗಳ ಅನುಷ್ಠಾನದ ಉಸ್ತುವಾರಿ ನೋಡಿಕೊಳ್ಳಲಿದ್ದಾರೆ. ನಗರದ ಲಕ್ಷಣಗಳನ್ನು ಹೊಂದಿರುವ ಸುಮಾರು 25 ಹಳ್ಳಿಗಳು ಬಿಡಿಎ ಪರಿಧಿಯಿಂದ ಆಚೆಗಿವೆ. ಹಲವು ಗ್ರಾಮಗಳು ನಗರಗಳಾಗಿ ರೂಪುಗೊಳ್ಳುತ್ತಿವೆ. ಹೀಗಾಗಿ ಕೆಲವೊಂದು ದೊಡ್ಡ ವಸತಿ ಪ್ರದೇಶಗಳನ್ನು ನಗರ ಪಂ. ಗಳೆಂದು ಹೆಸರಿಸಬಹುದು. ಅವುಗಳ ಜನಸಂಖ್ಯೆ ಹೆಚ್ಚಿದಂತೆ ಪಾಲಿಕೆಗಳೊಂದಿಗೆ ಒಗ್ಗೂಡಿಸಬಹುದು ಎಂದು ಸಮಿತಿಯು ಶಿಫಾರಸು ಮಾಡಿದೆ. ಆದರೆ, ಸದ್ಯ 5 ಪಾಲಿಕೆಗಳಿಗೆ ಹೊರ ವಲಯದ ಪ್ರದೇಶಗಳನ್ನು ಸೇರಿಸುವ ಕುರಿತು ಯಾವುದೇ ತೀರ್ಮಾನ ತೆಗೆದುಕೊಂಡಿಲ್ಲ.

**ಆಯುಕ್ತರು ಯೋಜನೆಗಳ ಅನುಷ್ಠಾನ**

#### ಆದಾಯದಲ್ಲೂ ಅಸಮತೋಲನ

**ಬ್ರ್ಯಾಂಡ್ ಬೆಂಗಳೂರು ತಜ್ಞರ ಸಮಿತಿಯು 2025ರ ಆಸ್ತಿ ತೆರಿಗೆ ಸಂಗ್ರಹ ಲೆಕ್ಕಾಚಾರದಂತೆ ಯಾವ್ಯಾವ ಪಾಲಿಕೆಗೆ ಎಷ್ಟು ಆದಾಯ ಬರಲಿದೆ ಎಂಬುದನ್ನು ವರದಿಯಲ್ಲಿ ತಿಳಿಸಿದೆ. ಅದರಂತೆ ಐಟಿ-ಬಿಟಿ ಕಂಪನಿಗಳು, ಮಾಲ್‌ಗಳು ಹೆಚ್ಚಿರುವ ಪೂರ್ವ ನಗರ ಪಾಲಿಕೆಯಲ್ಲಿ ಹೆಚ್ಚಿನ ತೆರಿಗೆ ಸಂಗ್ರಹವಾಗಲಿದೆ. ಈ ಪಾಲಿಕೆಗೆ 912 ಕೋಟಿ ರೂ. ತೆರಿಗೆ ಆದಾಯ ಬರಲಿದೆ. ದಕ್ಷಿಣ ನಗರ ಪಾಲಿಕೆ ಎರಡನೇ ಸ್ಥಾನದಲ್ಲಿದೆ. ಉತ್ತರ ನಗರ ಪಾಲಿಕೆಯಲ್ಲಿ ಅತಿ ಕಡಿಮೆ ತೆರಿಗೆ ವಸೂಲಾಗಲಿದೆ. ಇದು ನಗರದ ಒಟ್ಟಾರೆ ಅಭಿವೃದ್ಧಿಯಲ್ಲಿ ಅಸಮತೋಲನಕ್ಕೆ ಕಾರಣವಾಗಲಿದೆ ಎನ್ನಲಾಗಿದೆ.**

## ಇಸ್ಲಾಂ ಧರ್ಮಕ್ಕೆ ಮತಾಂತರಕ್ಕೆ ಪ್ರಚೋದನೆ ಆರೋಪ

• ಉದಯವಾಹಿನಿ, ಬೆಂಗಳೂರು

ಇಸ್ಲಾಂ ಧರ್ಮಕ್ಕೆ ಮತಾಂತರಗೊಳ್ಳುವಂತೆ ಪ್ರಚೋದಿಸಿದ ಆರೋಪದಡಿ ಜಮಖಂಡಿಯ ಮೂವರ ವಿರುದ್ಧ ದಾಖಲಾಗಿದ್ದ ಎಫ್‌ಐಆರ್ ಮತ್ತು ಅದಕ್ಕೆ ಸಂಬಂಧಿಸಿದ ನ್ಯಾಯಿಕ ವಿಚಾರಣಾ ಪ್ರಕ್ರಿಯೆಯನ್ನು ಹೈಕೋರ್ಟ್ ರದ್ದುಪಡಿಸಿದೆ. ಪ್ರಕರಣ ರದ್ದುಪಡಿಸುವಂತೆ ಕೋರಿ ಆರೋಪಿಗಳಾದ ಬಾಗಲಕೋಟೆ ಜಿಲ್ಲೆಯ ಜಮಖಂಡಿ ನಿವಾಸಿಗಳಾದ ಮುಸ್ತಾಫ ಬಿನ್ ಮುರ್ತಜ್‌ಸಾಬ್ ಮೊಮಿನ್ (27), ಅಲಿಸಾಬ್ ಬಿನ್ ಶಬ್ಬಿರ್ ಅಳಗುಂಡಿ (30) ಮತ್ತು ಸುಲೇಮಾನ್ ಬಿನ್ ರಿಯಾಜ್ ಅಹಮದ್ ಗಲಗಲಿ (25) ಸಲ್ಲಿಸಿದ್ದ ಕ್ರಿಮಿನಲ್ ಅರ್ಜಿ ಪುರಸ್ಕರಿಸಿರುವ ನ್ಯಾಯಮೂರ್ತಿ ವೆಂಕಟೇಶ್ ಟಿ.ನಾಯ್ಕ ಅವರಿದ್ದ ಏಕಸದಸ್ಯ ನ್ಯಾಯಪೀಠ (ಧಾರವಾಡ) ಈ ಕುರಿತಂತೆ ಆದೇಶಿಸಿದೆ.



ಕರ್ನಾಟಕ ಧಾರ್ಮಿಕ ಸ್ವಾತಂತ್ರ್ಯ ರಕ್ಷಣೆ ಕಾಯ್ದೆ-2022ರ ಕಲಂ 4ರ ಅಡಿಯಲ್ಲಿ ಧಾರ್ಮಿಕ ಮತಾಂತರ ಪ್ರಕರಣದಲ್ಲಿ ಪ್ರಚೋದನೆಗೆ ಒಳಗಾಗಿ ಮತಾಂತರಗೊಂಡ ವ್ಯಕ್ತಿಯ ರಕ್ತ ಸಂಬಂಧಿಕರು ಹಾಗೂ ಪೋಷಕರು ಮಾತ್ರವೇ ದೂರು ಸಲ್ಲಿಸಲು ಅಧಿಕಾರವಿರಲಿದೆ. ಈ ಪ್ರಕರಣದಲ್ಲಿ ದೂರು ದಾಖಲಿಸಿರುವ ವ್ಯಕ್ತಿ ಮೂರನೆಯವರಾಗಿದ್ದಾರೆ.

ಅಂತೆಯೇ, ಅರ್ಜಿದಾರರ ವಿರುದ್ಧ ಕಲಂ 3ರ ಅಡಿಯಲ್ಲಿ ತಿಳಿಸಿರುವಂತೆ ಮತಾಂತರಕ್ಕೆ ಪ್ರಚೋದನೆ ಮಾಡಿರುವ ಸಂಬಂಧ ಆರೋಪಗಳು ಇಲ್ಲವಾಗಿವೆ. ಹೀಗಾಗಿ, ಎಫ್‌ಐಆರ್ ಕಾನೂನುಬಾಹಿರ' ಎಂಬ ಅಭಿಪ್ರಾಯದೊಂದಿಗೆ ನ್ಯಾಯಪೀಠ ಪ್ರಕರಣ ರದ್ದುಗೊಳಿಸಿದೆ. ಅರ್ಜಿದಾರರ ಪರ ಹೈಕೋರ್ಟ್ ವಕೀಲರಾದ ಇಸ್ಪೀಕರ್ ಶಹಾಪುರಿ ಮತ್ತು ಅನ್ವರ್ ಅಲಿ ಡಿ.ನದಾಫ್ ವಾದ ಮಂಡಿಸಿದ್ದರು.

**ಪ್ರಕರಣವೇನು?:** ದೂರುದಾರ ರಮೇಶ್ ಮಲ್ಲಪ್ಪ ನಾವಿ ಎಂಬುವರು 2025ರ ಮೇ 4ರಂದು ಸಂಜೆ 4.30ಕ್ಕೆ ಜಮಖಂಡಿಯ ರಾಮತೀರ್ಥ ದೇಗುಲಕ್ಕೆ ಭೇಟಿ ನೀಡಿದ್ದರು. ಈ ಸಂದರ್ಭದಲ್ಲಿ ಕೆಲವರು ಇಸ್ಲಾಂ ಧರ್ಮದ ಬೋಧನೆಯನ್ನು ಉತ್ತೇಜಿಸುವ ಮತ್ತು ಅವರ ಧಾರ್ಮಿಕ ನಂಬಿಕೆ ವಿವರಿಸುವ ಕರಪತ್ರಗಳನ್ನು ಹಂಚುತ್ತಾ, ದುಬೈನಲ್ಲಿ ಉದ್ಯೋಗಾವಕಾಶ ಕಲ್ಪಿಸುತ್ತೇವೆ ಮತ್ತು ವಾಹನಗಳನ್ನು ನೀಡುತ್ತೇವೆ ಎಂದು ಜನರನ್ನು ಇಸ್ಲಾಂ ಧರ್ಮದೆಡೆ ಆಕರ್ಷಿತರನ್ನಾಗಿಸುತ್ತಿದ್ದಾರೆ' ಎಂದು ದೂರು ನೀಡಿದ್ದರು. ಅರ್ಜಿದಾರರ ವಿರುದ್ಧ ಭಾರತೀಯ ನ್ಯಾಯ ಸಂಹಿತೆ-2023ರ ಕಲಂ 299, 351(2) 3(5) ಮತ್ತು ಕರ್ನಾಟಕ ಧಾರ್ಮಿಕ ಸ್ವಾತಂತ್ರ್ಯ ರಕ್ಷಣೆ ಕಾಯ್ದೆ-2024ರ ಕಲಂ 5ರ ಅಡಿ ಜಮಖಂಡಿ ಗ್ರಾಮೀಣ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿತ್ತು.

## 2 ರೋಲ್ಸ್‌ರಾಯ್ಸ್ ಕಾರುಗಳಿಗೆ 40 ಲಕ್ಷ ರೂ ತೆರಿಗೆ ಪಾವತಿಸಿದ ಕೆಜಿಎಫ್ ಬಾಬು



• ಉದಯವಾಹಿನಿ, ಬೆಂಗಳೂರು

ಮಹಾರಾಷ್ಟ್ರದಲ್ಲಿ ನೋಂದಾಯಿಸಲಾದ ಎರಡು ಐಷಾರಾಮಿ ಕಾರುಗಳನ್ನು ಕರ್ನಾಟಕದಲ್ಲಿ ಓಡಿಸುತ್ತಿದ್ದ ಉದ್ಯಮಿ ಮತ್ತು ರಾಜಕಾರಣಿ ಯೂಸುಫ್ ಷರೀಫ್ ಅಲಿಯಾಸ್ ಕೆಜಿಎಫ್ ಬಾಬು ಅವರಿಂದ ಸಾರಿಗೆ ಅಧಿಕಾರಿಗಳು ಸುಮಾರು 40 ಲಕ್ಷ ರೂ. ಬಾಕಿ ಇದ್ದ ರಸ್ತೆ ತೆರಿಗೆ ಸಂಗ್ರಹಿಸಿದ್ದಾರೆ.

ಕೆಜಿಎಫ್ ಬಾಬು ನಟ ಅಮಿತಾಬ್ ಬಚ್ಚನ್ ಅಮೀರ್ ಖಾನ್ ಅವರಿಂದ ಖರೀದಿಸಿದ ರೋಲ್ಸ್ ರಾಯ್ಸ್ ಫ್ಯಾಂಟಮ್ ಮತ್ತು ರೋಲ್ಸ್ ರಾಯ್ಸ್ ಘೋಸ್ಟ್ ಕಾರುಗಳನ್ನು ಹೊಂದಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಜಂಟಿ ಸಾರಿಗೆ ಆಯುಕ್ತೆ ಶೋಭಾ ನೇತೃತ್ವದ ತಂಡವು ಬುಧವಾರ ವಸಂತ ನಗರದಲ್ಲಿರುವ ಬಾಬು ಅವರ ಮನೆಗೆ ಹೋಗಿ, ಎರಡು ಕಾರುಗಳಿಗೆ ತಡವಾಗಿ ತೆರಿಗೆ ಪಾವತಿ ಮಾಡಿದ್ದಕ್ಕಾಗಿ ದಂಡ ಸೇರಿದಂತೆ ಸುಮಾರು 40 ಲಕ್ಷ ರೂ. ಪಾವತಿಸಬೇಕಾಗುತ್ತದೆ ಎಂದು ಹೇಳಿದರು. ಕರ್ನಾಟಕದ ಹೊರಗೆ ನೋಂದಾಯಿಸಲಾದ ಯಾವುದೇ ವಾಹನಕ್ಕೆ, ಒಂದು ವರ್ಷಕ್ಕೂ ಹೆಚ್ಚು ಕಾಲ ವಾಹನವನ್ನು ನಿರ್ವಹಿಸುತ್ತಿರುವುದು ಕಂಡುಬಂದರೆ ಮಾಲೀಕರು ಇಲ್ಲಿ ರಸ್ತೆ ತೆರಿಗೆಯನ್ನು ಪಾವತಿಸಬೇಕು.

ಬಾಬು ಸುಮಾರು ಎರಡು ವರ್ಷಗಳಿಂದ ವಾಹನಗಳನ್ನು ಬಳಸುತ್ತಿದ್ದಾರೆ. ಆರ್‌ಟಿಒ ಅಧಿಕಾರಿಗಳು ಬಾಬು ವಿರುದ್ಧ ಸಾಕಷ್ಟು ಪುರಾವೆಗಳನ್ನು ಸಂಗ್ರಹಿಸಿದ್ದಾರೆಎಂದು ಶೋಭಾ ಹೇಳಿದರು.

**ಬಾಬು ಆರಂಭದಲ್ಲಿ ಕರ್ನಾಟಕದಲ್ಲಿ ವಾಹನಗಳನ್ನು ಶಾಶ್ವತವಾಗಿ ಬಳಸುತ್ತಿಲ್ಲ ಎಂದು ಹೇಳಿಕೊಂಡಿದ್ದರು ಹಾಗೂ ಅವುಗಳನ್ನು ಮಹಾರಾಷ್ಟ್ರಕ್ಕೆ ಹಿಂತಿರುಗಿಸಲಾಗುವುದು ಎಂದು ತಿಳಿಸಿದ್ದರು. ಆದರೆ ಅವುಗಳನ್ನು ಹಿಂತಿರುಗಿಸಿರಲಿಲ್ಲ. ಒಂದು ಕಾರಿನ ಮೇಲೆ ರೂ.19.73 ಲಕ್ಷ ತೆರಿಗೆ ಬಾಕಿ ಇತ್ತು, ಇನ್ನೊಂದು ಕಾರಿನ ಮೇಲೆ ರೂ.18.53 ಲಕ್ಷ ತೆರಿಗೆ ಬಾಕಿ ಇತ್ತು. ಎರಡೂ ವಾಹನಗಳ ವಿಳಂಬ ಪಾವತಿಗೆ ಅವರು ಒಂದೇ ಬಾರಿಗೆ ತೆರಿಗೆ ಮತ್ತು ದಂಡ ಪಾವತಿಸಿದ್ದಾರೆ ಎಂದು ಆರ್‌ಟಿಒ ಅಧಿಕಾರಿ ಶೋಭಾ ಹೇಳಿದರು.**

## ಸಚಿವ ಭೈರತಿ ಸುರೇಶ್ ಪಿಎಸ್ ಮನೆ ಮೇಲೆ ಲೋಕಾ ದಾಳಿ

• ಉದಯವಾಹಿನಿ, ಬೆಂಗಳೂರು

ಸಚಿವ ಭೈರತಿ ಸುರೇಶ್ ಪಿಎಸ್ ವೈಯಕ್ತಿಕ ಕಾರ್ಯದರ್ಶಿ ಮನೆಯ ಮೇಲೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿ, ಅಪಾರ ಪ್ರಮಾಣದ ಆಸ್ತಿ ದಾಖಲೆ ಪತ್ರಗಳನ್ನು ವಶಕ್ಕೆ ಪಡೆದಿದ್ದಾರೆ. ಮಧ್ಯಾಹ್ನ ಮಾರುತಿ ಬಗಲಿ ಮನೆಯ ಮೇಲೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದಾರೆ.

ದಾಳಿಯ ವೇಳೆ ಅಧಿಕಾರಿಗಳು ಕೋಟ್ಯಂತರ ರೂಪಾಯಿ ಮೌಲ್ಯದ ಆಸ್ತಿ ದಾಖಲೆಗಳು ಪತ್ತೆಯಾಗಿದೆ. ಈವರೆಗೆ 8 ನಿವೇಶನಗಳು, 5 ವಾಸ ಮನೆ, 19 ಎಕ್ರೆ ಜಮೀನಿನ ಆಸ್ತಿ ಪತ್ರಗಳನ್ನು ವಶಪಡಿಸಿಕೊಂಡಿದ್ದಾರೆ.

2 ವರ್ಷಗಳ ಕಾಲ ಸಚಿವ ಭೈರತಿ ಸುರೇಶ್ ಅವರ ವೈಯಕ್ತಿಕ ಕಾರ್ಯದರ್ಶಿ ಆಗಿದ್ದ ಮಾರುತಿ ಬಗಲಿ, 3 ತಿಂಗಳ ಹಿಂದೆ ಕೆಲಸ ಬಿಟ್ಟಿದ್ದರು. ರಾಜ್ಯದ ಹಲವೆಡೆ ಭ್ರಷ್ಟ ಅಧಿಕಾರಿಗಳಿಗೆ ಲೋಕಾಯುಕ್ತ ಅಧಿಕಾರಿಗಳು ಶಾಕ್ ನೀಡಿದ್ದು, ಅಪಾರ ಪ್ರಮಾಣದ ಚಿನ್ನ, ಬೆಳ್ಳಿ ಆಭರಣ ಹಾಗೂ ನಗದು ವಶಪಡಿಸಿಕೊಂಡಿದ್ದಾರೆ.



ಉದಯವಾಹಿನಿ ಚಿತ್ರ

## ಕುರುಬ ಸಮಾಜ ಅಧಿಕಾರಕ್ಕೆ ಬೇಕು, ಕಾರ್ಯಕ್ರಮಕ್ಕೆ ಬೇಡ

• ಉದಯವಾಹಿನಿ, ರಾಜರಾಜೇಶ್ವರಿನಗರ

ಅಧಿಕಾರಕ್ಕಾಗಿ ಕುರುಬ ಸಮಾಜದ ಹೆಸರನ್ನು ಬಳಸಿಕೊಂಡು ರಾಜಕೀಯ ಮಾಡುವ ನಾವು, ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಿಂದ ದೂರ ಉಳಿಯುವುದು ಎಷ್ಟು ಸರಿ ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಪ್ರಶ್ನಿಸಿದರು. ಕಾಗಿನೆಲೆ ಮಹಾಸಂಸ್ಥಾನ ವತಿಯಿಂದ ಹಮ್ಮಿಕೊಂಡಿದ್ದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ವಿದ್ಯಾರ್ಥಿವೇತನ ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಂದಿಲ್ಲ ಎಂಬ ಕಾರಣಕ್ಕೆ ಕುರುಬ ಸಮಾಜದ ಅನೇಕ ನಾಯಕರು, ಇತ್ತ ಮುಖ ಮಾಡಿಲ್ಲ' ಎಂದು ಬೇಸರ ವ್ಯಕ್ತಪಡಿಸಿದರು.



ಅತಿಹೆಚ್ಚು ಪ್ರತಿಭಾವಂತ ಹೆಣ್ಣುಮಕ್ಕಳು ಕುರುಬ ಸಮಾಜದಲ್ಲಿದ್ದಾರೆ. ತಾವು ಎಲ್ಲಾ ಕ್ಷೇತ್ರಗಳಲ್ಲಿ ಸಾಧನೆ ಮಾಡಿ ತೋರಿಸಬೇಕಾಗಿದ್ದು, ಸತತ ಪರಿಶ್ರಮದಿಂದ ಎಲ್ಲಾ ರಂಗಗಳಲ್ಲಿಯೂ ಮುಂದೆ ಬರಬೇಕು. ಮುಂದಿನ ವಿಧಾನಸಭೆ ಚುನಾವಣೆ ವೇಳೆಗೆ 70 ಕ್ಷೇತ್ರಗಳು ಮಹಿಳಾ ಮೀಸಲಾಗಲಿದ್ದು, ಆ ಕ್ಷೇತ್ರದಲ್ಲಿಯೂ ಸ್ಪರ್ಧಿಸಿ ಸಾಧನೆ ಮಾಡಬೇಕು. ರಾಜಕೀಯ ಯಾರ ಮನೆಯ ಸ್ವತ್ತಲ್ಲ, ಎಲ್ಲಾರೂ ಸ್ಪರ್ಧಿಸಬಹುದು' ಎಂದರು.

**'ಕುರುಬ ಸಮಾಜದಲ್ಲಿ ಹುಟ್ಟಿರುವ ನಾವುಗಳೇ ಪುಣ್ಯವಂತರು. ಹೆಮ್ಮೆಯಿಂದ ನಾವು ಕುರುಬರು ಎಂದು ಹೇಳಿಕೊಳ್ಳಬೇಕು. ಸಮಾಜದ ಋಣವನ್ನು ತೀರಿಸುವ ಜೊತೆಗೆ, ಶೋಷಿತ, ದಲಿತ, ಹಿಂದುಳಿದ ಜನಾಂಗದ ಎಲ್ಲಾ ವರ್ಗಗಳನ್ನು ಒಗ್ಗೂಡಿಸಿ ಜೊತೆಯಲ್ಲಿ ಕರೆದುಕೊಂಡು ಹೋಗುವ ಮೂಲಕ ಸಮಸಮಾಜವನ್ನು ನಿರ್ಮಾಣ ಮಾಡಬೇಕಾಗಿದೆ' ಎಂದು ಕಾಗಿನೆಲೆ ಮಹಾಸಂಸ್ಥಾನ ಕನಕಗುರುಪೀಠಾಧ್ಯಕ್ಷ ನಿರಂಜನಾ ನಂದಪುರಿ ಸ್ವಾಮೀಜಿ ಹೇಳಿದರು.**


ಬಿಬಿಎಂಪಿ ಮಾಜಿ ಸದಸ್ಯ ಡಾ.ಎಸ್. ರಾಜು, ಮಹಿಳಾ ಅಯೋಗದ ಅಧ್ಯಕ್ಷೆ ನಾಗಲಕ್ಷ್ಮೀ ಚೌಧರಿ, ಭೋವಿಗುರುಪೀಠದ ಇಮ್ಮಡಿ ಸಿದ್ದರಾಮೇಶ್ವರ ಸ್ವಾಮೀಜಿ, ಹೊಸದುರ್ಗ ಕನಕಧಾಮದ ಈಶ್ವರಾನಂದಪುರಿ ಸ್ವಾಮೀಜಿ, ಕುಂಚಿಟಿಗಮಠದ ಶಾಂತವೀರ ಸ್ವಾಮೀಜಿ, ಕೊಪ್ಪಳ ವಿಶ್ವವಿದ್ಯಾಲಯದ ಕುಲಪತಿ ಬಿ.ಕೆ.ರವಿ, ಲೋಕೋಪಯೋಗಿ ಇಲಾಖೆಯ ರಿಜಿಸ್ಟರ್ ಸೋಮಶೇಖರ್ ಉಪಸ್ಥಿತರಿದ್ದರು.

## ರಾಮೇಶ್ವರಂ ಕೆಫೆ ಪೊಂಗಲ್‌ನೊಳಗೆ ಹುಳು ಪತ್ತೆ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿರುವ ಜನಪ್ರಿಯ ರಾಮೇಶ್ವರಂ ಕೆಫೆಯ ಔಟ್‌ಲೆಟ್‌ನಲ್ಲಿ ಬೆಳಿಗ್ಗೆ ಗ್ರಾಹಕನೊಬ್ಬನಿಗೆ ನೀಡಿದ ಖಾದ್ಯದೊಳಗೆ ಹುಳು ಪತ್ತೆಯಾಗಿದೆ. ಗ್ರಾಹಕನ ಪ್ರಕಾರ, ಉಪಾಹಾರಕ್ಕಾಗಿ ಆರ್ಡರ್ ಮಾಡಿದ ಪೊಂಗಲ್ ಒಳಗೆ ಹುಳು ಪತ್ತೆಯಾಗಿದೆ. ದೂರು ನೀಡಿದ ನಂತರ ಕೆಫೆ ಸಿಬ್ಬಂದಿ ಆರಂಭದಲ್ಲಿ ಘಟನೆಯನ್ನು ಮುಚ್ಚಿಹಾಕಲು ಪ್ರಯತ್ನಿಸಿದರು ಎಂದು ಆರೋಪಿಸಿದ್ದಾರೆ. ಆಹಾರದೊಳಗಿನ ಹುಳು ಮತ್ತು ಸಿಬ್ಬಂದಿ ಸದಸ್ಯರ ಪ್ರತಿಕ್ರಿಯೆಯನ್ನು ವಿಡಿಯೋ ರೆಕಾರ್ಡ್ ಮಾಡಲು ಪ್ರಾರಂಭಿಸಿದ ನಂತರವೇ ಅವರು ಕ್ಷಮೆಯಾಚಿಸಲು ಪ್ರಾರಂಭಿಸಿದರು. ನಂತರ ಸಿಬ್ಬಂದಿ ಗ್ರಾಹಕರಿಗೆ 300 ರೂ.ಗಳ ಪೂರ್ಣ ಮರುಪಾವತಿಯನ್ನು ನೀಡಿದ್ದಾರೆ.

ಘಟನೆಯ ವಿಡಿಯೋದಲ್ಲಿ ಗ್ರಾಹಕರು ಪೊಂಗಲ್‌ನೊಳಗಿದ್ದ ಹುಳವನ್ನು ಚಮಚದಲ್ಲಿ ಎತ್ತಿ ತೋರಿಸಿದ್ದಾರೆ. ಇನ್‌ಸ್ಟಾಗ್ರಾಂ ಮೂಲಕ ಕೆಫೆ ಮಾಲೀಕರಿಗೆ ದೂರು ನೀಡುವ ಸಾಧ್ಯತೆಯ ಬಗ್ಗೆ ಇನ್ನೊಬ್ಬ ಗ್ರಾಹಕರೊಂದಿಗೆ ಚರ್ಚಿಸುವುದು ಸೆರೆಯಾಗಿದೆ.



ಸಿಬ್ಬಂದಿಯೊಬ್ಬರು ನೀವು ಅನುಚಿತ ರೀತಿಯಲ್ಲಿ ಮಾತನಾಡಿದ್ದೀರ ಎಂದು ಕೇಳುತ್ತಿರುವುದು ಕೇಳಿಬಂದಿದೆ. ಈ ಸಂಬಂಧ ಕೆಫೆಯಿಂದ ಯಾವುದೇ ಪ್ರತಿಕ್ರಿಯೆ ಲಭ್ಯವಾಗಿಲ್ಲ.

ರಾಮೇಶ್ವರಂ ಕೆಫೆ ಬೆಂಗಳೂರು ಮೂಲದ ಬ್ರ್ಯಾಂಡ್ ಆಗಿದ್ದು, ರೆಸ್ಟೋರೆಂಟ್‌ಗಳ ಸರಪಣಿಯನ್ನು ಹೊಂದಿದೆ. ಇದು ಸ್ಥಳೀಯರು ಮತ್ತು ಪ್ರವಾಸಿಗರಲ್ಲಿ ಜನಪ್ರಿಯವಾಗಿದೆ.

ಕಳೆದ ವರ್ಷ ಮೇ ತಿಂಗಳಲ್ಲಿ, ಹೈದರಾಬಾದ್‌ನಲ್ಲಿರುವ ಅದರ ಮಳಿಗೆಗಳಲ್ಲಿ ಹಲವಾರು ಅವಧಿ ಮೀರಿದ ಮತ್ತು ತಪ್ಪಾಗಿ ಲೇಬಲ್ ಮಾಡಲಾದ ಆಹಾರ ಪದಾರ್ಥಗಳು ಪತ್ತೆಯಾಗಿದ್ದವು. ತೆಲಂಗಾಣದ ಆಹಾರ ಸುರಕ್ಷತಾ ಇಲಾಖೆಯು ಅವುಗಳನ್ನು ವಶಪಡಿಸಿಕೊಂಡು ಪರಿಶೀಲನೆ ನಡೆಸಿತ್ತು. ಇದರಲ್ಲಿ ಮಾರ್ಚ್ 2024 ರಲ್ಲಿ ಅವಧಿ ಮುಗಿದ 100 ಕಿಲೋ ಉದ್ದಿನ ಬೇಳೆ, ಹಾಗೆಯೇ 10 ಕಿಲೋ ಅವಧಿ ಮುಗಿದ ಮೊಸರು ಮತ್ತು ಎಂಟು ಲೀಟರ್ ಅವಧಿ ಮುಗಿದ ಹಾಲು ಇತ್ತು.

# ಮಹದಾಯಿ ಯೋಜನೆ ಕಾಮಗಾರಿ ಶೀಘ್ರ ಪ್ರಾರಂಭ

### ಹೌದು, ಬೆಂಗಳೂರು ಗ್ರಾಮಾಂತರ ಕ್ಷೇತ್ರದಲ್ಲೂ ಗೋಲ್ಮಾಲ್, ಮಾತನಾಡುವುದು ತುಂಬಾ ಇದೆ : ಡಿಕೆಶಿ

• ಉದಯವಾಹಿನಿ, ಬೆಂಗಳೂರು

ಕರ್ನಾಟಕದ ಒಂದು ಲೋಕಸಭಾ ಕ್ಷೇತ್ರದಲ್ಲಿ ಚುನಾವಣೆ ಅಕ್ರಮ ನಡೆದಿದೆ ಎನ್ನುವ ಲೋಕಸಭೆಯಲ್ಲಿ ವಿಪಕ್ಷದ ನಾಯಕ ರಾಹುಲ್ ಗಾಂಧಿಯವರ ಹೇಳಿಕೆ, ರಾಷ್ಟ್ರಾದ್ಯಂತ ವ್ಯಾಪಕ ಚರ್ಚೆಗೆ ಗ್ರಾಸವಾಗಿದೆ. ರಾಹುಲ್ ಅವರ ಮಾತಿಗೆ ಕರ್ನಾಟಕ ಡಿಸಿಎಂ ಡಿಕೆ ಶಿವಕುಮಾರ್ ಧ್ವನಿಗೂಡಿಸಿದ್ದಾರೆ.

ಲೋಕಸಭೆ ಚುನಾವಣೆ ವೇಳೆ ರಾಜ್ಯದಲ್ಲಿ ಮತಗಳ್ಳತನವಾಗಿದೆ ಎನ್ನುವ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರ ಹೇಳಿಕೆಯನ್ನು ನಾನೂ ಕೂಡಾ ಒಪ್ಪಿಕೊಳ್ಳುತ್ತೇನೆ ಎಂದು ಡಿಕೆ ಶಿವಕುಮಾರ್ ಹೇಳಿದ್ದಾರೆ. ಆ ಮೂಲಕ, ರಾಹುಲ್ ಗಾಂಧಿ ಹೇಳಿಕೆಗೆ ಅಧಿಕೃತವಾಗಿ ಧ್ವನಿಗೂಡಿಸಿದ್ದಾರೆ.

'ಮಹದಾಯಿ ಯೋಜನೆಗೆ ಕೇಂದ್ರ ಅರಣ್ಯ ಇಲಾಖೆ ಅನುಮತಿ ನೀಡುವುದಿಲ್ಲ ಎಂಬ ಗೋವಾ ಸಿಎಂ ಪ್ರಮೋದ್ ಸಾವಂತ್ ಅವರ ಹೇಳಿಕೆ ಖಂಡನೀಯ. ಸುಪ್ರೀಂ ಕೋರ್ಟ್‌ನಲ್ಲಿ ನಾವು ಸಲ್ಲಿಸಿರುವ ಅರ್ಜಿ ಹಿಂಪಡೆದು, ಶೀಘ್ರವೇ ಕಾಮಗಾರಿ ಆರಂಭಿಸುತ್ತೇವೆ.


ಅವರು ಅದನ್ನು ತಡೆಯಲಿ, ನಾನೂ ನೋಡುತ್ತೇನೆ ಎಂದು ಡಿ ಕೆ ಶಿವಕುಮಾರ್ ಅವರು ಗುಡುಗಿದ್ದಾರೆ.



ಮಹಾರಾಷ್ಟ್ರದ ಚುನಾವಣೆಯಲ್ಲಿ ಭಾರೀ ಪ್ರಮಾಣದ ಅಕ್ರಮ ನಡೆದಿತ್ತು. ಕೇಂದ್ರ ಚುನಾವಣಾ ಆಯೋಗದ ತಪ್ಪನ್ನು ನಾವು ಎತ್ತಿ ತೋರಿಸಿದ್ದೆವು. ನಮ್ಮ ಪ್ರಶ್ನೆಗಳಿಗೆ ಆಯೋಗದ ಬಳಿ ಉತ್ತರವಿರಲಿಲ್ಲ ಎಂದು ರಾಹುಲ್ ಗಾಂಧಿ ಹೇಳಿದ್ದರು. ಆ ವೇಳೆ, ಕರ್ನಾಟಕದ ಒಂದು ಲೋಕಸಭಾ ಕ್ಷೇತ್ರ ಎಂದೂ ಹೇಳಿದ್ದರು. ರಾಹುಲ್ ಪ್ರಸ್ತಾವಿಸುತ್ತಿರುವ ಕ್ಷೇತ್ರ ಯಾವುದು ಎನ್ನುವುದು ರಾಜ್ಯದಲ್ಲಿ ಚರ್ಚೆಯ ವಿಷಯವಾಗಿತ್ತು. ದೊಡ್ಡ ಮಟ್ಟದ ಅಕ್ರಮ ನಡೆದಿದೆ ಎಂದು ರಾಹುಲ್ ಗಾಂಧಿ ಹೇಳಿದ್ದ ಹಿನ್ನಲೆಯಲ್ಲಿ, ಅದರಲ್ಲಿ ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರವೇ ಎನ್ನುವ ಸಂಶಯ ಕಾಡುತ್ತಿತ್ತು. ಈಗ, ಡಿಕೆ ಶಿವಕುಮಾರ್ ಕೂಡಾ ಅದರ ಬಗ್ಗೆ ಮಾತನಾಡಿದ್ದಾರೆ.

ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿ ಡಾ.ಸಿಎನ್ ಮಂಜುನಾಥ್ ವಿರುದ್ದ ಕಾಂಗ್ರೆಸ್ಸಿನ ಡಿಕೆ ಸುರೇಶ್, 2,69,647ಮತಗಳ ಅಂತರದಿಂದ ಸೋಲು ಅನುಭವಿಸಿದ್ದರು. ಸತತವಾಗಿ ಮೂರು ಬಾರಿ ಗೆದ್ದಿದ್ದ ಡಿಕೆ ಸುರೇಶ್ ಸೋಲು, ಡಿ ಕೆ ಶಿವಕುಮಾರ್ ಅವರಿಗೆ ದೊಡ್ಡ ಹಿನ್ನಡೆಯನ್ನು ತಂದಿತ್ತು. ಚುನಾವಣಾ ಅಕ್ರಮದ ಸಾಧ್ಯತೆಯ ಬಗ್ಗೆ, ಆ ವೇಳೆಯೂ ಡಿಕೆಶಿ ಪ್ರಸ್ತಾವಿಸಿದ್ದರು.

**ನಾನು ರಾಹುಲ್ ಗಾಂಧಿ ಅವರ ಹೇಳಿಕೆಯನ್ನು ಒಪ್ಪುತ್ತೇನೆ. ನಾನು ಕೂಡ ಈ ವಿಚಾರವಾಗಿ ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದಲ್ಲಿ ತನಿಖೆ ನಡೆಸಿದ್ದೇನೆ. ಇಲ್ಲಿ ಅನೇಕ ಗೋಲ್ಮಾಲ್ ಗಳು ನಡೆದಿವೆ. ಈ ವಿಚಾರವಾಗಿ ಸದ್ಯಕ್ಕೆ ನಾನು ಹೆಚ್ಚು ವಿಚಾರ ಪ್ರಸ್ತಾಪ ಮಾಡುವುದಿಲ್ಲ. ಮುಂದೆ ಈ ವಿಚಾರವಾಗಿ ಮಾತನಾಡುತ್ತೇನೆ'' ಎಂದು ಡಿಕೆಶಿ ಹೇಳಿದರು.**



ಉದಯವಾಹಿನಿ ಚಿತ್ರ

**ಮಹದಾಯಿ ವಿಚಾರದ ಬಗ್ಗೆ ಮಾತನಾಡಿದ ಡಿಕೆ ಶಿವಕುಮಾರ್, ಮಹದಾಯಿ ಯೋಜನೆ ವಿಚಾರದಲ್ಲಿ ಕೇಂದ್ರ ಸಚಿವರು ದಾರಿ ತಪ್ಪಿಸುತ್ತಿಲ್ಲ. ಕೇಂದ್ರ ಜಲಶಕ್ತಿ ಸಚಿವರು ಈ ವಿಚಾರದಲ್ಲಿ ನಿಷ್ಪಕ್ಷಪಾತವಾಗಿದ್ದಾರೆ. ಅವರು ಈ ವಿಚಾರದಲ್ಲಿ ರಾಜಕೀಯ ಮಾಡುವುದಿಲ್ಲ. ನಾನು ಅವರನ್ನು ಐದಾರು ಬಾರಿ ಈ ವಿಚಾರಕ್ಕಾಗಿ ಭೇಟಿ ಮಾಡಿದ್ದೇನೆ. ಕೇಂದ್ರ ಅರಣ್ಯ ಸಚಿವರು ಕೂಡ ಈ ವಿಚಾರದಲ್ಲಿ ರಾಜಕೀಯ ಮಾಡುವುದಿಲ್ಲ. ಅಭಿವೃದ್ಧಿ ಕೆಲಸಕ್ಕೆ ಬೆಂಬಲವಾಗಿದ್ದಾರೆ. ಎಲ್ಲಾ ಸಮಸ್ಯೆ ಇರುವುದು ಗೋವಾದಲ್ಲಿ ಎಂದು ಕಿಡಿಕಾರಿದರು.**

## ಆಂಧ್ರದಲ್ಲಿ ರಾಜ್ಯದ ಇಬ್ಬರು ಬಿಜೆಪಿ ಕಾರ್ಯಕರ್ತರ ಹತ್ಯೆ

• ಉದಯವಾಹಿನಿ, ಬೆಂಗಳೂರು

ಆಂಧ್ರದಲ್ಲಿ ರಾಜ್ಯದ ಇಬ್ಬರು ಬಿಜೆಪಿ ಕಾರ್ಯಕರ್ತರ ಹತ್ಯೆಯನ್ನು ಖಂಡಿಸಿದ್ದು, ಶೀಘ್ರವೇ ತನಿಖೆಯಾಗಲಿ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಆಗ್ರಹಿಸಿದ್ದಾರೆ.

ಈ ಬಗ್ಗೆ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಬೆಂಗಳೂರಿನ ಮಹದೇವಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಬಿಜೆಪಿ ಕಾರ್ಯಕರ್ತರಾಗಿದ್ದ ಕೆ.ವಿ.ಪ್ರಶಾಂತ್ ರೆಡ್ಡಿ ಹಾಗೂ ಅವರ ತಂದೆ ವೀರಸ್ವಾಮಿರೆಡ್ಡಿ ಅವರು ಹತ್ಯೆಗೀಡಾಗಿರುವ ಘಟನೆ ಅತ್ಯಂತ ಅಮಾನವೀಯ, ದುಃಖಕರ ಎಂದು ಬೇಸರ ವ್ಯಕ್ತಪಡಿಸಿದ್ದಾರೆ. ಈ ದುರ್ಘಟನೆಯನ್ನು ಖಂಡಿಸಿ, ಮೃತರ ಆತ್ಮಕ್ಕೆ ಶಾಂತಿ ಕೋರುವೆ. ಕೊಲೆಗಡುಕರನ್ನು ಬಂಧಿಸುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆ ತನಿಖೆ ಚುರುಕುಗೊಳಿಸಲಿ ಎಂದು ಆಗ್ರಹಿಸಿದ್ದಾರೆ.

ನೊಂದ ಕುಟುಂಬಕ್ಕೆ ನ್ಯಾಯ ಸಿಗಲಿ. ಮೃತರ ಕುಟುಂಬ ವರ್ಗದವರಿಗೆ ಈ ದುಃಖ ಸಹಿಸುವ ಶಕ್ತಿಯನ್ನು ಭಗವಂತನು ಕರುಣಿಸಲಿ ಎಂದಿದ್ದಾರೆ.



#### ಏನಿದು ಪ್ರಕರಣ?

**(ಜು.22) ರಾತ್ರಿ ಆಂಧ್ರದಲ್ಲಿದ್ದ ವೀರಸ್ವಾಮಿ ರೆಡ್ಡಿ ಕೆ.ವಿ.ಪ್ರಶಾಂತ್ ರೆಡ್ಡಿ ಅವರ ಮಗ ಚೆಕ್‌ಬೌನ್ಸ್ ಪ್ರಕರಣ ಸಂಬಂಧ ಕೋರ್ಟ್‌ಗೆ ತೆರಳುತ್ತಿದ್ದರು. ಈ ವೇಳೆ 6 ಜನ ದುಷ್ಕರ್ಮಿಗಳು ಕಪ್ಪು ಬಣ್ಣದ ಕಾರಿನಲ್ಲಿ ಬಂದು ಇಬ್ಬರನ್ನು ಅಪಹರಿಸಿ ಬಳಿಕ ಕತ್ತು ಕೊಯ್ದು ಕೊಲೆ ಮಾಡಿದ್ದಾರೆ.**

# ಧರ್ಮಸ್ಥಳ ಸೌಜನ್ಯ ಪ್ರಕರಣ: ತಪ್ಪಿತಸ್ಥರ ವಿರುದ್ದ ತನಿಖೆ

## ಅಕ್ವಿಟಲ್ ಕಮಿಟಿ ರಚಿಸುವಂತೆ ಮೈಸೂರಿನ ಒಡನಾಡಿ ಸೇವಾ ಸಂಸ್ಥೆ ಸರ್ಕಾರಕ್ಕೆ ಒತ್ತಾಯ

• **ಉದಯವಾಹಿನಿ, ಮೈಸೂರು**

ಧರ್ಮಸ್ಥಳದ ಸೌಜನ್ಯ ಪ್ರಕರಣದಲ್ಲಿ ತಪ್ಪಿತಸ್ಥರ ಅಧಿಕಾರಿಗಳ ತನಿಖೆಗಾಗಿ ಅಕ್ವಿಟಲ್ ಕಮಿಟಿ ರಚನೆ ಮಾಡಬೇಕು ಎಂದು ಒಡನಾಡಿ ಸೇವಾ ಸಂಸ್ಥೆ ಒತ್ತಾಯಿಸಿದೆ.

ತಾಲ್ಲೂಕಿನ ಧರ್ಮಸ್ಥಳ ಸುತ್ತಮುತ್ತ ನಡೆದಿದೆ ಎನ್ನಲಾಗಿರುವ ಹಲವಾರು ಅತ್ಯಾಚಾರ, ಹತ್ಯೆಗಳ ತನಿಖೆಗಾಗಿ ರಾಜ್ಯ ವಿಶೇಷ ತನಿಖಾ ದಳವನ್ನು ರಚಿಸಿರುವುದು ಸ್ವಾಗತಾರ್ಹವಾಗಿದೆ. ವಿಶೇಷ ತನಿಖಾ ದಳದಲ್ಲಿ ಪ್ರಕರಣಗಳ ಇತಿಹಾಸವು ನಿರೀಕ್ಷಿಸುವಂತೆ ಎಲ್ಲಾ ಪರಿಣಿತರ ಇರುವಿಕೆಯ ಜತೆಗೆ ತನಿಖೆಯು ದಕ್ಷ, ಪ್ರಾಮಾಣಿಕ, ನಿಷ್ಪಕ್ಷಪಾತ ಹಾಗೂ ಪಾರದರ್ಶಕವಾಗಿ ನಡೆಯುವ ಭರವಸೆ ಇದೆ. ಈ ಎಲ್ಲಾ ಪ್ರಕ್ರಿಯೆಯು ಸೌಜನ್ಯಗಳ ಅಪಹರಣ, ಅತ್ಯಾಚಾರ, ಹತ್ಯೆಯ ಆರೋಪಿಗಳ ಪತ್ತೆಗಾಗಿ ನಡೆದ ಜನಾಗ್ರಹ ಹಾಗೂ ಜನಾಂದೋಲನದ ನೇರವಾದ ಕೊಡುಗೆ ಎಂದು ಒಡನಾಡಿಯು ನಂಬಿದೆ.

ಆದರೆ, ಸೌಜನ್ಯಳ ಪ್ರಕರಣದಲ್ಲಿ ಸಿಬಿಐ ಸ್ಪೆಷಲ್ ಕೋರ್ಟ್


ಉದಯವಾಹಿನಿ ಚಿತ್ರ

ನೀಡಿರುವ ತೀರ್ಪಿನಲ್ಲಿ ತನಿಖೆ ನಡೆಸಿದ ಎಲ್ಲಾ ಅಧಿಕಾರಿಗಳು, ವೈದ್ಯರು ಸೇರಿದಂತೆ ಮತ್ತಿತರರು ಗುರುತರ ತಪ್ಪೆಸಗಿರುವುದು ಕಂಡು ಬಂದಿದೆ. ಹೀಗಾಗಿ ಸರಕಾರವು ಕೂಡಲೇ ಕ್ವಿಟಲ್ ಕಮಿಟಿ (ತನಿಖೆ ವೇಳೆ ಲೋಪವೆಸಗಿದ ಅಧಿಕಾರಿಗಳ ವಿರುದ್ಧ ನಡೆಸುವ ತನಿಖಾ ಸಮಿತಿ) ರಚಿಸಿ ಅದರ ಮೂಲಕ ತಪ್ಪಿತಸ್ಥ ಅಧಿಕಾರಿಗಳನ್ನು ತನಿಖೆಗೊಳಪಡಿಸಬೇಕು ಎಂದು 2022ರ ಜೂ. 16ರಂದು ಆದೇಶಿಸಿತ್ತು.

ಆದರೆ, ಸರಕಾರವು ಇದುವರೆಗೂ ಅಕ್ವಿಟಲ್ ಕಮಿಟಿ ರಚನೆಗೆ ಚಾಲನೆ ನೀಡದೆ ವಿಳಂಬಿಸುತ್ತಿರುವುದು ಖಂಡನೀಯವಾಗಿದೆ ಎಂದು ಒಡನಾಡಿ ಸೇವಾ ಸಂಸ್ಥೆಯ ನಿರ್ದೇಶಕರಾದ ಸ್ಟ್ಯಾನ್ಲಿ ಪರಶು ದೂರಿದ್ದಾರೆ. ಸರಕಾರದ ಸರ್ಕಾರದ ನೀತಿಯು ನ್ಯಾಯಾಲಯದ ಆದೇಶವನ್ನು ಗೌಣ ಮಾಡಿದಂತಾಗಿದೆ. ಈಗಾಗಲೇ ಪ್ರಕರಣದಲ್ಲಿ ತಪ್ಪಿತಸ್ಥ ಅಧಿಕಾರಿಗಳ ಪಟ್ಟಿಯಲ್ಲಿ ವೈದ್ಯರಾಗಿದ್ದ ಆದಂ ನಿಧನರಾಗಿದ್ದು, ಮಹತ್ತರ ವಿಚಾರಗಳು ಹಾಗೂ ಸತ್ಯಗಳು ಅವರೊಂದಿಗೆ ಮರೆಯಾಗಿವೆ. ಮತ್ತೊಬ್ಬ ತಪ್ಪಿತಸ್ಥ ಪ್ರಕರಣದ ತನಿಖಾಧಿಕಾರಿ ಯೋಗೇಶ್ ನ್ಯಾಯಾಲಯದ ಆದೇಶದ ಹೊರತಾಗಿಯೂ ಸರಕಾರದ ಸಕಲ ಸವಲತ್ತುಗಳ ಜತೆಗೆ ಬಡ್ತಿ ಪಡೆದು ಸರಕಾರಿ ಸಂಬಳದಲ್ಲಿ ಬದುಕುತ್ತಿದ್ದಾರೆ.

ಅದೇ ರೀತಿ ವೈದ್ಯೆ ರಶ್ಮಿ ಕೂಡ ತನಿಖೆಯನ್ನು ಎದುರಿಸದೆ ಮುಂದುವರೆಯುತ್ತಿರುವುದು ಸಾರ್ವಜನಿಕರ ಆತಂಕಕ್ಕೆ ಕಾರಣವಾಗಿದೆ.

**ಅಕ್ವಿಟಲ್ ಕಮಿಟಿ ರಚನೆಗೆ ಚಾಲನೆ ನೀಡದೆ ವಿಳಂಬ**

**ಸೌಜನ್ಯ ಪ್ರಕರಣವನ್ನು ತಾರ್ಕಿಕ ಅಂತ್ಯಕ್ಕೆ ತರಲು ಹಾಗೂ ರಾಜ್ಯದಲ್ಲಿ ನೆಲೆಸಿರುವ ಅನುಮಾನ, ಆತಂಕ, ಆಶಾಂತಿಯನ್ನು ತೊಡೆದು ಹಾಕಲು ರಾಜ್ಯ ಸರಕಾರ ನ್ಯಾಯಾಲಯದ ಆದೇಶದನ್ವಯ ಸಮರ್ಥ ಆಕ್ವಿಟಲ್ ಕಮಿಟಿ ರಚಿಸಿ, ತಪ್ಪಿತಸ್ಥ ಅಧಿಕಾರಿಗಳನ್ನು ತನಿಖೆಗೆ ಒಳಪಡಿಸುವುದರ ಮೂಲಕ ಪ್ರಕ್ರಿಯೆಗೆ ಚಾಲನೆ ನೀಡಬೇಕು ಎಂದು ಒಡನಾಡಿ ಸೇವಾ ಸಂಸ್ಥೆಯ ನಿರ್ದೇಶಕರಾದ ಸ್ಟ್ಯಾನ್ಲಿ, ಪರಶು ಆಗ್ರಹಿಸಿದ್ದಾರೆ.**

# ಜಿಲ್ಲಾಸ್ಪತ್ರೆಗೆ ಲೋಕಾಯುಕ್ತ ದಾಳಿ ಬಿಸಿ

• **ಉದಯವಾಹಿನಿ, ರಾಮನಗರ**

ನಗರದಲ್ಲಿರುವ ಜಿಲ್ಲಾಸ್ಪತ್ರೆಗೆ ನಾಲ್ಕು ವರ್ಷಗಳ ಹಿಂದೆ ಖರೀದಿಸಿರುವ, ಪೂರೈಕೆಯಾಗಿರುವ ಅವ್ಯವಹಾರ ನಡೆದಿದೆ ಎಂಬ ಆರೋಪದ ಹಿನ್ನೆಲೆಯಲ್ಲಿ ಲೋಕಾಯುಕ್ತ ಪೊಲೀಸರು ಆಸ್ಪತ್ರೆ ಮೇಲೆ ದಾಳಿ ನಡೆಸಿ ಖರೀದಿಗೆ ಸಂಬಂಧಿಸಿದ ದಾಖಲೆಗಳನ್ನು ಪರಿಶೀಲಿಸಿದರು.

2021-22ನೇ ಸಾಲಿನಲ್ಲಿ ನಡೆದಿರುವ ಖರೀದಿ ಪ್ರಕ್ರಿಯೆಯಲ್ಲಿ ಅವ್ಯವಹಾರ ಆರೋಪ ಕೇಳಿಬಂದಿರುವ ಹಿನ್ನೆಲೆಯಲ್ಲಿ ಲೋಕಾಯುಕ್ತದಲ್ಲಿ ಸ್ವಯಂ ಪ್ರೇರಿತ ಪ್ರಕರಣ ದಾಖಲಾಗಿತ್ತು. ಹಿನ್ನೆಲೆಯಲ್ಲಿ ಎಸ್‌ಪಿ ಸ್ನೇಹ ಪಿ.ವಿ ಅವರ ಮಾರ್ಗ ದರ್ಶನದಲ್ಲಿ ಡಿವೈಎಸ್ಪಿಗಳಾದ ಶಿವಪ್ರಸಾದ್ ರಾಜೇಶ್, ಇನ್ಸ್‌ಪೆಕ್ಟರ್ ಸಂದೀಪ್ ನೇತೃತ್ವದ ತಂಡ ಬೆಳಿಗ್ಗೆ 11ಕ್ಕೆ ಆಸ್ಪತ್ರೆ ಮೇಲೆ ದಾಳಿ ನಡೆಸಿತು. ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಮಂಜುನಾಥ್, ಸ್ಥಾನಿಕ ವೈದ್ಯಾಧಿಕಾರಿ ಡಾ. ನಾರಾಯಣಸ್ವಾಮಿ ಸೇರಿದಂತೆ ಆಡಳಿತಾತ್ಮಕ ಅಧಿಕಾರಿಗಳು ಸೇರಿದಂತೆ ವಿವಿಧ ಸಿಬ್ಬಂದಿಯನ್ನು ತಂಡ ವಿಚಾರಣೆ ನಡೆಸಿತು. ಖರೀದಿ ಪ್ರಕ್ರಿಯೆಗೆ ಸಂಬಂಧಿಸಿದ ಕಡತಗಳನ್ನು ಪಡೆದು ಸಂಜೆ 5.30ರವರೆಗೆ ಪರಿಶೀಲನೆ ನಡೆಸಿತು.

ಜಿಲ್ಲಾಸ್ಪತ್ರೆಯ ಶಸ್ತ್ರಚಿಕಿತ್ಸಕರಾಗಿ 2021-22ನೇ ಸಾಲಿನಲ್ಲಿ ಡಾ. ವಿಜಯ ನರಸಿಂಹ ಕಾರ್ಯನಿರ್ವಹಿಸಿದ್ದರು. ಅವರ ವರ್ಗಾವಣೆಯಾದ ಬಳಿಕ ಡಾ. ಶಶಿಧರ್ ಮತ್ತು ಡಾ. ಪದ್ಮಾ ಜಿ.ಎಲ್ ಅವರು ಸೇವೆ ಸಲ್ಲಿಸಿದ್ದರು. ಸದ್ಯ ಡಾ. ಮಂಜುನಾಥ್ ಜಿಲ್ಲಾ ಶಸ್ತ್ರಚಿಕಿತ್ಸಕರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಖರೀದಿಗೆ ಸಂಬಂಧಿಸಿದಂತೆ ಒಬ್ಬೊಬ್ಬರು ಒಂದೊಂದು ರೀತಿಯ ಮಾಹಿತಿ ನೀಡುತ್ತಿದ್ದಾರೆ. ಎಲ್ಲಾರ ಹೇಳಿಕೆಗಳನ್ನು ದಾಖಲಿಸಿಕೊಳ್ಳಲಾಗಿದೆ. ಪೂರಕವಾಗಿ ಕಡತಗಳನ್ನು ಪರಿಶೀಲಿಸಲಾಗುತ್ತಿದೆ. ಎಲ್ಲಾ ಕಡತಗಳನ್ನು ಪರಿಶೀಲಿಸಿದ ಬಳಿಕ ಅವ್ಯವಹಾರ ನಡೆದಿದೆಯೇ ಇಲ್ಲವೋ ಎಂಬುದು ಗೊತ್ತಾಗಲಿದೆ. ಆಗ ಸಂಬಂಧಪಟ್ಟವರಿಗೆ ನೋಟಿಸ್ ನೀಡಿ ಅಧಿಕೃತವಾಗಿ ವಿಚಾರಣೆ ನಡೆಸಲಾಗುವುದು ಎಂದು ಮೂಲಗಳು ಹೇಳಿವೆ.


ಉದಯವಾಹಿನಿ ಚಿತ್ರ

**ಜಿಲ್ಲಾಸ್ಪತ್ರೆಯಲ್ಲಿ ಔಷಧ ಖರೀದಿಯಲ್ಲಿ ಕೇಳಿಬಂದಿರುವ ಅವ್ಯವಹಾರ ಆರೋಪಕ್ಕೆ ಸಂಬಂಧಿಸಿದಂತೆ ಸ್ವಯಂಪ್ರೇರಿತ ಪ್ರಕರಣ ದಾಖಲಿಸಿಕೊಂಡು ಕಡತಗಳ ಪರಿಶೀಲನೆ ನಡೆಸಲಾಗಿದೆ. ಗುರುವಾರವೂ ಪರಿಶೀಲನೆ ಮುಂದುವರಿಯಲಿದೆ**

**-ಸ್ನೇಹ ಪಿ.ವಿ. ಲೋಕಾಯುಕ್ತ ಎಸ್ಪಿ ಬೆಂಗಳೂರು ದಕ್ಷಿಣ**

# ಕಾರ್ಪೋರೇಟ್ ಸಂಸ್ಥೆಗಳ ವಿರುದ್ಧ ಹೋರಾಟ ರೂಪಿಸಬೇಕು

• **ಉದಯವಾಹಿನಿ, ಚನ್ನಪಟ್ಟಣ**

ಪ್ರಜಾಪ್ರಭುತ್ವದ ಅಧಿಕಾರ ಕಸಿದುಕೊಂಡಿರುವ ಕಾರ್ಪೋರೇಟ್ ಸಂಸ್ಥೆಗಳ ವಿರುದ್ಧ ರೈತ ಸಂಘ ಹೋರಾಟ ರೂಪಿಸಬೇಕೆಂದು ರಾಜ್ಯ ರೈತ ಸಂಘದ ಅಧ್ಯಕ್ಷ ಬಡಗಲಪುರ ನಾಗೇಂದ್ರ ತಿಳಿಸಿದರು. ತಾಲ್ಲೂಕಿನ ಮೊಗೇನಹಳ್ಳಿ ಗ್ರಾಮದಲ್ಲಿ ಏರ್ಪಡಿಸಿದ್ದ ತಾಲ್ಲೂಕಿನ ರೈತ ನಾಯಕರಾದ ದಿ.ಎಂ.ರಾಮು, ಜಿ.ಟಿ.ರಾಮಸ್ವಾಮಿ ಅವರ 4ನೇ ವರ್ಷದ ಪುಣ್ಯಸ್ಮರಣೆ ಮತ್ತು ಎಂ.ರಾಮು ಪ್ರತಿಷ್ಠಾನ, ಎಂ.ರಾಮು ಸರ್ಕಲ್ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದರು.

ರೈತ ನಾಯಕ ಪ್ರೊ.ಎಂ.ಡಿ.ನಂಜುಂಡಸ್ವಾಮಿ ಅವರು ಮುಂದೆ ರಾಜ್ಯ ಸರ್ಕಾರ ಪುರಸಭೆಯಾಗುತ್ತದೆ. ಸಂಸತ್ತು ಕಾರ್ಪೋರೇಟ್ ಕೈ ಸೇರುತ್ತದೆ ಎಂದು ಭವಿಷ್ಯ ನುಡಿದಿದ್ದರು. ಅವರ ಭವಿಷ್ಯ ಈಗ ನಿಜವಾಗುತ್ತಿದೆ. ಇಂದು ದೇಶದಲ್ಲಿ ಸರ್ಕಾರಗಳು ಯಾವುದೇ ನಿಯಮ, ಕಾಯ್ದೆ ಜಾರಿ ಮಾಡಿದರೂ ಸಹ ಅದಕ್ಕೆ ಕಾರ್ಪೋರೇಟ್ ಸಂಸ್ಥೆಗಳ ಅಂಕಿತ ಹಾಕುತ್ತಿವೆ. ಹಾಗಾಗಿ ಈ ನಿಟ್ಟಿನಲ್ಲಿ ರೈತ ಸಂಘಟನೆ ಕಾರ್ಪೋರೇಟ್ ಸಂಸ್ಥೆಗಳ ವಿರುದ್ಧ ಬೃಹತ್ ಹೋರಾಟಕ್ಕೆ ಮುಂದಾಗಬೇಕಿದೆ ಎಂದರು.



ಉದಯವಾಹಿನಿ ಚಿತ್ರ

**ಜನಶಕ್ತಿ ಸಂಘಟನೆಯ ಪ್ರಧಾನ ಕಾರ್ಯದರ್ಶಿ ಮಲ್ಲಿಗೆ ಸಿರಿಮನೆ ಮಾತನಾಡಿ, ದಿ. ಎಂ.ರಾಮು ಹಾಗೂ ಜಿ.ಟಿ.ರಾಮಸ್ವಾಮಿ ಅವರು ಹೋರಾಟದಲ್ಲಿ ಶಿಸ್ತಿನ ನಾಯಕರಾಗಿದ್ದರು. ರೈತ ಹೋರಾಟಗಳ ಜೊತೆಗೆ ಸಮಾಜದಲ್ಲಿ ಯಾವುದೇ ಸಮುದಾಯಕ್ಕೂ ಅನ್ಯಾಯವಾದರೂ ಸ್ಪಂದಿಸುತ್ತಿದ್ದರು. ಅಂತಹ ಹೋರಾಟಗಾರರು ಮುಂದಿನ ಪೀಳಿಗೆಗೆ ಮಾರ್ಗದರ್ಶಕರಾಗಿದ್ದಾರೆ ಎಂದರು.**

# ಸರ್ಕಾರದ ಸವಲತ್ತು ನೀಡುವ ಕೃಷಿ ಇಲಾಖೆಯಲ್ಲಿ ಸಿಬ್ಬಂದಿ ಕೊರತೆ

• **ಉದಯವಾಹಿನಿ, ಗೌರಿಬಿದನೂರು**

ಸರ್ಕಾರದ ಸವಲತ್ತುಗಳನ್ನು ರೈತರಿಗೆ ತಲುಪಿಸುವ ಕೃಷಿ ಇಲಾಖೆ ಸಿಬ್ಬಂದಿ ಕೊರತೆಯಿಂದ ಬಳಲುತ್ತಿದೆ. ರೈತರಿಗೆ ಮಳೆ ಕೊರತೆಯಿಂದ ಬರ ಉಂಟಾಗಿರುವಂತೆ, ತಾಲ್ಲೂಕಿನ ಕೃಷಿ ಇಲಾಖೆಯೂ ಐದು ವರ್ಷಗಳಿಂದ ಸಿಬ್ಬಂದಿ ಬರ ಎದುರಿಸುತ್ತಿದೆ. ತಾಲ್ಲೂಕಿನಲ್ಲಿ, ಅತಿ ಸಣ್ಣ ರೈತರು, ಸಣ್ಣ ರೈತರು, ಮತ್ತು ಅರೆ ಮಧ್ಯಮ ರೈತರು ಸೇರಿದಂತೆ ಒಂದು ಲಕ್ಷಕ್ಕೂ ಹೆಚ್ಚು ಜನರಿದ್ದಾರೆ. ಇಲಾಖೆಯ ಕಾರ್ಯಕ್ರಮಗಳನ್ನು ಪರಿಣಾಮಕಾರಿ ಅನುಷ್ಠಾನ ಮಾಡುವುದಕ್ಕೆ ತೊಂದರೆಯಾಗಿ ಪರಿಣಮಿಸಿದೆ.

ಇಷ್ಟು ರೈತರಿಗೆ ಸರ್ಕಾರದ ಸವಲತ್ತುಗಳನ್ನು ಕಲ್ಪಿಸಲು ಕೃಷಿ ಇಲಾಖೆಯಲ್ಲಿ ಇರುವುದು ಕೇವಲ 6 ಮಂದಿ ಮಾತ್ರ. ಸರ್ಕಾರ ಕೃಷಿ ಇಲಾಖೆಗೆ 37 ಹುದ್ದೆಗಳನ್ನು ಮಂಜೂರು ಮಾಡಿದೆ. ಆದರೆ ಅದರಲ್ಲಿ ಭರ್ತಿಯಾಗಿರುವುದು ಕೇವಲ 6 ಹುದ್ದೆ ಮಾತ್ರ.

ತಾಲ್ಲೂಕಿನಲ್ಲಿ ಹೋಬಳಿ ವಾರು 6 ರೈತ ಸಂಪರ್ಕ ಕೇಂದ್ರಗಳಿವೆ. ಕಸಬಾ ಮತ್ತು ಸಹಾಯಕ ನಿರ್ದೇಶಕರ ಕಚೇರಿ, ಹೊಸೂರು, ನಗರಗೆರೆ, ಡಿ. ಪಾಳ್ಯ, ತೊಂಡೇಭಾವಿಗಳಲ್ಲಿ ಎರಡು ರೈತ ಸಂಪರ್ಕ ಕೇಂದ್ರಗಳಿಗೆ ಓರ್ವ ಕೃಷಿ ಅಧಿಕಾರಿಗೆ ಜವಾಬ್ದಾರಿ ನೀಡಲಾಗಿದೆ. ಸಹಾಯಕ ಕೃಷಿ ಅಧಿಕಾರಿಗಳ ಒಂದು ಹುದ್ದೆಯೂ ನೇಮಕವಾಗಿಲ್ಲ. ಇದರಿಂದ ಇರುವ ಅಧಿಕಾರಿಗಳ ಮೇಲೆ ಕೆಲಸದ ಒತ್ತಡ ಜಾಸ್ತಿಯಾಗಿದೆ ಎನ್ನುತ್ತಾರೆ ಅಧಿಕಾರಿಗಳು.

ಹೊರಗುತ್ತಿಗೆ ಆಧಾರದಲ್ಲಿ ನೇಮಿಸಿಕೊಂಡಿರುವ 6 ಜನರಿಂದಲೇ ಬಹುತೇಕ ಕೆಲಸಗಳನ್ನು ಮಾಡಿಸಿಕೊಳ್ಳಲಾಗುತ್ತಿದೆ. ಇದರಿಂದ ರೈತ ಸಂಪರ್ಕ ಕೇಂದ್ರಗಳಲ್ಲಿ ರೈತರಿಗೆ ಸಕಾಲಕ್ಕೆ ತಲುಪಿಸಬೇಕಾದ ಬಿತ್ತನೆ ಬೀಜ, ಬೆಳೆ ವಿಮೆ, ಬೆಳೆ ಪರಿಹಾರ, ರಸಗೊಬ್ಬರ, ಕಿಸಾನ್ ಸಮ್ಮಾನ್, ಯಂತ್ರಧಾರೆ, ಫ್ರೂಟ್ ಐಡಿ ಸೃಜನೆ, ಹೀಗೆ ನಾನಾ ಯೋಜನೆಗಳ ಸಮರ್ಪಕ ಅನುಷ್ಠಾನ ಆಗುತ್ತಿಲ್ಲ. ಜೊತೆಗೆ ಹಲವು ಯೋಜನೆಗಳು ರೈತರಿಂದ ದೂರವೇ ಉಳಿದಿದೆ.



ಉದಯವಾಹಿನಿ ಚಿತ್ರ

### ಕೃಷಿ ಅಧಿಕಾರಿಗಳ ಸೇವೆ ಅವಶ್ಯ

**ತಾಲ್ಲೂಕಿನ ಇತ್ತೀಚಿನ ವರ್ಷಗಳಲ್ಲಿ ಬೆಳೆಗಳಿಗೆ ಕಾಡುತ್ತಿರುವ ರೋಗಬಾಧೆ, ಕ್ಷೇತ್ರ ಭೇಟಿ, ರೈತರಿಗೆ ತಾಂತ್ರಿಕ ಸಲಹೆ, ಕೀಟಬಾಧೆ ನಿರ್ವಹಣೆ ಮಾಹಿತಿ ನೀಡಲು ಕೃಷಿ ಅಧಿಕಾರಿಗಳ ಸೇವೆ ಅವಶ್ಯ. ಬೆಳೆ ನಷ್ಟವಾದರೆ ಸಮೀಕ್ಷೆ ನಡೆಸಿ ವರದಿ ನೀಡಲು ಸಿಬ್ಬಂದಿ ಅತ್ಯವಶ್ಯಕವಾಗಿದೆ. ಸಕಾಲದಲ್ಲಿ ಸರ್ಕಾರಕ್ಕೆ ವರದಿ ನೀಡಿದರೆ ಮಾತ್ರ ಸರ್ಕಾರದ ಅನುದಾನವಾಗಲಿ, ಪರಿಹಾರವಾಗಲಿ ಲಭಿಸುತ್ತದೆ. ಕೃಷಿ ಪ್ರಧಾನವಾಗಿರುವ ತಾಲ್ಲೂಕಿನಲ್ಲಿ, ಕೃಷಿ ಇಲಾಖೆ ಸಿಬ್ಬಂದಿ ಕೊರತೆಗೆ ಮುಕ್ತಿ ಕಾಣಿಸುವ ನಿಟ್ಟಿನಲ್ಲಿ ಸರ್ಕಾರ ಗಂಭೀರ ಚಿಂತನೆ ನಡೆಸಬೇಕಿದೆ. ಸರ್ಕಾರ ಕೂಡಲೇ ಖಾಲಿ ಇರುವ ಹುದ್ದೆಗಳನ್ನು ಭರ್ತಿಗೊಳಿಸಬೇಕು ಎಂದು ರೈತರು ಒತ್ತಾಯಿಸಿದರು.**


# ಪ್ರಥಮ ದರ್ಜೆ ಕಾಲೇಜಿಗೆ ಬಸ್ ಸೌಲಭ್ಯ

• **ಉದಯವಾಹಿನಿ, ಬಾಗೇಪಲ್ಲಿ**

ಪಟ್ಟಣದ ಹೊರವಲಯದ ರಾಷ್ಟ್ರೀಯ ಹೆದ್ದಾರಿ ರಸ್ತೆ 44ರ ಟೋಲ್‌ಫ್ಲಾಜಾದ ಬಳಿ ಇರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿಗಳಿಗೆ ಹೋಗಿ ಬರಲು ಅನುಕೂಲವಾಗುವಂತೆ ಬಸ್ ಸಂಚಾರಕ್ಕೆ ಶಾಸಕ ಎಸ್.ಎನ್.ಸುಬ್ಬಾರೆಡ್ಡಿ ಚಾಲನೆ ನೀಡಿದರು. ಬಸ್ ಕಲ್ಪಿಸಿದ ಶಾಸಕ ಸುಬ್ಬಾರೆಡ್ಡಿಗೆ, ಸಾರಿಗೆ ಘಟಕದ ವ್ಯವಸ್ಥಾಪಕರಿಗೆ, ಅಧಿಕಾರಿಗಳನ್ನು ಕಾಲೇಜಿನ ಪ್ರಾಂಶುಪಾಲರು ವೈ.ನಾರಾಯಣ ಗೌರವಿಸಿದರು. ಸಾರ್ವಜನಿಕರಿಗೆ ಸಿಹಿ ಹಂಚಲಾಯಿತು. ಟೋಲ್ ಫ್ಲಾಜಾದ ಬಳಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ಹೋಗಿ ಬರಲು ಬಸ್ ಸಂಚಾರ ಇರಲಿಲ್ಲ. ಆಂಧ್ರಪ್ರದೇಶದ ಕಡೆಗೆ ಸಂಚರಿಸುವ ಬಸ್ ನಿಲುಗಡೆ ಮಾಡುತ್ತಿರಲಿಲ್ಲ. ಪಟ್ಟಣದಿಂದ ಟಿ.ಬಿ. ಕ್ರಾಸ್ ಮೂಲಕ ಹೋಗಿ ಬರಲು ಆಟೊ ಅವಲಂಬಿಸಬೇಕಿತ್ತು.

ಬಸ್ ಸೌಲಭ್ಯ ಕಲ್ಪಿಸಿರುವುದು ಸಂತಸ ತಂದಿದೆ ಎಂದು ವಿದ್ಯಾರ್ಥಿಗಳು ಪ್ರತಿಕ್ರಿಯಿಸಿದರು. ಶಾಸಕ ಎಸ್.ಎನ್.ಸುಬ್ಬಾರೆಡ್ಡಿ ಮಾತನಾಡಿ, ಕಾಲೇಜಿಗೆ ಬಸ್ ಸೌಲಭ್ಯ ಕಲ್ಪಿಸಲಾಗಿದೆ. ಸರ್ಕಾರದ ಉಚಿತ ಯೋಜನೆಗಳನ್ನು ಸದು ಪಯೋಗಪಡಿಸಿಕೊಳ್ಳಬೇಕು ಎಂದರು.

ಸಾರಿಗೆ ಘಟಕದ ವ್ಯವಸ್ಥಾಪಕ ಶ್ರೀನಿವಾಸಮೂರ್ತಿ ಮಾತನಾಡಿ, ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ಪ್ರತಿದಿನ ಬೆಳಿಗ್ಗೆ 9.30ಕ್ಕೆ ಹೋಗಲು ಮತ್ತು ಮಧ್ಯಾಹ್ನ 1.30ಕ್ಕೆ ಕಾಲೇಜಿನಿಂದ ಪಟ್ಟಣಕ್ಕೆ ಬರಲು ಬಸ್ ಸೌಲಭ್ಯ ಕಲ್ಪಿಸಲಾಗಿದೆ. ರಿಯಾಯಿತಿ ಬಸ್‌ಪಾಸ್ ಮಾಡಿಸದ ವಿದ್ಯಾರ್ಥಿಗಳು ಪಾಸ್ ಮಾಡಿಸಿಕೊಳ್ಳುವಂತೆ ತಿಳಿಸಿದರು.


ಉದಯವಾಹಿನಿ ಚಿತ್ರ

# ಜಿಲ್ಲೆಯಲ್ಲಿ ಖರೀದಿ ಕೇಂದ್ರಕ್ಕೆ ರಾಗಿ ನೀಡಿದ 6,528 ರೈತರು; ಇನ್ನೂ ಬರಬೇಕಿದೆ 19 ಕೋಟಿ

• **ಉದಯವಾಹಿನಿ, ಚಿಕ್ಕಬಳ್ಳಾಪುರ**

ಬೆಂಬಲ ಬೆಲೆ ಯೋಜನೆಯಡಿ ಸರ್ಕಾರಕ್ಕೆ ರಾಗಿ ಮಾರಾಟ ಮಾಡಿದ ಜಿಲ್ಲೆಯ 2,927 ರೈತರಿಗೆ ಇನ್ನೂ ಹಣ ಬಿಡುಗಡೆ ಸಾಧ್ಯವಾಗಿಲ್ಲ. ಇಂದು ಅಥವಾ ನಾಳೆ ಹಣ ಬಿಡುಗಡೆ ಆಗುತ್ತದೆ ಎಂದು ರೈತರು ಕಾಯುತ್ತಲೇ ಇದ್ದಾರೆ.

ಸರ್ಕಾರದವು 2024-25ನೇ ಸಾಲಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರಾಗಿ ಖರೀದಿಗೆ ಆದೇಶಿಸಿತ್ತು. ಜಿಲ್ಲೆಯ ಆರೂ ತಾಲ್ಲೂಕುಗಳಲ್ಲಿ ರಾಗಿ ಖರೀದಿ ಕೇಂದ್ರಗಳನ್ನು ತೆರೆದು ರಾಗಿ ಬೆಳೆದಿರುವ ರೈತರಿಂದ ನಿಯಮಾನುಸಾರ ಅಗತ್ಯ ದಾಖಲೆಗಳನ್ನು ಪಡೆದು ನೋಂದಾಯಿಸಿತ್ತು. ನೋಂದಾಯಿತ ರೈತರಿಂದ ರಾಗಿ ಖರೀದಿ ಪ್ರಕ್ರಿಯೆಯು ಮಾ.1 ರಿಂದ ಎಲ್ಲಾ ತಾಲ್ಲೂಕು ಖರೀದಿ ಕೇಂದ್ರಗಳಲ್ಲಿ ಸರ್ಕಾರದ ಮಾರ್ಗಸೂಚಿ ಅನುಸಾರ ನಡೆದಿದೆ. ಪ್ರತಿ ಕ್ವಿಂಟಲ್‌ಗೆ ರೂ. 4,290 ನೀಡಿ ಖರೀದಿಸಲಾಗಿದೆ. ಕರ್ನಾಟಕ ಮಾರಾಟ ಮಹಾಮಂಡಳವು ಖರೀದಿ ಸಂಸ್ಥೆಯಾಗಿದೆ.

ಈ ಮೊದಲು ಖರೀದಿ ಪ್ರಕ್ರಿಯೆ ಮಾರ್ಚ್ ಕೊನೆಗೆ ಅಂತ್ಯವಾಗಬೇಕಾಗಿತ್ತು. ನಂತರ ಸರ್ಕಾರವು ಈ ಪ್ರಕ್ರಿಯೆಯನ್ನು ಜೂನ್ 30ರವರೆಗೆ ವಿಸ್ತರಿಸಿತು. ಜಿಲ್ಲೆಯಲ್ಲಿ 7,500 ರೈತರು ರಾಗಿ ಮಾರಾಟಕ್ಕೆ ನೋಂದಣಿ ಮಾಡಿಕೊಂಡಿದ್ದರು. ಈ ಹಿಂದಿನ ವರ್ಷಗಳಲ್ಲಿ ನೋಂದಣಿಯಾದ ಬಹುತೇಕ ರೈತರು ರಾಗಿಯನ್ನು ಮಾರಾಟ ಮಾಡುತ್ತಿದ್ದರು. ಆದರೆ ಈ ಬಾರಿ ಹೀಗೆ ನೋಂದಣಿಯಾದ ರೈತರೆಲ್ಲರೂ ಮಾರಾಟಕ್ಕೆ ಮುಂದಾಗಿಲ್ಲ. ನೋಂದಣಿಯಾದ 7,500 ರೈತರ ಪೈಕಿ 6,528 ರೈತರು ಮಾತ್ರ ರಾಗಿ ಮಾರಾಟ ಮಾಡಿದ್ದಾರೆ. ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ 7,500 ರೈತರಿಂದ ಒಟ್ಟು 1.12 ಲಕ್ಷ ಕ್ವಿಂಟಲ್ ರಾಗಿಯು ಜೂನ್ ಅಂತ್ಯಕ್ಕೆ ಖರೀದಿ ಕೇಂದ್ರಗಳನ್ನು ತಲುಪಬೇಕಾಗಿತ್ತು. ಆದರೆ ಅಷ್ಟೂ ರೈತರು ಮಾರಾಟ ಮಾಡಿಲ್ಲ. ಒಟ್ಟು 97,869 ಕ್ವಿಂಟಲ್ ರಾಗಿ ಖರೀದಿಯಾಗಿದೆ. ಈ ಪ್ರಮಾಣದ ರಾಗಿಗೆ ಒಟ್ಟು ರೂ.41,98 ಕೋಟಿಯನ್ನು ಪಾವತಿಸಬೇಕಾಗಿದೆ. ಆದರೆ ಈಗ ರೂ.22,83 ಕೋಟಿ ರೈತರ ಖಾತೆಗಳಿಗೆ ಜಮೆ ಆಗಿದೆ. ಇನ್ನೂ ರೂ.19.14 ಕೋಟಿ ಪಾವತಿಸಬೇಕು. ಒಟ್ಟಾರೆ ಜಿಲ್ಲೆಯಲ್ಲಿ ರಾಗಿ ನೀಡಿದ ಶೇ 54ರಷ್ಟು ಮಂದಿಗೆ ಹಣ ಪಾವತಿಯಾಗಿದೆ. ಈ ಹಿಂದಿನ ವರ್ಷಗಳಿಗೆ ಹೋಲಿಸಿದರೆ ಈ ವರ್ಷ ಜಿಲ್ಲೆಯ ರೈತರು ರಾಗಿಯನ್ನು ಖರೀದಿ ಕೇಂದ್ರಕ್ಕೆ ಮಾರಾಟ ಮಾಡಿರುವುದು ಕಡಿಮೆ ಎನಿಸಿದೆ. ಈ ಹಿಂದೆ ಒಂದೂಕಾಲು ಲಕ್ಷ ಕ್ವಿಂಟಲ್‌ಗೂ ಅಧಿಕ ರಾಗಿಯನ್ನು ಖರೀದಿ ಕೇಂದ್ರಕ್ಕೆ ರೈತರು ನೀಡಿದ್ದಾರೆ.


ಉದಯವಾಹಿನಿ ಚಿತ್ರ

**ಆದರೆ ಈ ಬಾರಿ ಒಂದು ಲಕ್ಷ ಕ್ವಿಂಟಲ್ ಒಳಗೆ ಖರೀದಿಯಾಗಿದೆ. ಮುಂಗಾರು ಅವಧಿಯಲ್ಲಿ ಕೃಷಿ ಚಟುವಟಿಕೆಗೆ ಹಣ ಅಗತ್ಯ. ಸರ್ಕಾರ ತಕ್ಷಣವೇ ರಾಗಿ ಮಾರಾಟ ಮಾಡಿದ ಹಣವನ್ನು ಬಿಡುಗಡೆ ಮಾಡಬೇಕು' ಎಂದು ಜಿಲ್ಲೆಯ ರೈತರು ಆಗ್ರಹಿಸುವರು.**

### ವಾರದಲ್ಲಿ ಖಾತೆಗೆ ಹಣ

**ರಾಜ್ಯದ ಎಲ್ಲಾ ಕಡೆಯೂ ಇದೆ ರೀತಿಯಲ್ಲಿ ಆಗಿದೆ. ಸರ್ಕಾರ ಈಗಾಗಲೇ ಮಾಹಿತಿ ಸಹ ಪಡೆದಿದೆ. ಇನ್ನೊಂದು ವಾರದಲ್ಲಿ ರಾಗಿ ಖರೀದಿ ಹಣ ರೈತರ ಖಾತೆಗಳಿಗೆ ಜಮೆ ಆಗುವ ಸಾಧ್ಯತೆ ಎಂದು ಅಧಿಕಾರಿಗಳು ಮಾಹಿತಿ ನೀಡುವರು.**

# ಮಿನಿ ನ್ಯೂಸ್

## ದೊಡ್ಡಸಾದೇನಹಳ್ಳಿ ಡೇರಿ: ಕಾಂಗ್ರೆಸ್ ಬೆಂಬಲಿಗರು ಮೇಲುಗೈ

• **ಉದಯವಾಹಿನಿ, ಹಾರೋಹಳ್ಳಿ**

ತಾಲ್ಲೂಕಿನ ದೊಡ್ಡ ಸಾದೇನಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ ಆಡಳಿತ ಮಂಡಳಿಗೆ ನಡೆದ ಚುನಾವಣೆಯಲ್ಲಿ ಕಾಂಗ್ರೆಸ್ ಬೆಂಬಲಿತರು ಮೇಲುಗೈ ಸಾಧಿಸಿದ್ದಾರೆ. ಸಂಘದ ಆವರಣದಲ್ಲಿ ಮಂಗಳವಾರ ನಡೆದ ಚುನಾವಣಾ ಪ್ರಕ್ರಿಯೆಯಲ್ಲಿ ಕಾಂಗ್ರೆಸ್ ಬೆಂಬಲಿತರಾದ ಪ್ರತಾಪ್.ಎಂ. ಬಂಗಾರಪ್ಪ, ಶಂಕರ, ನಾಗೇಶ, ಶಿವಮಾದಪ್ಪ, ಚಂದ್ರಶೇಖರ, ವಿಶಾಲಾಕ್ಷಿ, ಮುನಿಮುತ್ತಯ್ಯ, ರಾಜಮ್ಮ, ಲೋಕೇಶ್ ವಿಜೇತರಾಗಿದ್ದಾರೆ. ಸಹಕಾರ ಇಲಾಖೆಯ ರಮ್ಯಾ ಶ್ರೀ ಚುನಾವಣಾಧಿಕಾರಿಯಾಗಿ, ಶಿವರಾಜು ಸಹಾಯಕ ಚುನಾವಣಾಧಿಕಾರಿಯಾಗಿ ಕಾರ್ಯ ನಿರ್ವಹಿಸಿದರು. ಕೀರಣಗೆರೆ ಜಗದೀಶ್, ಲೋಕೇಶ್, ಹರೀಶ್ ಕುಮಾರ್, ಸಾದೇನಹಳ್ಳಿ ಈಶ್ವರ್, ಅಶೋಕ್, ಶಿವಣ್ಣ, ಅಂಕಪ್ಪ, ನಾಗರಾಜು, ಮರಿಯಪ್ಪ, ಶಂಕರ್, ಕೃಷ್ಣಪ್ಪ, ಮಹಾಲಿಂಗು, ನಾಗೇಶ್, ಸುರೇಂದ್ರ ಬಾಬು, ನಿಂಗಪ್ಪ, ಮಂಜುನಾಥ್, ಪ್ರಸನ್ನ, ನವೀನ್, ಮಹೇಶ್, ಪ್ರಕಾಶ್, ರಾಜು ಸೇರಿದಂತೆ ಇತರರು ಇದ್ದರು.

## ಆ.10ರಂದು ನಂದಿ ಬೆಟ್ಟಕ್ಕೆ ವಾಹನ ಸಂಚಾರ ನಿರ್ಬಂಧ

• **ಉದಯವಾಹಿನಿ, ಚಿಕ್ಕಬಳ್ಳಾಪುರ**

ರಾಜ್ಯದ ಕ್ರೀಡಾ ಬೆಳವಣಿಗೆಗೆ ಹಾಗೂ ಪ್ರವಾಸೋದ್ಯಮ ಅಭಿವೃದ್ಧಿಗೆ ಪೂರಕವಾಗುವಂತೆ ಜೆ.ಜೆ. ಅಕ್ಟಿವ್ ಸಂಸ್ಥೆಯಿಂದ ನಂದಿ ಬೆಟ್ಟದಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಭಾಗಿತ್ವದಲ್ಲಿ ಆಗಸ್ಟ್ 10 ರಂದು ನಂದಿ ಹಿಲ್ ಮಾನ್ಸೂನ್ ರನ್ ಎಂಬ ಓಟದ ಕಾರ್ಯಕ್ರಮ ನಡೆಯಲಿದೆ. ಕಾರ್ಯಕ್ರಮ ನಂದಿ ಬೆಟ್ಟದ ಪ್ರಾರಂಭದಿಂದ ಬೆಟ್ಟದ ತುದಿಯವರೆಗಿನ ಪೂರ್ಣ ರಸ್ತೆಯಲ್ಲಿ ಆಯೋಜಿಸಿರುವ ಹಿನ್ನೆಲೆಯಲ್ಲಿ ಆಗಸ್ಟ್ 10 ರಂದು ಬೆಳಿಗ್ಗೆ 4 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ನಂದಿ ಬೆಟ್ಟದ ಪ್ರಾರಂಭದಿಂದ ಬೆಟ್ಟದ ತುದಿಯವರೆಗಿನ ಪೂರ್ಣ ರಸ್ತೆಯಲ್ಲಿ ಎಲ್ಲಾ ರೀತಿಯ ಸಾರ್ವಜನಿಕರ ವಾಹನಗಳ ಸಂಚಾರವನ್ನು ನಿರ್ಬಂಧಿಸಿ ಆದೇಶಿಸಲಾಗಿದೆ ಎಂದು ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ತಿಳಿಸಿದ್ದಾರೆ.

## ಲೋಕಾಯುಕ್ತ ದಾಳಿ; ಮೂವರು ಬಲೆಗೆ


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಬೇತಮಂಗಲ**

ಗುತ್ತಿಗೆದಾರನಿಂದ ಲಂಚ ಪಡೆಯುತ್ತಿದ್ದ ಕರ್ನಾಟಕ ನಗರ ನೀರು ಸರಬರಾಜು, ಒಳಚರಂಡಿ ಮಂಡಳಿಯ ಬೇತಮಂಗಲ ಸಹಾಯಕ ಕಾರ್ಯಪಾಲಕ ಎಂಜಿನಿಯರ್ ಉಪವಿಭಾಗ ಕಚೇರಿಯ ಎಇಇ ಸೇರಿದಂತೆ ಮೂವರು ಬುಧವಾರ ಜಿಲ್ಲಾ ಲೋಕಾಯುಕ್ತ ಪೊಲೀಸರ ಬಲೆಗೆ ಬಿದ್ದಿದ್ದಾರೆ. ಸಹಾಯ ಕಾರ್ಯಪಾಲಕ ಎಂಜಿನಿಯರ್ (ಎಇಇ) ಶಿವಕುಮಾರ್, ಸಹಾಯಕ ಎಂಜಿನಿಯರ್ (ಎಇ) ರಶ್ಮಿ ಹಾಗೂ ಗುತ್ತಿಗೆ ನೌಕರ ರಾಮಚಂದ್ರಗೌಡ ಸಿಕ್ಕಿಬಿದ್ದಿದ್ದಾರೆ. ಇವರ ಮೇಲೆ ಭ್ರಷ್ಟಾಚಾರ ನಿಗ್ರಹ ಕಾಯ್ದೆಯಡಿ ಪ್ರಕರಣ ದಾಖಲಿಸಿ ವಶಕ್ಕೆ ಪಡೆದಿದ್ದಾರೆ. ಬೇತಮಂಗಲ ಕಚೇರಿ ಅಲ್ಲದೇ, ಬೆಂಗಳೂರಿನ ನಾಗರಬಾವಿಯಲ್ಲಿರುವ ಶಿವಕುಮಾರ್ ಮನೆಯಲ್ಲೂ ಲೋಕಾಯುಕ್ತ ಪೊಲೀಸರು ಶೋಧಿಸಿದ್ದಾರೆ.

ಶಿವಕುಮಾರ್ ಕಾಮಗಾರಿಗಳನ್ನು ಮಾಡಿಸದೆ ಗುತ್ತಿಗೆದಾರರ ಮೂಲಕ ಹಣವನ್ನು ಪಾವತಿಸಿಕೊಂಡು ಸರ್ಕಾರಕ್ಕೆ ವಂಚನೆ ಮಾಡುತ್ತಿದ್ದಾರೆ ಎಂದು ಕೆಜಿಎಫ್ ಮೂಲದ ಗುತ್ತಿಗೆದಾರ ಪ್ರವೀಣ್ ಎಂಬುವರು ದೂರು ನೀಡಿದ್ದರು. ದೂರಿನ ಮೇರೆಗೆ ಲೋಕಾಯುಕ್ತ ಅಧಿಕಾರಿಗಳು ಬಲೆ ಬೀಸಿದ್ದರು. ರೂ.2.27 ಲಕ್ಷವನ್ನು ಗುತ್ತಿಗೆದಾರರಿಂದ ಪಡೆಯುತ್ತಿರುವಾಗ ಶಿವಕುಮಾರ್, ರಶ್ಮಿ, ರಾಮಚಂದ್ರಗೌಡ ಟ್ರ್ಯಾಪ್ ಆಗಿದ್ದಾರೆ. ವಾಟರ್ ವರ್ಕ್ ಪಂಪ್ ಹೌಸ್‌ಗೆ 11 ಕೆ.ವಿ ಲೈನ್ ಪುನರ್ ಸ್ಥಾಪನೆಗೆ ಕೆಲಸ ಮಾಡದೆಯೇ ಬಿಲ್ ಮಾಡುವುದಕ್ಕೆ 5 ಲಕ್ಷ ಲಂಚಕ್ಕೆ ಬೇಡಿಕೆ ಇಟ್ಟಿದ್ದರು ಎಂಬುದು ಗೊತ್ತಾಗಿದೆ. ಜಿಲ್ಲಾ ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಅಂತೋಣಿ ಜಾನ್, ಡಿವೈಎಸ್ಪಿ ಸುಧೀರ್, ಇನ್ಸ್‌ಪೆಕ್ಟರ್ ರೇಣುಕಾ ನೇತೃತ್ವದಲ್ಲಿ ದಾಳಿ ನಡೆದಿದೆ. ಬೆಂಗಳೂರಿನ ನಾಗರಬಾವಿಯಲ್ಲಿನ ಮನೆಯಲ್ಲಿ ಇನ್ಸ್‌ಪೆಕ್ಟರ್ ಅಂಜಿನಪ್ಪ, ಸಿಬ್ಬಂದಿ ದೇವ್, ನಾಗವೇಣಿ, ಯೋಶೋಧಾ ನೇತೃತ್ವದಲ್ಲಿ ಶೋಧ ಕಾರ್ಯಾಚರಣೆ ನಡೆದಿದೆ.

# ಆಧ್ಯಾತ್ಮಿಕ ಚಿತ್ರ ಪ್ರದರ್ಶನಕ್ಕೆ ಮುಗಿದು ಬಿದ್ದ ಜನ

• **ಉದಯವಾಹಿನಿ, ಸಂತೆಮರಳ್ಳಿ**

ಯಳಂದೂರು ತಾಲ್ಲೂಕಿನ ಸಂತೆಮರಳ್ಳಿ ಗ್ರಾಮದಲ್ಲಿ ಭೀಮನ ಅಮಾವಾಸ್ಯೆ ಪ್ರಯುಕ್ತ ಮಹಾದೇಶ್ವರ ದೇವಸ್ಥಾನ ಆವರಣದಲ್ಲಿ ಆಯೋಜಿಸಲಾಗಿರುವ ವಿಶ್ವ ಪರಿವರ್ತನ ಆಧ್ಯಾತ್ಮಿಕ ಚಿತ್ರ ಪ್ರದರ್ಶನವನ್ನು ನೋಡಲು ಜನರು ಮುಗಿಬಿದ್ದು, ಸ್ಪಟಿಕ ಲಿಂಗದ ಜೊತೆ ನಿಂತುಕೊಂಡು ಸೆಲ್ಫಿ ಫೋಟೋಗಳನ್ನು ತೆಗೆದುಕೊಂಡು ಸಂಭ್ರಮಿಸಿದರು

ಅಂತರಾಷ್ಟ್ರೀಯ ಆಧ್ಯಾತ್ಮಿಕ ಸಂಸ್ಥೆ ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವವಿದ್ಯಾಲಯ ಯಳಂದೂರು ಜ್ಞಾನ ದೀಪ ಭವನದ ವತಿಯಿಂದ ಆಯೋಜಿಸಲಾಗಿರುವ ವಿಶ್ವ ಪರಿವರ್ತನಾ ಆಧ್ಯಾತ್ಮಿಕ ಚಿತ್ರ ಪ್ರದರ್ಶನವನ್ನು ಮಹಾದೇಶ್ವರ ಸೇವಾ ಸಮಿತಿಯ ಅಧ್ಯಕ್ಷರಾದ ಸಿದ್ದಲಿಂಗ ಸ್ವಾಮಿ ಉದ್ಘಾಟಿಸಿ ಮಾತನಾಡುತ್ತಾ ಈ ಚಿತ್ರ ಪ್ರದರ್ಶನವು ಜನರಿಗೆ ಬಹಳ ಉಪಯುಕ್ತವಾಗಿದ್ದು ಪರಮಾತ್ಮನ ಪರಿಚಯವನ್ನು ಅರಿತುಕೊಂಡು ಅವನನ್ನು ಧ್ಯಾನ ಮಾಡುವ ಕಲೆಯನ್ನು ಬಹಳ ಸಹಜವಾಗಿ ಓಂ ಶಾಂತಿ ಯವರು ತಿಳಿಸಿಕೊಡುತ್ತಾರೆ. ಇದರಲ್ಲಿ ಯಾವುದೇ ಮೌಢ್ಯ ಅಜ್ಞಾನ ಅಂಧಕಾರವಿಲ್ಲ.

ಭಕ್ತಾದಿಗಳು ಸಹಜವಾಗಿ ಮನಸ್ಸಿನ ಶಾಂತಿ, ಸಮಾಧಾನ, ನೆಮ್ಮದಿಯನ್ನು ಕಂಡುಕೊಳ್ಳಬಹುದು ಎಂದರು. ಇಲ್ಲಿ ಇವರು ರಾಜಯೋಗ ಧ್ಯಾನ ತರಗತಿಯನ್ನು ನಡೆಸಲು ಭವನ ನಿರ್ಮಾಣಕ್ಕೆ ನಿವೇಶವನ್ನು ಸಮಿತಿಯ ಮುಂದೆ ಇಟ್ಟು ಕೊಡಿಸಲಾಗುವುದು ಎಂದು ಭರವಸೆ ನೀಡಿದರು.

ಚಾಮರಾಜನಗರ ಈಶ್ವರೀಯ ವಿಶ್ವವಿದ್ಯಾಲಯದ ಮುಖ್ಯ ಸಂಚಾಲಕಿ ಮನೋಬಲ ತರಬೇತುದಾರೆ, ಸ್ವಾಮಿ ವಿವೇಕಾನಂದ ಸದ್ಭಾವನಾ ರಾಜ್ಯ ಪ್ರಶಸ್ತಿ ಪುರಸ್ಕೃತರಾದ ರಾಜಯೋಗಿನಿ ಬ್ರಹ್ಮಾಕುಮಾರಿ ದಾನೇಶ್ವರೀಜೀ ಮಾತನಾಡಿ ಇಂದು ಗ್ರಾಮೀಣ ಜನತೆಯಲ್ಲಿ ದುರಭ್ಯಾಸ ದುಶ್ಚಟಗಳು, ಧೂಮಪಾನ, ಮದ್ಯಪಾನ, ಮೌಢ್ಯದಂತಹ ಅನಿಷ್ಟ ಪದ್ಧತಿಗಳು ಮನೆ ಮಾಡಿಕೊಂಡು ಸುಖಮಯ ಜೀವನ ನಡೆಸಲು ಮಾರಕವಾಗಿದೆ. ಇದನ್ನು ನಿರ್ಮೂಲನೆಗೊಳಿಸಲು ಈಶ್ವರೀಯ ವಿಶ್ವವಿದ್ಯಾಲಯವು ಹಳ್ಳಿ ಹಳ್ಳಿಗಳಲ್ಲಿ ಉಚಿತವಾದ ರಾಜಯೋಗದ ಶಿಕ್ಷಣ ಮೂಲಕ ಮೌಲ್ಯಗಳನ್ನು ಜಾಗೃತಿ ಮೂಡಿಸುತ್ತಿದೆ.

ಇಂದು ಮನುಷ್ಯನಿಗೆ ಧೂಮಪಾನ ಮದ್ಯಪಾನ ಕೆಟ್ಟದಂತೂ ಗೊತ್ತಿದ್ದರೂ ಬಿಡುವುದಕ್ಕೆ ಶಕ್ತಿ ಇಲ್ಲ. ಆಧ್ಯಾತ್ಮಿಕ ಜ್ಞಾನ ನಮಗೆ ಬಹಳ ಅವಶ್ಯಕತೆ ಇದೆ ಅಂತ ಗೊತ್ತಿದ್ದರೂ ಹಿಡಿದುಕೊಳ್ಳುವ ಶಕ್ತಿ ಇಲ್ಲ ಇವೆರಡಕ್ಕೂ ಶಕ್ತಿಯನ್ನ ರಾಜಯೋಗ ಧ್ಯಾನದಿಂದ ಪ್ರಾಪ್ತಿ ಮಾಡಿಕೊಳ್ಳಬಹುದು ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಸಂಚಾಲಕಿ ರಾಜಯೋಗಿನಿ ಬ್ರಹ್ಮಾಕುಮಾರಿ ಪ್ರಭಾಮಣೀಜೀ ಓಂ ಶಾಂತಿ ನ್ಯೂಸ್ ಸರ್ವಿಸ್ ನ ಬಿಕೆ ಆರಾಧ್ಯ, ರಾಕೇಶ್, ನಾಗರಾಜ್, ಸುಬ್ಬಣ್ಣ, ಶಿವಕುಮಾರ್, ಬಿಕೆ ಮಹಾಲಕ್ಷ್ಮಿ ಗೀತಾ, ಶಾಂಭವಿ, ಜೈ ಶಂಕರ್, ಮೇದಿನಿ ನಾಗಣ್ಣ, ಜಾನಕಮ್ಮ ಹಾಜರಿದ್ದರು.


ಉದಯವಾಹಿನಿ ಚಿತ್ರ

**ಸ್ವಾಮಿ ವಿವೇಕಾನಂದ ಸದ್ಭಾವನಾ ರಾಜ್ಯ ಪ್ರಶಸ್ತಿ**

# ವಿಭಾಗಮಟ್ಟದ ವಿಚಾರಸಂಕಿರಣ ಜುಲೈ 26ರಂದು

## ಬಿಜೆಪಿ ರಾಜ್ಯ ಹಿಂದುಳಿದ ವರ್ಗಗಳ ಮೋರ್ಚಾ ಅಧ್ಯಕ್ಷ ಆರ್.ರಘು ಹೇಳಿಕೆ

• **ಉದಯವಾಹಿನಿ, ಮೈಸೂರು**

ಸಾಮಾಜಿಕ ನ್ಯಾಯ ಜಾಗೃತಿ ವೇದಿಕೆ ವತಿಯಿಂದ ಜುಲೈ 26 ರಂದು ಬೆಳಿಗ್ಗೆ 11ಕ್ಕೆ ಬಂಬೂಬಜಾರ್‌ನ ರಿಯೋಮೆರಿಡಿಯನ್ ಹೋಟೆಲ್‌ನಲ್ಲಿ ಜಾತಿ ಜನಗಣತಿ: ಹಿನ್ನೆಲೆ-ಮುನ್ನೆಲೆ ವಿಚಾರಸಂಕಿರಣ ಆಯೋಜಿಸಲಾಗಿದೆ ಎಂದು ಬಿಜೆಪಿ ರಾಜ್ಯ ಹಿಂದುಳಿದ ವರ್ಗಗಳ ಮೋರ್ಚಾ ಅಧ್ಯಕ್ಷ ಆರ್.ರಘು ತಿಳಿಸಿದರು. ಮುಖ್ಯ ಭಾಷಣಕಾರರಾಗಿ ರಾಜ್ಯಸಭಾ ಸದಸ್ಯರೂ ಆದ ಬಿಜೆಪಿ ರಾಷ್ಟ್ರೀಯ ಹಿಂದುಳಿದ ವರ್ಗಗಳ ಮೋರ್ಚಾದ ಅಧ್ಯಕ್ಷ ಕೆ. ಲಕ್ಷ್ಮಣ್ ಭಾಗವಹಿಸುವರು. ವಿಧಾನಪರಿಷತ್ ಸದಸ್ಯ ಎ.ಎಚ್. ವಿಶ್ವನಾಥ್ ಉದ್ಘಾಟಿಸುವರು. ವಿಧಾನಪರಿಷತ್ ಸದಸ್ಯ ಎನ್. ರವಿಕುಮಾರ್, ನಿವೃತ್ತ ಕುಲಪತಿ ಹೇಮಂತ್‌ಕುಮಾರ್, ವಾಣಿಜ್ಯ ಇಲಾಖೆಯ ನಿವೃತ್ತ ಅಧಿಕಾರಿ ಜಗನ್ನಾಥ್ ಸಾಗರ್ ಮಾತನಾಡುವರು. ಹಿಂದುಳಿದ ವರ್ಗಗಳ ಪ್ರಮುಖರು, ಚಿಂತಕರು ಪಾಲ್ಗೊಳ್ಳುವರು. ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅಧ್ಯಕ್ಷತೆ ವಹಿಸುವರು' ಎಂದು ಮಾಹಿತಿ ನೀಡಿದರು.

ನಗರದಲ್ಲಿ ಬಹಳ ದಿನಗಳ ನಂತರ ಹಿಂದುಳಿದ ಸಮುದಾಯಗಳ ಕುರಿತ ದೊಡ್ಡ ಪ್ರಮಾಣದ ಹಾಗೂ ದೇಶವನ್ನು ಗಮನಸೆಳೆಯುವ ವಿಚಾರಸಂಕಿರಣ ಇದಾಗಲಿದೆ. ವಿಭಾಗಮಟ್ಟದ ವಿಚಾರಸಂಕಿರಣ ಇದಾಗಿದ್ದು, ಮೈಸೂರು, ಹಾಸನ, ಮಂಡ್ಯ, ಚಾಮರಾಜನಗರ, ಕೊಡಗು ಜಿಲ್ಲೆಗಳ 500ಕ್ಕೂ ಹೆಚ್ಚು ಪ್ರತಿನಿಧಿಗಳು ಪಾಲ್ಗೊಳ್ಳುವರು ಎಂದು ತಿಳಿಸಿದರು. ರಾಜಕೀಯ ಅಸ್ತ್ರವನ್ನಾಗಿ ಮಾಡಿಕೊಂಡಿದ್ದಾರೆ ಜಾತಿ ಜನಗಣತಿಯನ್ನು ಕಾಂಗ್ರೆಸ್ ಸರ್ಕಾರದವರು ಸಿಎಂ ಅವರು ರಾಜಕೀಯ ಅಸ್ತ್ರವನ್ನಾಗಿ ಬಳಸಿಕೊಳ್ಳುತ್ತಿದ್ದಾರೆ. ಕಾಂತರಾಜು ಆಯೋಗದ ವರದಿಯನ್ನು 10 ವರ್ಷಗಳವರೆಗೆ ಇಟ್ಟುಕೊಂಡು, ನನಗುದಿಗೆ ಹಾಕಿ ರಾಹುಲ್ ಗಾಂಧಿ ಹೇಳಿದರೆಂದು ಕಸದ ಬುಟ್ಟಿಗೆ ಹಾಕಿ ಮತ್ತೊಂದು ವರದಿಗಾಗಿ ಕೇವಲ 15 ದಿನಗಳಲ್ಲಿ ಸಮೀಕ್ಷೆ ನಡೆಸುತ್ತೇವೆ ಎಂದು ಹೊರಟಿದ್ದಾರೆ. ಈ ಮೂಲಕ ಹಿಂದುಳಿದ ಸಮುದಾಯಗಳಿಗೆ ಕಿವಿಗೆ ಹೂವು ಮುಡಿಸುವಂತಹ ಕೆಲಸಕ್ಕೆ ಮುಂದಾಗಿದ್ದಾರೆ. ಇದು ಖಂಡನೀಯ' ಎಂದರು.

ಆಗ ಸಮೀಕ್ಷೆಗಾಗಿ ರಾಜ್ಯದ ತೆರಿಗೆದಾರರ 165 ಕೋಟಿ ಹಣ ವ್ಯಯ ಮಾಡಲಾಯಿತು. ಈಗ, ಮತ್ತೊಮ್ಮೆ ಜನರ ತೆರಿಗೆ ಹಣ ಬಳಸುತ್ತಿದ್ದಾರೆ. ಹಿಂದುಳಿದ ವರ್ಗದವರಿಗೆ ಮೀಸಲಾತಿ ಕೊಡಬೇಕು ಎಂಬ ಕಾಳಜಿಯನ್ನು ಕಾಂಗ್ರೆಸ್ ನವರು ನೆಹರೂ ಕಾಲದಿಂದಲೂ ತೋರಲಿಲ್ಲ' ಎಂದು ದೂರಿದರು.



ಉದಯವಾಹಿನಿ ಚಿತ್ರ

### ವಿನಿಮಯ ಮಾಡಿಕೊಳ್ಳಬಹುದಿತ್ತು

**ಶಾಶ್ವತವಾದ ಹಿಂದುಳಿದ ವರ್ಗಗಳ ಆಯೋಗ ರಚಿಸಿದ ಕೀರ್ತಿ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರಕ್ಕೆ ಸಲ್ಲುತ್ತದೆ. 2026ರಲ್ಲಿ ಜನಗಣತಿ ಜೊತೆಗೆ ಜಾತಿ ಜನಗಣತಿ ನಡೆಸುವುದಾಗಿ ಕೇಂದ್ರ ಸರ್ಕಾರ ಐತಿಹಾಸಿಕ ಹೆಜ್ಜೆಯನ್ನು ಇಟ್ಟಿದೆ. ಹಿಂದುಳಿದ ವರ್ಗಗಳ ಆರ್ಥಿಕ, ಔದ್ಯೋಗಿಕ, ಸಾಮಾಜಿಕ ಹಾಗೂ ಆರ್ಥಿಕ ಸ್ಥಿತಿಯ ವರದಿ ಸಿದ್ಧಪಡಿಸಲಿದೆ. ಮುಖ್ಯಮಂತ್ರಿಗೆ ನಿಜವಾಗಿಯೂ ಬದ್ಧತೆ ಇದ್ದರೆ, ಸಮೀಕ್ಷೆಯಿಂದ ದೊರೆತ ದತ್ತಾಂಶವನ್ನು ಕೇಂದ್ರದೊಂದಿಗೆ ವಿನಿಮಯ ಮಾಡಿಕೊಂಡು ಸಹಕಾರ ಕೊಡಬಹುದಾಗಿತ್ತು. ಆದರೆ, ಅಹಿಂದ ಹೆಸರಿನಲ್ಲಿ ಮತಬ್ಯಾಂಕ್ ಮಾಡಿಕೊಂಡು ಅಧಿಕಾರದಲ್ಲಿ ಉಳಿಯಲು ತಂತ್ರ ರೂಪಿಸಿದ್ದಾರೆ' ಎಂದು ರಘು ಆರೋಪಿಸಿದರು. ಶಾಸಕ ಟಿ.ಎಸ್.ಶ್ರೀವತ್ಸ, ಬಿಜೆಪಿ ನಗರ ಘಟಕದ ಅಧ್ಯಕ್ಷ ಎಲ್.ನಾಗೇಂದ್ರ, ಗ್ರಾಮಾಂತರ ಜಿಲ್ಲಾ ಘಟಕದ ಅಧ್ಯಕ್ಷ ಕೆ.ಎನ್. ಸುಬ್ಬಣ್ಣ ಪಾಲ್ಗೊಂಡಿದ್ದರು.**

ಅಂತರಾಳದಿಂದ..
EDITORIAL

# ತರಕಾರಿ ಕತ್ತರಿಸುವ ಚಾಕುವಿನಲ್ಲೇ ನಡೆಸಿದ ಶಸ್ತ್ರಚಿಕಿತ್ಸೆ?

ಕಳೆದ ವರ್ಷ ಇದೇ ಉಪರಾಷ್ಟ್ರಪತಿಯವರು ಉತ್ತರ ಪ್ರದೇಶದಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಭಾಗವಹಿಸಿ ಪ್ರಧಾನಿ ಮೋದಿ ಮತ್ತು ಉತ್ತರ ಪ್ರದೇಶದ ಮುಖ್ಯಮಂತ್ರಿ ಆದಿತ್ಯನಾಥ್ ಅವರನ್ನು ಹಾಡಿ ಹೊಗಳಿದ್ದರು ಹತ್ತು ವರ್ಷದ ಹಿಂದೆ ಭಾರತ ಹೀಗೆ ಇದ್ದಿರಲಿಲ್ಲ ಎಂದು ಮೋದಿ ಆಡಳಿತವನ್ನು ಬಣ್ಣಿಸಿದ್ದರು. ಕನಿಷ್ಠ ಒಂದು ಗೌರವಯುತವಾದ ವಿದಾಯವನ್ನು ನೀಡದೆ ಉಪರಾಷ್ಟ್ರಪತಿಯೊಬ್ಬರನ್ನು ಅಧಿಕಾರಾವಧಿಗೆ ಮುನ್ನವೇ ಮನೆಗೆ ಕಳುಹಿಸುವ ವಿದ್ಯಮಾನ ಹತ್ತು ವರ್ಷಗಳ ಹಿಂದೆ ನಿಜಕ್ಕೂ ಇದ್ದಿರಲಿಲ್ಲ. ಹಾಗೆ ನೋಡಿದರೆ, ಉಪರಾಷ್ಟ್ರಪತಿಯಂತಹ ಉನ್ನತ ಸ್ಥಾನವನ್ನು ವಹಿಸಿದ್ದ ಹಿರಿಯ ನಾಯಕರು, ಅತಿ ವಾಚಾಳಿಯಾಗಿ ಸಂವಿಧಾನದ ಘನತೆಗೆ ಧಕ್ಕೆ ತರುವಂತೆ ಹತ್ತು ವರ್ಷಗಳ ಹಿಂದೆ ಯಾರೂ ವರ್ತಿಸಿರಲಿಲ್ಲ. ರಾಷ್ಟ್ರಪತಿ ಮತ್ತು ಉಪರಾಷ್ಟ್ರಪತಿ ಸ್ಥಾನಗಳ ಘನತೆ, ಗೌರವಗಳಿಗೆ ಧಕ್ಕೆ ತರುವಂತೆ ಪ್ರಧಾನಿಗಳು ಎಂದೂ ನಡೆದುಕೊಂಡಿರಲಿಲ್ಲ. ಧನ್‌ಕರ್ ಅವರು ಹಾಡಿಹೊಗಳಿದ ಈ ಹತ್ತು ವರ್ಷಗಳಲ್ಲಿ ರಾಷ್ಟ್ರಪತಿಯೊಂದಿಗೆ ಪ್ರಧಾನಿ ವರ್ತಿಸಿದ ರೀತಿ ಸಂವಿಧಾನದ ಘನತೆಯನ್ನು ಎತ್ತಿ ಹಿಡಿಯುವಂತೆ ಇರಲಿಲ್ಲ. ನೂತನ ಸಂಸತ್ ಅಧಿವೇಶನದ ಉದ್ಘಾಟನೆಯ ಸಂದರ್ಭದಲ್ಲಿ ರಾಷ್ಟ್ರಪತಿಯನ್ನು ಹೊರಗಿಡಲಾಗಿತ್ತು. ತಮ್ಮ ರಾಜಕೀಯ ದುರುದ್ದೇಶಗಳಿಗೆ ರಾಷ್ಟ್ರಪತಿ ಸ್ಥಾನವನ್ನು ಸರಕಾರ ಯಾವ ಸಂಕೋಚವೂ ಇಲ್ಲದೆ ಬಳಸಿಕೊಂಡಿತು. ಧನಕರ್‌ಅವರು ಪಶ್ಚಿಮಬಂಗಾಳದ ರಾಜ್ಯಪಾಲರಾಗಿರುವಾಗ 'ರಾಜಭವನವನ್ನು ಆರ್‌ಎಸ್‌ಎಸ್ ಕಚೇರಿಯನ್ನಾಗಿಸಿದ್ದಾರೆ' ಎಂದು ಮುಖ್ಯಮಂತ್ರಿ ಮಮತಾ ಬ್ಯಾನರ್ಜಿಯವರಿಂದ ಟೀಕೆಗೆ ಒಳಗಾಗಿದ್ದರು ಮತ್ತು ಉಪರಾಷ್ಟ್ರಪತಿ ಸ್ಥಾನಕ್ಕೆ ಅದುವೇ ಅರ್ಹತೆಯಾಗಿತ್ತು. ಕನಿಷ್ಠ ಉಪರಾಷ್ಟ್ರಪತಿ ಸ್ಥಾನಕ್ಕೇರಿದ ಬಳಿಕವಾದರೂ ಧನಕರ್‌ಅದರ ಸ್ವಂತಿಕೆಯನ್ನು ಎತ್ತಿ ಹಿಡಿಯುತ್ತಾರೆ ಎಂದು ಭಾವಿಸಲಾಗಿತ್ತು. ಆದರೆ ಇತ್ತೀಚಿನ ಅವರ ನಡವಳಿಕೆ ಅತ್ಯಂತ ನಿರಾಶಾದಾಯಕವಾಗಿತ್ತು. ಆರ್‌ಎಸ್‌ಎಸ್ ಜೊತೆಗೆ ಬಹಿರಂಗವಾಗಿ ಗುರುತಿಸಿಕೊಂಡದ್ದು ಮಾತ್ರವಲ್ಲ ನ್ಯಾಯಾಂಗದ ಜೊತೆಗೆ ಅವರು ಬಹಿರಂಗವಾಗಿ ಗುದ್ದಾಟಕ್ಕಿಳಿದರು. ಆದುದರಿಂದಲೇ, ದಯನೀಯ ಸ್ಥಿತಿಯಲ್ಲಿ ಉಪರಾಷ್ಟ್ರಪತಿ ಸ್ಥಾನಕ್ಕೆ ರಾಜೀನಾಮೆ ನೀಡಿ ಧನಕರ್ ನಿರ್ಗಮಿಸುತ್ತಿರುವಾಗ, ಅವರ ಬಗ್ಗೆ ಯಾರೂ ಅನುಕಂಪವನ್ನು ವ್ಯಕ್ತಪಡಿಸುತ್ತಿಲ್ಲ. ಧನಕರ್ ಅವರ ರಾಜೀನಾಮೆಗೆ ಕಾಂಗ್ರೆಸ್ ಪಕ್ಷ ಮೊಸಳೆ ಕಣ್ಣೀರು ಸುರಿಸುತ್ತಿರುವುದು ಸ್ಪಷ್ಟ. ಬಹುಶಃ ಉಪರಾಷ್ಟ್ರಪತಿಯೊಬ್ಬರನ್ನು ಈ ರೀತಿಯಲ್ಲಿ ನಡೆಸಿಕೊಳ್ಳುವುದು ಎಷ್ಟು ಸರಿ ಎನ್ನುವ ನಿಟ್ಟಿನಲ್ಲಿ ವಿರೋಧ ಪಕ್ಷಗಳ ಕಳವಳ ಸಮರ್ಥನೀಯವಾಗಿದೆ. ಆದರೆ ಧನಕರ್ ಸ್ಪೀಕರ್ ಆಗಿ ಪ್ರತಿಪಕ್ಷಗಳನ್ನು ಹೇಗೆ ನಡೆಸಿಕೊಂಡಿದ್ದರು ಎನ್ನುವುದನ್ನು ಈ ಸಂದರ್ಭದಲ್ಲಿ ಸ್ಮರಿಸಿಕೊಳ್ಳುವುದು ಅತ್ಯಗತ್ಯವಾಗಿದೆ. ರಾಜ್ಯ ಸಭೆ ಸ್ಪೀಕರ್ ಆಗಿ ಜಗದೀಪ್ ಧನಕರ್ ಅವರು ಪಕ್ಷಪಾತ ಮಾಡುತ್ತಿದ್ದಾರೆ ಎಂದು ಇದೇ ಪ್ರತಿಪಕ್ಷಗಳು ಕಳೆದ ಡಿಸೆಂಬರ್‌ನಲ್ಲಿ ಅವಿಶ್ವಾಸ ನಿರ್ಣಯವನ್ನು ಮಂಡಿಸಿದ್ದವು.

**ಉಪರಾಷ್ಟ್ರಪತಿ ಜಗದೀಪ್ ಧನಕರ್ ಅವರ ಅನಿರೀಕ್ಷಿತ ರಾಜೀನಾಮೆ ದೇಶದ ಸಾಂವಿಧಾನಿಕ ಘನತೆಗೆ ಸಂಬಂಧಿಸಿದ ಚರ್ಚೆಯನ್ನು ಇನ್ನಷ್ಟು ತೀವ್ರಗೊಳಿಸಿದೆ. ಧನಕರ್‌ರನ್ನು ನಡೆಸಿಕೊಂಡ ರೀತಿ, ಉಪರಾಷ್ಟ್ರಪತಿ ಸ್ಥಾನದ ಘನತೆಗೆ ಚ್ಯುತಿ ತಂದಿದೆ ಎಂದು ವಿರೋಧ ಪಕ್ಷದ ನಾಯಕರು ಆಕ್ಷೇಪ ವ್ಯಕ್ತಪಡಿಸುತ್ತಿದ್ದಾರೆ. ಆದರೆ ಇದೇ ಸಂದರ್ಭದಲ್ಲಿ ಸ್ವತಃ ಧನಕರ್ ಅವರು ಉಪರಾಷ್ಟ್ರಪತಿ ಸ್ಥಾನದ ಘನತೆಗೆ ತಕ್ಕುದಾಗಿ ವರ್ತಿಸಿದ್ದರೆ ಎನ್ನುವ ಪ್ರಶ್ನೆಗೆ ಯಾವುದೇ ಉತ್ತರಗಳಿಲ್ಲ. ಧನಕರ್ ಅವರು 'ತಾವೇ ಬಿತ್ತಿದ್ದನ್ನು ಕೊಯ್ದುಕೊಂಡಿದ್ದಾರೆ' ಎನ್ನುವುದು ಹೆಚ್ಚು ಸೂಕ್ತವಾಗಿದೆ**

ಸ್ಪೀಕರ್ ಸ್ಥಾನವನ್ನು ರಾಜಕೀಯ ದುರುದ್ದೇಶಗಳಿಗೆ ಬಳಸಿಕೊಂಡ ಧನಕರ್ ವಿಪಕ್ಷಗಳ ಧ್ವನಿಯನ್ನು ಹತ್ತಿಕ್ಕುವ ಪ್ರಯತ್ನ ನಡೆಸಿದ್ದರು. ಈ ಸಂದರ್ಭದಲ್ಲಿ ವಿಪಕ್ಷದ ನಿರ್ಧಾರವನ್ನು ವ್ಯಂಗ್ಯ ಮಾಡಿದ್ದ ಧನಕರ್ ಪ್ರತಿಪಕ್ಷಗಳು ತರಕಾರಿ ಕತ್ತರಿಸುವ ಚಾಕುವಿನಲ್ಲಿ ಬೈಪಾಸ್ ಶಸ್ತ್ರಚಿಕಿತ್ಸೆಗೆ ಪ್ರಯತ್ನಿಸುತ್ತಿವೆ' ಎಂದು ಮಾಧ್ಯಮಗಳಿಗೆ ಹೇಳಿಕೆ ನೀಡಿದ್ದರು. 'ವಿಪಕ್ಷ ಹಿಡಿದಿರುವ ಚಾಕು ತರಕಾರಿ ಕತ್ತರಿಸುವುದಕ್ಕೂ ಅಯೋಗ್ಯವಾಗಿತ್ತು. ಅದು ತುಕ್ಕು ಹಿಡಿದಿತ್ತು. ಅಲ್ಲಿ ಆತುರ ಮಾತ್ರವಿತ್ತು. ಪ್ರಜಾಸತ್ತಾತ್ಮಕ ವಿಕಸನಕ್ಕೆ ವಿರುದ್ಧವಾಗಿತ್ತು ಎಂದು ಅವರು ನಿರ್ಣಯವನ್ನು ವ್ಯಾಖ್ಯಾನಿಸಿದ್ದರು. ಅಂದು ವಿಪಕ್ಷಗಳಿಂದ ವಿಫಲವಾದ ಶಸ್ತ್ರಚಿಕಿತ್ಸೆಯನ್ನು ಇದೀಗ ಸರಕಾರವೇ ಪೂರ್ತಿ ಮಾಡಿದಂತಿದೆ ಮತ್ತು ಈ ಶಸ್ತ್ರಚಿಕಿತ್ಸೆಗೆ ತರಕಾರಿ ಕತ್ತರಿಸುವ ಚಾಕುವನ್ನೇ ಬಳಸಿರುವುದು ವಿಪರ್ಯಾಸವೇ ಸರಿ. ಒಂದು ರೀತಿಯಲ್ಲಿ ಅವರ ವ್ಯಂಗ್ಯ ಅವರನ್ನೇ ಇರಿದಿದೆ. ಮತ್ತು ತನ್ನದೇ ಮೆಚ್ಚಿನ ನಾಯಕರು ತನಗೆ ಮಾಡಿದ ಈ ಶಸ್ತ್ರ ಚಿಕಿತ್ಸೆಯ ಬಗ್ಗೆ ಈವರೆಗೆ ಯಾವುದೇ ವಿವರಣೆ ನೀಡಿಲ್ಲ. ಧನಕರ್‌ಆರೋಗ್ಯ ಸಮಸ್ಯೆಯನ್ನು ಮುಂದಿಟ್ಟುಕೊಂಡು ತನ್ನ ರಾಜೀನಾಮೆಯನ್ನು ನೀಡಿದ್ದಾರಾದರೂ, ಅವರ ಜೊತೆಗೆ ಸರಕಾರ ವರ್ತಿಸಿದ ರೀತಿ ಬೇರೇನೋ ಇದೆ ಎನ್ನುವುದನ್ನು ಸಾರಿ ಹೇಳುತ್ತಿದೆ. ಯಾವುದೇ ಮುನ್ಸೂಚನೆಯಿಲ್ಲದೆಯೇ ಅವರಿಂದ ಏಕಾಏಕಿ ರಾಜೀನಾಮೆ ಕೊಡಿಸಲಾಗಿದೆ ಮಾತ್ರವಲ್ಲ ಅವರ ನಿವಾಸವನ್ನು ತೆರವುಗೊಳಿಸಲು ಸೂಚನೆ ನೀಡಲಾಗಿದೆ. ಒಬ್ಬ ಉಪರಾಷ್ಟ್ರಪತಿಯ ನಿವೃತ್ತಿ ಸಂದರ್ಭದಲ್ಲಿ ಪಾಲಿಸಬೇಕಾದ ಯಾವುದೇ ಶಿಷ್ಟಾಚಾರಗಳನ್ನು ಸರಕಾರ ಪಾಲಿಸಿಲ್ಲ. ಒಂದು ರೀತಿಯಲ್ಲಿ ಇದು ಸೇಡಿನ ಕ್ರಮವಾಗಿದೆ. ಒಟ್ಟು ಸಾಂವಿಧಾನಿಕ ವ್ಯವಸ್ಥೆಯ ಆರೋಗ್ಯವೇ ಕೆಟ್ಟು ಹೋಗಿರುವ ಸಂಕೇತವಿದು. ಕೇಂದ್ರ ಸರಕಾರದ ಮೂಗಿನ ನೇರಕ್ಕೆ ವರ್ತಿಸದ ಕಾರಣದಿಂದ ಅವರಿಂದ ರಾಜೀನಾಮೆ ಪಡೆಯಲಾಗಿದೆ ಎನ್ನುವ ಆರೋಪಗಳು ಕೇಳಿ ಬರುತ್ತಿವೆ. ಆರ್‌ಎಸ್‌ಎಸ್ ಮತ್ತು ಮೋದಿ ನಡುವಿನ ತಿಕ್ಕಾಟ ಅಂತಿಮವಾಗಿ ಧನಕರ್‌ರನ್ನು ಬಲಿ ಪಡೆದಿದೆ ಎನ್ನುವ ಊಹಾಪೋಹಗಳೂ ಇವೆ. ಇಷ್ಟಕ್ಕೂ ಧನಕರ್ ಕಳೆದುಕೊಂಡದ್ದೇನೂ ಇಲ್ಲ. ಧನಕರ್ ರಾಜ್ಯಪಾಲರ ಸ್ಥಾನವನ್ನು ನಿರ್ವಹಿಸಲು ಅಯೋಗ್ಯರು ಎಂದು ತೃಣಮೂಲ ಕಾಂಗ್ರೆಸ್ ಹೋರಾಟ ನಡೆಸುತ್ತಿರುವಾಗ, ಅವರಿಗೆ ಅನಿರೀಕ್ಷಿತವಾಗಿ ಸಿಕ್ಕಿದ ಹುದ್ದೆ ಉಪರಾಷ್ಟ್ರಪತಿ ಸ್ಥಾನ. ಇರುವಷ್ಟು ಸಮಯ ಅದಕ್ಕೆ ಅವರು ನ್ಯಾಯ ನೀಡಿದ್ದು ಅಷ್ಟರಲ್ಲೇ ಇದೆ.

# ರಾಮಾಯಣ



## ಶ್ರೀರಾಮನು ರಾಜ್ಯಭಾರವನ್ನು ಒಪ್ಪದಿದ್ದುದು

• ಹಿಂದಿನ ಸಂಚಿಕೆಯಿಂದ 101ನೆಯ ಅಧ್ಯಾಯ

ಲೋಕದಲ್ಲಿ ಕಾಣಿಸಿಕೊಳ್ಳುವ ವಸ್ತುಗಳೆಲ್ಲವೂ ಲಯವಾಗಿಯೇ ಮುಗಿಯುವುವು. ಉನ್ನತಸ್ಥಾನದಲ್ಲಿರುವವರೂ ಸಹ ಜಾರಿ ಕೆಳಗೆ ಬೀಳುವರು. ಕೂಡಿದ ವಸ್ತುಗಳೆಲ್ಲವೂ ಅಗಲಿಹೋಗಿಯೇ ಮುಗಿಯುವುದು ಜೀವಿಗಳೆಲ್ಲರೂ ಮರಣದಿಂದ ಸಮಾಪ್ತಿಯಾಗುವರು. ಪ್ರಕ್ಷಗಳ ಫಲಗಳೆಲ್ಲವೂ ಪಕ್ವವಾಗಿ ಕೊಳೆತು ಬಿದ್ದು ಹೋಗುವ ಹಾಗೆ ಹುಟ್ಟಿದವನು ಮರಣಹೊಂದಲೇಬೇಕು. ಲೋಕದಲ್ಲಿ ಎಷ್ಟು ಗಟ್ಟಿಯಾಗಿ ಕಟ್ಟಿದ ಮನೆಯಾದರೂ ಕಾಲಾಂತರದಲ್ಲಿ ಜೀರ್ಣವಾಗಿ ಕೆಟ್ಟು ಹೋಗುವುದು. ಆ ರೀತಿಯಲ್ಲಿ ಮನುಷ್ಯರು ಕೆಲವು ಕಾಲದಮೇಲೆ ಸರೆದೋರಿ ಮೃತ್ಯುವಶರಾಗುವರು. ಒಬ್ಬರಾದರೂ ಶಾಶ್ವತವಾಗಿ ನಿಲ್ಲುವವರಿಲ್ಲ. ಕಳೆದ ರಾತ್ರಿಯು ಬೆಳಗಾದಮೇಲೆ ತಿರುಗಲಾರದು. ಪೂರ್ಣ ಪ್ರವಾಹವುಳ್ಳ ಯಮುನಾನದಿಯು ಸಮುದ್ರಕ್ಕೆ ಹೋದ ಮೇಲೆ ತಿರುಗದು. ಲೋಕದಲ್ಲಿ ಸೂರ್ಯಪ್ರಭೆಯು ಬೇಸಿಗೆಯ ಕಾಲದಲ್ಲಿ ಉದಕವನ್ನು ದಿನದಿನಕ್ಕೆ ತಗ್ಗಿಸುವಂತೆ ಹಗಲಿರುಳೆಂಬ ಕಾಲವು ಮನುಷ್ಯರ ಆಯುಷ್ಯವನ್ನು ತಗ್ಗಿಸುತ್ತಿರುವುದು. ಈ ಕ್ರಮದಲ್ಲಿ ದಿನದಿನಕ್ಕೆ ಕ್ಷಯವಾಗು ತ್ತಿರುವ ನಿನ್ನನ್ನು ಕುರಿತು ದುಃಖಪಡು. ಉಳಿದವರನ್ನು ಕುರಿತು ದುಃಖಿಸಲೇನು ಕಾರಣ ನಿನಗೂ ದಿನದಲ್ಲಿಯೂ ಆಯುಸ್ಸು ಕಳೆಯುತ್ತಿರುವುದು. ಸಂಗಡವೆ ಮೃತ್ಯುವು ಅಟ್ಟಿಬರುತ್ತಿರುವುದು. ಆದ್ದರಿಂದ ನೀನು ನಿನ್ನನ್ನು ಅಟ್ಟಿಬರುವ ಮೃತ್ಯುವನ್ನು ಕುರಿತು ದುಃಖಪಡು. ಈ ಶರೀರವನ್ನು ಬಿಟ್ಟು ಇನ್ನೊಂದು ಶರೀರವನ್ನು ತಾಳಿದರೂ ಮೃತ್ಯುವು ಹಿಂದುಗೊಂಡು ಅಟ್ಟಿಬರುವುದಲ್ಲದೆ ತಿರುಗುವುದಿಲ್ಲ. ಲೋಕದಲ್ಲಿ ಮನುಷ್ಯರು ಮರವೆಯಿಂದ ಕೆಲವು ದಿನಗಳನ್ನು ಕಳೆದು ತಲೆಯಲ್ಲಿ ನರೆಹುಟ್ಟಿ ಕೇಶಾದಿಗಳು ಬಿಳುಪಾಗಿ ಶರೀರ ಶಿಥಿಲವಾದ ಮೇಲೆ ಮಾಡುವುದೇನೆಂದು ಚಿಂತಿಸುವರು. ಸೂರ್ಯೋದಯವಾಯಿತು ಸೂರಾಸ್ತಮಯವಾಯಿತು ಎಂದು ಸಂತೋಷಪಡುತ್ತಿರುವರಲ್ಲದೆ ಸೂರ್ಯನ ಉದಯಾಸ್ತಮಯಗಳಿಂದ ತಮ್ಮ ಆಯುಸ್ಸು ಕ್ಷಯವಾಗುತ್ತಿರುವ ವಿಷಯವನ್ನು ವಿಚಾರಿಸರು. ವಸಂತಋತು ಮೊದಲಾದ ಋತುಗಳನ್ನು ಕಂಡು ಸಂತೋಷಪಡುವರಲ್ಲದೆ ಆ ಋತುಗಳು ಮರಳಿ ಮರಳಿ ಬರುವುದರಿಂದ ತಮ್ಮ ಆಯುಷ್ಯವು ಕ್ಷಯವಾಗುತ್ತಿದೆಯೇ. ವೃತ್ತಾಂತವನ್ನು ತಿಳಿಯರು. ಸಮುದ್ರದಲ್ಲಿ ತೆರೆಗಳ ವೇಗದಿಂದ ಕಾಷ್ಠಗಳು ಕೂಡಿ ಸುಳಿಗಾಳಿ ಬೀಸಿದರೆ ಆ ಕಾಷ್ಟಗಳು ಒಂದಕ್ಕೊಂದು ಹೇಳದೆ ಹೋಗುವಂತೆ ತಮ್ಮ ತಮ್ಮ ಕಾಲಕರ್ಮ ಸಂಯೋಗದಿಂದ ಒಂದು ದಿಕ್ಕಿನಲ್ಲಿ ಕೂಡಿದ ಸ್ತ್ರೀ ಪುರುಷ ಪುತ್ರಮಿತ್ರಾದಿಗಳು ತಮ್ಮ ತಮ್ಮ ಕಾಲ ಬಂದಲ್ಲಿ ತಮ್ಮ ತಮ್ಮ ದಾರಿಕೊಂಡೇ ಹೋಗುತ್ತಿರುವರು. ಧನಸುಖಾದಿಗಳು ತಾವು ಬರುವ ಕಾಲದಲ್ಲಿ ಬಂದು, ಹೋಗುವ ಕಾಲದಲ್ಲಿ ಹೋಗುತ್ತಿರುವುವು. ಆದ್ದರಿಂದ ವಸ್ತುಲಾಭವಾಯಿತೆಂದು ಸಂತೋಷಪಡಸಲ್ಲದು. ವಸ್ತುಕ್ಷಯವಾಯಿತೆಂದು ದುಃಖಪಡಸಲ್ಲದು. ಲೋಕಾಂತರಕ್ಕೆ ಹೋದವರನ್ನು ತಿರುಗಿಸುವುದಕ್ಕೆ ಸಾಮರ್ಥ್ಯವಿಲ್ಲದ್ದರಿಂದ ಅವರನ್ನು ಕುರಿತು ದುಃಖಿಸುವುದಕ್ಕೆ ಕಾರಣವೇನು ದಾರಿಯಲ್ಲಿ ಪಥಿಕನು ಮುಂದೆ ಹೋಗುವವರನ್ನು ನೋಡಿ ನಾನೂ ಬರುವೆನೆಂದು ಹೇಳಿ

ಮುಂದುವರಿಯುವುದು...

# ನಾಗರ ಪಂಚಮಿ ನಾಡಿಗೆ ದೊಡ್ಡದು



ಶ್ರೀ. ವಿನೋದ್ ಕಾಮತ್

ಕಶ್ಯಪ ಋಷಿ ಮತ್ತು ಕದ್ರೂ ಋಷಿಗಳಿಂದ ಎಲ್ಲಾ ನಾಗಗಳ ನಿರ್ಮಿತಿಯಾಯಿತು. ತ್ರಿಗುಣಗಳಂತೆ ನಾಗಗಳಲ್ಲಿ ಪ್ರಮುಖ ಮೂರು ವಿಧಗಳಿವೆ.

**ತಾಮಸಿಕ ನಾಗ:** ಈ ನಾಗಗಳು ಮುಖ್ಯವಾಗಿ ಕಪ್ಪು ಬಣ್ಣದ್ದಾಗಿದ್ದು ಅವು ಪಾತಾಳದ ನಾಗಲೋಕದಲ್ಲಿ ವಾಸಿಸುತ್ತವೆ. ಪಾತಾಳದ ನಾಗಗಳು ಪೃಥ್ವಿಯ ಮೇಲಿನ ನಾಗಗಳಿಗಿಂತ ಲಕ್ಷ ಪಟ್ಟು ಹೆಚ್ಚು ಸಾಮರ್ಥ್ಯಶಾಲಿ ಮತ್ತು ಸಾವಿರ ಪಟ್ಟು ವಿಷಕಾರಿಯಾಗಿರುತ್ತವೆ.

**ರಾಜಸಿಕ ನಾಗ:** ಈ ನಾಗಗಳು ಪೃಥ್ವಿಯ ಮೇಲೆ ವಾಸಿಸುತ್ತದೆ. ನಾಗಯೋನಿಯಲ್ಲಿ ಜನಿಸಿದ್ದರಿಂದ ಈ ನಾಗಗಳ ಆಚರಣೆಯು ಸಾಮಾನ್ಯ ನಾಗಗಳಂತೆ ಇರುತ್ತದೆ. ಅವು ಕಪ್ಪು, ನೀಲಿ, ಕಂದು, ಚಾಕಲೇಟ ಮುಂತಾದ ಬಣ್ಣದ್ದಾಗಿರುತ್ತವೆ.

**ಸಾತ್ತ್ವಿಕ ನಾಗ :** ಈ ನಾಗಗಳು ದೈವೀಯಾಗಿರುವುದರಿಂದ ಅವು ಶಿವಲೋಕದ ಸಮೀಪದಲ್ಲಿರುವ ದೈವೀ ನಾಗಲೋಕದಲ್ಲಿ ವಾಸಮಾಡುತ್ತವೆ. ಅವುಗಳ ಬಣ್ಣ ಹಳದಿಯಿರುತ್ತದೆ ಮತ್ತು ತಲೆಯ ಮೇಲೆ ಕೆಂಪು ಅಥವಾ ನೀಲಿ ಬಣ್ಣದ ನಾಗಮಣಿಯಿರುತ್ತದೆ. ಸಾತ್ತ್ವಿಕ ನಾಗವು ಪಾತಾಳದ ನಾಗಗಳ ತುಲನೆಯಲ್ಲಿ ಲಕ್ಷ ಪಟ್ಟು ಹೆಚ್ಚು ಸಾಮರ್ಥ್ಯವುಳ್ಳದ್ದಾಗಿರುತ್ತದೆ. ಸಾತ್ತ್ವಿಕ ನಾಗಗಳನ್ನು ವಿವಿಧ ದೇವತೆಗಳು ಧರಿಸಿದ್ದಾರೆ. ಶಿವನ ಕೊರಳಲ್ಲಿ ವಾಸುಕಿ ಎಂಬ ನಾಗವಿದೆ. ಗಣಪತಿಯ ಹೊಟ್ಟೆಗೆ ಸುತ್ತು ಹಾಕಿದ ಜಾಗೃತ ವಿಶ್ವಕುಂಡಲಿನಿಯ ಪ್ರತೀಕವಾಗಿರುವ ಹಳದಿ ನಾಗ ಎಂದರೆ ಪದ್ಮನಾಭ. ಶ್ರೀವಿಷ್ಣು ಶೇಷನಾಗನ ಶಯ್ಯೆಯ ಮೇಲೆ ಮಲಗಿರುತ್ತಾನೆ. ಸಾತ್ತ್ವಿಕ ನಾಗಗಳು ಸಿದ್ಧ ಮತ್ತು ಋಷಿಮುನಿಗಳ ಆಧೀನದಲ್ಲಿರುತ್ತವೆ. ಅವು ಅವರ ಆಜ್ಞೆಯ ಪಾಲನೆಯನ್ನು ಮಾಡುತ್ತವೆ. ಶಿವನು ಎಲ್ಲಾ ನಾಗಗಳ ಅಧಿಪತಿಯಾಗಿದ್ದಾನೆ. ಹೆಚ್ಚಿನ ನಾಗಗಳು ಶಿವನ ಉಪಾಸನೆಯನ್ನೇ ಮಾಡುತ್ತವೆ. ಕೆಲವು ನಾಗಗಳು ವಿಷ್ಣುವಿನ, ಕೆಲವು ನಾಗಗಳು ಶ್ರೀಗಣೇಶನ ಉಪಾಸನೆಯನ್ನು ಮಾಡುತ್ತವೆ. ನಾಗದೇವತೆಯನ್ನು ಕನಿಷ್ಠ ದೇವತೆಯೆಂದು ಪರಿಗಣಿಸಲಾಗುತ್ತದೆ. ನಾಗದೇವತೆಗಳ ಸ್ಥಾನವು ಅರಳಿಮರ ಅಥವಾ ಆಲದ ಮರದ ಕೆಳಗೆ ಅಥವಾ ದೊಡ್ಡ ಹುತ್ತದಲ್ಲಿರುತ್ತದೆ. ಸಾತೆರಿ ದೇವಿಯು ಹುತ್ತದಲ್ಲಿ ವಾಸವಿರುತ್ತದೆ. ದೇವಿಯ ಸೇವೆಯನ್ನು ಮಾಡಲು ಮತ್ತು ಅವಳ ಗಣವೆಂದು

## ನಾಗಗಳ ಆಧ್ಯಾತ್ಮಿಕ ಮಹತ್ವ

ಕಾರ್ಯ ಮಾಡುವುದಕ್ಕಾಗಿ ಸಾತ್ತ್ವಿಕ ನಾಗವು ಹುತ್ತದಲ್ಲಿ ವಾಸಿಸುತ್ತದೆ. ಕಲಿಯುಗದಲ್ಲಿ ಮನುಷ್ಯನು ನಾಗಗಳ ಸ್ಥಾನವಾಗಿರುವ ನಾಗಬನಗಳನ್ನು ನಾಶ ಮಾಡಿರುವುದರಿಂದ ಮನುಷ್ಯನಿಗೆ ನಾಗಗಳ ತೊಂದರೆಯಾಗುವುದು ಕಲಿಯುಗದ ಆರಂಭದವರೆಗೆ ವಿವಿಧ ಸ್ಥಳಗಳ ದೇವತೆಗಳಿಗೆ ಅವರ ಸ್ವತಂತ್ರ ಸ್ಥಾನವನ್ನು ನೀಡಲಾಗುತ್ತಿತ್ತು, ಉದಾ. ಸ್ಥಾನದೇವತೆ, ಗ್ರಾಮದೇವತೆ, ಕ್ಷೇತ್ರಪಾಲ ದೇವತೆ ಇತ್ಯಾದಿ. ಅದೇ ರೀತಿಯಲ್ಲಿ ಭಾರತದಲ್ಲಿ ಪ್ರತಿಯೊಂದು ಊರಿನಲ್ಲಿ ನಾಗಗಳಿಗೆ ವಾಸಿಸಲು ನಾಗಬನಗಳಿದ್ದವು. ಈ ಸ್ಥಳಗಳಲ್ಲಿ ದೊಡ್ಡ ದೊಡ್ಡ ವೃಕ್ಷಗಳು ಹತ್ತಿರ-ಹತ್ತಿರವಿರುತ್ತಿದ್ದವು ಮತ್ತು ಅವುಗಳ ಬುಡದಲ್ಲಿ ಹುತ್ತಗಳಿರುತ್ತಿದ್ದವು. ಪ್ರತಿಯೊಂದು ಊರಿನ ನಾಗಗಳು ಅಲ್ಲಿ ಇರುತ್ತಿದ್ದವು. ನಾಗಗಳಿಗೆ ಸ್ವತಂತ್ರ ಸ್ಥಾನ ನೀಡುವುದರಿಂದ ಅವು ಮನುಷ್ಯನಿಗೆ ತೊಂದರೆಯನ್ನು ನೀಡುವುದಿಲ್ಲ ಮತ್ತು ಮನುಷ್ಯನ ಮತ್ತು ಅವನ ಸಂಪತ್ತಿನ ರಕ್ಷಣೆಯನ್ನು ಮಾಡುತ್ತಿದ್ದವು.

ವಿಜ್ಞಾನಯುಗದಲ್ಲಿ ಮಾನವನು ಭೌತಿಕ ಪ್ರಗತಿ ಮಾಡಿಕೊಳ್ಳಲು ಗ್ರಾಮ ಗ್ರಾಮಗಳಲ್ಲಿರುವ ನಾಗಬನಗಳನ್ನು ನಾಶ ಮಾಡಿ ಅಲ್ಲಿ ದೊಡ್ಡ ದೊಡ್ಡ ಕಟ್ಟಡಗಳನ್ನು ಕಟ್ಟಿದನು. ಆದುದರಿಂದ ಮನುಷ್ಯನಿಗೆ ನಾಗಗಳ ಉಪಟಳವನ್ನು ಸಹಿಸ ಬೇಕಾಗಿ ಬಂದಿದೆ. ಶ್ರಾವಣ ತಿಂಗಳ ಶುಕ್ಲ ಪಂಚಮಿಯಂದು ನಾಗನ ಪೂಜೆಯನ್ನು ಮಾಡಲಾಗುತ್ತದೆ. ಹಾಗಾಗಿ ಆ ತಿಥಿಗೆ 'ನಾಗರಪಂಚಮಿ' ಎಂದು ಕರೆಯುತ್ತಾರೆ.

## ಪೂರ್ವಜರ, ನಾಗಗಳ ಪರಸ್ಪರ ಸಂಬಂಧ

**ಭುವರ್ಲೋಕ ಮತ್ತು ಪಿತೃಲೋಕದಲ್ಲಿ ಸಿಲುಕಿರುವ ಪೂರ್ವಜರು ಹೆಚ್ಚಾಗಿ ಕಪ್ಪು ನಾಗಗಳ ರೂಪದಲ್ಲಿ ವಂಶಜರಿಗೆ ದರ್ಶನವನ್ನು ನೀಡುತ್ತಾರೆ. ಸಾತ್ತ್ವಿಕ ಪೂರ್ವಜರು ಹಳದಿ ನಾಗಗಳ ರೂಪದಲ್ಲಿ ದರ್ಶನ ಮತ್ತು ಆಶೀರ್ವಾದ ನೀಡುತ್ತಾರೆ. ಮನೆ, ಸಂಪತ್ತು ಮತ್ತು ಕುಟುಂಬದವರ ವಿಷಯದಲ್ಲಿ ಬಹಳ ಆಸಕ್ತಿ ಇರುವ ಪೂರ್ವಜರಿಗೆ ಪೃಥ್ವಿಯ ಮೇಲೆ ನಾಗಗಳ ಯೋನಿಯಲ್ಲಿ ಜನ್ಮ ಸಿಗುತ್ತದೆ. ಮನುಷ್ಯ ಜನ್ಮದಲ್ಲಿ ಇತರರಿಗೆ ತೊಂದರೆ ನೀಡಿ ಅಡ್ಡ ಮಾರ್ಗದಿಂದ ಸಂಪತ್ತನ್ನು ಗಳಿಸಿದ ಪೂರ್ವಜರು ಮುಂದಿನ ಜನ್ಮ ಪಾತಾಳದ ಕಪ್ಪು ನಾಗಗಳ ರೂಪದಲ್ಲಿ ಆಗುತ್ತದೆ. ದೇವಕಾರ್ಯದಲ್ಲಿ ಸಹಭಾಗಿಯಾಗಿರುವ ಮತ್ತು ಸಜ್ಜನ ಪ್ರವೃತ್ತಿಯ ಪೂರ್ವಜರು ಪಿತೃಲೋಕದಲ್ಲಿ ವಾಸ ಮಾಡಿದ ನಂತರ ಕೆಲವು ಸಮಯ ಶಿವಲೋಕದ ಸಮೀಪದಲ್ಲಿರುವ ದೈವಿ ನಾಗಲೋಕದಲ್ಲಿ ಹಳದಿ ನಾಗಗಳ ರೂಪದಲ್ಲಿ ವಾಸ ಮಾಡುತ್ತವೆ.**

# ಶ್ರೀಕೃಷ್ಣ ಪರಮಾತ್ಮನ 50 ಹೆಸರು, ಅರ್ಥಗಳು..

ವಿಶ್ವಾಸ್.ಡಿ.ಗೌಡ



**ಕೃಷ್ಣ :** ಎಲ್ಲಾರನ್ನೂ ತನ್ನ ಕಡೆ ಆರ್ಕಷಿತ ಮಾಡಿಕೊಳ್ಳುವವನು.
**ಗಿರಿಧರ:** ಪರ್ವತವನ್ನು ಎತ್ತಿ ಹಿಡಿದವನು.
**ಮುರಳಿಧರ :** ಮುರಳಿಯನ್ನು ನುಡಿಸುವವನು.
**ಪಿತಾಂಬರಧಾರಿ :** ಹಳದಿ ವಸ್ತ್ರವನ್ನು ಧರಿಸಿದವನು.
**ಮಧುಸೂದನ :** ಮಧು ಎಂಬ ದೈತ್ಯನನ್ನು ಸಂಹಾರ ಮಾಡಿದವನು.
**ಯಶೋದ ದೇವಕಿ ನಂದನ :** ಯಶೋದ ಹಾಗೂ ದೇವಕಿಯರಿಗೆ ಸಂತೋಷವನ್ನು ನೀಡುವ ಪ್ರಿಯ ಪುತ್ರ.
**ಗೋಪಾಲ :** ಗೋವುಗಳು ಅಥವಾ ಪೃಥ್ವಿಯ ಪಾಲನೆ ಮಾಡುವವನು.
**ಗೋವಿಂದ :** ಹಸುಗಳ ರಕ್ಷಕ.
**ಶ್ರೀನಾಥ :** ಲಕ್ಷ್ಮಿಗೆ ಆನಂದ ಕೊಡುವವನು.
**ಕುಂಜ ವಿಹಾರಿ :** ಕುಂಜ ಎಂಬ ಹೂದೋಟದಲ್ಲಿ ವಿಹಾರ ಮಾಡುವವನು.
**ಚಕ್ರಧಾರಿ:** ಸುದರ್ಶನ ಚಕ್ರ, ಜ್ಞಾನ ಚಕ್ರ, ಶಕ್ತಿ ಚಕ್ರ ಧರಿಸುವವನು.
**ಶ್ಯಾಮ :** ಕಪ್ಪು ವರ್ಣದವನು.
**ಮಾಧವ :** ಮಾಯಾಪತಿ.
**ಮುರಾರಿ :** ಮುರ ಎಂಬ ದೈತ್ಯನನ್ನು ಸೋಲಿಸಿದವನು.
**ಅಸುರಾರಿ :** ಅಸುರರನ್ನು ಸೋಲಿಸಿದವನು.
**ಬನವಾರಿ :** ಹೂದೋಟಗಳಲ್ಲಿ ವಿಹರಿಸುವವನು.
**ಮುಕುಂದ :** ನಿಧಿಗಳನ್ನು ಇಟ್ಟುಕೊಂಡಿರವವನು.
**ಯೋಗೀಶ್ವರ :** ಯೋಗಿಗಳ ಈಶ್ವರ.
**ಗೋಪೇಶ :** ಗೋಪಿಗಳ ಈಶ.
**ಹರಿ :** ದು:ಖವನ್ನು ದೂರಮಾಡುವವನು
**ಮದನ :** ಸುಂದರ.
**ಮನೋಹರ :** ಮನಸ್ಸನ್ನು ಆಕರ್ಷಿಸುವವನು.
ಮೋಹನ : ಸಮ್ಮೋಹನ ಮಾಡುವವನು.
**ಜಗದೀಶ :** ಜಗತ್ತಿನ ಮಾಲೀಕ.
ಪಾಲನಹಾರ : ಸರ್ವರ ಲಾಲನೆ ಪಾಲನೆ ಮಾಡುವವನು.
**ಕಂಸಾರಿ:** ಕಂಸನನ್ನು ಸಂಹರಿಸಿದವನು.
**ರುಕ್ಮಿಣಿ ವಲ್ಲಭ :** ರುಕ್ಮಿಣಿಯ ಪತಿ.
**ಕೇಶವ :** ಕೇಶ ಎಂಬ ದೈತ್ಯನ ಸಂಹಾರ ಮಾಡಿದವನು. ನೀರಿನ ಮೇಲೆ ವಾಸ ಮಾಡುವವನು.
**ವಾಸುದೇವ :** ವಸುದೇವನ ಪುತ್ರ.
**ರಣಛೋರ :** ರುದ್ರಭೂಮಿಯಲ್ಲಿ ಇರುವವನು.
**ಗುಢಾಕೇಶ :** ನಿದ್ರೆಯ ಮೇಲೆ ವಿಜಯಿಯಾದವನು.
**ಋಷಿಕೇಶ :** ಇಂದ್ರಿಯಗಳನ್ನು ಜಯಿಸಿದವನು.



**ಸಾರಥಿ :** ಅರ್ಜುನನ ರಥದ ಸಾರಥಿ.
**ಪೂರ್ಣಪ್ರರಬ್ರಹ್ಮ :** ದೇವತೆಗಳಿಗೂ ಮಾಲೀಕ.
**ದೇವೇಶ :** ದೇವಗಳ ಈಶ.
**ನಾಗ ನಥಿಯ:** ಕಲಿನಾಗವನ್ನು ಕೊಂದವನು.
**ವೃಷ್ಣಿಪತಿ :** ಆ ಕುಲದಲ್ಲಿ ಹುಟ್ಟಿದವನು.
**ಯದುಪತಿ :** ಯಾದವರ ಮಾಲೀಕ.
**ಯದುವಂಶಿ :** ಯದು ವಂಶದ ಅವತಾರ.
**ದ್ವಾರಕಾಧೀಶ :** ದ್ವಾರಕೆಯ ಮಾಲೀಕ.
**ನಾಗರ :** ಸುಂದರ.
**ಛಲೀಯ :** ಛಲ (ಹಠ) ಮಾಡುವವನು.
**ಮಥುರಾ ಗೋಕುಲವಾಸಿ :** ಈ ಸ್ಥಳಗಳ ನಿವಾಸಿ.
**ವಲ್ಲಭ :** ಸದಾ ಆನಂದದಲ್ಲಿ ಇರುವವನು.
**ದಾಮೋದರ :** ಹೊಟ್ಟೆಗೆ ಹಗ್ಗ ಕಟ್ಟಿಸಿಕೊಂಡವವನು.
**ಅಘಹಾರಿ:** ಪಾಪಗಳನ್ನು ಹರಿಸುವವನು.
**ಸಖ :** ಅರ್ಜುನ ಮತ್ತು ಸುದಾಮನ ಮಿತ್ರ.
**ರಾಸರಚಯ್ಯ :**ರಾಸ ಒಂದು ಪ್ರಕಾರದ ನೃತ್ಯ ರಚಿಸಿದವನು.
ಅಚ್ಯುತ : ಅವನ ಧಾಮದಿಂದ ಮರಳಿ ಹೋಗಲು ಸಾಧ್ಯವಿಲ್ಲ.
**ನಂದಲಾಲ :** ನಂದನ ಪುತ್ರ.



# ರಾತ್ರಿ ಪಾದಕ್ಕೆ ಮೆಗ್ನೇಸಿಯಮ್‌ಎಣ್ಣೆ ಹಚ್ಚಿ ಮಲಗೋದ್ರಿಂದ ಯಾವೆಲ್ಲಾ ಲಾಭಗಳಿವೆ ಗೊತ್ತಾ?

ನಮ್ಮ ದೇಹಕ್ಕೆ ಇತರ ಪೋಷಕಾಂಶಗಳಂತೆ ಮೆಗ್ನೇಸಿಯಮ್‌ನ ಅಗತ್ಯವೂ ಇದೆ. ಮೆಗ್ನೇಸಿಯಮ್ ಕೊರತೆಯಿಂದಾಗಿ ನಾನಾ ಆರೋಗ್ಯ ಸಮಸ್ಯೆಗಳು ಕಾಡಲಾರಂಭಿಸುತ್ತದೆ. ಮೆಗ್ನೇಸಿಯಮ್ ಎಣ್ಣೆಯನ್ನು ಕಾಲಿಗೆ ಹಚ್ಚೋದ್ರಿಂದ ಸಾಕಷ್ಟು ಪ್ರಯೋಜನಗಳಿವೆ. ಮೆಗ್ನಿಸಿಯಮ್ ನಿಮ್ಮ ದೇಹದಲ್ಲಿ ಪ್ರಮುಖ ಪಾತ್ರ ವಹಿಸುವ ಖನಿಜವಾಗಿದ್ದು, ನರಗಳ ಕಾರ್ಯದಿಂದ ಹಿಡಿದು ನಿದ್ರೆಯ ಗುಣಮಟ್ಟದವರೆಗೆ ಎಲ್ಲಾ ವನ್ನೂ ಬೆಂಬಲಿಸುತ್ತದೆ. ಅನೇಕ ಮಹಿಳೆಯರು ಆಹಾರ ಅಥವಾ ಪೂರಕಗಳ ಮೂಲಕ ಮೆಗ್ನಿಸಿಯಮ್ ಪಡೆಯುವತ್ತ ಗಮನಹರಿಸುತ್ತಾರೆ. ಮೆಗ್ನೇಸಿಯಂ ಪಡೆಯಲು ಸುಲಭ ಮಾರ್ಗವೆಂದರೆ ಮಲಗುವ ಮುನ್ನ ನಿಮ್ಮ ಪಾದಗಳಿಗೆ ಮೆಗ್ನಿಸಿಯಮ್ ಎಣ್ಣೆಯನ್ನು ಹಚ್ಚುವುದು.

**ತಜ್ಞರ ಸಲಹೆ:** ನವದೆಹಲಿ ಮೂಲದ ಇಂಟಿಗ್ರೇಟಿವ್ ಹೆಲ್ತ್ ಎಕ್ಸ್‌ಪರ್ಟ್ ಮತ್ತು ವೆಲ್‌ನೆಸ್ ಕನ್ಸಲ್ಟೆಂಟ್ ಆಗಿರುವ ಡಾ. ರುಚಿಕಾ ಮಲ್ಹೋತ್ರಾ ಅವರು ಸಿಂಪಲ್ ಟಿಪ್ಸ್‌ವೊಂದನ್ನು ಹಂಚಿಕೊಂಡಿದ್ದಾರೆ. ಮೆಗ್ನೀಸಿಯಮ್ ಎಣ್ಣೆಯನ್ನು ಚರ್ಮದ ಮೂಲಕ ಹೀರಿಕೊಳ್ಳುತ್ತದೆ. ವಿಶೇಷವಾಗಿ ನಿಮ್ಮ ಪಾದಗಳ ಅಡಿಭಾಗದಲ್ಲಿ ಹಚ್ಚುವುದರಿಂದ ತ್ವರಿತ ಪರಿಣಾಮ ಪಡೆಯಬಹುದು.

## ರೋಗನಿರೋಧಕ ಶಕ್ತಿಯನ್ನು ಬಲಪಡಿಸುತ್ತದೆ

**ಮೆಗ್ನೀಸಿಯಮ್ ನಿಮ್ಮ ರೋಗನಿರೋಧಕ ಶಕ್ತಿಯನ್ನು ಬಲವಾಗಿಡುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಉತ್ತಮ ನಿದ್ರೆ, ಒತ್ತಡವನ್ನು ಕಡಿಮೆ ಮಾಡುವುದು ಮತ್ತು ಸುಧಾರಿತ ಚೇತರಿಕೆ ಎಲ್ಲಾ ವೂ ನಿಮ್ಮ ದೇಹದ ನೈಸರ್ಗಿಕ ರಕ್ಷಣಾ ವ್ಯವಸ್ಥೆಯನ್ನು ಬೆಂಬಲಿಸುತ್ತದೆ.**

**ಆಳವಾದ ನಿದ್ರೆಯನ್ನು ಉತ್ತೇಜಿಸುತ್ತದೆ:** ನಿಮಗೆ ರಾತ್ರಿ ಸರಿಯಾಗಿ ನಿದ್ದೆ ಬಾರದಿದ್ದರೆ, ನಿದ್ದೆಯಿಂದ ಪದೇ ಪದೇ ಎಚ್ಚರಗೊಳ್ಳುತ್ತಿದ್ದರೆ ಮೆಗ್ನೇಸಿಯಮ್ ಸಹಕಾರಿಯಾಗಿದೆ. ಇದು ನರಮಂಡಲವನ್ನು ಶಾಂತಗೊಳಿಸುವುದಲ್ಲದೆ ದೇಹಕ್ಕೆ ವಿಶ್ರಾಂತಿಯನ್ನು ನೀಡುತ್ತದೆ. ಇದು ನಿದ್ರೆಯ ಗುಣಮಟ್ಟವನ್ನು ಸುಧಾರಿಸುತ್ತದೆ. ಗುಣಮಟ್ಟದ ನಿದ್ರೆ ಮತ್ತು ವಿಶ್ರಾಂತಿ ಪಡೆದ ಸ್ನಾಯುಗಳು ಮರುದಿನ ಹೆಚ್ಚಿನ ಶಕ್ತಿಯನ್ನು ನೀಡುತ್ತವೆ. ನಿಯಮಿತ ಬಳಕೆಯು ಸ್ವಾಭಾವಿಕವಾಗಿ ಆಯಾಸವನ್ನು ಸುಧಾರಿಸಲು ಸಹಾಯ ಮಾಡುತ್ತದೆ. **ಸ್ನಾಯು ಸೆಳೆತ, ನೋವುಗಳನ್ನು ನಿವಾರಿಸುತ್ತದೆ:** ಮೆಗ್ನೀಸಿಯಮ್ ಸ್ನಾಯುಗಳಿಗೆ ವಿಶ್ರಾಂತಿ ನೀಡುತ್ತದೆ. ದಣಿದ ಪಾದಗಳಿಗೆ ಇದನ್ನು ಹಚ್ಚುವುದರಿಂದ ದೀರ್ಘಕಾಲ ನಿಂತಾಗ ಹಾಗೂ ನಡೆದಾಡುವ ಕಾಣಿಸಿಕೊಳ್ಳುವ ಕಾಲು ನೋವನ್ನು ಶಮನ ಮಾಡುತ್ತದೆ. ಮೆಗ್ನಿಸಿಯಮ್ ಎಣ್ಣೆ ಚರ್ಮವನ್ನು ಮೃದುವಾಗಿರಿಸುತ್ತದೆ ಉರಿಯೂತವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ, ನಿಮ್ಮ ಪಾದಗಳನ್ನು ಉತ್ತಮವಾಗಿ ಕಾಣುವಂತೆ ಮಾಡುತ್ತದೆ.

**ಹೃದಯ ಮತ್ತು ರಕ್ತಪರಿಚಲನಾ ವ್ಯವಸ್ಥೆಯನ್ನು ಬೆಂಬಲಿಸುತ್ತದೆ:** ಮೆಗ್ನೀಸಿಯಮ್ ರಕ್ತದೊತ್ತಡ ರಕ್ತ ಪರಿಚಲನೆಯನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ. ನಿದ್ರೆಗೆ ಮುನ್ನ ನಿಮ್ಮ ಪಾದಗಳಿಗೆ ಮೆಗ್ನೀಸಿಯಮ್ ಎಣ್ಣೆ ಉಜ್ಜುವುದರಿಂದ ಆರೋಗ್ಯಕರ ರಕ್ತದ ಹರಿವು ಉತ್ತೇಜಿಸುತ್ತದೆ.

**ಒತ್ತಡ ಮತ್ತು ಆತಂಕವನ್ನು ಕಡಿಮೆ ಮಾಡುತ್ತದೆ:** ಮೆಗ್ನೀಸಿಯಮ್ ಎಣ್ಣೆಯನ್ನು ನಿಮ್ಮ ಪಾದಗಳಿಗೆ ಮಸಾಜ್ ಮಾಡುವುದರಿಂದ ಮಾನಸಿಕ ಒತ್ತಡ ಕಡಿಮೆಯಾಗುತ್ತದೆ. ಇದು ಮೆದುಳನ್ನು ಶಾಂತಗೊಳಿಸುವ ರಾಸಾಯನಿಕವಾದ ಉತ್ಪಾದನೆಯನ್ನು ಬೆಂಬಲಿಸುತ್ತದೆ ಆತಂಕವನ್ನು ನಿವಾರಿಸುತ್ತದೆ.

# ಹೆಸರು ಬೇಳೆ, ಹೀರೆಕಾಯಿ ತೊವ್ವೆ ಮಾಡೋದು ಹೇಗೆ ಇಲ್ಲಿದೆ ಸುಲಭದ ರೆಸಿಪಿ!

ಊಟದ ಜೊತೆಗೆ ನೀವು ಬಹಳ ರುಚಿಯಾದ ಸಾಂಬಾರ್, ಗ್ರೇವಿ ಮಾಡುತ್ತೀರಿ. ಅದೇ ರೀತಿ ರೊಟ್ಟಿ, ದೋಸೆ ಸವಿಯಲು ಹಾಗೆ ಊಟದ ಜೊತೆಗೆ ರುಚಿ ಹೆಚ್ಚಿಸಲು ನೀವು ತೊವ್ವೆ ಅಥವಾ ಪಪ್ಪು ಮಾಡುವುದು ನೋಡಬಹುದು. ಪಪ್ಪು ಆಂಧ್ರ ಪ್ರದೇಶ, ತೆಲಂಗಾಣದಲ್ಲಿ ಬಹಳ ಫೇಮಸ್ ಖಾದ್ಯ. ಅವರು ಊಟದ ಜೊತೆಗೆ ವಿವಿಧ ರೀತಿಯ ತಿಂಡಿಯೊಂದಿಗೆ ಇದನ್ನು ಸವಿಯುತ್ತಾರೆ. ಈ ತೊವ್ವೆಯಲ್ಲೂ ಹಲವು ರೀತಿಯ ವಿಧಗಳಿವೆ. ಒಂದೊಂದು ವಿಧಾನವು ಒಂದೊಂದು ಬಗೆ ರುಚಿ ನೀಡಲಿದೆ. ಹಾಗೆ ಇದನ್ನು ಮಾಡೋದು ಕೂಡ ಬಹಳ ಸುಲಭವಾಗಿರಲಿದೆ. ಇದರ ರುಚಿ ನೀವು ಒಂದು ಬಾರಿ ಸವಿದರೆ ಯಾವಾಗಲು ಇದನ್ನು ಮಾಡಿ ಸವಿಯಲು ನೀವು ಮುಂದಾಗುತ್ತೀರಿ. ಅದ್ರಲ್ಲೂ ವಿಶೇಷ ರುಚಿಯ ಈ ಪಪ್ಪು ಮಾಡುವುದು ಹೇಗೆ ಅನ್ನೋದನ್ನು ನಾವಿಂದು ತಿಳಿದುಕೊಳ್ಳೋಣ. ಉತ್ತರ ಕರ್ನಾಟಕ ಭಾಗದಲ್ಲೂ ಕೂಡ ಈ ತೊವ್ವೆ ಹೆಚ್ಚು ಬಳಕೆಯಲ್ಲಿದೆ. ರೊಟ್ಟಿಯೊಂದಿಗೆ, ಅನ್ನದೊಂದಿಗೆ ಸವಿಯಲು ಈ ತೊವ್ವೆ ಅದ್ಭುತ ರುಚಿ ನೀಡಲಿದೆ. ಹಾಗಾದ್ರೆ ಈ ತೊವ್ವೆ ಮಾಡುವುದು ಹೇಗೆ, ಮಾಡಲು ಯಾವೆಲ್ಲಾ ಪದಾರ್ಥಗಳು ಬೇಕು ಮಾಡುವ ವಿಧಾನವೇನು ಮಾಡಲು ಎಷ್ಟು ಸಮಯ ಹಿಡಿಯಲಿದೆ ಎಂಬುದನ್ನು ನಾವಿಂದು ತಿಳಿದುಕೊಳ್ಳೋಣ.

## ತೊವ್ವೆ ಮಾಡಲು ಯಾವೆಲ್ಲಾ ವಸ್ತುಗಳು ಬೇಕು?

- ಹೆಸರು ಬೇಳೆ
- ಹೀರೆಕಾಯಿ
- ಅರಶಿಣ
- ಎಣ್ಣೆ
- ಉಪ್ಪು
- ಹಸಿ ಮೆಣಸು
- ಶುಂಠಿ
- ತೆಂಗಿನಕಾಯಿ ತುರಿ
- ಜೀರಿಗೆ
- ಸಾಸಿವೆ
- ಒಣ ಮೆಣಸು
- ಕರಿಬೇವು

**ಹೆಸರು ಬೇಳೆ, ಹೀರೆಕಾಯಿ ತೊವ್ವೆ ಮಾಡುವುದು ಹೇಗೆ :** ಮೊದಲು ಕಾಲು ಕಪ್ ಹಸರು ಬೇಳೆ ತೊಳೆದುಕೊಂಡು ಅದನ್ನು ಕುಕ್ಕರ್‌ಗೆ ಹಾಕಿ ಅರಶಿಣ, ಎಣ್ಣೆ ಹಾಕಿ ಮುಚ್ಚಳ ಮುಚ್ಚಿ ಬೇಯಿಸಿಕೊಳ್ಳಬೇಕು. 2 ಸೀಟಿ ಹೊಡೆಸಿಕೊಂಡರು ಸಾಕು. ನಂತರ ಈಗ ಒಂದು ಹೀರೆಕಾಯಿಯನ್ನು ಸಣ್ಣಗೆ ಹೆಚ್ಚಿಕೊಂಡು ಅದನ್ನು ಕೂಡ ಕುಕ್ಕರ್‌ಗೆ ಹಾಕಿ, ಬಳಿಕ ಉಪ್ಪು, ಹಸಿ ಮೆಣಸು, ಶುಂಠಿ, ಮುಚ್ಚುವಷ್ಟು ನೀರು ಹಾಕಿ ಮತ್ತೆ ಬೇಯಲು ಬಿಡಿ. ಸೀಟಿ ಹೊಡೆಸಿಕೊಳ್ಳುವ ಅಗತ್ಯವಿಲ್ಲ. ಈಗ ಒಂದು ಮಿಕ್ಸಿ ಜಾರ್‌ನಲ್ಲಿ ತೆಂಗಿನಕಾಯಿ ತುರಿ, ಸಾಸಿವೆ, ನೀರು ಹಾಕಿಕೊಂಡು ನುಣ್ಣಗೆ ರುಬ್ಬಿಕೊಳ್ಳಬೇಕು. ಈಗ ಹೀರೆಕಾಯಿ ಚೆನ್ನಾಗಿ ಕುದಿಬಂದು ಬೆಂದ ಬಳಿಕ ಈ ರುಬ್ಬಿಕೊಂಡಿದ್ದ ಪೇಸ್ಟ್ ಅನ್ನು ಇದಕ್ಕೆ ಹಾಕಿ ಸ್ವಲ್ಪ ನೀರು ಹಾಕಿ ಮಿಕ್ಸ್ ಮಾಡಿಕೊಂಡು ಕುದಿಯಲು ಬಿಡಬೇಕು. ಬಹಳ ತೆಳುವಾಗಿ ಮಾಡಿಕೊಳ್ಳಬೇಡಿ, ಹಾಗೆ ದಪ್ಪವೂ ಮಾಡಬೇಡಿ. ಕುದಿಬರಲು ಬಿಡಬೇಕು. ಆಗಾಗ ಮಿಕ್ಸ್ ಮಾಡುತ್ತಾ ಇರಿ. 5 ನಿಮಿಷ ಕುದಿ ಬಂದ ಬಳಿಕ ಒಲೆ ಆಫ್ ಮಾಡಿಕೊಳ್ಳಿ. ಈಗ ಬಾಣಲೆ ಒಲೆ ಮೇಲೆ ಇಟ್ಟು ಅದಕ್ಕೆ ಎಣ್ಣೆ, ಕರಿಬೇವು, ಸಾಸಿವೆ, ಜೀರಿಗೆ, ಒಣ ಮೆಣಸು ಹಾಕಿ ಒಂದು ಒಗ್ಗರಣೆ ರೆಡಿ ಮಾಡಿಕೊಂಡು ಈ ತೊವ್ವೆಗೆ ಹಾಕಿ ಮಿಕ್ಸ್ ಮಾಡಿಕೊಂಡರೆ ಮುಗೀತು. ಇಷ್ಟಾದರೆ ನಿಮ್ಮ ಮುಂದೆ ಹೀರೆಕಾಯಿ ಹೆಸರು ಬೇಳೆ ತೊವ್ವೆ ರೆಡಿಯಾಗುತ್ತದೆ. ನೀವು ಕೂಡ ಮನೆಯಲ್ಲಿ ಊಟಕ್ಕೆ, ತಿಂಡಿಗೆ ಇದನ್ನು ಮಾಡಿ ಸವಿದು ನೋಡಿ. ಇದರಿಂದ ನಿಮ್ಮ ಊಟದ ರುಚಿ ಇನ್ನಷ್ಟು ಹೆಚ್ಚಾಗೋದು ಖಚಿತ.



# ಗಿರಿನಾಡು ಯಾದಗಿರಿ ಜಿಲ್ಲೆಗೆ ವಿಶೇಷ ಸದಸ್ಯ ಸ್ಥಾನಮಾನ ನೀಡುವಂತೆ ಆಗ್ರಹ

• ಉದಯವಾಹಿನಿ, ಯಾದಗಿರಿ

ಜಿಲ್ಲೆಯ ಮೂಲತ ನಿವಾಸಿಯರಿಗೆ ಕರ್ನಾಟಕ ರಾಜ್ಯ ಹಜ್ ಸಮಿತಿಯಲ್ಲಿ ವಿಶೇಷ ಸದಸ್ಯ ಸ್ಥಾನಮಾನ ನೀಡುವಂತೆ ಮಲ್ಲೆಸ್ ರೆಹಬರ್-ಎ- ಹುಜ್ಜಾಜ್ ಯಾದಗಿರಿ ಟ್ರಸ್ಟ್ ವತಿಯಿಂದ ವಸತಿ ಸಚಿವರಾದ ಬಿ.ಜೆಡ್. ಜಮೀರ್ ಅಹ್ಮದ್ ಖಾನ್ ಇವರಿಗೆ ಮನವಿ ಸಲ್ಲಿಸಲಾಯಿತು. ಮನವಿ ಸಲ್ಲಿಸಿ ಮಾತನಾಡಿದ ಟ್ರಸ್ಟ್ ಅಧ್ಯಕ್ಷರಾದ ಹಾಫಿಜ್, ಶೇಕ್ ಫರೀದುದ್ದೀನ್, ಯಾದಗಿರಿ ಜಿಲ್ಲೆಯ ಹಜ್ ಯಾತ್ರಿಕರ ಒಟ್ಟಾರೆ ಸಂಖ್ಯೆ ವರ್ಷದಿಂದ ವರ್ಷಕ್ಕೆ ಸ್ಪಷ್ಟವಾಗಿ ಹೆಚ್ಚಾಗುತ್ತಿದೆ. ಇಂದಿಗೂ ನಮ್ಮ ಜಿಲ್ಲೆಗೆ ರಾಜ್ಯ ಹಚ್ ಸಮಿತಿಯಲ್ಲಿ ಯಾವುದೇ ಅಧಿಕೃತ ಪ್ರತಿನಿಧಿತ್ವ ದೊರಕದಿರುವುದಿಲ್ಲ ವಿಷಾದಕರ ವಿಷಯವಾಗಿದೆ. ಯಾದಗಿರಿಯಿಂದ ಹಜ್ ಯಾತ್ರಿಕರ ಅನುಭವದಲ್ಲಿ


ಉದಯವಾಹಿನಿ ಚಿತ್ರ

ಹಲವು ಅಡಚಣೆಗಳನ್ನು ತರುತಿದು ಮಾರ್ಗದರ್ಶನ ಮತ್ತು ಸಹಾಯದಲ್ಲಿ ಲೋಪ ಉಂಟಾಗುತ್ತಿದೆ. ಹಜ್ ಯಾತ್ರಿಕರಿಗೆ ಯಾವುದೇ ತೊಂದರೆ ಆಗದಂತೆ ಎಲ್ಲಾ ರೀತಿಯ ಸೌಲಭ್ಯ ಹಾಗೂ ನಿಖರ ಮಾಹಿತಿ ಲಭ್ಯವಾಗುವಂತೆ ಸೂಕ್ತಕ್ರಮ ಕೈಗೊಳ್ಳಬೇಕು, ಇದರಿಂದ ಜಿಲ್ಲೆಯ ಯಾತ್ರಿಕರಿಗೆ ಉತ್ತಮ ಸಂವಹನ ಸಮನ್ವಯ ಹಾಗೂ ನಿರ್ವಹಣಾ ಸಹಾಯ ದೊರಕಲಿದೆ. ಇದಲ್ಲದೆ ಸಮಿತಿಯು ಎಲ್ಲಾ ಜಿಲ್ಲೆಗಳ ಸಮಾನ ಪ್ರತಿನಿಧಿತ್ವವನ್ನು ಸಮಾನವಾಗಿ ಅನುಸರಿಸುವ ಅವಕಾಶ ಪ್ರಾಪ್ತವಾಗುತ್ತದೆ ಎಂದು ಹೇಳಿದರು. ಈ ಸಂಧರ್ಭದಲ್ಲಿ ಬಿ.ಜೆಡ್. ನಾಲತವಾಡ, ಹಾಫಿಜ್ ಜೂಬೇರ್, ಮಹಿಬೂಬ್ ಪಾಷಾ, ಶಫೀಕ್ ದಫೇದಾರ್, ಇತರರು ಹಾಜರಿದ್ದರು.



**ವಿಶೇಷ ಬೇಡಿಕೆಗಳು**

- ಯಾದಗಿರಿ ಜಿಲ್ಲೆಗಾಗಿ ರಾಜ್ಯ ಹಜ್ ಸಮಿತಿಯಲ್ಲಿ ಒಂದು ಸ್ಥಾಯಿ ಸದಸ್ಯ ಸ್ಥಾನ ನೀಡಬೇಕು.
- ಯಾದಗಿರಿ ಜಿಲ್ಲೆಯ ಹಜ್ ಯಾತ್ರಿಕರಿಗೆ ಸ್ಥಳೀಯವವಾಗಿ ಲಭ್ಯವಿರುವ ಲಸಿಕೆ ತಯಾರಿ ವ್ಯವಸ್ಥೆ ಕಲ್ಪಿಸಬೇಕು.
- ಯಾದಗಿರಿ ಜಿಲ್ಲೆಯ ಯಾತ್ರಿಕರಿಗೆ ಒಂದು ಸಂತೃಪ್ತ ಸೇವಾ ಅನುಭವಕ್ಕಾಗಿ ಸಮಾನ ವಿಮಾನ ಮತ್ತು ವಸತಿ ವ್ಯವಸ್ಥೆ ನೀಡಬೇಕು.

## ಬಿಜೆಪಿ ಕಾರ್ಯಕರ್ತರ ಮೇಲೆ ಪ್ರಿಯಾಂಕ್ ದಬ್ಬಾಳಿಕೆ ಬಾಬುರಾವ್ ಚವ್ಹಾಣ ಆರೋಪ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಚಿತ್ತಾಪುರ

ಚಿತ್ತಾಪುರ ಮತಕ್ಷೇತ್ರದಲ್ಲಿ ಬಿಜೆಪಿ ಕಾರ್ಯಕರ್ತರನ್ನು ಹತ್ತಿಕ್ಕಲು ಸಚಿವ ಪ್ರಿಯಾಂಕ್ ಖರ್ಗೆ ದಬ್ಬಾಳಿಕೆ ಮಾಡುತ್ತಿದ್ದಾರೆ. ಪೊಲೀಸ್ ಕೇಸ್ ಹಾಕಿಸಿ ಕ್ಷೇತ್ರದತ್ತ ಬರದಂತೆ ಮಾಡುತ್ತಿದ್ದಾರೆ. ಮತಕ್ಷೇತ್ರದಲ್ಲಿ ಭಯದ ವಾತಾವರಣ ನಿರ್ಮಿಸುತ್ತಿದ್ದಾರೆ ಎಂದು ಬಿಜೆಪಿ ಮುಖಂಡ ಬಾಬುರಾವ್ ಚವ್ಹಾಣ ಅವರು ಆರೋಪಿಸಿದರು. ಪಟ್ಟಣದ ಬಾಪುರಾವ್ ಕಲ್ಯಾಣ ಮಂಟಪದಲ್ಲಿ ನಡೆದ ಬಿಜೆಪಿ ಪದಾಧಿಕಾರಿಗಳ ಪದಗ್ರಹಣ, ಸನ್ಮಾನ ಹಾಗೂ ಬೂತ್ ಮಟ್ಟದ ಅಧ್ಯಕ್ಷರ ಅಭಿನಂದನಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಅಧಿಕಾರ, ರಾಜಕೀಯ ಶಾಶ್ವತವಲ್ಲ ಎಂದು ಪ್ರಿಯಾಂಕ್ ಅವರು ತಿಳಿದುಕೊಳ್ಳಬೇಕು. ಮುಂದಿನ ಚುನಾವಣೆಯಲ್ಲಿ ಪ್ರಿಯಾಂಕ್ ಅವರ ಸೋಲು ಖಚಿತ ಎಂದರು. ದಬ್ಬಾಳಿಕೆಗೆ ಕಾರ್ಯಕರ್ತರು ಹೆದರಬಾರದು. ನಿಮ್ಮ ಏನೇ ಸಮಸ್ಯೆ, ತೊಂದರೆ ಇದ್ದರೆ ನಡುರಾತ್ರಿಯಲ್ಲೂ ಕರೆ ಮಾಡಿ ತಿಳಿಸಿ. ನಿಮ್ಮೊಂದಿಗೆ ಪಕ್ಷ ಸದಾ ಇರಲಿದೆ. ಮುಂಬರುವ ಜಿಲ್ಲಾ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿ ಚುನಾವಣೆಗೆ ಕಾರ್ಯಕರ್ತರು ಸಿದ್ಧರಾಗಬೇಕು. ಈಗಲೇ ಸೂಕ್ತ ಅಭ್ಯರ್ಥಿಯನ್ನು ಗುರುತಿಸುವ ಕೆಲಸ ಆರಂಭಿಸಬೇಕು ಎಂದರು.

ಕಲಬುರಗಿ ಗ್ರಾಮೀಣ ಕ್ಷೇತ್ರದ ಶಾಸಕ ಬಸವರಾಜ ಮತ್ತಿಮಡು ಮಾತನಾಡಿ, ವಿಧಾನಸಭೆ ಅಧಿವೇಶನ ಮುಗಿದ ನಂತರ ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಚುನಾವಣೆ ಘೋಷಣೆಯಾಗಲಿದೆ. ಬರುವ ದಿನಗಳಲ್ಲಿ ಸಮರ್ಥ ನಾಯಕತ್ವ ನೀಡುವವರು ಕ್ಷೇತ್ರಕ್ಕೆ ಬರಲಿದ್ದಾರೆ. ಬಿಜೆಪಿ ಬಾವುಟ ಹಾರಲಿದೆ ಎಂದರು. ನೂತನ ಮಂಡಲ ಅಧ್ಯಕ್ಷ ರವೀಂದ್ರ ಸಜ್ಜನಶೆಟ್ಟಿ ಅವರಿಗೆ ನಿಕಟಪೂರ್ವ ಅಧ್ಯಕ್ಷ ನೀಲಕಂಠ ಪಾಟೀಲ ಪಕ್ಷದ ಧ್ವಜ ನೀಡಿ ಅಧಿಕಾರ ಹಸ್ತಾಂತರಿಸಿದರು.

# ಅಸಂಘಟಿತ ಕಾರ್ಮಿಕರಿಗೆ ಆರ್ಥಿಕ ಶಕ್ತಿ

## ಸ್ಮಾರ್ಟ್ ಕಾರ್ಡ್ ವಿತರಣೆ: ಕಾರ್ಮಿಕ ಸಚಿವ ಸಂತೋಷ ಲಾಡ್

• ಉದಯವಾಹಿನಿ, ಬಾಗಲಕೋಟೆ

ಶೇ 85ರಷ್ಟು ಕಾರ್ಮಿಕರು ಅಸಂಘಟಿತರಾಗಿದ್ದು, ಅವರಿಗೆ ಸರ್ಕಾರದಿಂದ ಸೌಲಭ್ಯ ಒದಗಿಸುವ ಕೆಲಸ ಮಾಡಲಾಗುತ್ತಿದೆ ಎಂದು ಕಾರ್ಮಿಕ ಸಚಿವ ಸಂತೋಷ ಲಾಡ್ ಹೇಳಿದರು. ನವನಗರದ ಕಲಾಭವನದಲ್ಲಿ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ, ಸಾರಿಗೆ ಇಲಾಖೆ, ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ವಿವಿಧ ವರ್ಗಗಳ ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ, ವಿವಿಧ ಯೋಜನೆಗಳ ಕುರಿತು ಅರಿವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಅಸಂಘಟಿತ ವಲಯದ ಕಾರ್ಮಿಕರು ಸಾಮಾಜಿಕ, ಆರ್ಥಿಕವಾಗಿ ದುರ್ಬಲರಾಗಿದ್ದು, ಸೌಲಭ್ಯಗಳಿಂದ ವಂಚಿತರಾಗಿದ್ದಾರೆ. ಅಂತಹ ಕಾರ್ಮಿಕರಿಗೆ ಸಾಮಾಜಿಕ ಭದ್ರತಾ ಸೌಲಭ್ಯ ಒದಗಿಸಲಾಗುವುದು ಎಂದರು.

**ಐದು ಲಕ್ಷ ಪರಿಹಾರ**

ದೇಶದಲ್ಲಿ ತಾಸಿಗೆ 20 ಅಪಘಾತಗಳು ಸಂಭವಿಸುತ್ತವೆ. ಅಪಘಾತದಲ್ಲಿ ಮೃತರಾಗುವ ಕಾರ್ಮಿಕರ ಕುಟುಂಬಕ್ಕೆ 5 ಲಕ್ಷ ಪರಿಹಾರ ನೀಡಲಾಗುವುದು. ಕಾರ್ಮಿಕರಿಗೆ ಸೌಲಭ್ಯಗಳನ್ನು ಒದಗಿಸಲು ಹೊಸದಾಗಿ ಮೂರು ಕಾನೂನು ರಚಿಸಲಾಗಿದೆ' ಎಂದು ಹೇಳಿದರು. 25 ಲಕ್ಷ ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ ಮಾಡಲಾಗಿದೆ. ಅಂಬೇಡ್ಕರ್


ಉದಯವಾಹಿನಿ ಚಿತ್ರ

> ಕೇಂದ್ರ, ರಾಜ್ಯದ ಜನಪ್ರತಿನಿಧಿಗಳು ಮನೆಯಿಂದ ಹಣ ತಂದು ಕೊಡುವುದಿಲ್ಲ. ನಿಮ್ಮ ಹಣವನ್ನೇ ನಿಮಗೇ ನೀಡಲಾಗುತ್ತಿದೆ. ಕೇಂದ್ರದಲ್ಲಿ ಕಾಂಗ್ರೆಸ್ ಇದ್ದಾಗ ನರೇಗಾ, ಆರ್‌ಟಿಐ, ಆರ್‌ಟಿಇ ಸೇರಿದಂತೆ ಹಲವು ಜನಪರ ಯೋಜನೆಗಳನ್ನು ಜಾರಿಗೆ ತಂದಿದೆ. ಯಾವ ಸರ್ಕಾರದಿಂದ ಲಾಭ ಆಗಿದೆ ಎಂಬುದನ್ನು ಜನರು ಗಮನಿಸಬೇಕು.
> -ಸಂತೋಷ ಲಾಡ್, ಕಾರ್ಮಿಕ ಸಚಿವ

ಕಾರ್ಮಿಕರ ಸಹಾಯಹಸ್ತ, ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ, ರಾಜ್ಯ ಗಿಗ್ ಕಾರ್ಮಿಕರ ವಿಮಾ ಯೋಜನೆ ಸೇರಿದಂತೆ ಹಲವು ಸೌಲಭ್ಯಗಳನ್ನು ಕಲ್ಪಿಸಲಾಗುತ್ತಿದೆ ಎಂದರು. ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪುರ ಮಾತನಾಡಿ, ಬೆವರು ಸುರಿಸಿ ಆಸ್ತಿವಂತರನ್ನಾಗಿ ಮಾಡಿದ ಕಾರ್ಮಿಕರು ಆರ್ಥಿಕ, ಸಾಮಾಜಿಕ ನೋವು ಅನುಭವಿಸುತ್ತಿದ್ದಾರೆ. ಸ್ವಾಭಿಮಾನದ ಬದುಕು ಕಟ್ಟಿಕೊಡುವ ಕೆಲಸವನ್ನು ಸರ್ಕಾರ

> ವಿವಿಧ ವಲಯಗಳಲ್ಲಿ ಕೆಲಸ ಮಾಡುತ್ತಿರುವ ಕಾರ್ಮಿಕರಿಗೆ ಶಕ್ತಿ ತುಂಬುವ ಕೆಲಸ ಮಾಡಲಾಗುತ್ತಿದೆ. ಯೋಜನೆಗಳ ಸದುಪಯೋಗವನ್ನು ಕಾರ್ಮಿಕರು ಪಡೆದುಕೊಂಡಾಗಲೇ ಸರ್ಕಾರ ಯೋಜನೆಗಳು ಸಫಲವಾಗುತ್ತವೆ.
> - ಆರ್.ಬಿ.ತಿಮ್ಮಾಪುರ ಜಿಲ್ಲಾ ಉಸ್ತುವಾರಿ ಸಚಿವ

ಮಾಡುತ್ತಿದೆ ಎಂದರು

ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯ ಜಂಟಿ ಕಾರ್ಯದರ್ಶಿ ಎಸ್.ಬಿ. ರವಿಕುಮಾರ ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ಕಾರ್ಮಿಕರಿಗೆ ಸಾಂಕೇತಿಕವಾಗಿ ಸ್ಮಾರ್ಟ್ ಕಾರ್ಡ್‌ಗಳನ್ನು ಹಾಗೂ ಚೆಕ್‌ಗಳನ್ನು ವಿತರಿಸಲಾಯಿತು.

**ಸಾಮಾನ್ಯ ವಸ್ತುಗಳ ಮೇಲೆಯೂ ಜಿಎಸ್‌ಟಿ:** ಕುಂಕುಮ, ಕರ್ಪೂರ, ಊದಿನಕಡ್ಡಿ, ಮೊಸರು ಸೇರಿದಂತೆ ಎಲ್ಲಾ ವಸ್ತುಗಳ ಮೇಲೆಯೂ ಕೇಂದ್ರ ಜಿಎಸ್‌ಟಿ ವಿಧಿಸಿದೆ. ಖಾತೆ ಹೊಂದಿರದಿದ್ದರೂ ಬಡವರು ತೆರಿಗೆ ಪಾವತಿಸಬೇಕಾಗಿದೆ ಎಂದು ಸಚಿವ ಸಂತೋಷ ಲಾಡ್ ಟೀಕಿಸಿದರು. ದೇಶದ ಶೇ 1ರಷ್ಟು ಜನರು ಶೇ 50ರಷ್ಟು ಆಸ್ತಿ ಹೊಂದಿದ್ದಾರೆ. ಕೇಂದ್ರದಲ್ಲಿ ಬಿಜೆಪಿ ಸರ್ಕಾರ ಬಂದ ಮೇಲೆ ದೇಶದ ಸಾಲ ನಾಲ್ಕುಪಟ್ಟು ಹೆಚ್ಚಾಗಿದೆ ಎಂದು ವಾಗ್ದಾಳಿ ನಡೆಸಿದರು.

## ಕುರಿಗಾಹಿ ಗಳಿಗೆ ದ್ರೋಹ; ಆದೇಶ ಹಿಂಪಡೆಯಲು ಆಗ್ರಹ

• ಉದಯವಾಹಿನಿ, ಚಿಂಚೋಳಿ

ಬೆಟ್ಟ,ಗುಡ್ಡ ಕಾಡುಗಳಲ್ಲಿ ಕುರಿ ಮೇಕೆ ಧನಕರುಗಳು ಪ್ರಾಚೀನ ಕಾಲದಿಂದಲೂ ಮೇಯಿಸಿಕೊಂಡು ಬರುವ ಕುರಿಗೈಗಳಿಗೆ ರಾಜ್ಯ ಸರ್ಕಾರ ಏಕಾಏಕಿ ಅರಣ್ಯ ಪ್ರದೇಶದಲ್ಲಿ ಧನಕರುಗಳು ಕುರಿ ಮೇಕೆಗಳು ಮೇಯಿಸುವುದು ನಿಷೇಧ ಮಾಡಿರುವುದು ಕುರಿಗೈಗಳಿಗೆ ದ್ರೋಹ ಮಾಡಿದಂತೆ ಶೀಘ್ರದಲ್ಲೇ ಸರ್ಕಾರ ಎಚ್ಚೆತ್ತುಕೊಂಡು ಆದೇಶ ಹಿಂಪಡೆಯಬೇಕು ಎಂದು ಹೋರಾಟಗಾರ ಗೋಪಾಲ ಪೂಜಾರಿ ಗಾರಂಪಳ್ಳಿ ಆಗ್ರಹಿಸಿದರು.

ಪಟ್ಟಣದ ತಹಶೀಲ್ ಕಾರ್ಯಾಲಯ ಎದುರುಗಡೆ ಆದಿವಾಸಿ ಅಲೆಮಾರಿ ಅಸಂಘಟಿತ ಬುಡಕಟ್ಟು ಮೂಲನಿವಾಸಿ ಸಂಚಾರಿ ಕುರಿಗಾಯಿಗಳ ಹೋರಾಟ ಸಮಿತಿ ಮತ್ತು ಕರ್ನಾಟಕ ಪ್ರದೇಶ ಗೊಂಡ ಕುರುಬರ ಸಂಘದ ವತಿಯಿಂದ ರಾಜ್ಯದ ಅರಣ್ಯ ಪ್ರದೇಶಗಳಲ್ಲಿ ಧನಕರುಗಳು ಕುರಿ ಮೇಕೆ ಮೇಯಿಸುವುದು ನಿಷೇಧ ಹಿಂಪಡೆಯುವಂತೆ ಒತ್ತಾಯಿಸಿ ಸಾವಿರಾರು ಕುರಿಗಳೊಂದಿಗೆ ಪ್ರತಿಭಟನೆ ನಡೆಸಿ ತಹಶೀಲ್ದಾರ್ ಮೂಲಕ ಸರ್ಕಾರಕ್ಕೆ ಮನವಿಪತ್ರ ಸಲ್ಲಿಸಿ ಮಾತನಾಡಿದ ಅವರು, ಪ್ರಾಚೀನ ಬುಡಕಟ್ಟು ಮೂಲನಿವಾಸಿ ಅಲೆಮಾರಿ ಸಂಚಾರಿ ಕುರಿಗೈಗಳು ನಿತ್ಯ ಕಾಯಕದೊಂದಿಗೆ ಕುರಿ ಮೇಕೆ ಧನಗಳೊಂದಿಗೆ ಅಡವಿ, ಬೆಟ್ಟ ಕಾಡಿಗೆ ಹೋಗಿ, ಒಂದು ಸ್ಥಳದಿಂದ ಮತ್ತೊಂದು ಸ್ಥಳಕ್ಕೆ


ಉದಯವಾಹಿನಿ ಚಿತ್ರ

ಮೇವಿಗಾಗಿ ಸ್ಥಳದಿಂದ ಮತ್ತೊಂದು ಪ್ರದೇಶಕ್ಕೆ ಹೋಗಿ ಜೀವನವನ್ನು ನಡೆಸುತ್ತಿದ್ದಾರೆ ಇದರ ಮಧ್ಯೆ ರಾತ್ರಿ ಕುರಿಗಳು ಹಾಕಿರುವಂತ ಕುರಿದೊಡ್ಡಿಗೆ ಕಳ್ಳರು ನುಗ್ಗಿ ಕುರಿಗಳನ್ನು ಕಳ್ಳತನ ಮಾಡಿ ಕಳ್ಳರಿಗೆ ತಡೆಯಲು ಹೋದರೆ ಅದೆಷ್ಟು ಕುರಿಗಾಯಿಗಳ ಮೇಲೆ ಹಲ್ಲೆ,ಹತ್ಯೆ ಕೂಡ ಆಗಿವೆ, ಕುರಿಗಾಯಿಗಳ ಹಿತರಕ್ಷಣೆ ಕಾನೂನು ಜಾರಿಗೆಗೋಳಿಸಿ ಸರಕಾರ ಸಾಮಾಜಿಕ ಭದ್ರತೆ ಒದಗಿಸಬೇಕು. ಈ ಸಂದರ್ಭದಲ್ಲಿ ಕುರುಬ ಸಮಾಜದ ಅಧ್ಯಕ್ಷ ಹಣಮಂತ ಕೆ.ಪೂಜಾರಿ, ರೇವಣಸಿದ್ದಪ್ಪ ಅಣಕಲ್, ಜಗನ್ನಾಥ, ಶಿವಕುಮಾರ, ಕುಪ್ಪಣ್ಣ, ಹಣಮಂತ, ಜಗನ್ನಾಥ, ಮಹಾದೇವಪ್ಪ ಪೂಜಾರಿ, ಜಗನ್ನಾಥ ದಸ್ತಪುರ, ರವೀಂದ್ರ ಪೂಜಾರಿ, ತುಳಜಪ್ಪ ತಿಪ್ಪೆಗೊಂಡ, ನಾಗಪ್ಪ ಚಂದಾಪುರ, ರಂಗಣ್ಣ ಪೂಜಾರಿ, ರೇವಣಸಿದ್ದಪ್ಪ ಪೋಲಕಪಳ್ಳಿ, ಸೂರ್ಯಕಾಂತ ಪೂಜಾರಿ, ಶಿವಕುಮಾರ ಪೂಜಾರಿ,

> ರಾಜ್ಯದ ಅರಣ್ಯ ಸಚಿವ ಈಶ್ವರ್ ಖಂಡ್ರೆಯವರು ಎಲ್ಲಾ ಜಿಲ್ಲೆಯ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ ಅರಣ್ಯ ಪ್ರದೇಶದಲ್ಲಿ ಕುರಿ ಮೇಲೆ ದನಗಳಿಗೆ ಮೇಯಿಸಲು ತಡೆಯುವಂತೆ ಸೂಚಿಸಿರುವ ಆದೇಶವನ್ನು ಕೂಡಲೇ ಹಿಂಪಡೆಯಬೇಕು, 2024-25ನೇ ಬಜೆಟ್‌ನಲ್ಲಿ ಕುರಿಗೈಗಳ ಹಿತರಕ್ಷಣಾ ಕಲ್ಯಾಣ ವಿದಾಯಕ ಜಾರಿಗೊಳಿಸಿತ್ತು ಆದರೆ ಇಲ್ಲಿಯವರೆಗೆ ಕಾನೂನು ರೂಪದಲ್ಲಿ ಜಾರಿಗೊಳಿಸಿಲ್ಲ ಶೀಘ್ರವೇ ಜಾರಿಗೊಳಿಸಬೇಕು, ರಾಜ್ಯದ ಎಲ್ಲಾ ಜಿಲ್ಲೆ ತಾಲ್ಲೂಕಾ ಗ್ರಾಮೀಣ ಪ್ರದೇಶಗಳಲ್ಲಿ ಗೋಮಾಳ ಗೈರಾಣಿ ಭೂಮಿಯನ್ನು ಸಂರಕ್ಷಿಸಬೇಕು, ಕುರಿಗೈಗಳಿಗೆ ಆತ್ಮರಕ್ಷಣೆಗಾಗಿ ಪೋಲಿಸ್ ಇಲಾಖೆಯಿಂದ ಬಂದೂಕು ತರಬೇತಿ ನೀಡಬೇಕು ಎಂದರು.

ಮೌನೇಶ, ಮೋಹನ್ ಐನಾಪೂರ, ಗಿರಿಮಲಪ್ಪ ಬಿ ಹಸರಗುಂಡಗಿ, ಗುಂಡಪ್ಪ ಪೂಜಾರಿ, ರೇವಣಸಿದ್ದಪ್ಪ ಇದ್ದರು.

## ಅಮೃತ 2.0 ಯೋಜನೆ: 47ಕಿಮೀ ಕಾಮಗಾರಿ ಪೂರ್ಣ

• ಉದಯವಾಹಿನಿ, ನರೇಗಲ್

ಸ್ಥಳೀಯ ಪಟ್ಟಣ ಪಂಚಾಯಿತಿ ಸಭಾಭವನದಲ್ಲಿ ಅಧ್ಯಕ್ಷ ಫಕೀರಪ್ಪ ಮಳ್ಳಿ ಅವರ ಅಧ್ಯಕ್ಷತೆಯಲ್ಲಿ ವಿಶೇಷ ಸಾಮಾನ್ಯ ಸಭೆ ನಡೆಸಲಾಯಿತು. ಸಭೆಯಲ್ಲಿ 15ನೇ ಹಣಕಾಸು ಹಾಗೂ ಎಸ್‌ಎಫ್‌ಸಿ ಯೋಜನೆ ಅಡಿಯಲ್ಲಿ ಪಟ್ಟಣ ಪಂಚಾಯಿತಿ ಕಾರ್ಯಾಲಯದಲ್ಲಿ ಭಾರತೀಯ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ನೂತನ ಶಾಖೆಗೆ ಬಾಡಿಗೆ ನೀಡುವುದು ಹಾಗೂ ಖಾಸಗಿ ಮಾಲಿಕತ್ವದ ಬಡಾವಣೆಗಳಿಗೆ ಅಮೃತ 2.0 ಯೋಜನೆಯಡಿ ನಿರಂತರ ನೀರು ಪೂರೈಸುವ ಕುರಿತು ಚರ್ಚಿಸಲಾಯಿತು.

ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಕಾರ್ಯಪಾಲಕ ಅಭಿಯಂತರ ಜಗದೀಶ ಹೊಸಮನಿ ಮಾತನಾಡಿ, ಪಟ್ಟಣದ 57ಕಿಮೀ ವ್ಯಾಪ್ತಿಯಲ್ಲಿ ನಳ ಜೋಡಣೆ ಮಾಡಲಾಗುತ್ತಿದ್ದು, ಈಗಾಗಲೇ ಶೇ 90 ರಷ್ಟು ಕಾಮಗಾರಿ ಪೂರ್ಣಗೊಂಡಿದೆ. ನೀರು ಪೂರೈಕೆಗೆ ಅಗತ್ಯವಿರುವ ಮೊತ್ತವನ್ನು ಪಟ್ಟಣ ಪಂಚಾಯಿತಿ ಸಂಗ್ರಹಿಸಿ ನೀಡಬೇಕಾಗುತ್ತದೆ. ಜಿಗಳೂರು ಕೆರೆಯಿಂದಬರುವ ನೀರು ಸಂಗ್ರಹಕ್ಕೆ ಟ್ಯಾಂಕ್ ಅಗತ್ಯವಿದ್ದು, ದುರಸ್ತಿ ಅನಿವಾರ್ಯವಿದೆ ಎಂದರು. ಪಟ್ಟಣದ ಚರಂಡಿ ನೀರು ಹರಿದು ಹೋಗುವ ಮಾರ್ಗದ ವ್ಯಾಪ್ತಿಯಲ್ಲಿ ಅಂದಾಜು 4 ಎಕರೆ ಭೂಮಿ ನೀಡಿದರೆ ಚರಂಡಿ ನೀರು ಶುದ್ಧಿಕರಣ ಘಟಕ ಸ್ಥಾಪಿಸಲಾಗುತ್ತದೆ ಎಂದರು. ಪಟ್ಟಣದಲ್ಲಿ 30 ವರ್ಷದಿಂದ ನೀರಿನ ತೆರಿಗೆ ಸಂಗ್ರಹ ಮಾಡಿಲ್ಲ. ಆದಕಾರಣ ಪರ್ಯಾಯ ಮಾರ್ಗವಾಗಿ


ಉದಯವಾಹಿನಿ ಚಿತ್ರ

> 2001ರ ನಂತರ ನಿರ್ಮಾಣ ಮಾಡಲಾದ ನಿವೇಶನಗಳಿಗೆ ಮಾಲಿಕರೆ ಮೂಲಸೌಲಭ್ಯ ಒದಗಿಸಬೇಕು. ಇಲ್ಲವಾದಲ್ಲಿ ಪರವಾನಿಗೆ ರದ್ದು ಪಡಿಸಬೇಕು.
> -ಜಗದೀಶ ಹೊಸಮನಿ ಕೆಯುಡಬ್ಲೂಎಸ್ ಕಾರ್ಯಪಾಲಕ ಅಭಿಯಂತರ

ಅಂದಾಜು ತೆರಿಗೆ ಸಂಗ್ರಹಿಸಿ ಸಕ್ರಮಗೊಳಿಸಬೇಕು. ಹೊಸದಾಗಿ ಸಂಪರ್ಕ ಪಡೆಯುವವರಿಗೆ ನಿಯಮಗಳ ಅನುಸಾರ ತೆರಿಗೆ ಸಂಗ್ರಹಕ್ಕೆ ಮುಂದಾಗಬೇಕು ಎಂದು ಸದಸ್ಯ ದಾವುದ್ ಅಲಿ ಕುದರಿ ಸಲಹೆ ನೀಡಿದರು.

**ಹಂದಿಗಳನ್ನು ಸಾಗಿಸುವಂತೆ ಮಾಲಿಕರಿಗೆ ಎಚ್ಚರಿಕೆ:** ನರೇಗಲ್ ಪಟ್ಟಣ ಹಾಗೂ ಸುತ್ತಮುತ್ತಲಿನ ಜಮೀನುಗಳಿಗೆ ಹಂದಿಗಳ ಹಾವಳಿ ಅತಿಯಾದ ಕಾರಣ ಮಾಲಿಕರಿಗೆ ಶನಿವಾರದ ಒಳಗೆ ಸೆರೆಹಿಡಿಯುವಂತೆ ಸೂಚಿಸಿದರು.ಇಲ್ಲವಾದಲ್ಲಿ ಪಟ್ಟಣ ಪಂಚಾಯಿತಿ ವತಿಯಿಂದ ಪ್ರಕರಣ ದಾಖಲಿಸಲಾಗುತ್ತದೆ ಎಂದು ಸದಸ್ಯರು ಎಚ್ಚರಿಕೆ ನೀಡಿದರು.

## 2,500 ಬಾಲಕಿಯರಿಗೆ ಎಚ್‌ಪಿವಿ ಲಸಿಕೆ ಗುರಿ

• ಉದಯವಾಹಿನಿ, ಧಾರವಾಡ

ರೋಟರಿ ಕ್ಲಬ್ ಆಫ್ ಧಾರವಾಡ ಸೆಂಟ್ರಲ್ ವತಿಯಿಂದ ತಾಲ್ಲೂಕಿನ ರಾಮಾಪುರದಲ್ಲಿ ಆಗಸ್ಟ್ 1ರಂದು ಎಚ್‌ಪಿವಿ ಲಸಿಕೆ ಕಾರ್ಯಕ್ರಮ ಆರಂಭಿಸಲಾಗುವುದು ಎಂದು ಯೋಜನೆ ಸಂಯೋಜಕ ಡಾ.ಕವನ್ ದೇಶಪಾಂಡೆ ತಿಳಿಸಿದರು. ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಗರ್ಭಪಾಶಿ ಕ್ಯಾನ್ಸರ್ ತಡೆ ನಿಟ್ಟಿನಲ್ಲಿ ರೋಟರಿ ಸೆಂಟ್ರಲ್ ವತಿಯಿಂದ 36 ಲಕ್ಷ ವೆಚ್ಚದಲ್ಲಿ ಗ್ರಾಮೀಣ ಪ್ರದೇಶದ 2,500 ಬಾಲಕಿಯರಿಗೆ ಎಚ್‌ಪಿವಿ ಲಸಿಕೆ ನೀಡುವ ಯೋಜನೆ ಘೋಷಿಸಲಾಗಿದೆ. ಯೋಜನೆಯನ್ನು ಕಾರ್ಯಗತಗೊಳಿಸುವ ಜವಾಬ್ದಾರಿಯನ್ನು ಫ್ಯಾಮಿಲಿ ಫ್ಲ್ಯಾನಿಂಗ್ ಅಸೋಸಿಯೇಷನ್ ಆಫ್ ಇಂಡಿಯಾ ನಿರ್ವಹಿಸಲಿದೆ. ಟಾಟಾ ಮೋಟಾರ್ಸ್‌ನವರು ಯೋಜನೆಗೆ ಕೈಜೋಡಿಸಿದ್ದಾರೆ ಎಂದು ತಿಳಿಸಿದರು.

ಎಫ್‌ಪಿಎಐ ಅಧ್ಯಕ್ಷೆ ಡಾ. ರತ್ನಮಾಲಾ ದೇಸಾಯಿ ಮಾತನಾಡಿ, ಜಾಗತಿಕವಾಗಿ ಗರ್ಭಪಾಶಿ ಕ್ಯಾನ್ಸರ್ ಹೆಚ್ಚಾಗುತ್ತಿರುವುದರಿಂದ ವಿಶ್ವ ಆರೋಗ್ಯ ಸಂಸ್ಥೆಯು



> ಗರ್ಭಪಾಶಿ ಕ್ಯಾನ್ಸರ್ ಮತ್ತು ಅದರ ಅಪಾಯದ ಬಗ್ಗೆ ಹಾಗೂ ಎಚ್‌ಪಿವಿ ಲಸಿಕೆ ಕುರಿತು ವಿದ್ಯಾರ್ಥಿಗಳು, ಪೋಷಕರು, ಶಿಕ್ಷಕರು ಹಾಗೂ ಸಮುದಾಯದ ನಾಯಕರುಗಳಿಗೆ ಜಾಗೃತಿ ಮೂಡಿಸಲಾಗುತ್ತಿದೆ. ಎರಡನೇ ಹಂತದಲ್ಲಿ ಆರೋಗ್ಯ ಸೇವಾ ವೃತ್ತಿಪರರು, ಶಾಲಾಧಿಕಾರಿಗಳು ಹಾಗೂ ಸ್ಥಳೀಯ ಪಾಲುದಾರರೊಂದಿಗೆ ಸಂವಾದ ನಡೆಸಿ ಒಪ್ಪಿಗೆ ಪಡೆಯುವುದು, ಕೊನೆಯ ಹಂತದಲ್ಲಿ ಎಚ್‌ವಿಪಿ ಲಸಿಕೆ ಹಾಕಲಾಗುವುದು ಎಂದು ಹೇಳಿದರು.

2030ರೊಳಗೆ ಶೇ 90ರಷ್ಟು ಬಾಲಕಿಯರಿಗೆ ಎಚ್‌ಪಿವಿ ಲಸಿಕೆ ಹಾಕಬೇಕು ಎಂದು ತಿಳಿಸಿದೆ.

ಲಸಿಕೆಗೆ 1400 ವೆಚ್ಚವಾಗುತ್ತದೆ. ಸ್ವಯಂ ಸೇವಾ ಸಂಸ್ಥೆಗಳು, ರೋಟರಿ ಹಾಗೂ ಸಂಸ್ಥೆಗಳ ಸಿಎಸ್‌ಆರ್ ನಿಧಿ ನೆರವು ಪಡೆಯಲಾಗುತ್ತಿದೆ ಎಂದರು.

## ಮಗುವಿನ ವಿಶೇಷ ಗುಣ ಗುರುತಿಸುವ ಹೊಣೆ ಶಿಕ್ಷಕರದು

• ಉದಯವಾಹಿನಿ, ಚಿತ್ರದುರ್ಗ

ಪ್ರತಿಯೊಂದು ಮಗುವಿನಲ್ಲೂ ವಿಶೇಷವಾದ ಗುಣಗಳು ಇರುತ್ತವೆ. ಅವುಗಳನ್ನು ಗುರುತಿಸುವ ಹೊಣೆ ಶಿಕ್ಷಕರದಾಗಿರುತ್ತದೆ ಎಂದು ಹೊಳಲ್ಕೆರೆ ಹನುಮಂತದೇವರ ಕಣಿವೆಯ ಮೊರಾರ್ಜಿ ದೇಸಾಯಿ ವಸತಿ ಶಾಲೆ ಪ್ರಾಂಶುಪಾಲೆ ಡಾ.ಹೆಚ್.ಬಿ.ಪ್ರೀತಿ ಹೇಳಿದರು.

ಹೊಳಲ್ಕೆರೆ ತಾಲ್ಲೂಕಿನ ಹನುಮಂತ ದೇವರ ಕಣಿಯ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ರಾಜ್ಯ ಬಾಲಭವನ ಸೊಸೈಟಿ, ಜಿಲ್ಲಾ ಪಂಚಾಯತ್, ಮಹಿಳಾ, ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಬಾಲಭವನ ಸಮಿತಿ, ಹೊಳಲ್ಕೆರೆ ತಾಲ್ಲೂಕು ಬಾಲಭವನ ಸಮಿತಿ ವತಿಯಿಂದ ಹಮ್ಮಿಕೊಂಡಿದ್ದ ಮಕ್ಕಳ ಕಲಾ ಪ್ರತಿಭೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಆಧುನಿಕ ತಾಂತ್ರಿಕ ಯುಗದಲ್ಲಿ ತಾಂತ್ರಿಕ ಮಾಧ್ಯಮಗಳಿಗೆ ಮಕ್ಕಳು ಅವಲಂಬಿತರಾಗಬಾರದು. ಮಕ್ಕಳು ಬಾಲ್ಯದಲ್ಲೇ ಕೌಶಲ್ಯಗಳನ್ನು ಅಳವಡಿಸಿಕೊಳ್ಳಬೇಕು. ಇದರಿಂದ


ಉದಯವಾಹಿನಿ ಚಿತ್ರ

ಮಕ್ಕಳು ಸಮಾಜದ ಮುಖ್ಯ ವಾಹಿನಿಗೆ ಬರಲು ಬಹಳ ಅನುಕೂಲವಾಗುತ್ತದೆ ಎಂದು ಹೇಳಿದರು.

ಜಿಲ್ಲಾ ಬಾಲಭವನ ಕಾರ್ಯಕ್ರಮ ಸಂಯೋಜಕ ಡಿ.ಶ್ರೀಕುಮಾರ್ ಮಾತನಾಡಿ, ಮಕ್ಕಳು ಅಂಕಗಳಿಗೆ ಸೀಮಿತರಾಗಿ ಕೌಶಲ್ಯಗಳು ಮತ್ತು ಮೌಲ್ಯಗಳ ಕಲಿಯುವಲ್ಲಿ ಹಿಂದೆ ಸರಿಯುತ್ತಿದ್ದಾರೆ. ಮಾನವೀಯ ಮೌಲ್ಯಗಳು ಮತ್ತು ಕೌಶಲ್ಯಗಳನ್ನು ಕಲಿಸಲು ರಾಜ್ಯ ಬಾಲಭವನವು ಈ ಯೋಜನೆಯ ಮೂಲಕ ಮಕ್ಕಳಲ್ಲಿರುವ ಪ್ರತಿಭೆ ಗುರುತಿಸಿ ಸನ್ಮಾನಿಸುವ ಕೆಲಸ ಮಾಡುತ್ತಿದೆ ಎಂದರು.

ರಾಜ್ಯ ಬಾಲಭವನ ಸೊಸೈಟಿಯ ಅಧ್ಯಕ್ಷರಾದ ಬಿ.ಆರ್.ನಾಯ್ಡು ಅವರು ಮಕ್ಕಳ ಶ್ರೇಯೋಭಿವೃದ್ಧಿಗಾಗಿ ವಿವಿಧ ಕೌಶಲ್ಯಗಳನ್ನು ಗುರುತಿಸಲು ಈ ಕಾರ್ಯಕ್ರಮ ಹಮ್ಮಿಕೊಂಡಿದ್ದೇವೆ ಎಂದು ಹೇಳಿದರು.ಭಾಷಣ, ಪ್ರಬಂಧ, ಗಾಯನ ಸ್ಪರ್ಧೆಯನ್ನು ಆಯೋಜಿಸಿ, ವಿಜೇತ ಮಕ್ಕಳಿಗೆ ಬಹುಮಾನ ನೀಡಲಾಯಿತು.

ಕಾರ್ಯಕ್ರಮದಲ್ಲಿ ಸಂಗೀತ ಶಿಕ್ಷಕರಾದ ಮಹಾರುದ್ರಯ್ಯ, ಶಿಕ್ಷಕರಾದ ತಿಮ್ಮೇಶ್, ಮೊಹಮದ್ ರಸೂಲ್, ರೇಖಾ ಬಾಯಿ, ಆಶಾರಾಣಿ, ಮನು, ರವಿ, ಕುಮಾರಿ, ಶ್ರೀಧರ್ ಇದ್ದರು.

# ಹೃದಯಾಘಾತದಿಂದ ಸಾವಿನ ಸಂಖ್ಯೆ ಹೆಚ್ಚಳ

## ಹೃದ್ರೋಗ ಶಸ್ತ್ರಚಿಕಿತ್ಸಾ ವಿಭಾಗಕ್ಕೆ ಅಗ್ನಿ ಮತ್ತು ತುರ್ತು ಸೇವೆಗಳ ಇಲಾಖೆಯ ಅನುಮತಿ ಬಾಕಿ

• ಉದಯವಾಹಿನಿ, ಮಂಗಳೂರು

ಬಡ ಮತ್ತು ಮಧ್ಯಮ ವರ್ಗದ ಹೃದ್ರೋಗಿಗಳಿಗೆ ಉಚಿತ ಹಾಗೂ ಕಡಿಮೆ ವೆಚ್ಚದಲ್ಲಿಹೃದ್ರೋಗ ಚಿಕಿತ್ಸೆ ನೀಡಲು ನಗರದ ಸರಕಾರಿ ವೆನ್ಲಾಕ್ ಆಸ್ಪತ್ರೆಯಲ್ಲಿಕ್ಯಾಥ್ ಲ್ಯಾಬ್ ಸಹಿತ ಸುಸಜ್ಜಿತ ವ್ಯವಸ್ಥೆ ಕೈಗೊಂಡಿದ್ದರೂ, ಸರಕಾರದ ಅನುಮತಿಗಾಗಿ ಕಾಯಲಾಗುತ್ತಿದೆ. ಜಿಲ್ಲೆಯಲ್ಲಿಸಾಕಷ್ಟು ವೈದ್ಯಕೀಯ ಕಾಲೇಜು ಆಸ್ಪತ್ರೆಗಳು, ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಗಳು, ಕ್ಲಿನಿಕ್‌ಗಳು ಇದ್ದರೂ, ಹೃದ್ರೋಗ ತಪಾಸಣೆ ಮತ್ತು ಚಿಕಿತ್ಸೆ ಬಡವರ ಪಾಲಿಗೆ ಗಗನಕುಸುಮ. ವೆನ್ಲಾಕ್‌ನಲ್ಲಿ ಹೃದ್ರೋಗ ಚಿಕಿತ್ಸೆ ಆರಂಭಿಸಬೇಕು ಎಂಬುದು ಹಲವು ದಶಕಗಳ ಬೇಡಿಕೆ. ಹೃದಯಾಘಾತದಿಂದ ಸಾವಿನ ಸಂಖ್ಯೆ ಈಗ ಹೆಚ್ಚುತ್ತಿದೆ. 2023ರಲ್ಲಿ ವೆನ್ಲಾಕ್ ಆರೋಗ್ಯ ರಕ್ಷಾ ಸಮಿತಿ ಸಭೆಯಲ್ಲಿ ಹೃದ್ರೋಗಿಗಳಿಗೆ ಉನ್ನತ ಪರೀಕ್ಷೆ, ಉತ್ತಮ ಚಿಕಿತ್ಸೆ ನೀಡಲು ಕ್ಯಾಥ್‌ಲ್ಯಾಬ್ ಸ್ಥಾಪಿಸುವಂತೆ ಹಿಂದಿನ ಜಿಲ್ಲಾಧಿಕಾರಿ ಮುಲ್ಲೈ ಮುಗಿಲನ್ ಸೂಚನೆ ನೀಡಿದ್ದರು. ಬಳಿಕ ಜಿಲ್ಲಾಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಕೂಡ ಪುನರುಚ್ಚರಿಸಿದ್ದರು.

**ಕೆಎಂಸಿಯಿಂದ ಕ್ಯಾಥ್‌ಲ್ಯಾಬ್:** ಹೊಸ ಸರ್ಜಿಕಲ್ ಬ್ಲಾಕ್ ಕಟ್ಟಡದ ಕೆಳ ಅಂತಸ್ತಿನಲ್ಲಿ ಸುಮಾರು 5 ಕೋಟಿ ರೂ. ಮೊತ್ತದಲ್ಲಿ ಸುಸಜ್ಜಿತ ಹೃದ್ರೋಗ ಶಸ್ತ್ರಚಿಕಿತ್ಸೆ ವಿಭಾಗ ಸ್ಥಾಪಿಸಲಾಗಿದೆ. ಡಾ.ನರಸಿಂಹ ಪೈ ಮೇಲುಸ್ತುವಾರಿಯಲ್ಲಿ ಕ್ಯಾಥ್ ಲ್ಯಾಬ್, ಕ್ಯಾಥ್‌ಲ್ಯಾಬ್ ರಿಕವರಿ ಏರಿಯಾ, ಸ್ಟೋರ್, ಚೇಂಜಿಂಗ್


ಉದಯವಾಹಿನಿ ಚಿತ್ರ

**ವೆನ್ಲಾಕ್ ಹೃದ್ರೋಗ ಚಿಕಿತ್ಸೆಗೆ ಮೀನಮೇಷ**

ರೂಂ, ವಾಶ್ ಏರಿಯಾ, ಕಾನ್ಸೋಲ್ ರೂಮ್, ರೇಡಿಯೇಶನ್ ಏರಿಯಾ ಸಜ್ಜುಗೊಂಡಿದೆ. ಕೆಎಂಸಿಯಿಂದ ಇಬ್ಬರು ಹೃದ್ರೋಗ ತಜ್ಞರನ್ನು ನೇಮಿಸಿದ್ದು, ಇನ್ನಿಬ್ಬರು ಬರಲಿದ್ದು, ಒಟ್ಟು ಏಳು ಮಂದಿ ಕಾರ್ಯಚರಿಸಲಿದ್ದಾರೆ. 12 ಮಂದಿ ನರ್ಸಿಂಗ್ ಸಿಬ್ಬಂದಿ, ನಾಲ್ಕು ಮಂದಿ ತಂತ್ರಜ್ಞರ ನೇಮಕ ಮಾಡಿದ್ದು, ಅವರ ಸಂಬಳ ಕೆಎಂಸಿಯೇ ಕೊಡಲಿದೆ. ಆ್ಯಂಜಿಯೋಗ್ರಾಂ, ಆ್ಯಂಜಿಯೋಪ್ಲಾಸ್ಟ್ ಮೊದಲಾದ ಚಿಕಿತ್ಸೆ, ಸ್ಟೆಂಟ್ ಅಳವಡಿಕೆ ಇಲ್ಲಿ ನಡೆಯಲಿದೆ. ಪೇಸ್ ಮೇಕರ್, ಬ್ರೈನ್ ಆ್ಯಂಜಿಯೋಗ್ರಾಂ, ಮಕ್ಕಳ ಹೃದಯ ರಂಧ್ರ

> ದೊಡ್ಡ ಆಸ್ಪತ್ರೆಗಳಿಗೆ ಹೋಗಲು ಸಾಧ್ಯವಿಲ್ಲದ ಜನಸಾಮಾನ್ಯರ ಅನುಕೂಲಕ್ಕಾಗಿ ವೆನ್ಲಾಕ್ ಆಸ್ಪತ್ರೆಯಲ್ಲಿಆರು ತಿಂಗಳ ಹಿಂದೆಯೇ ಕ್ಯಾಥ್‌ಲ್ಯಾಬ್ ನಿರ್ಮಿಸಿದ್ದೇವೆ. ತಜ್ಞ ವೈದ್ಯರು, ತಂತ್ರಜ್ಞರು, ನರ್ಸ್‌ಗಳ ನಿಯೋಜನೆ ಮಾಡಿದ್ದು, ಅವರ ಸಂಬಳ ನಾವೇ ಕೊಡಲಿದ್ದೇವೆ. ಚಿಕಿತ್ಸೆ ಉಪಕರಣ ಮತ್ತು ಔಷಧವನ್ನು ಸರಕಾರ ಒದಗಿಸಿ, ಅನುಮತಿ ನೀಡಿದಾಕ್ಷಣ ಸೇವೆ ಆರಂಭಿಸಲಿದ್ದೇವೆ.
> -ಡಾ.ಬಿ.ಉನ್ನಿಕೃಷ್ಣನ್, ಡೀನ್, ಕೆಎಂಸಿ,

ಶಸ್ತ್ರಚಿಕಿತ್ಸೆಗೆ ಎಎಸ್‌ಡಿ ಮತ್ತು ವಿಎಸ್‌ಡಿ ಮೊದಲಾದ ಚಿಕಿತ್ಸೆ ಲಭಿಸಲಿದೆ. ಚಿಕಿತ್ಸಾ ಸಲಕರಣೆ, ಔಷಧ ವೆನ್ಲಾಕ್ ಆಸ್ಪತ್ರೆ ಸರಕಾರದಿಂದ ಖರೀದಿಸಿ ಕೊಡಬೇಕು. ಹಾರ್ಟ್ ಗ್ರಾಫ್ಟ್ ಸರ್ಜರಿಗೆ ಕೇಂದ್ರ ಸರಕಾರ 24 ಸಾವಿರ ರೂ. ನಿಗದಿಪಡಿಸಿದೆ. ಆ್ಯಂಜಿಯೋಪ್ಲಾಸ್ಟ್‌ಗೆ ಕೋಡ್ ಇರುವುದರಿಂದ ಬಿಪಿಎಲ್‌ಗೆ ಉಚಿತ ಮತ್ತು ಎಪಿಎಲ್‌ಗೆ ಹಣ ಭರಿಸಬೇಕು. ಆ್ಯಂಜಿಯೋಗ್ರಾಮ್‌ಗೆ ಕೋಡ್ ಇಲ್ಲದೇ ಇರುವುದರಿಂದ ಚಾರ್ಜ್ ಮಾಡುವ ಸಾಧ್ಯತೆಗಳಿವೆ. ಉಚಿತ ಚಿಕಿತ್ಸೆಯ ಮೊತ್ತವನ್ನು ಎಬಿ- ಎಆರ್‌ಕೆ ಮರುಪಾವತಿ ಮಾಡಲಿದೆ.

**ಫೈರ್ ಕ್ಲಿಯರೆನ್ಸ್ ಬೇಕು:** ವೆನ್ಲಾಕ್ ಆಸ್ಪತ್ರೆಯಲ್ಲಿ ಹೃದ್ರೋಗ ಶಸ್ತ್ರಚಿಕಿತ್ಸೆ ವಿಭಾಗ ಸಿದ್ಧಗೊಂಡರೂ, ಕಾರ್ಯಾಚರಣೆ ಆರಂಭಿಸಲು ಅಗ್ನಿ ಮತ್ತು ತುರ್ತು ಸೇವೆಗಳ ಇಲಾಖೆ ಅನುಮತಿ ಕೋರಿದ್ದು, ಇನ್ನೂ ಸ್ಥಳ ಪರಿಶೀಲನೆ ನಡೆಸದೆ ಕ್ಲಿಯರೆನ್ಸ್ ಸಿಕ್ಕಿಲ್ಲ. ಅಗ್ನಿಶಾಮಕ ಇಲಾಖೆ ಕ್ಲಿಯರೆನ್ಸ್ ಸಿಕ್ಕಿದ ಬಳಿಕ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ಪಟ್ಟಿಯಲ್ಲಿಆಸ್ಪತ್ರೆ ಗುರುತಿಸಿಕೊಳ್ಳಬೇಕು. ಆಗ ಮಾತ್ರ ಬಡವರಿಗೆ ಉಚಿತ ಚಿಕಿತ್ಸೆ ನೀಡಿದ ಮೊತ್ತವನ್ನು ಆಯುಷ್ಮಾನ್ ಭಾರತ್- ಆರೋಗ್ಯ ಕರ್ನಾಟಕ ಭರಿಸಲಿದೆ.

> ಬಡ, ಮಧ್ಯಮ ವರ್ಗ ಹೃದ್ರೋಗಿಗಳ ಅನುಕೂಲಕ್ಕಾಗಿ ಸುಸಜ್ಜಿತ ಹೃದ್ರೋಗ ಶಸ್ತ್ರಚಿಕಿತ್ಸೆ ವಿಭಾಗ ಸಜ್ಜು ಗೊಂಡಿದೆ. ವೈದ್ಯರು, ಸಿಬ್ಬಂದಿ ನೇಮಕವೂ ಆಗಿದೆ. ಶೀಘ್ರ ಕಾರ್ಯಾರಂಭವಾಗಲಿದೆ.
> -ಡಾ.ಶಿವಪ್ರಕಾಶ್ ಡಿ.ಎಸ್., ಅಧೀಕ್ಷಕ,

# ಮಿನಿ ನ್ಯೂಸ್

## ನಾಲ್ಕನೇಯ ದಿನಕ್ಕೆ ಕಾಲಿಟ್ಟ ಪೌರಕಾರ್ಮಿಕರ ಅವಿರತ ಹೋರಾಟ


ಉದಯವಾಹಿನಿ ಚಿತ್ರ

• ಉದಯವಾಹಿನಿ ಸುದ್ದಿ

ಕಾರಟಗಿ ಪುರಸಭೆಯಲ್ಲಿ ಸುಮಾರು 10 ವರ್ಷಗಳ ಕಾಲ ಸ್ವಚ್ಛತಾ ಕೆಲಸ ಮಾಡುತ್ತಿರುವ ಪೌರಕಾರ್ಮಿಕರನ್ನು ನೇರಪಾವತಿಗೆ ಒಳಪಡಿಸುವಂತೆ ಒತ್ತಾಯಿಸಿ ಅಖಿಲ ಭಾರತ ಕಾರ್ಮಿಕ ಸಂಘಟನೆಗಳ ಕೇಂದ್ರೀಯ ಸಮಿತಿ ನೇತೃತ್ವದಲ್ಲಿ ನಡೆಸುತ್ತಿರುವ ಹೋರಾಟ ನಾಲ್ಕನೇ ದಿನಕ್ಕೆ ಮುಂದುವರೆದಿದೆ ಎಂದು AICCTU ಜಿಲ್ಲಾ ಅಧ್ಯಕ್ಷರಾದ ವಿಜಯ ದೊರೆರಾಜು ತಿಳಿಸಿದರು. ಈ ಸಂದರ್ಭದಲ್ಲಿ ಸಣ್ಣ ಹನುಮಂತಪ್ಪ ಹುಲಿಹೈದರ, ಹನುಮಂತಿ, ಅಯ್ಯಮ್ಮ, ಮಹಾಕಾಳೆಮ್ಮ, ಹುಲಿಗೆಮ್ಮ, ಮರಿಯಮ್ಮ, ದುರುಗಮ್ಮ, ಕವಿತಮ್ಮ, ಹುಲಿಗೆಮ್ಮ, ಹನುಮಮ್ಮ, ಲಕ್ಷ್ಮಮ್ಮ, ಜಲಾಲೇಮ್ಮ, ಶೇಖರಪ್ಪ ಇತರರು ಇದ್ದರು.

## ಉದ್ಯಾನದ ಶುಚಿತ್ವ ಕಾಪಾಡಿ

• ಉದಯವಾಹಿನಿ, ಮಹಾಲಿಂಗಪುರ

ಶುಚಿತ್ವಕ್ಕೆ ಆದ್ಯತೆ ಕೊಡದೇ ಉದಾಸೀನ ಪ್ರವೃತ್ತಿ ಬೆಳೆಸಿಕೊಳ್ಳುವುದರಿಂದ ರೋಗಗಳಿಗೆ ತುತ್ತಾಗಬೇಕಾಗುತ್ತದೆ. ಉದ್ಯಾನದ ಶುಚಿತ್ವಕ್ಕೆ ಹೆಚ್ಚು ಮಹತ್ವ ನೀಡಿ ಆರೋಗ್ಯವಂತ ನಾಡು ನಿರ್ಮಾಣಕ್ಕೆ ಸಹಕರಿಸಬೇಕು ಎಂದು ಪುರಸಭೆ ಸಮುದಾಯ ಸಂಘಟನಾಧಿಕಾರಿ ಸಿ.ಎಸ್. ಮಠಪತಿ ಹೇಳಿದರು. ಕೇಂದ್ರ ಪುರಸ್ಕೃತ ಅಮೃತ 2.0 ಯೋಜನೆಯ ಅಮೃತ ಮಿತ್ರ ಕಾರ್ಯಕ್ರಮದಡಿ ಪಟ್ಟಣದ ಪುರಸಭೆ ಸಭಾಭವನದಲ್ಲಿ ಹಮ್ಮಿಕೊಂಡಿದ್ದ ಮಹಿಳಾ ಸ್ವ-ಸಹಾಯ ಸಂಘಗಳಿಗೆ ಪರಿಕರ ವಿತರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು. ಪಟ್ಟಣದ ರಬಕವಿ ರಸ್ತೆ, ಮಹಾಂತೇಶ ನಗರದಲ್ಲಿನ ತಲಾ ಎರಡು ಉದ್ಯಾನಗಳ ನಿರ್ವಹಣೆಗೆ ನಾಲ್ಕು ಮಹಿಳಾ ಸ್ವ-ಸಹಾಯ ಸಂಘಗಳನ್ನು ಯೋಜನೆಯಡಿ ಆಯ್ಕೆ ಮಾಡಲಾಗಿದೆ. ಉದ್ಯಾನಗಳ ನಿರ್ವಹಣೆಗೆ ಪರಿಕರ ವಿತರಿಸಿ ಶುಚಿತ್ವಕ್ಕೆ ಆದ್ಯತೆ ನೀಡಲಾಗುತ್ತಿದೆ ಎಂದರು.

## ಅಡುಗೆ ಅನಿಲ ಸೋರಿಕೆಯಿಂದ ಅಗ್ನಿ ಅವಘಡ: ನಾಲ್ವರಿಗೆ ಗಾಯ

• ಉದಯವಾಹಿನಿ, ಹುಬ್ಬಳ್ಳಿ

ನಗರದ ಅಶೋಕನಗರ ಪೊಲೀಸ್ ಠಾಣಾ ವ್ಯಾಪ್ತಿಯ ಶಕ್ತಿಕಾಲೊನಿಯ ಕಾರುಣ್ಯ ಅಪಾರ್ಟ್‌ಮೆಂಟ್ 2ನೇ ಮಹಡಿಯಲ್ಲಿನ ಮನೆಯಲ್ಲಿ ಬುಧವಾರ ರಾತ್ರಿ 10 ಗಂಟೆ ಸುಮಾರಿಗೆ ಅಡುಗೆ ಅನಿಲ ಸೋರಿಕೆಯಿಂದ ಬೆಂಕಿ ಹೊತ್ತಿಕೊಂಡ ಪರಿಣಾಮ ನಾಲ್ವರು ಗಾಯಗೊಂಡಿದ್ದಾರೆ. ಘಟನೆಯಲ್ಲಿ ಮಹಾಂತೇಶ ಬಳ್ಳಾರಿ (40) ಅವರಿಗೆ ಶೇ 15ರಷ್ಟು, ಅವರ ಪತ್ನಿ ಗಂಗಮ್ಮ ಬಳ್ಳಾರಿ(38) ಅವರಿಗೆ ಶೇ 65ರಷ್ಟು, ಮಕ್ಕಳಾದ ಕಾರಣ್ಯ ಎಂ. ಬಳ್ಳಾರಿಗೆ (9) ಶೇ 8ರಷ್ಟು ಹಾಗೂ ಮನೋರಂಜನ್ ಬಳ್ಳಾರಿಗೆ (7) ಶೇ.13ರಷ್ಟು ಸುಟ್ಟ ಗಾಯಗಳಾಗಿವೆ ಎಂದು ಹುಬ್ಬಳ್ಳಿ-ಧಾರವಾಡ ಪೊಲೀಸ್ ಕಮಿಷನರ್ ಶಶಿಕುಮಾರ್ ಅವರು ಗುರುವಾರ ಸುದ್ದಿಗಾರರಿಗೆ ತಿಳಿಸಿದರು. ರಾತ್ರಿ ಕುಟುಂಬದವರು ಮಲಗಿದ್ದಾಗ ಅಡುಗೆ ಅನಿಲ ಸೋರಿಕೆಯಾಗಿದೆ. ಮೊಬೈಲ್ ಫೋನ್ ಆನ್ ಮಾಡಿದಾಗ ಬೆಂಕಿ ಹೊತ್ತಿಕೊಂಡಿದೆ ಎಂಬುದಾಗಿ ತಿಳಿದುಬಂದಿದೆ. ಘಟನೆ ಕುರಿತಾಗಿ ಗಂಗಮ್ಮನ ಕುಟುಂಬದವರಲ್ಲಿ ಅನುಮಾನವಿದೆ. ಹೆಚ್ಚು ಗಾಯಗೊಂಡಿರುವ ಗಂಗಮ್ಮ ಹೇಳಿಕೆ ನೀಡುವ ಸ್ಥಿತಿಯಲ್ಲಿದ್ದರೆ ಮಾಹಿತಿ ಪಡೆಯಲಾಗುವುದು ಎಂದರು.

**ಪತಿ ಹಾಗೂ ಕುಟುಂಬದವರಿಂದ ಕೃತ್ಯ ಆರೋಪ:** ಮಹಾಂತೇಶ. ಗಂಗಮ್ಮ ಇಬ್ಬರೂ ಶಿಕ್ಷಕರಾಗಿದ್ದು, ಆಗಾಗ ಇಬ್ಬರ ನಡುವೆ ಗಲಾಟೆ ನಡೆಯುತ್ತಿತ್ತು. ಮಹಾಂತೇಶ, ಪತ್ನಿ ಮೇಲೆ ಹಲ್ಲೆ ನಡೆಸುತ್ತಿದ್ದ. ಕುಟುಂಬದವರೊಂದಿಗೆ ಸೇರಿಕೊಂಡು ಪತ್ನಿ ಕೊಲೆಗೆ ಯತ್ನಿಸಿದ್ದಾನೆ ಎಂದು ಗಂಗಮ್ಮನ ಕುಟುಂಬದವರು ಆರೋಪಿಸಿದರು.

## ಬಾಲ್ಯ ವಿವಾಹ ಐವರ ವಿರುದ್ಧ ಎಫ್‌ಐಆರ್

• ಉದಯವಾಹಿನಿ, ಬಳ್ಳಾರಿ

ನಗರದಲ್ಲಿ ಬಾಲಕಿಯೊಬ್ಬಳಿಗೆ ವಿವಾಹ ಮಾಡಿಸಲಾಗಿದ್ದು, ಐವರ ವಿರುದ್ಧ ಬಳ್ಳಾರಿಯ ಮಹಿಳಾ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ಅಪ್ರಾಪ್ತಳಿಗೆ ವಿವಾಹ ಮಾಡಿಸಿರುವುದಾಗಿ ಮಕ್ಕಳ ಸಹಾಯವಾಣಿಗೆ ಬಂದಿದ್ದ ಮಾಹಿತಿ ಆಧರಿಸಿ ಪೊಲೀಸರು ಸ್ಥಳಕ್ಕೆ ತೆರಳಿ ಪರಿಶೀಲನೆ ನಡೆಸಿದ್ದರು. ಬಾಲಕಿಯ ದಾಖಲೆಗಳನ್ನು ಪರಿಶೀಲಿಸಿದಾಗ ಆಕೆಗೆ ಇನ್ನೂ 17 ವರ್ಷ 11 ತಿಂಗಳು ಮಾತ್ರವೇ ಆಗಿರುವುದು ಬೆಳಕಿಗೆ ಬಂದಿದೆ. ನಗರದ ಗುಗ್ಗರಹಟ್ಟಿಯ ಸಿದ್ದಿವಿನಾಯಕ ಕಲ್ಯಾಣ ಮಂಟಪದಲ್ಲಿ ಸಂದೀಪ್ ಎಂಬಾತನೊಂದಿಗೆ ತನಗೆ ತಂದೆ-ತಾಯಿ ಮದುವೆ ಮಾಡಿಸಿರುವುದಾಗಿ ಬಾಲಕಿಯೂ ಹೇಳಿಕೆ ದಾಖಲಿಸಿದ್ದಾಳೆ ಎನ್ನಲಾಗಿದೆ. ಸದ್ಯ, ಬಾಲಕಿಯ ತಂದೆ-ತಾಯಿ, ವರ ಮತ್ತು ಆತನ ತಂದೆ-ತಾಯಿ ವಿರುದ್ಧ ಪೊಲೀಸರು ಎಫ್‌ಐಆರ್ ದಾಖಲಿಸಿದ್ದಾರೆ.

## ಅಕ್ರಮ ಕಲ್ಲು ಗಣಿಗಾರಿಕೆ; 9 ಮಂದಿ ವಿರುದ್ಧ ಪ್ರಕರಣ ದಾಖಲು

• ಉದಯವಹಿನಿ, ಹೊಸಪೇಟೆ



ಕಾಳಘಟ್ಟ ಗ್ರಾಮದ ಬಳಿ ಅಕ್ರಮ ಕಲ್ಲು ಗಣಿಗಾರಿಕೆ ನಡೆಯುತ್ತಿರುವುದನ್ನು ಅಧಿಕಾರಿಗಳು ಪತ್ತೆ ಮಾಡಿದ್ದು, ಒಂಭತ್ತು ಮಂದಿ ವಿರುದ್ಧ ಗ್ರಾಮೀಣ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಗಣಿ, ಭೂವಿಜ್ಞಾನ ಇಲಾಖೆಯ ಅಧಿಕಾರಿಗಳು ನೀಡಿದ ದೂರಿನ ಮೇರೆಗೆ ತಾಲ್ಲೂಕಿನ ಬಸವನದುರ್ಗ ಗ್ರಾಮದ ರವಿ ಕುಮಾರ್, ಖಾಸಿಂಸಾಬ್, ಮಂಜುನಾಥ್, ವಜ್ರವೇಣಿ, ಸುಬ್ರಮಣ್ಯ, ಸುಬ್ರಮಣಿ, ಬಾಲರಾಜ್, ಆರ್ಮುಗಂ, ಶ್ರೀನಿವಾಸ್ ಅವರ ವಿರುದ್ಧ ಪ್ರಕರಣ ದಾಖಲಿಸಲಾಗಿದೆ, ಸದ್ಯ ಎಲ್ಲರೂ ತಲೆ ಮರೆಸಿಕೊಂಡಿದ್ದಾರೆ. ಅವರಿಗೆ ಹುಡುಕಾಟ ನಡೆಯುತ್ತಿದೆ.

ಕಲ್ಲು ತುಂಬಿದ್ದ ಒಂದು ಟ್ರ್ಯಾಕ್ಟರ್ ಅನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ವಿಶ್ವಪ್ರಸಿದ್ಧ ಹಂಪಿಗೆ ಸಮೀಪದಲ್ಲೇ ಅಕ್ರಮ ಕಲ್ಲು ಗಣಿಗಾರಿಕೆ ನಡೆಯುತ್ತಿರುವ ಬಗ್ಗೆ ಮಂಗಳವಾರ ಮಾಹಿತಿ ಲಭಿಸಿತ್ತು. ತಹಶೀಲ್ದಾರ್ ಶ್ರುತಿ ಎಂ.ಎಂ. ಅವರು ಸ್ಥಳಕ್ಕೆ ಭೇಟಿ ನೀಡಿ, ಅಕ್ರಮದಲ್ಲಿ ತೊಡಗಿದ್ದವರ ವಿರುದ್ಧ ಪ್ರಕರಣ ದಾಖಲಿಸುವಂತೆ ಸೂಚಿಸಿದ್ದರು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 10:30 ರಿಂದ 12:00 |
| ಗುಳಿಕ ಕಾಲ | ಬೆಳಿಗ್ಗೆ | 07:30 ರಿಂದ 09:00 |
| ಯಮಗಂಡ ಕಾಲ | ಮಧ್ಯಾಹ್ನ | 03:00 ರಿಂದ 04:30 |

**ಮೇಷ** ನೀವು ನಿಮ್ಮ ಭಾವನೆಗಳನ್ನು ನಿಯಂತ್ರಿಸಬೇಕು ಮತ್ತು ನಿಮ್ಮ ಭಯವನ್ನು ಸಾಧ್ಯವಾದಷ್ಟೂ ಬೇಗ ತೊಡೆದುಹಾಕಬೇಕು ಏಕೆಂದರೆ ಇವು ತಕ್ಷಣವೇ ನಿಮ್ಮ ಆರೋಗ್ಯವನ್ನು ಬಾಧಿಸಬಹುದು ಮತ್ತು ಒಳ್ಳೆಯ ಆರೋಗ್ಯವನ್ನು ಅನುಭವಿಸುವ ನಿಮ್ಮ ಹಾದಿಯಲ್ಲಿ ಅಡ್ಡ ಬರಬಹುದು.

**ವೃಷಭ** ಭಾವನಾತ್ಮಕವಾಗಿ ನೀವು ತುಂಬ ಸ್ಥಿರವಾಗಿರುವುದಿಲ್ಲ ಆದ್ದರಿಂದ ನೀವು ಇತರರ ಮುಂದೆ ಹೇಗೆ ವರ್ತಿಸುತ್ತೀರಿ, ಏನು ಹೇಳುತ್ತೀರಿ ಎನ್ನುವ ಬಗ್ಗೆ ಎಚ್ಚರದಿಂದಿರಿ. ಹೂಡಿಕೆ ಮಾಡುವುದು ಅನೇಕ ಬಾರಿ ನಿಮಗೆ ಪ್ರಯೋಜನಕಾರಿಯೆಂದು ಸಾಬೀತುಪಡಿಸುತ್ತದೆ, ಇಂದು ನಿಮಗೆ ಈ ಮಾತು ಅರ್ಥವಾಗಬಹುದು.

**ಮಿಥುನ** ನಿಮ್ಮ ವೈಯಕ್ತಿಕ ಸಮಸ್ಯೆಗಳು ಮಾನಸಿಕ ಸಂತೋಷವನ್ನು ಹಾಳು ಮಾಡಬಹುದು. ಆದರೆ ಒತ್ತಡವನ್ನು ನಿಭಾಯಿಸಲು ಆಸಕ್ತಿದಾಯಕವಾದದ್ದನ್ನೇನಾದರೂ ಓದುವ ಮೂಲಕ ಸ್ವಲ್ಪ ಮಾನಸಿಕ ವ್ಯಾಯಾಮ ಮಾಡಿಕೊಳ್ಳಿ. ದೀರ್ಘಕಾಲದ ದೃಷ್ಟಿಕೋನದಿಂದ ಹೂಡಿಕೆ ಮಾಡಬೇಕು.

**ಕರ್ಕಾಟಕ** ಅನಾವಶ್ಯಕವಾಗಿ ವಾದ ಮಾಡಿ ನಿಮ್ಮ ಶಕ್ತಿಯನ್ನು ವ್ಯರ್ಥ ಮಾಡಬೇಡಿ. ನೀವು ಒಂದು ವಾದದಿಂದ ಏನನ್ನೂ ಪಡೆಯದಿದ್ದರೂ ಏನಾದರೂ ಕಳೆದುಕೊಳ್ಳುತ್ತೀರೆಂದು ನೆನಪಿಟ್ಟುಕೊಳ್ಳಿ. ಇಂದು ಹಣದ ಆಗಮನವು ನಿಮ್ಮನ್ನು ಯಾವುದೇ ಸಮಸ್ಯೆಗಳಿಂದ ಮುಕ್ತಗೊಳಿಸಬಹುದು ಮಕ್ಕಳು ನಿಮ್ಮ ದಿನವನ್ನು ಕಠಿಣಗೊಳಿಸುತ್ತಾರೆ.

**ಸಿಂಹ** ನಿಮ್ಮ ಕೋಪ ಕಡ್ಡಿಯನ್ನು ಗುಡ್ಡ ಮಾಡಬಹುದು–ಇದು ನಿಮ್ಮ ಕುಟುಂಬದ ಸದಸ್ಯರ ಅಸಮಾಧಾನಕ್ಕೆ ಕಾರಣವಾಗುತ್ತದೆ. ಕೋಪವನ್ನು ನಿಯಂತ್ರಣದಲ್ಲಿಡುವುದನ್ನು ಕಲಿತ ಆ ಮಹಾನ್ ಆತ್ಮಗಳೇ ಅದೃಷ್ಟಶಾಲಿಗಳು. ನಿಮ್ಮ ಕೋಪ ನಿಮ್ಮನ್ನು ಸುಡುವ ಮೊದಲು ನೀವೇ ಅದನ್ನು ಸುಟ್ಟುಬಿಡಿ.

**ಕನ್ಯಾ** ಸ್ವಯಂ ಸುಧಾರಣೆಯ ಯೋಜನೆಗಳು ಒಂದಕ್ಕಿಂತ ಹೆಚ್ಚು ರೀತಿಯಲ್ಲಿ ಫಲ ನೀಡುತ್ತವೆ, ನಿಮ್ಮ ಬಗ್ಗೆ ನಿಮಗೇ ಒಳ್ಳೆಯದೆನಿಸುತ್ತದೆ, ವಿಶ್ವಾಸ ಮೂಡುತ್ತದೆ. ಹೊಸ ಆರ್ಥಿಕ ಒಪ್ಪಂದ ಕುದುರಿಸಲಾಗುತ್ತದೆ, ಹೊಸ ಹಣ ಬರುತ್ತದೆ. ಧೋರಣೆ ಕೇವಲ ಅನುಪಯುಕ್ತ ವಾದಗಳನ್ನು ಪ್ರಾರಂಭಿಸುತ್ತದೆ.

**ತುಲಾ** ನೀವು ಪರಿಸ್ಥಿತಿಯ ನಿಯಂತ್ರಣ ಹೊಂದುತ್ತಿದ್ದಂತೆ ನಿಮ್ಮ ಆತಂಕ ಕಣ್ಮರೆ ಆಗುತ್ತದೆ. ಇದು ಧೈರ್ಯದ ಮೊದಲ ಸ್ಪರ್ಶದಲ್ಲಿ ಕುಸಿದುಹೋಗುವ ಸಾಬೂನಿನ ಗುಳ್ಳೆಯಷ್ಟೇ ಗಟ್ಟಿಯೆಂದು ನೀವು ಅರ್ಥ ಮಾಡಿಕೊಳ್ಳುತ್ತೀರಿ. ಇಂದು ನಿಮ್ಮ ಆಪ್ತರೊಂದಿಗೆ ಜಗಳವಾಗಬಹುದು

**ವೃಶ್ಚಿಕ** ವಿಚ್ಛಿದ್ರಕಾರಕ ಭಾವಗಳು, ಉದ್ವೇಗಗಳನ್ನು ಹತೋಟಿಯಲ್ಲಿರಿಸಿಕೊಳ್ಳಿ. ಸಾಂಪ್ರದಾಯಿಕ ಚಿಂತನೆ, ಹಳೆಯ ವಿಚಾರಗಳು ನಿಮ್ಮ ಪ್ರಗತಿಯನ್ನು ಕುಂಠಿತಗೊಳಿಸಬಹುದು ಅಭಿವೃದ್ಧಿಯನ್ನು ನಿಲ್ಲಿಸಬಹುದು, ಮುಂದೆ ಹೋಗಲು ಅಡೆತಡೆ ರಚಿಸಬಹುದು. ಹಣಕಾಸು ಲಾಭಗಳು ವಿವಿಧ ಮೂಲಗಳಿಂದ ಬರುತ್ತದೆ.

**ಧನಸ್ಸು** ಇಂದು ನೀವು ಭರವಸೆಯ ಮಾಯಾಜಾಲದಲ್ಲಿದ್ದೀರಿ. ಆಹ್ವಾನಿಸದ ಯಾವುದೇ ಅತಿಥಿ ಇಂದು ಮನೆಗೆ ಬರಬಹುದು ಆದರೆ ಈ ಅತಿಥಿಯ ಅದೃಷ್ಟದ ಕಾರಣದಿಂದ ಇಂದು ನೀವು ಆರ್ಥಿಕ ಲಾಭವನ್ನು ಪಡೆಯಬಹುದು. ನಿಮ್ಮ ವರ್ತನೆಯಲ್ಲಿ, ವಿಶೇಷವಾಗಿ ನಿಮ್ಮ ಸಂಗಾತಿಯ ಜೊತೆ, ತಾಳ ತಪ್ಪದಿರಲಿ.

**ಮಕರ** ಕೆಲವರು ನಿಮಗೆ ಏನನ್ನಾದರೂ ಕಲಿಯಲು ಬಹಳ ವಯಸ್ಸಾಗಿದೆಯೆಂದು ಭಾವಿಸಬಹುದು ಆದರೆ ಅದು ನಿಜವಲ್ಲ – ನಿಮ್ಮ ಪ್ರಖರ, ಸಕ್ರಿಯ ಮನಸ್ಸಿನಿಂದ ನೀವು ಹೊಸ ವಿಷಯಗಳನ್ನು ಸುಲಭವಾಗಿ ಕಲಿಯುವಿರಿ. ಸಾಲವನ್ನು ಕೇಳುವ, ಅದನ್ನು ಹಿಂತಿರುಗಿಸದೆ ಇರುವಂತಹ ಸ್ನೇಹಿತರಿಂದ ತಪ್ಪಿಸುವ ಅಗತ್ಯವಿದೆ.

**ಕುಂಭ** ಕಿರಿಕಿರಿ ನಿಮ್ಮ ಮಾನಸಿಕ ಶಾಂತಿಗೆ ತೊಂದರೆ ತಂದರೂ ಒಬ್ಬ ಸ್ನೇಹಿತರು ನಿಮ್ಮ ಸಮಸ್ಯೆಗಳನ್ನು ಪರಿಹರಿಸುವಲ್ಲಿ ಅಪಾರವಾದ ಸಹಾಯ ಮಾಡುತ್ತಾರೆ. ಒತ್ತಡ ತೊಡೆದುಹಾಕಲು ಹಿತವಾದ ಸಂಗೀತವನ್ನು ಆಲಿಸಿ. ನಿಮ್ಮ ಜೀವನ ಸಂಗಾತಿಯೊಂದಿಗೆ ಸೇರಿ ಇಂದು ಭವಿಷ್ಯಕ್ಕೆ ಯಾವುದೇ ಆರ್ಥಿಕ ಯೋಜನೆಯನ್ನು ಮಾಡಬಹುದು.

**ಮೀನ** ಹೆದರಿಕೆ ನಿಮ್ಮ ಸಂತೋಷವನ್ನು ಹಾಳುಗೆಡವಬಹುದು. ನೀವು ಇದು ನಮ್ಮ ಆಲೋಚನೆಗಳು, ಕಲ್ಪನೆಯ ಪ್ರಭಾವವೆಂದು ಅರ್ಥಮಾಡಿಕೊಳ್ಳಬೇಕು. ಇದು ಸ್ವಾಭಾವಿಕತೆಯನ್ನು ಕೊಲ್ಲುತ್ತದೆ–ಜೀವನದ ಆನಂದವನ್ನು ಹೀರಿಕೊಳ್ಳುತ್ತದೆ ಹಾಗೂ ನಮ್ಮ ಸಾಮರ್ಥ್ಯವನ್ನು ಕುಂಠಿತಗೊಳಿಸುತ್ತದೆ.

# ಕಾಮಗಾರಿಯಿಂದ ರಸ್ತೆ ಬಂದ್ ವ್ಯಾಪಾರಸ್ಥರಿಗೆ ಸಂಕಷ್ಟ

## ನಾಲ್ಕು ತಿಂಗಳಿಂದಲೂ ಮುಂದುವರಿದಿರುವ ಈ ಸಮಸ್ಯೆಯಿಂದ ವ್ಯಾಪಾರ ವಹಿವಾಟು ಕುಂಠಿತ, ಆರ್ಥಿಕ ನಷ್ಟದ ಜೊತೆಗೆ ಅಪಾಯದ ಭೀತಿ

• ಉದಯವಾಹಿನಿ, ಮುದ್ದೇಬಿಹಾಳ

ಪಟ್ಟಣದ ಹೃದಯಭಾಗದಲ್ಲಿ ನಿರ್ಮಾಣವಾಗುತ್ತಿರುವ ಬೃಹತ್ ಮೆಗಾ ಮಾರ್ಕೆಟ್ ಕಟ್ಟಡದ ಕಾಮಗಾರಿಗಾಗಿ ಎರಡು ಪ್ರಮುಖ ರಸ್ತೆಗಳನ್ನು ಬಂದ್ ಮಾಡಿರುವುದರಿಂದ ಸಾರ್ವಜನಿಕರು ಹಾಗೂ ಸ್ಥಳೀಯ ವ್ಯಾಪಾರಸ್ಥರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ನಾಲ್ಕು ತಿಂಗಳಿಂದಲೂ ಮುಂದುವರಿದಿರುವ ಈ ಸಮಸ್ಯೆಯಿಂದ ವ್ಯಾಪಾರ ವಹಿವಾಟು ಕುಂಠಿತಗೊಂಡಿದ್ದು, ಆರ್ಥಿಕ ನಷ್ಟದ ಜೊತೆಗೆ ಅಪಾಯದ ಭೀತಿ ಎದುರಾಗಿದೆ. ಕೂಡಲೇ ರಸ್ತೆಗಳನ್ನು ಸಂಚಾರಕ್ಕೆ ಮುಕ್ತಗೊಳಿಸುವಂತೆ ಆಗ್ರಹಿಸಿ ಗುರುವಾರ 16ಕ್ಕೂ ಹೆಚ್ಚು ವ್ಯಾಪಾರಸ್ಥರು ಪುರಸಭೆ ಮುಖ್ಯಾಧಿಕಾರಿಗೆ ಗಡುವು ನೀಡಿದ್ದಾರೆ. ಬೇಡಿಕೆ ಈಡೇರದಿದ್ದರೆ ಬೃಹತ್ ಪ್ರತಿಭಟನೆ ನಡೆಸಿ ಬೀದಿಗಿಳಿಯುವುದಾಗಿ ಎಚ್ಚರಿಕೆ ನೀಡಿದ್ದಾರೆ.

**ನಾಲ್ಕು ತಿಂಗಳಿಂದ ಮುಚ್ಚಿದ ರಸ್ತೆಗಳು: ವ್ಯಾಪಾರಸ್ತರಿಗೆ ಬದುಕು ದುಸ್ತರ:** ಖಾಸ್ಗತೇಶ್ವರ ಮಠ ಮತ್ತು ದ್ಯಾಮವ್ವನ ಕಟ್ಟೆಯ ನಡುವೆ ನಿರ್ಮಾಣವಾಗುತ್ತಿರುವ ಮೆಗಾ ಮಾರ್ಕೆಟ್‌ನ ಬೇಸ್‌ಮೆಂಟ್ ಕಾಮಗಾರಿ ಕಳೆದ ನಾಲ್ಕು ತಿಂಗಳಿಂದ ನಡೆಯುತ್ತಿದೆ. ಈ ಕಾಮಗಾರಿಯ ನೆಪದಲ್ಲಿ ಗುತ್ತಿಗೆದಾರರು ಎರಡು ಪ್ರಮುಖ ರಸ್ತೆಗಳನ್ನು ಸಂಪೂರ್ಣವಾಗಿ ಅಗೆದು ಸಂಚಾರಕ್ಕೆ ಬಂದ್ ಮಾಡಿದ್ದಾರೆ. ಕಳೆದ ನಾಲ್ಕು ತಿಂಗಳಿಂದ ನಮ್ಮ ವ್ಯಾಪಾರ ಸಂಪೂರ್ಣ ಕುಸಿದಿದೆ. ಮಠದ ಮುಂಭಾಗ ಮತ್ತು ಬಲಭಾಗದಲ್ಲಿರುವ


ಉದಯವಾಹಿನಿ ಚಿತ್ರ

ನಮ್ಮ ಅಂಗಡಿಗಳಿಗೆ ಗ್ರಾಹಕರು ಬರುವುದು ನಿಂತುಹೋಗಿದೆ. ದೈನಂದಿನ ವ್ಯಾಪಾರವನ್ನೇ ನಂಬಿ ಬದುಕುತ್ತಿರುವ ನಾವು ಜೀವನ ನಿರ್ವಹಣೆಗೂ ಪರದಾಡುವಂತಾಗಿದೆ ಎಂದು ಸ್ಥಳೀಯ ವ್ಯಾಪಾರಸ್ಥರು ಅಳಲು ತೋಡಿಕೊಂಡಿದ್ದಾರೆ. ರಸ್ತೆಗಳು ಮುಚ್ಚಿರುವುದರಿಂದ ಇಡೀ ಪ್ರದೇಶ ಸ್ತಬ್ಧವಾದಂತಾಗಿದ್ದು, ಸಾರ್ವಜನಿಕರೂ ಸಂಚಾರಕ್ಕೆ ಬದಲಿ ಮಾರ್ಗಗಳನ್ನು ಅವಲಂಬಿಸಬೇಕಾಗಿದೆ.

### ಅಭಿವೃದ್ಧಿ ಬೇಕು, ಆದರೆ ಜನರ ಸಂಕಷ್ಟದ ಮೇಲೆ ಬೇಡ

**ನಾವು ಅಭಿವೃದ್ಧಿ ಕೆಲಸಗಳಿಗೆ ಎಂದಿಗೂ ವಿರೋಧಿಗಳಲ್ಲ, ಆದರೆ ಜನರ ಜೀವನದ ಮೇಲೆ ಪರಿಣಾಮ ಬೀರುವ ರೀತಿಯಲ್ಲಿ, ಯಾವುದೇ ಸುರಕ್ಷತಾ ಕ್ರಮಗಳಿಲ್ಲದೆ ಕಟ್ಟಡ ನಿರ್ಮಿಸುವುದು ಸರಿಯಲ್ಲ ಎಂದು ವ್ಯಾಪಾರಸ್ಥರು ತಮ್ಮ ಮನವಿಯಲ್ಲಿ ಸ್ಪಷ್ಟಪಡಿಸಿದ್ದಾರೆ. ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದಂತೆ, ವ್ಯಾಪಾರ ವಹಿವಾಟಿಗೆ ಅಡ್ಡಿಯಾಗದಂತೆ ಕಾಮಗಾರಿಯನ್ನು ಮುಂದುವರಿಸಬೇಕು. ಕೂಡಲೇ ಬಂದ್ ಮಾಡಿರುವ ರಸ್ತೆಗಳನ್ನು ತೆರವುಗೊಳಿಸಿ, ಅಪಾಯಕಾರಿ ಪ್ರದೇಶಗಳಲ್ಲಿ ಸೂಕ್ತ ಬೇಲಿ ನಿರ್ಮಿಸಿ ಸುರಕ್ಷತೆಯನ್ನು ಖಾತರಿಪಡಿಸಬೇಕು ಎಂದು ವ್ಯಾಪಾರಸ್ಥರು ಪುರಸಭೆಯನ್ನು ಒತ್ತಾಯಿಸಿದ್ದಾರೆ.**

### ಪ್ರತಿಭಟನೆಯ ಗಡುವು: ಪುರಸಭೆಯ ಮುಂದಿನ ನಡೆ ಏನು?

**ತಮ್ಮ ಬೇಡಿಕೆಗಳನ್ನು ಪುರಸಭೆ ನಿರ್ಲಕ್ಷಿಸಿದರೆ, ನೊಂದ ವ್ಯಾಪಾರಸ್ಥರು, ಪೀಡಿತ ಕುಟುಂಬಗಳು, ಸಾರ್ವಜನಿಕರೊಂದಿಗೆ ಸೇರಿ ಪುರಸಭೆ ಕಚೇರಿ ಎದುರು ಬೃಹತ್, ಅನಿರೀಕ್ಷಿತ ಪ್ರತಿಭಟನೆ ನಡೆಸುವುದಾಗಿ ವ್ಯಾಪಾರಸ್ಥರು ಎಚ್ಚರಿಕೆ ನೀಡಿದ್ದಾರೆ. ಎಂ.ಕೆ.ಬೇವಿನಗಿಡ, ಎಲ್.ಎಸ್. ದೇಶಪಾಂಡೆ, ಸಿ.ಸಿ.ಗೋಟೂರ, ಎ.ಜಿ.ಮಗಜಿ, ಎ.ಜಿ.ಮಾಡಗಿ, ಎಂ.ವಿ.ತಾರನಾಳ, ಕೆ.ಎಲ್.ಶಿರೋಳ, ಹಾಜಿ ಮಕಾನದಾರ, ಜೈರಾಬಿ ಮಕಾನದಾರ, ಮಾಬುಬ್ಬಿ ಬಾಗವಾನ, 16ಕ್ಕೂ ಹೆಚ್ಚು ವ್ಯಾಪಾರಸ್ಥರು ಸಹಿ ಮಾಡಿದ ಮನವಿ ಪತ್ರವನ್ನು ಸಲ್ಲಿಸಿದ್ದಾರೆ.**

**ಅಪಾಯಕಾರಿ ಗುಂಡಿಗಳು: ಜೀವಕ್ಕೆ ಕುತ್ತು, ಮನೆಗಳಿಗೂ ಸಂಕಷ್ಟ:** ಕೇವಲ ವ್ಯಾಪಾರ ಕುಂಠಿತ ಮಾತ್ರವಲ್ಲದೆ ಕಾಮಗಾರಿಗಾಗಿ ಆಳವಾಗಿ ತೋಡಲಾಗಿರುವ ಗುಂಡಿಗಳು ರಸ್ತೆ ಬದಿಗಳಲ್ಲಿ ಅಪಾಯಕಾರಿ ಕೊರಕಲುಗಳನ್ನು ಸೃಷ್ಟಿಸಿವೆ. ಯಾವುದೇ ಕ್ಷಣದಲ್ಲಾದರೂ ಸಾರ್ವಜನಿಕರು ಆಕಸ್ಮಿಕವಾಗಿ ಕಾಲು ಜಾರಿ ಬಿದ್ದರೆ ದೊಡ್ಡ ಅನಾಹುತ ಸಂಭವಿಸುವ ಸಾಧ್ಯತೆಯಿದೆ. ಈ ಬಗ್ಗೆ ಪುರಸಭೆ ಅಧಿಕಾರಿಗಳಿಗೆ ಈಗಾಗಲೇ ಎರಡು ಬಾರಿ ಮೌಖಿಕವಾಗಿ ಮನವಿ ಸಲ್ಲಿಸಿದ್ದರೂ, ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ವ್ಯಾಪಾರಸ್ಥರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಮಾರ್ಕೆಟ್ ಕಟ್ಟಡದ ಪಕ್ಕದಲ್ಲಿರುವ ಎರಡು ಮನೆಗಳ ನಿವಾಸಿಗಳಿಗೂ ರಸ್ತೆ ಬಂದ್ ಆಗಿರುವುದು ಸಮಸ್ಯೆ ಉಂಟುಮಾಡಿದೆ. ತಮ್ಮ ಮನೆಗಳ ಮುಂಭಾಗದಲ್ಲೇ ಆಳವಾದ ತೆಗ್ಗು ಇರುವುದರಿಂದ ನಿವಾಸಿಗಳ ದೈನಂದಿನ ಸಂಚಾರಕ್ಕೆ ಅಡ್ಡಿಯಾಗಿದೆ. ಪುರಸಭೆಯೇ ಅಪಾಯಕ್ಕೆ ಆಹ್ವಾನ ನೀಡಿದಂತಿದೆ ಎಂದು ಸ್ಥಳೀಯ ನಿವಾಸಿಗಳು ಭಯ ವ್ಯಕ್ತಪಡಿಸಿದ್ದಾರೆ. ವ್ಯಾಪಾರಸ್ಥರ ಈ ಅಲ್ಟಿಮೇಟಂಗೆ ಪುರಸಭೆ ಆಡಳಿತ ಹೇಗೆ ಸ್ಪಂದಿಸುತ್ತದೆ ಎಂಬುದನ್ನು ಕಾದು ನೋಡಬೇಕಿದೆ. ರಸ್ತೆ ಸಮಸ್ಯೆಗೆ ಕೂಡಲೇ ಪರಿಹಾರ ಸಿಗುವುದೇ, ವ್ಯಾಪಾರಸ್ಥರು ಪ್ರತಿಭಟನೆಗಿಳಿಯಬೇಕಾಗುತ್ತದೆ ಎಂದು ಎಚ್ಚರಿಸಿದರು.

# ಸಿಎಂ, ಡಿಸಿಎಂಗಳ ಕಾರ್ಯಕ್ರಮಕ್ಕೆ ತಾಲ್ಲೂಕು ವಿಶ್ವಕರ್ಮ ಸಮುದಾಯದಿಂದ ಸ್ವಾಗತ


ಉದಯವಾಹಿನಿ ಚಿತ್ರ

• ಉದಯವಾಹಿನಿ ಅರಸೀಕೆರೆ

ಬರುವ 26ರಂದು ಅಂದರೆ ಶನಿವಾರ ಅರಸೀಕೆರೆ ನಗರಕ್ಕೆ ಆಗಮಿಸುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಇನ್ನಿತರ ಸಚಿವರು ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ತಾಲ್ಲೂಕು ವಿಶ್ವಕರ್ಮ ಸಮುದಾಯದ ವತಿಯಿಂದ ಕಾರ್ಯಕ್ರಮ ಯಶಸ್ವಿಯಾಗಲೆಂದು ಅರಸಿಕೆರೆ ತಾಲ್ಲೂಕ್ ವಿಶ್ವಕರ್ಮ ಸಮುದಾಯದ ಅಧ್ಯಕ್ಷರಾದ ಯೋಗೀಶ್ ಆಚಾರ್ ತಿಳಿಸಿದರು. ತಾಲ್ಲೂಕಿನ ವಿಶ್ವಕರ್ಮ ಸಮುದಾಯ ಭವನ ಪ್ರಪ್ರಥಮವಾಗಿ ಜಾಗ ಗುರುತು ಮಾಡಿಸಿ ಕೊಟ್ಟಿದ್ದು ಈಗಿನ ನಗರಸಭೆಯ ಅಧ್ಯಕ್ಷರಾದ ಎಮ್ ಸಮೀವುಲ್ಲಾ ಅವರು ನಂತರ ಶಾಸಕ ಶಿವಲಿಂಗೇಗೌಡರು ನಮ್ಮ ಸಮುದಾಯವನ್ನು ಗುರುತಿಸಿ ನಮ್ಮನ್ನು ಕರೆಸಿ ಹಂತ ಹಂತವಾಗಿ 65 ಲಕ್ಷಕ್ಕೂ ಹೆಚ್ಚು ಅನುದಾನವನ್ನು ಕೊಡಿಸಿ ಇನ್ನು ಮುಂದೆಯೂ ಸಹ ಸಮುದಾಯ ಭವನ ಪೂರ್ಣಗೊಳಿಸಲು ಸರ್ಕಾರದಿಂದ ಅನುದಾನ ಕೊಡಿಸುವುದಾಗಿ ಭರವಸೆ ನೀಡಿರುವುದು ನಮ್ಮ ಇಡೀ ವಿಶ್ವಕರ್ಮ ಸಮುದಾಯಕ್ಕೆ ಸಂತೋಷ ತಂದಿದೆ ಎಂದರು.

ಅಲ್ಲದೆ ರಾಷ್ಟ್ರೀಯ ಹೆದ್ದಾರಿ 206 ರಲ್ಲಿ ಎಪಿಎಂಸಿ ಮುಂಬಾಗ ವಿಶ್ವಕರ್ಮ ವೃತ್ತ ಎಂದು ನಾಮಕರಣ ಮಾಡಲು ಸರ್ಕಾರಕ್ಕೆ ಮತ್ತು ಶಾಸಕರಿಗೆ ಮನವಿ ನೀಡಿದ್ದು ಇದಕ್ಕೂ ಸಹ ಶಾಸಕ ಶಿವಲಿಂಗೇಗೌಡರು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ ಎಂದರು. ಗಂಡಸಿಗೆ ಹೋಬಳಿ ಸಂಘಟನಾ ಕಾರ್ಯದರ್ಶಿ, ಕಾಂಗ್ರೆಸ್ ಮುಖಂಡ ದೇವರಾಜ್. ಕಾರ್ಯದರ್ಶಿ ಪ್ರಸನ್ನ ಆಚಾರ್. ಸಹ ಸಂಘಟನಾ ಕಾರ್ಯದರ್ಶಿ ಸ್ವಾಮಿ. ನಿರ್ದೇಶಕರಾದ ನವೀನ್ ಉಪಸ್ಥಿತರಿದ್ದರು.

# ನಾನು ನಟನಷ್ಟೇ: ನಿರ್ಮಾಪಕರು, ನಿರ್ದೇಶಕರು ಬೇರೆ

• ಉದಯವಾಹಿನಿ, ಹುಕ್ಕೇರಿ



ಬಿಡಿಸಿಸಿ ಬ್ಯಾಂಕ್, ಹುಕ್ಕೇರಿಯ ಗ್ರಾಮೀಣ ವಿದ್ಯುತ್ ಸಹಕಾರಿ ಸಂಘ ಮತ್ತು ಹಿರಣ್ಯಕೇಶಿ ಸಹಕಾರಿ ಸಕ್ಕರೆ ಕಾರ್ಖಾನೆಗೆ ನಡೆಯುವ ಚುನಾವಣೆಗಳಲ್ಲಿ ನಾನು ನಟನಷ್ಟೇ.

ನಿರ್ಮಾಪಕ, ನಿರ್ದೇಶಕ ಬೇರೆ ಬೇರೆ ಇದ್ದಾರೆ ಎಂದು ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಹೇಳಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗ್ರಾಮೀಣ ವಿದ್ಯುತ್ ಸಹಕಾರಿ ಸಂಘದ ಚುನಾವಣೆ ಸಮೀಪಿಸುತ್ತಿದ್ದು, ಸದಸ್ಯರ ಸಭೆ ಮಾಡುತ್ತಿದ್ದೇವೆ. ಮಾಜಿ ಸಂಸದ ಅಣ್ಣಾಸಾಹೇಬ ಜೊಲ್ಲೆ ನಿರ್ಮಾಪಕ, ಶಾಸಕ ಬಾಲಚಂದ್ರ ಜಾರಕಿಹೊಳಿ ನಿರ್ದೇಶಕರಾಗಿದ್ದಾರೆ.

ಅವರಿಬ್ಬರೂ ಚುನಾವಣೆ ಅಖಾಡಕ್ಕೆ ಇನ್ನೂ ಧುಮುಕಿಲ್ಲ, ಅವರು ಕತೆ ಹೇಳಿದ ನಂತರವೇ ಚಿತ್ರ ನಿರ್ಮಾಣ ಆರಂಭವಾಗಲಿದೆ ಎಂದು ಮುಗುಳ್ನಕ್ಕರು. ಗ್ರಾಮೀಣ ವಿದ್ಯುತ್ ಸಹಕಾರಿ ಸಂಘಕ್ಕೆ ಕೈ ಹಾಕಿ, ಕತ್ತಿ ಕುಟುಂಬದ ನೇತೃತ್ವದಲ್ಲಿದ್ದ ಆಡಳಿತ ಕಸಿದು ಕೊಟ್ಟವರು ಅವರಿಬ್ಬರು. ಅವರ ಸಲಹೆ ಮೇರೆಗೆ ನಾವು ಹೆಜ್ಜೆ ಇರಿಸಲಿದ್ದೇವೆ ಎಂದರು.

# ಜನರ ಬದುಕು ಬದಲಿಸಿದ ಗ್ಯಾರಂಟಿ

• ಉದಯವಹಿನಿ, ಹಾನಗಲ್

ಬಿಟ್ಟಿ ಭಾಗ್ಯ ಎಂದು ಬೇಕಾಬಿಟ್ಟಿಯಾ ಮಾತನಾಡಿದವರಿಗೂ ಇದೀಗ ಗ್ಯಾರಂಟಿ ಯೋಜನೆಗಳ ಬಗ್ಗೆ ಮನವರಿಕೆಯಾಗಿದೆ. ಇವೆಲ್ಲ ಜನರ ಬದುಕು ಬದಲಿಸುವ ಗಟ್ಟಿ ಭಾಗ್ಯಗಳು ಎಂಬುದು ಸಾಬೀತಾಗಿದೆ. ಗ್ಯಾರಂಟಿ ಯೋಜನೆಗಳಿಂದ ಮಹಿಳೆಯರು ಆರ್ಥಿಕವಾಗಿ ಸಬಲರಾಗಿದ್ದಾರೆ ಎಂದು ಶಾಸಕ ಶ್ರೀನಿವಾಸ ಮಾನೆ ಹೇಳಿದರು. ಇಲ್ಲಿನ ಶಾಸಕರ ಮಾದರಿ ಶಾಲೆಯ ಮೈದಾನದಲ್ಲಿ ತಾಲ್ಲೂಕು ಆಡಳಿತ ಗುರುವಾರ ಆಯೋಜಿಸಿದ್ದ ಹಾನಗಲ್, ಬಮ್ಮನಹಳ್ಳಿ ಹೋಬಳಿ ಮಟ್ಟದ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮಾವೇಶದಲ್ಲಿ ಮಾತನಾಡಿದರು. ಆರ್ಥಿಕ ಸಂಕಷ್ಟದ ಸಂದರ್ಭದಲ್ಲಿ ರಚನೆಯಾದ ರಾಜ್ಯ ಸರ್ಕಾರ, ಜನರ ನಿರೀಕ್ಷೆಯನ್ನು ಸಾಕಾರಗೊಳಿಸಿದೆ.



ಉದಯವಾಹಿನಿ ಚಿತ್ರ

ಗ್ಯಾರಂಟಿ ಯೋಜನೆಗಳನ್ನು ಸಕಾಲಿಕ, ಸಾರ್ಥಕವಾಗಿ ಜಾರಿಗೊಳಿಸಿದೆ. ರಾಜ್ಯದ ಸಮಗ್ರ ಅಭಿವೃದ್ಧಿಗೂ ಕ್ರಮ ವಹಿಸಿದೆ ಎಂದರು. ತಾಲ್ಲೂಕಿನ ಕುಡಿಯುವ ನೀರಿನ ಯೋಜನೆಗಳಿಗೆ 180 ಕೋಟಿ, ರಸ್ತೆ ನಿರ್ಮಾಣಕ್ಕಾಗಿ 200 ಕೋಟಿ ಅನುದಾನ ಬಿಡುಗಡೆಯಾಗಿದೆ. ಸರ್ಕಾರಿ ಶಾಲೆಗಳ ಅಭಿವೃದ್ಧಿಗಾಗಿ ದಾನಿಗಳ ಸಹಾಯ ಪಡೆದು ಸ್ಮಾರ್ಟ್ ಕ್ಲಾಸ್ ಸೇರಿದಂತೆ ಅಗತ್ಯ ಸೌಲಭ್ಯ ಕಲ್ಪಿಸಿದ್ದೇವೆ. ಐಎಸ್, ಕೆಎಸ್, ಸಿಇಟಿ ತರಬೇತಿಯ ಪ್ರಯೋಜನವನ್ನು ವಿದ್ಯಾರ್ಥಿಗಳು ಪಡೆಯುತ್ತಿದ್ದಾರೆ ಎಂದರು.

# ನ್ಯಾ. ಅಂಗಡಿ ತೆರೆವುಗೊಳಿಸಲು ನಿಯೋಗ ಸಚಿವರಿಗೆ ಮನವಿ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಚಿಂಚೋಳಿ

ತಾಲ್ಲೂಕಿನ ಸುಲೇಪೇಟ ಗ್ರಾಮದ ವಿಎಸ್ಎಸ್ಎನ್‌ನಲ್ಲಿ ನಡೆಯುವ ನ್ಯಾಯ ಬೆಲೆ ಅಂಗಡಿ ತಾತ್ಕಾಲಿಕವಾಗಿ ಅಮಾನತಗೊಂಡ ನ್ಯಾಯ ಬೆಲೆ ಅಂಗಡಿಗೆ ಪುನ ತೆರವುಗೊಳಿಸಬೇಕು ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ ಪಾಟೀಲ ಅವರಿಗೆ ಪಿಕೆಪಿಎಸ್ ಅಧ್ಯಕ್ಷ ರಮೇಶ ಯಾಕಾಪೂರ ನೇತೃತ್ವದಲ್ಲಿ ನಿಯೋಗ ಭೇಟಿಯಾಗಿ ಮನವಿ ಸಲ್ಲಿಸಿದರು. ತಾಲ್ಲೂಕಿನ ಸುಲೇಪೇಟ ನ್ಯಾಯಬೆಲೆ ಅಂಗಡಿ 19ರ ಪ್ರಾಧಿಕಾರವನ್ನು ವಿಎಸ್ಎಸ್ಎನ್ ಹೊಂದಿರುವುದನ್ನು ಜಿಲ್ಲಾ ಉಪ ನಿರ್ದೇಶಕರು ಆಹಾರ ಮತ್ತು ನಾಗರಿಕ ಸರಬರಾಜು ಗ್ರಾಹಕರ ವ್ಯವಹಾರ ಇಲಾಖೆಯವರು ಕೆಲವು ಕಾರಣಗಳಿಂದ ಪ್ರಾಧಿಕಾರವನ್ನು ಅಮಾನತ್ತುಗೊಳಿಸಿದ್ದಾರೆ.

ತಾಲ್ಲೂಕಿನ ದಂಡಾಧಿಕಾರಿಗಳು ನ್ಯಾಯಬೆಲೆ ಅಂಗಡಿ 19ರ ಪ್ರಾಧಿಕಾರವನ್ನು ಬೇರೊಂದು ನ್ಯಾಯ ಬೆಲೆ ಅಂಗಡಿಗೆ ವಹಿಸಿ ಕೊಟ್ಟಿದ್ದಾರೆ,ಇದರಿಂದ ಸುಲೇಪೇಟ ಪಡಿತರ ಚೀಟಿದಾರರ ಅನುಕೂಲ ದೃಷ್ಟಿಯಿಂದ ವಿಎಸ್ಎಸ್ಎನ್ ಸುಲೇಪೇಟದ ನ್ಯಾಯಬೆಲೆ ಅಂಗಡಿ19ರ ಪ್ರಾಧಿಕಾರದ ಅಮಾನತ್ತು ಆದೇಶ ತೆರವುಗೊಳಿಸಲು ಉಪ ನಿರ್ದೇಶಕರು ಆಹಾರ, ನಾಗರಿಕ ಸರಬರಾಜು, ಗ್ರಾಹಕರ ವ್ಯವಹಾರಗಳ ಇಲಾಖೆ ಕಲಬುರಗಿರವರಿಗೆ ಶಿಫಾರಸ್ಸು ಮಾಡಬೇಕು ಎಂದು ಸಂಘದ ಅಧ್ಯಕ್ಷ ರಮೇಶ ಯಾಕಾಪೂರ ತಿಳಿಸಿದರು. ಈ ಸಂದರ್ಭದಲ್ಲಿ ಸಂಘದ ಸಿಇಓ ಅತೀಕ ಪಾಶಾ, ಸಂಘದ ಉಪಾಧ್ಯಕ್ಷ ನರಸಪ್ಪಾ ಪೂಜಾರಿ, ನಿರ್ದೇಶಕರಾದ ಲಾಡ್ಲೆಸಾಬ್, ಸುದರ್ಶನ ಸಂತಾಳ, ಮಲ್ಲಿಕಾರ್ಜುನ ಪಾಟೀಲ ಅನೇಕರಿದ್ದರು.

# ಪೊಲೀಸರ ರಿವಾಲ್ವರ್ ಸದ್ದು ಇಬ್ಬರು ಕಳ್ಳರಿಗೆ ಗುಂಡೇಟು


• ಉದಯವಾಹಿನಿ, ಧಾರವಾಡ

ವಿದ್ಯಾಕಾಶಿ ಎಂದೇ ಹೆಸರಾಗಿರುವ ಧಾರವಾಡದಲ್ಲಿ ಬೆಳ್ಳಂ ಬೆಳಗ್ಗೆ ಪೊಲೀಸರ ರಿವಾಲ್ವರ್ ಸದ್ದು ಮಾಡಿದ್ದು ಇಬ್ಬರು ಕಳ್ಳರು ಗುಂಡೇಟಿನಿಂದ ಗಾಯಗೊಂಡಿದ್ದಾರೆ. ವಿದ್ಯಾಗಿರಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದ್ದು, ಮುಜಾಮಿಲ್, ವಿಜಯ ಗುಂಡೇಟು ತಿಂದ ಆರೋಪಿಗಳು. ಗಿರಿನಗರದ ಬಡಾವಣೆಯ ಮನೆಯೊಂದರಲ್ಲಿ ಈ ಇಬ್ಬರು ಕಳ್ಳತನ ಮಾಡಿಕೊಂಡು ಅಲ್ಲಿಂದ ಪರಾರಿಯಾಗುತ್ತಿದ್ದರು. ಆ ವೇಳೆ ಗಸ್ತಿನಲ್ಲಿದ್ದ ಪೊಲೀಸರ ಕೈಗೆ ಸಿಕ್ಕಿಬಿದ್ದಿದ್ದಾರೆ. ಆ ಸಂದರ್ಭದಲ್ಲಿ ಪಿಎಸ್ಐ ಮಲ್ಲಿಕಾರ್ಜುನ, ಕಾನ್ಸ್‌ಟೇಬಲ್ ಮಹ್ಮದ್ ಇಸಾಕ್‌ನಧಾಪ್ ಅವರ ಮೇಲೆ ಹಲ್ಲೆ ಮಾಡಿ ಪರಾರಿಯಾಗಲು ಆರೋಪಿಗಳುಯತ್ನಿಸಿದ್ದಾರೆ. ತಕ್ಷಣ ಇನ್ಸ್ ಪೆಕ್ಟರ್ ಅವರು ಒಂದು ಸುತ್ತು ಗಾಳಿಯಲ್ಲಿ ಗುಂಡು ಹಾರಿಸಿ ಶರಣಾಗುವಂತೆ ಎಚ್ಚರಿಸಿದ್ದಾರೆ.

ಇನ್ಸ್‌ಪೆಕ್ಟರ್ ಅವರ ಮಾತನ್ನು ಲೆಕ್ಕಿಸದೆ ಮತ್ತೆ ಹಲ್ಲೆಗೆ ಮುಂದಾದಾಗ ಆತ್ಮರಕ್ಷಣೆಗಾಗಿ ಇನ್ಸ್ ಪೆಕ್ಟರ್ ಹಾರಿಸಿದ ಗುಂಡುಗಳು ಆರೋಪಿಗಳ ಕಾಲಿಗೆ ತಗುಲಿದ್ದರಿಂದ ಕುಸಿದು ಬಿದ್ದಿದ್ದಾರೆ. ತಕ್ಷಣ ಪೊಲೀಸರು ಆರೋಪಿಗಳನ್ನು ಸುತ್ತುವರೆದು ಚಿಕಿತ್ಸೆಗಾಗಿ ಜಿಲ್ಲಾಸ್ಪತ್ರೆಗೆ ಚಿಕಿತ್ಸೆಗಾಗಿ ದಾಖಲಿಸಿದ್ದಾರೆ.

ಕಾರ್ಯಾಚರಣೆ ವೇಳೆ ಗಾಯಗೊಂಡಿರುವ ಸಿಬ್ಬಂದಿಯೂ ಸಹ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಸುದ್ದಿ ತಿಳಿದು ಆಸ್ಪತ್ರೆಗೆ ಪೊಲೀಸ್ ಕಮಿಷನರ್ ಎನ್. ಶಶಿಕುಮಾರ್ ಅವರು ಭೇಟಿ ನೀಡಿ ಸಿಬ್ಬಂದಿಯವರ ಆರೋಗ್ಯ ವಿಚಾರಿಸಿದ್ದಾರೆ.

# ಮರಾಠಿಯಲ್ಲಿ ದಾಖಲೆ ಕೇಳಿದ ಸದಸ್ಯ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಳಗಾವಿ

ಪಾಲಿಕೆ ಪರಿಷತ್ ಸಭೆಯಲ್ಲಿ ಮರಾಠಿಯಲ್ಲಿ ದಾಖಲೆ ನೀಡುವಂತೆ ಎಂಇಎಸ್ ಬೆಂಬಲಿತ ಸದಸ್ಯ ರವಿ ಸಾಳುಂಕೆ ಕೇಳಿರುವುದನ್ನು ಖಂಡಿಸಿ, ಕರ್ನಾಟಕ ರಕ್ಷಣಾ ವೇದಿಕೆ (ಟಿ.ಎ.ನಾರಾಯಣಗೌಡ ಬಣ) ಕಾರ್ಯಕರ್ತರು ಪಾಲಿಕೆ ಆವರಣದಲ್ಲಿ ಪ್ರತಿಭಟನೆ ಆರಂಭಿಸಿದ್ದಾರೆ. ಪಾಲಿಕೆ ಸಭಾಂಗಣದಲ್ಲಿ ಇನ್ನೂ ಸಭೆ ನಡೆದಿದೆ. ಇದರ ಮಧ್ಯೆ ಕಾರ್ಯಕರ್ತರು ಪ್ರತಿಭಟನೆ ನಡೆಸುತ್ತಿದ್ದು, ಪೊಲೀಸರು ಬಿಗಿ ಭದ್ರತೆ ಕೈಗೊಂಡಿದ್ದಾರೆ. ಮರಾಠಿಯಲ್ಲಿ ದಾಖಲೆ ಕೇಳಿದ ಸದಸ್ಯರನ್ನು ಅನರ್ಹಗೊಳಿಸಬೇಕು ಎಂದು ಕಾರ್ಯಕರ್ತರು ಪಟ್ಟು ಹಿಡಿದಿದ್ದಾರೆ

# ಮುಸ್ಲಿಂ ಸಮುದಾಯ ವೋಟ್ ಬ್ಯಾಂಕ್ ಅಷ್ಟೇ..?

• ಉದಯವಾಹಿನಿ, ಸಿಂಧನೂರು


ಉದಯವಾಹಿನಿ ಚಿತ್ರ

**ಶಾಸಕರು ವಿರುದ್ಧ ಆಕ್ರೋಶ**

ಶಾಸಕ ಹಂಪನಗೌಡ ಬಾದರ್ಲಿ ನಮ್ಮ ಮುಸ್ಲಿಂ ಸಮುದಾಯವನ್ನು ತಮ್ಮ ವೋಟ್ ಬ್ಯಾಂಕ್ ಮೂಲಕ ನಮ್ಮನ್ನು ಬಳಸಿಕೊಳ್ಳುತ್ತಿದ್ದಾರೆ ಈಗಾಗಲೇ ಹಲವು ದಿನಗಳಿಂದ ನಮ್ಮ ಸಮುದಾಯದವರನ್ನು ನಿರ್ಲಕ್ಷ್ಯ ಬಂದಿರುವುದನ್ನು ಖಂಡಿಸಿ ನಗರ ಸಭೆಯ ಮಾಜಿ ಅಧ್ಯಕ್ಷ ಹಾಗೂ ಶಾಸಕರ ಆಪ್ತ ವಲಯದಲ್ಲಿ ಗುರುತಿಸಿಕೊಂಡಿದ್ದು ಜಾಫರ್ ಅಲಿ ಜಾಗೀರದಾರ್ ಅವರು ಮನೆಗೆ ಮುಸ್ಲಿಂ ಸಮುದಾಯದ ಮುಖಂಡರು ಮುತ್ತಿಗೆ ಹಾಕಿ ನಾವು ನೀವು ಹೇಳಿದಾಂಗೆ ಕಾಂಗ್ರೆಸ್‌ಗೆ ವೋಟು ಹಾಕಿಸಿ ಶಾಸಕ ಹಂಪನಗೌಡ ಬಾದರ್ಲಿ ಅವರನ್ನು ಗೆಲ್ಲಿಸಿದ್ದಾರೆ ಈಗ ನಮ್ಮ ಸಮುದಾಯದ ಮುಖಂಡರನ್ನು ಕಡೆಗಣಿಸುತ್ತಾ ಬಂದಿದ್ದಾರೆ ಎಂದು ಆಗ್ರಹಿಸಿದರು.

ಬೀದಿ ಬದಿಯ ವ್ಯಾಪಾರಸ್ಥರನ್ನು ತೆರವುಗೊಳಿಸಿ ಇಲ್ಲಿಗೆ 7-8 ತಿಂಗಳ ಕಳೆದವು. ಜಾನುವಾರುಗಳ ಸಂತೆಯಲ್ಲಿ ಕೆಲವು ಹಿಂದೂ ಪರ ಸಂಘಟನೆಗಳು ಪುಂಡರು ಪೇದೆ ಪೇದೆ ಕಿರುಕುಳ ನೀಡುತ್ತಿದ್ದಾರೆ ವ್ಯಾಪಾರ ಮಾಡುವುದಕ್ಕೆ ಅನುವು ಮಾಡಿ ಕೊಡುವುದು. ಈಗಾಗಲೇ ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿ ಅನುದಾನ ಬಂದರೂ ಸಹ ಅದನ್ನು ಬಳಕೆ ಮಾಡುತ್ತಿಲ್ಲ.

ವಕ್ಫ್ ಬೋರ್ಡ್‌ನಲ್ಲಿ ಸಮಸ್ಯೆಗಳು ಆಗಿದ್ದು ಸೌಲಭ್ಯ ಪಡೆಯಲು ದಾಖಲಾತಿ ಕ್ರೋಢೀ ಕರಣಕ್ಕೆ ತೊಂದರೆ ಆಗುತ್ತಿರುವುದು. ಗಂಗಾವತಿ ರಸ್ತೆಯಲ್ಲಿ ಮಸ್ಜೀದ್ ನಿರ್ಮಾಣಕ್ಕೆ ಅವಕಾಶ ಕೊಡದೆ ಆಕ್ಷೇಪ ಪಡಿಸುತ್ತಾ ಶಾಸಕರು ಹಂಪನಗೌಡ ಬಾದರ್ಲಿ ಬಂದಿದ್ದಾರೆ ಆರೋಪಿಸಿದರು.

ಇತ್ತೀಚೆಗೆ ದಿನಗಳಲ್ಲಿ ನಗರಸಭೆಯಲ್ಲಿ ಪಾರ್ಮ್ ನಂ.3 ಮುಟೇಶನ ಹಾಸ್ಟೆಲ್ ಸಮಸ್ಯೆ, ಕಟ್ಟಡ ಕಾರ್ಮಿಕರ ಸಮು ದಾಯ ಭವನ ನಿರ್ಮಾಣ ಸೇರಿದಂತೆ ಹಲವು ವಿಷಯಗಳ ಕುರಿತು ಸೇರಿದ್ದ ಮುಖಂಡರುಗಳು, ಯುವಕರು ಜಾಫರ್ ಅಲಿ ಜಾಗೀರದಾರ್ ಅವರು ಮುಂದೆ ಪ್ರಸ್ತಾಪಿಸಿದರು. ಶಾಸಕರು ಯಾರನ್ನು ಕಡೆಗಣಿಸುತ್ತಾ ಬಂದಿಲ್ಲ.

ಈಗಾಗಲೇ ನಿಮ್ಮ ಎಲ್ಲಾ ಬೇಡಿಕೆಗಳನ್ನು ಈಡೇರಿಸುವಂತೆ ಶಾಸಕರು ಜೊತೆಗೆ ಚರ್ಚೆ ಮಾಡುತ್ತೇನೆ ಎಂದು ಅವರು ಜಾಫರ್ ಅಲಿ ಜಾಗೀರದಾರ್ ಅವರು ಸಮುದಾಯಕ್ಕೆ ಭರವಸೆ ನೀಡಿದರು. ಸಮುದಾಯದ ಮುಖಂಡರು ಇದನ್ನು ಒಪ್ಪಿದೆ ಇಲ್ಲ ಇನ್ನು ಒಂದು ವಾರದೊಳಗೆ ನಮ್ಮ ಸಮುದಾಯದವರನ್ನು ಕರೆದು ಸಭೆ ನಡೆಸಿ ಚರ್ಚಿಸಬೇಕು ಇಲ್ಲದಿದ್ರೆ ಮುಂದಿನ ನಿರ್ಮಾಣವನ್ನು ನಮ್ಮ ಸಮುದಾಯದ ಮುಖಂಡರು ತೆಗೆದುಕೊಳ್ಳುತ್ತಾರೆ ಎಚ್ಚರಿಕೆ ಸಂದೇಶ ರವಾನಿಸಿದ್ದಾರೆ.

### ಸ್ವಾರ್ಥ ರಾಜಕೀಯಕ್ಕೆ ಎಂಟ್ರಿ

**ಮುಸ್ಲಿಂ ಸಮುದಾಯದ ಮುನಿಸಿಗೆ ನಗರಾಭಿವೃದ್ಧಿ ಪ್ರಾಧಿಕಾರದ ಕಾರಣವೇ ಎಂಬ ಪ್ರಶ್ನೆ... ಸಾರ್ವಜನಿಕರು ವಲಯದಲ್ಲಿ ಕಾಡುತ್ತಿದೆ. ಏಕೆಂದರೆ ಶಾಸಕರು ಹಂಪನಗೌಡ ಬಾದರ್ಲಿ ಅವರು ಪಕ್ಷದ ಕಾರ್ಯಕರ್ತರನ್ನು ಕಡೆಗಣಿಸಿ . ಸ್ವಾರ್ಥ ರಾಜಕೀಯಕ್ಕೆ ಎಂಟ್ರಿ ಕೊಟ್ಟ, ತಮ್ಮ ಕುಟುಂಬದ ಸೋದರನ ಮಗು ಬಾಬು ಗೌಡ ಅವರನ್ನು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರನ್ನಾಗಿ ನೇಮಕ ಮಾಡಿ ಅದ್ದೂರಿಯಾಗಿ ಕಾರ್ಯಕ್ರಮ ಮಾಡಿದರು ಪಕ್ಷದಲ್ಲಿ ಹಗಲು ರಾತ್ರಿ ಎನ್ನದೆ ದುಡಿದು ಕಾರ್ಯಕರ್ತೆಯರಿಗೆ ಚಳ್ಳೆ ಹಣ್ಣು ತಿನ್ನು ಸುತ್ತಾ ಬಂದಿದ್ದಾರೆ ಎಂಬುದು ವೇದಾಂತ ತಾಲ್ಲೂಕಿನಾದ್ಯಂತ ಹರಿದಾಡುತ್ತಿದೆ ಎಂದು ಮುಸ್ಲಿಂ ಸಮುದಾಯದ ಮುಖಂಡರು ಆರೋಪಿಸಿದರು.**

# ಗಯಾನ ದೇಶದಲ್ಲಿ ಮೃತಪಟ್ಟ ಅನಿವಾಸಿ ಭಾರತೀಯನ ಮೃತದೇಹ ಭಾರತಕ್ಕೆ ಕರೆತರಲು ಕರ್ನಾಟಕ ಸರ್ಕಾರದಿಂದ ಆರ್ಥಿಕ ಸಹಾಯ

• ಉದಯವಾಹಿನಿ, ಚಿತ್ರದುರ್ಗ



ಗಯಾನ ದೇಶದಲ್ಲಿ ಮೃತಪಟ್ಟ ಅನಿವಾಸಿ ಭಾರತೀಯ ಕೊಡಗು ಜಿಲ್ಲೆಯ ಮಡಿಕೇರಿ ತಾಲ್ಲೂಕಿನ ಮದೆನಾಡು ಗ್ರಾಮದ ನಿವಾಸಿ ಪಿ.ಬಿ.ಗಿರೀಶ ಬಾಬು ಪಾಲೆ ಅವರ ಮೃತದೇಹ ತರಲು ರಾಜ್ಯ ಸರ್ಕಾರವು ರೂ.3.60 ಲಕ್ಷ ನೆರವು ನೀಡಿದೆ. ಪಿ.ಬಿ ಗಿರೀಶ ಬಾಬು ಪಾಲೆರವರು ದಕ್ಷಿಣ ಅಮೆರಿಕಾದ ಗಯಾನಾ ದೇಶದ ಶೆರಿಫ್ ಜನರಲ್ ಆಸ್ಪತ್ರೆಯಲ್ಲಿ ಸ್ಟಾಫ್‌ನರ್ಸ್ ಆಗಿ ಸುಮಾರು ಎರಡು ವರ್ಷಗಳಿಂದ ಕೆಲಸ ನಿರ್ವಹಿಸುತ್ತಿದ್ದರು. ಜು. 03ರಂದು ಅನಾರೋಗ್ಯ ಕಾರಣದಿಂದ ತಾವು ಕರ್ತವ್ಯ ನಿರ್ವಹಿಸುತ್ತಿದ್ದ ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆಯುತ್ತಿದ್ದರು. ಆದರೆ, ಪಿ.ಬಿ ಗಿರೀಶ ಬಾಬು ಪಾಲೆ ಅವರು ಬಹು ಅನಿಯಮಿತ ರಕ್ತಸ್ರಾವದ ಹೃದಯಘಾತದಿಂದ ಜುಲೈ14ರಂದು ಸಾವನ್ನಪ್ಪಿರುತ್ತಾರೆ. ಆನಂತರ, ಅನಿವಾಸಿ ಭಾರತೀಯ ಸಮಿತಿಯು ಆಸ್ಪತ್ರೆ, ಹಾಗೂ ಭಾರತೀಯ ರಾಯಭಾರಿ ಕಛೇರಿಯೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ಪಿ.ಬಿ ಗಿರೀಶ ಬಾಬು ಪಾಲೆ ಅವರ ಪಾರ್ಥಿವ ಶರೀರವನ್ನು ಭಾರತಕ್ಕೆ ಕರೆತರುವ ಕಾರ್ಯವನ್ನು ಪ್ರಾರಂಭಿಸಲಾಯಿತು.

ಮೃತನ ಕುಟುಂಬಸ್ಥರು ಪಾರ್ಥಿವ ಶರೀರವನ್ನು ಭಾರತಕ್ಕೆ ತರಲು ಸುಮಾರು ರೂ.12 ಲಕ್ಷಗಳಾಗಬಹುದೆಂದು ರಾಯಭಾರಿ ಕಛೇರಿ ತಿಳಿಸಿದ್ದು, ಜಾನಕಿ ಕೆ.ಎನ್. W/o.ಪಿ.ಬಿ ಗಿರೀಶ ಬಾಬು ಪಾಲೆ ಅವರು ತಮಗೆ 2 ವರ್ಷದ ಒಬ್ಬ ಮಗನಿದ್ದು ಹಾಗೂ ಕುಟುಂಬವು ಆರ್ಥಿಕವಾಗಿ ಹಿಂದುಳಿದಿದ್ದು, ಸರ್ಕಾರದ ವತಿಯಿಂದ ಸಹಾಯಕ್ಕಾಗಿ ಸರ್ಕಾರಕ್ಕೆ ಮನವಿ ಸಲ್ಲಿಸಿದ್ದರು. ಅದರಂತೆ, ಅನಿವಾಸಿ ಭಾರತೀಯ ಸಮಿತಿಯಿಂದ ಪಿ.ಬಿ ಗಿರೀಶ ಬಾಬು ಅವರ ಮೃತ ದೇಹವನ್ನು ಭಾರತಕ್ಕೆ ಕರೆತರಲು ತಗಲುವ ವೆಚ್ಚವನ್ನು ವಿಶೇಷ ಪ್ರಕರಣವೆಂದು ಪರಿಗಣಿಸಿ ಧನ ಸಹಾಯ ಮಾಡಲು ಮುಖ್ಯಮಂತ್ರಿಗಳಿಗೆ ಕೋರಲಾಗಿತ್ತು. ಮುಖ್ಯಮಂತ್ರಿಯವರ ಕಾನೂನು ಸಲಹೆಗಾರರು ಹಾಗೂ ಶಾಸಕರಾದ ಎ.ಎಸ್ ಪೊನ್ನಣ್ಣ ಅವರು ಮುಖ್ಯಮಂತ್ರಿಯವರ ಜೊತೆ ಈ ವಿಚಾರವಾಗಿ ಚರ್ಚಿಸಿರುತ್ತಾರೆ. ಈ ಎಲ್ಲಾ ಮನವಿಗಳಿಗೆ ಸ್ಪಂದಿಸಿದ ಮುಖ್ಯಮಂತ್ರಿಗಳು ಕರ್ನಾಟಕ ಸರ್ಕಾರದ ವತಿಯಿಂದ ರೂ 3,60,000/- (ಮೂರು ಲಕ್ಷ ಅರವತ್ತು ಸಾವಿರ ಮಾತ್ರ) ಮಂಜೂರು ಮಾಡಿರುತ್ತಾರೆ. ಉಳಿಕೆ ಹಣವನ್ನು ಪಿ.ಬಿ ಗಿರೀಶ ಬಾಬು ಪಾಲೆ ಅವರು ಕೆಲಸ ಮಾಡುತ್ತಿದ್ದ ಶೆರಿಫ್ ಜನರಲ್ ಆಸ್ಪತ್ರೆಯವರು ಭರಿಸಲಿದ್ದಾರೆ.

ಗಯಾನದಲ್ಲಿರುವ ಭಾರತೀಯ ರಾಯಭಾರಿ ಕಛೇರಿ ಹಾಗೂ ನವ ದೆಹಲಿಯಲ್ಲಿರುವ ನಿವಾಸಿ ಆಯುಕ್ತರು ಮೃತದೇಹವನ್ನು ಭಾರತಕ್ಕೆ ತರಲಾಗುವುದು ಎಂದು ಕರ್ನಾಟಕ ಅನಿವಾಸಿ ಭಾರತೀಯ ಸಮಿತಿಯ ಉಪಾಧ್ಯಕ್ಷರ ವಿಶೇಷ ಕರ್ತವ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


## ಸಿಗಂದೂರು ಬ್ರಿಡ್ಜ್ ನೋಡಲು ಜನಸಾಗರ, ಕಾನೂನು ಸುವ್ಯವಸ್ಥೆ ಸವಾಲು: ಸ್ಥಳೀಯರ ಬೇಡಿಕೆಗಳೇನು ಗೊತ್ತಾ?

# ಬ್ಯಾಕೋಡು ಉಪ ಠಾಣೆಯಲ್ಲಿ ಒಬ್ಬರೇ ಸಿಬ್ಬಂದಿ

• ಉದಯವಾಹಿನಿ, ಶಿವಮೊಗ್ಗ

ಕಳಸವಳ್ಳಿ-ಅಂಬಾರಗೊಡ್ಲು ನಡುವೆ ಶರಾವತಿ ಹಿನ್ನೀರಿಗೆ ನಿರ್ಮಾಣಗೊಂಡ ಸೇತುವೆಯಿಂದಾಗಿ ಆರು ದಶಕದ ಕನಸು ನನಸಾದ ಖುಷಿ ಒಂದೆಡೆಯಾದರೆ, ಸೇತುವೆ ವೀಕ್ಷಣೆ ಜತೆಗೆ ಸಿಗಂದೂರು ದೇವಾಲಯಕ್ಕೆ ಜನಸಾಗರವೇ ಹರಿದು ಬರುತ್ತಿರುವುದರಿಂದ ಕಾನೂನು ಸುವ್ಯವಸ್ಥೆಯ ಸವಾಲು ಎದುರಾಗಿದೆ. ಸರಕಾರಿ ರಜೆ ಮತ್ತು ಅಮಾವಾಸ್ಯೆ-ಹುಣ್ಣಿಮೆಯಲ್ಲಿ ಸಿಗಂದೂರು ದೇವಿ ದರ್ಶನಕ್ಕೆ ರಾಜ್ಯದ ಮೂಲೆಮೂಲೆಗಳಿಂದ ಭಕ್ತಾದಿಗಳು ಆಗಮಿಸುತ್ತಾರೆ. ಈಗ ಸೇತುವೆ ಉದ್ಘಾಟನೆ ನಂತರ ವಾಹನಗಳ ಸಂಖ್ಯೆ ಹೆಚ್ಚಾಗಿದ್ದು, ಟ್ರಾಫಿಕ್ ಸಮಸ್ಯೆ ತೀವ್ರವಾಗಿದೆ. ಕಳೆದ ವಾರದಿಂದ ಆಗಮಿಸುತ್ತಿರುವ ಬಹುತೇಕ ಜನರು ಸೇತುವೆ ವೀಕ್ಷಣೆಗಾಗಿಯೇ ಬರುತಿದ್ದು, ಸೇತುವೆಯ ತಡೆಗೋಡೆ ಮೇಲೆ ನಿಂತು ಫೋಟೊ, ಸೆಲ್ಫಿ ತೆಗೆಸಿಕೊಳ್ಳುವುದು, ಮೋಜು ಮಸ್ತಿ ಮಾಡುವುದು ಹೆಚ್ಚಾಗಿದ್ದು, ಸ್ಥಳೀಯರಲ್ಲಿ ಆತಂಕ ಮೂಡಿಸಿದೆ.

**ಪೊಲೀಸ್ ಸಿಬ್ಬಂದಿ ಕೊರತೆ:** ಕಾರ್ಗಲ್ ಪೊಲೀಸ್ ಠಾಣೆ ವ್ಯಾಪ್ತಿಗೆ ದೇವಾಲಯ ಬರಲಿದ್ದು, ಠಾಣೆಯಿಂದ ಸಾಕಷ್ಟು ದೂರದಲ್ಲಿದೆ. ಬ್ಯಾಕೋಡಿನ ಉಪಠಾಣೆಯಲ್ಲಿ ಕೇವಲ ಒಬ್ಬ ಸಿಬ್ಬಂದಿ ಮಾತ್ರ ಕರ್ತವ್ಯ ನಿರ್ವಹಿಸುತ್ತಿದ್ದು, ಹೋಬಳಿಯ ನಾಲ್ಕು ಪಂಚಾಯಿತಿ ಜತೆಗೆ ದೇವಸ್ಥಾನಕ್ಕೆ ಆಗಮಿಸುವ ಭಕ್ತರನ್ನು ನಿಭಾಯಿಸುವುದು ಸಾಧ್ಯವೇ? ಎಂಬುದು ಸ್ಥಳೀಯರ ಪ್ರಶ್ನೆಯಾಗಿದೆ. ಒಬ್ಬ ಎಎಸ್ಐ, ಒಬ್ಬ ಹೆಡ್ ಕಾನ್ಸ್‌ಟೇಬಲ್ ನಾಲ್ಕು ಕಾನ್ಸ್‌ಟೇಬಲ್ ಹುದ್ದೆಗಳಿದ್ದು, ಒಬ್ಬರು ಮಾತ್ರ ಕಾರ್ಯನಿರ್ವಹಿಸುತ್ತಿದ್ದಾರೆ. ಕಾನೂನು ಸುವ್ಯವಸ್ಥೆ ದೃಷ್ಟಿಯಿಂದ ಬ್ಯಾಕೋಡು ಉಪಠಾಣೆಯನ್ನು ಮೇಲ್ದರ್ಜೆಗೇರಿಸಿ, ಪಿಎಸ್ಐ ಹುದ್ದೆ ಸೃಷ್ಟಿಸಿ, ಠಾಣೆಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಬೇಕೆಂಬ ಬೇಡಿಕೆ ನನೆಗುದಿಗೆ ಬಿದ್ದಿದೆ. ಬ್ಯಾಕೋಡು ಉಪ ಠಾಣೆಯನ್ನು ತುಮರಿಗೆ ಸ್ಥಳಾಂತರಿಸುವ ಪ್ರಸ್ತಾವನೆ ಕಳಿಸಲಾಗಿದೆ ಎಂಬ ಮಾಹಿತಿಯು ಬಲ್ಲ ಮೂಲಗಳಿಂದ ಲಭ್ಯವಾಗಿದೆ.


ಉದಯವಾಹಿನಿ ಚಿತ್ರ

**ಹೆದ್ದಾರಿಗೆ ನಿರ್ವಹಣೆ ಕೊರತೆ:** ಸೇತುವೆ ನಿರ್ಮಾಣದಿಂದಾಗಿ ಸಾಗರ-ಮರಕುಟುಕ ರಾಷ್ಟ್ರೀಯ ಹೆದ್ದಾರಿಯಲ್ಲಿ ವಾಹನ ದಟ್ಟಣೆ ಹೆಚ್ಚಾಗಿದ್ದು, ಹೆದ್ದಾರಿ ಮಾತ್ರ ಕಿರಿದಾಗಿದೆ. ಅತಿಯಾದ ಮಳೆಯ ಕಾರಣ ಇಕ್ಕೆಲಗಳಲ್ಲಿ ಗುಂಡಿಗಳು ತುಂಬಿಹೋಗಿದ್ದು, ಸವಾರರು ಜೀವ ಕೈಯಲ್ಲಿ ಹಿಡಿದು ವಾಹನ ಚಲಾಯಿಸುವಂತಾಗಿದೆ. ರಾಷ್ಟ್ರೀಯ ಹೆದ್ದಾರಿ ಮಧ್ಯೆ ಸಾಕಷ್ಟು ಶಾಲಾ ಕಾಲೇಜುಗಳಿದ್ದು, ಮಕ್ಕಳು ರಸ್ತೆ ದಾಟುವುದು ಅಪಾಯಕ್ಕೆ ಆಹ್ವಾನಿಸುತ್ತಿದೆ. ಶಾಲಾ ಕಾಲೇಜುಗಳ ವಠಾರದಲ್ಲಿ ಬ್ಯಾರಿಕೇಡ್ ವ್ಯವಸ್ಥೆಯಾಗಲಿ, ಹಂಪ್ ವ್ಯವಸ್ಥೆಗಳಾಗಲಿ ಇಲ್ಲವಾಗಿದೆ. ಸಮೃದ್ಧ ಪರಿಸರದ ಮೇಲೆ ಇನ್ನಷ್ಟು ದೌರ್ಜನ್ಯಗಳು ನಡೆಯಬಹುದೇನೋ ಎಂಬ ಆತಂಕ ಜನರಲ್ಲಿ ಮನೆಮಾಡಿದೆ.

ಮುಂಚೆ ಸಿಗಂದೂರಿಗೆ ಬರಲು ತುಂಬ ಕಷ್ಟಪಡುತ್ತಿದ್ದೇವು. ಆದರೆ, ಸೇತುವೆ ನಿರ್ಮಾಣದಿಂದಾಗಿ ಈಗ ಸಲೀಸಾಗಿ ದೇವಾಲಯಕ್ಕೆ ಬರುವಂತಾಗಿದೆ. ಈ ಸೇತುವೆ ಮತ್ತು ಇಲ್ಲಿಯ ಪ್ರಕೃತಿ ಸೌಂದರ್ಯವನ್ನು ನೋಡುವುದೇ ಆನಂದ. ದೇವಾಲಯ ಆವರಣದಲ್ಲಿ ವಾಹನಗಳ ಪಾರ್ಕಿಂಗ್‌ಗೆ ಸೂಕ್ತ ಸ್ಥಳಾವಕಾಶ ಮಾಡಿಕೊಡಬೇಕು. ಶೌಚಾಲಯ ಸೇರಿದಂತೆ ಮೂಲಸೌಕರ್ಯಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು ಎಂದಿದ್ದಾರೆ ಚನ್ನಕೇಶವ, ಸಿಗಂದೂರು ದೇವಾಲಯದ ಭಕ್ತ, ಚಿತ್ರದುರ್ಗ

### ಭಕ್ತರನ್ನು ನಿಯಂತ್ರಿಸುವಲ್ಲಿ ಹೈರಾಣ

**ಸಿಗಂದೂರು ದೇಗುಲಕ್ಕೆ ಆಗಮಿಸುವ ಭಕ್ತರ ವಾಹನಗಳನ್ನು ಪಾರ್ಕಿಂಗ್ ಮಾಡಲು ದೇವಾಲಯದ ಸುತ್ತಮುತ್ತ ಸ್ಥಳಾವಕಾಶದ ಕೊರತೆಯಿದ್ದು, ಕಿ.ಮೀ. ಗಟ್ಟಲೆ ರಸ್ತೆಯ ಬದಿಯಲ್ಲಿಯೇ ವಾಹನಗಳನ್ನು ನಿಲ್ಲಿಸುವಂತಾಗಿದೆ. ಆಗಮಿಸುವ ಭಕ್ತರಿಗೆ ಶೌಚಾಲಯ ಸೇರಿದಂತೆ ಮೂಲಸೌಲಭ್ಯಗಳನ್ನು ಒದಗಿಸಿಕೊಡುವತ್ತ ಗ್ರಾಮಾಡಳಿತ ಮತ್ತು ಜಿಲ್ಲಾಡಳಿತ ಸಹಕಾರದೊಂದಿಗೆ ದೇವಾಲಯ ಆಡಳಿತ ಮಂಡಳಿ ಕೈಜೋಡಿಸಬೇಕಿದೆ.**

**ಈ ಹಿಂದೆ ನಮ್ಮ ಮಕ್ಕಳು ತಾವೇ ಶಾಲೆಗೆ ಹೋಗಿ ಬರುತ್ತಿದ್ದವು. ಆದರೆ, ಈಗ ಪ್ರವಾಸಿ ವಾಹನಗಳ ಸಂಖ್ಯೆ ಹೆಚ್ಚಾಗಿರುವುದರಿಂದ ಮಕ್ಕಳ ಸುರಕ್ಷತೆಯ ದೃಷ್ಟಿಯಿಂದ ಮಕ್ಕಳನ್ನು ಶಾಲೆಗೆ ಬಿಡುವುದು ಹಾಗೂ ಕರೆದುಕೊಂಡು ಹೋಗಲು ಪೋಷಕರೇ ಬರುವಂತಾಗಿದೆ.**
**-ರಾಜಪ್ಪ ಹೊನ್ನಳ್ಳಿ, ಗ್ರಾಮಸ್ಥ**

# ಭಾರತದಿಂದ ಯಾಕ್ರೀ ಇಂಜಿನಿಯರ್‌ಗಳನ್ನು ನೇಮಿಸಿಕೊಳ್ತೀರಿ?

**ಗೂಗಲ್, ಮೈಕ್ರೋಸಾಫ್ಟ್ ಸಂಸ್ಥೆಗೆ ಟ್ರಂಪ್ ತಾಕೀತು**




**ವಾಷಿಂಗ್ಟನ್:** ಅಮೆರಿಕನ್ ಮೊದಲು ಅಮೆರಿಕನ್ನರೇ ಮೊದಲು ಎಂಬ ಮೂಲಮಂತ್ರದೊಂದಿಗೆ ಅಮೆರಿಕದಲ್ಲಿ ಮತ್ತೆ ಅಧಿಕಾರದ ಗದ್ದುಗೆ ಹಿಡಿದಿರುವ ಟ್ರಂಪ್, ಚುನಾವಣೆ ಸಂದರ್ಭದಲ್ಲಿ ಅಮೆರಿಕನ್ನರಿಗೆ ತಾವು ನೀಡಿದ್ದ ವಾಗ್ದಾನವನ್ನು ಉಳಿಸಿಕೊಳ್ಳುವ ಪ್ರಯತ್ನ ಮಾಡುತ್ತಿದ್ದಾರೆ. ವಿದೇಶಿ ವಲಸಿಗರಿಗೆ ಕಡಿವಾಣ ಹಾಕುವುದು, ಅಮೆರಿಕದಲ್ಲಿರುವ ವಿದೇಶಿಗರನ್ನು ಹೊರಹಾಕುವುದು ಇತ್ಯಾದಿಗಳನ್ನು ಮಾಡುತ್ತಿದ್ದಾರೆ. ಆದರೆ, ಇದೀಗ ಉದ್ಯೋಗದ ಹೆಸರಿನಲ್ಲಿ ಅಮೆರಿಕಕ್ಕೆ ಬರುವುದನ್ನು ತಡೆಯಲು ಹೊಸ ಪ್ರಯೋಗಕ್ಕೆ ಮುಂದಾಗಿರುವ ಅವರೀಗ ಅಮೆರಿಕದಲ್ಲಿರುವ ಐಟಿ ಕಂಪನಿಗಳಿಗೆ, ನಿಮ್ಯಾಕ್ರೀ? ಭಾರತದಂಥ ದೇಶಗಳ ಕೆಲಸಗಾರರನ್ನು ನೇಮಿಸಿದ್ದೀರಿ ಎಂದು ಪ್ರಶ್ನಿಸಿದ್ದಾರೆ.

> ಅಮೆರಿಕದಲ್ಲಿರುವ ಎಲ್ಲಾ ದೈತ್ಯ ಐಟಿ ಕಂಪನಿಗಳು, ಅಮೆರಿಕ ಸರ್ಕಾರ ನೀಡಿರುವ ಸೌಲಭ್ಯಗಳನ್ನೆಲ್ಲಾ ಬಳಸಿಕೊಂಡು ದೈತ್ಯಸ್ವರೂಪದಲ್ಲಿ ಬೆಳೆದಿವೆ. ಆದರೆ, ಹಾಗೆ ಬೆಳೆದಂತ ಮೇಲೆ ಅಮೆರಿಕದಿಂದ ಹೊರಗಿನ ದೇಶಗಳಲ್ಲಿ ಅಪಾರ ಪ್ರಮಾಣದಲ್ಲಿ ಹೂಡಿಕೆ ಮಾಡಿವೆ. ಅಲ್ಲಿಂದಲೂ ಅನೇಕ ರೀತಿಯ ಲಾಭಗಳನ್ನು ಮಾಡಿಕೊಂಡಿವೆ ಎಂದು ಹೇಳಿದ್ದಾರೆ. ಆದಾದ ಬಳಿಕ, ಆ ಹಳೆಯ ದಿನಗಳಲ್ಲಿ ಇನ್ನು ಮುಂದಿರುವುದಿಲ್ಲ, ಏಕೆಂದರೆ ಈಗ ಅಮೆರಿಕದಲ್ಲಿ ಟ್ರಂಪ್ ಆಡಳಿತ ಬಂದಿದೆ ಎಂದು ಹೇಳಿದ್ದಾರೆ.

ವಾಷಿಂಗ್ಟನ್ ನಲ್ಲಿ ಇದೇ ನಡೆದ ಕೃತಕ ಬುದ್ಧಿಮತ್ತೆ (ಎ.ಐ) ಸಮ್ಮೇಳನದಲ್ಲಿ ಮಾತನಾಡಿರುವ ಅವರು, ಮೈಕ್ರೋಸಾಫ್ಟ್ ಹಾಗೂ ಗೂಗಲ್ ಕಂಪನಿಗಳಿಗೆ ಕ್ಲಾಸ್ ತಗೊಂಡಿದ್ದಾರೆ. ನೀವು ಅಮೆರಿಕದಲ್ಲಿ ಕಂಪನಿ ನಡೆಸುತ್ತಿದ್ದೀರಿ. ಅಮೆರಿಕದಲ್ಲಿ ಇರುವಂಥ ಪ್ರತಿಭಾನ್ವಿತ ತಂತ್ರಜ್ಞರಿಗೆ ಮೊದಲು ಕೆಲಸ ಕೊಡಿ. ನಿಮ್ಯಾಕೆ ಭಾರತ, ಚೀನಾದಂಥ ಕಂಪನಿಗಳಲ್ಲಿ ನಿಮ್ಮ ಕಂಪನಿಗಳ ಶಾಖೆಗಳನ್ನು ತೆರೆಯುತ್ತೀರಿ? ಅಲ್ಲಿಯವರಿಗೆ ಯಾಕೆ ನೀವು ಕೆಲಸ ಕೊಡುತ್ತೀರಿ? ಮೊದಲು ಅಮೆರಿಕನ್ನರಿಗೆ ಕೆಲಸ ಕೊಡಿ ಎಂದು ತಾಕೀತು ಮಾಡಿದ್ದಾರೆ.

## ಬ್ರಿಟನ್ ಪ್ರವಾಸದಲ್ಲಿ ಪ್ರಧಾನಿ ಮೋದಿ ಮುಕ್ತ ವ್ಯಾಪಾರ ಒಪ್ಪಂದಕ್ಕೆ ಸಹಿ ಸಾಧ್ಯತೆ



**ಲಂಡನ್:** ಬ್ರಿಟನ್ ಹಾಗೂ ಮಾಲ್ಡೀವ್‌ಗೆ ನಾಲ್ಕು ದಿನಗಳ ಪ್ರವಾಸ ಕೈಗೊಂಡಿರುವ ಪ್ರಧಾನಿ ನರೇಂದ್ರ ಮೋದಿ ಲಂಡನ್‌ಗೆ ಬಂದಿಳಿದಿದ್ದಾರೆ. ಇಂಡೋ-ಪೆಸಿಫಿಕ್ ಉಸ್ತುವಾರಿ ಹೊಂದಿರುವ ಯುಕೆ ವಿದೇಶಾಂಗ ಕಚೇರಿಯ ಸಚಿವ ಕ್ಯಾಥರೀನ್ ವೆಸ್ಟ್, ಯುಕೆಯಲ್ಲಿನ ಭಾರತೀಯ ರಾಯಭಾರಿ ವಿಕ್ರಮ್ ದೊರೈಸ್ವಾಮಿ ಮತ್ತು ನವದೆಹಲಿಯ ಬ್ರಿಟನ್ ರಾಯಭಾರಿ ಲಿಂಡಿ ಕ್ಯಾಮರೂನ್ ಅವರು ಪ್ರಧಾನಿ ಮೋದಿ ಅವರನ್ನು ವಿಮಾನ ನಿಲ್ದಾಣದಲ್ಲಿ ಬರಮಾಡಿಕೊಂಡರು.

ಗುರುವಾರ ಬ್ರಿಟನ್ ಪ್ರಧಾನಿ ಕೀರ್ ಸ್ಟಾರ್ಮರ್ ಜೊತೆ ಮಾತುಕತೆ ನಡೆಸಲಿರುವ ಪ್ರಧಾನಿ, ಹೂಡಿಕೆ, ವ್ಯಾಪಾರ, ರಕ್ಷಣೆ, ಶಿಕ್ಷಣ, ಸಂಶೋಧನೆ ಸೇರಿದಂತೆ ಹಲವು ವಿಷಯಗಳ ಕುರಿತು ಚರ್ಚಿಸಲಿದ್ದಾರೆ. ಇದೇ ಸಂದರ್ಭದಲ್ಲಿ ಪ್ರಧಾನಿ ಮೋದಿ ಅವರು ಐತಿಹಾಸಿಕ ಭಾರತ-ಯುಕೆ ಮುಕ್ತ ವ್ಯಾಪಾರ ಒಪ್ಪಂದಕ್ಕೆ ಸಹಿ ಹಾಕುವ ಸಾಧ್ಯತೆ ಇದೆ ಎಂದು ನಿರೀಕ್ಷಿಸಲಾಗಿದೆ. ಲಂಡನ್‌ನಿಂದ ವಾಯುವ್ಯಕ್ಕೆ 50 ಕಿ.ಮೀ ದೂರದಲ್ಲಿರುವ ಬ್ರಿಟನ್ ಪ್ರಧಾನಿಯ ಅಧಿಕೃತ ನಿವಾಸವಾದ ಚೆಕರ್ಸ್‌ನಲ್ಲಿ ಮೋದಿ ಅವರಿಗೆ ಸ್ಟಾರ್ಮರ್ ಆತಿಥ್ಯ ನೀಡಲಿದ್ದಾರೆ. ಬ್ರಿಟನ್ ಪ್ರವಾಸದ ಬಗ್ಗೆ ಸಾಮಾಜಿಕ ಮಾಧ್ಯಮ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಪ್ರಧಾನಿ ಮೋದಿ, ಲಂಡನ್‌ಗೆ ಬಂದಿಳಿದಿದ್ದೇನೆ. ಈ ಭೇಟಿ ಉಭಯ ದೇಶಗಳ ನಡುವಿನ ಆರ್ಥಿಕ ಪಾಲುದಾರಿಕೆಯನ್ನು ಮುನ್ನಡೆಸುವಲ್ಲಿ ಬಹಳ ದೂರ ಸಾಗಲಿದೆ. ಸಮೃದ್ಧಿ, ಬೆಳವಣಿಗೆ ಮತ್ತು ನಮ್ಮ ಜನರಿಗೆ ಉದ್ಯೋಗ ಸೃಷ್ಟಿ ಹೆಚ್ಚಿಸುವತ್ತ ಗಮನ ಹರಿಸಲಾಗುವುದು. ಜಾಗತಿಕ ಪ್ರಗತಿಗೆ ಭಾರತ-ಬ್ರಿಟನ್ ಗಾಢ ಸ್ನೇಹ ಅತ್ಯಗತ್ಯ ಎಂದು ಹೇಳಿದ್ದಾರೆ.

### ಬಾಂಗ್ಲಾದೇಶಕ್ಕೆ ವೈದ್ಯಕೀಯ ತಜ್ಞರ ತಂಡ ರವಾನೆ; ನೆರೆ ಹೊರೆ ಹೊತ್ತ ಭಾರತ

# ವೈದ್ಯಕೀಯ ನೆರವು ಘೋಷಿಸಿದ ಭಾರತ

**ಢಾಕಾ:** ಬಾಂಗ್ಲಾದೇಶ ರಾಜಧಾನಿ ಢಾಕಾದಲ್ಲಿ ಸಂಭವಿಸಿದ ವಿಮಾನ ಅಪಘಾತ ದುರಂತಕ್ಕೆ ಕಂಬನಿ ಮಿಡಿದಿರುವ ಭಾರತ, ನೆರೆರಾಷ್ಟ್ರಕ್ಕೆ ತುರ್ತು ವೈದ್ಯಕೀಯ ನೆರವು ನೀಡಲು ಮುಂದಾಗಿದೆ. ಅಪಘಾತದಲ್ಲಿ ಬದುಕುಳಿದವರ ಚಿಕಿತ್ಸೆಗಾಗಿ ಸುಟ್ಟಗಾಯಗಳ ತಜ್ಞ ವೈದ್ಯರು ಮತ್ತು ದಾದಿಯರ ತಂಡ ಬಾಂಗ್ಲಾದೇಶಕ್ಕೆ ಭೇಟಿ ನೀಡಿದೆ. ಎಂದು ವಿದೇಶಾಂಗ ಸಚಿವಾಲಯ (ಒಇಂ) ಸ್ಪಷ್ಟಪಡಿಸಿದೆ. ಈ ಕುರಿತು ಮಾಹಿತಿ ನೀಡಿರುವ ವಿದೇಶಾಂಗ ಇಲಾಖೆ ವಕ್ತಾರ ರಣಧೀರ್ ಜೈಸ್ವಾಲ್, ಜುಲೈ 21, 2025 ರಂದು, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಬಾಂಗ್ಲಾದೇಶ ರಾಜಧಾನಿ ಢಾಕಾದಲ್ಲಿ ಸಂಭವಿಸಿದ ವಿಮಾನ ಅಪಘಾತದಲ್ಲಿ ಸಂಭವಿಸಿದ ಜೀವಹಾನಿಗೆ ಸಂತಾಪ ಸೂಚಿಸಿದ್ದರು ಮತ್ತು ಬೆಂಬಲ ಹಾಗೂ ಮಾನವೀಯ ನೆರವಿನ ಭರವಸೆ ನೀಡಿದ್ದರು. ಅದರಂತೆ ಭಾರತವು ಢಾಕಾಗೆ ವೈದ್ಯಕೀಯ ತಂಡವೊಂದನ್ನು ಕಳುಹಿಸಿದೆ ಎಂದು ಹೇಳಿದ್ದಾರೆ.

ವೈದ್ಯಕೀಯ ಪ್ರತಿಕ್ರಿಯೆಯು ಪ್ರಧಾನಿ ಮೋದಿ ಅವರ ಭರವಸೆಗಳ ಒಂದು ಭಾಗವಾಗಿದೆ. ಅಪಘಾತದಲ್ಲಿ ಸುಟ್ಟ ಗಾಯಗಳಿಂದ ಬಳಲುತ್ತಿರುವವರಿಗೆ ಚಿಕಿತ್ಸೆ ನೀಡಲು, ಶೀಘ್ರದಲ್ಲೇ ನುರಿತ ತಜ್ಞ ವೈದ್ಯರು ಮತ್ತು ದಾದಿಯರ ತಂಡವು ಢಾಕಾಗೆ ಭೇಟಿ ನೀಡಿದೆ. ಅಗತ್ಯ ಬಿದ್ದರೆ ಗಾಯಾಳುಗಳಿಗೆ ಭಾರತದಲ್ಲಿ ಹೆಚ್ಚಿನ ಚಿಕಿತ್ಸೆ ಮತ್ತು ವಿಶೇಷ ಆರೈಕೆಗಾಗಿ ಈ ತಂಡ ಶಿಫಾರಸು ಮಾಡಲಿದೆ. ಅವರ ಪ್ರಾಥಮಿಕ ಮೌಲ್ಯಮಾಪನ ಮತ್ತು ಚಿಕಿತ್ಸೆಯನ್ನು ಅವಲಂಬಿಸಿ, ಹೆಚ್ಚುವರಿ ವೈದ್ಯಕೀಯ ತಂಡಗಳನಗನೂ ಢಾಕಾಗೆ ಕಳುಹಿಸುವ ಸಾಧ್ಯತೆ ಇದೆ ಎಂದು ರಣಧೀರ್ ಜೈಸ್ವಾಲ್ ಮಾಹಿತಿ ನೀಡಿದ್ದಾರೆ.



**ಸಹಾಯಹಸ್ತ ಚಾಚಿದ ಭಾರತೀಯ ರಾಯಭಾರ ಕಚೇರಿ**

**ಬಾಂಗ್ಲಾದೇಶದ ಢಾಕಾದ ದಿಯಾಬರಿ ಪ್ರದೇಶದಲ್ಲಿ ಇತ್ತೀಚೆಗೆ ಸಂಭವಿಸಿದ ಫೈಟರ್ ಜೆಟ್ ಅಪಘಾತದಲ್ಲಿ, ಒಟ್ಟು 43 ಜನ ಸಾವನ್ನಪ್ಪಿದ್ದಾರೆ. ಈ ದುರ್ಘಟನೆಯಲ್ಲಿ ಅನೇಕ ಜನರು ಗಾಯಗೊಂಡಿದ್ದು, ಅಪಘಾತದಲ್ಲಿ ಗಾಯಗೊಂಡವರಿಗೆ ಭಾರತದಲ್ಲಿ ವ್ಯವಸ್ಥೆ ಮಾಡಬೇಕಾದ ಯಾವುದೇ ನಿರ್ಣಾಯಕ ವೈದ್ಯಕೀಯ ನೆರವಿನ ಕುರಿತು, ಮಾಹಿತಿಯನ್ನು ಹಂಚಿಕೊಳ್ಳುವಂತೆ ಢಾಕಾದಲ್ಲಿರುವ ಭಾರತೀಯ ಹೈಕಮಿಷನ್ ಕಚೇರಿಯು ಬಾಂಗ್ಲಾದೇಶ ಸರ್ಕಾರಕ್ಕೆ ಪತ್ರ ಬರೆದಿದೆ.**

ಢಾಕಾ ಮೈಲ್‌ಸ್ಟೋನ್ ಶಾಲೆಯ ವಿಮಾನ ಅಪಘಾತದ ಬಗ್ಗೆ ಸಂತಾಪ ಸೂಚಿಸಿ ಮತ್ತು ಸಾಧ್ಯವಿರುವ ಎಲ್ಲಾ ಬೆಂಬಲ ಮತ್ತು ಸಹಾಯವನ್ನು ನೀಡುವುದಾಗಿ ಭಾರತದ ಪ್ರಧಾನ ಮಂತ್ರಿಗಳು ನೀಡಿದ ಸಂದೇಶದ ಹಿನ್ನೆಲೆಯಲ್ಲಿ, ಭಾರತೀಯ ಹೈಕಮಿಷನ್ ಅಗತ್ಯವಿರುವ ಎಲ್ಲಾ ಸೌಲಭ್ಯಗಳನ್ನು ಒದಗಿಸುತ್ತದೆ ಎಂದು ರಾಯಭಾರ ಕಚೇರಿ ತಿಳಿಸಿದೆ.

ಯುದ್ಧ ವಿಮಾನ ಅಪಘಾತದಲ್ಲಿ ಮೃತಪಟ್ಟವರಿಗೆ ಶ್ರದ್ಧಾಂಜಲಿ ಸಲ್ಲಿಸಲು, ಬಾಂಗ್ಲಾದೇಶ ಗುರುವಾರ ರಾಷ್ಟ್ರೀಯ ಶೋಕಾಚರಣೆಯನ್ನು ಆಚರಿಸುತ್ತಿದೆ. ಈ ದುರಂತದಲ್ಲಿ ಒಟ್ಟು 43 ಜನ ಸಾವನ್ನಪ್ಪಿದ್ದಾರೆ ಎಂದು ಬಾಂಗ್ಲಾದೇಶ ಮಧ್ಯಂತರ ಸರ್ಕಾರದ ಮುಖ್ಯ ಸಲಹೆಗಾರ ಮೊಹಮ್ಮದ್ ಯೂನಸ್ ಅವರ ವಿಶೇಷ ಸಹಾಯಕ ಸೈದೂರ್ ರೆಹಮಾನ್ ಮಾಹಿತಿ ನೀಡಿದ್ದಾರೆ.


**ಢಾಕಾ ಭೀಕರ ವಿಮಾನ ಅಪಘಾತ**

**ಬಾಂಗ್ಲಾದೇಶ ವಾಯುಪಡೆಯ ಎಫ್ -7 ಯುದ್ಧ ವಿಮಾನವೊಂದು, ಕಳೆದ ಸೋಮವಾರ ಮಧ್ಯಾಹ್ನ ಢಾಕಾದ ಮೈಲ್‌ಸ್ಟೋನ್ ಶಾಲೆ ಮತ್ತು ಕಾಲೇಜು ಆವರಣಕ್ಕೆ ಅಪ್ಪಳಿಸಿತ್ತು. ಈ ನತದೃಷ್ಟ ವಿಮಾನವನ್ನು ಬಾಂಗ್ಲಾದೇಶದ ವಾಯುಪಡೆಯ ಫ್ಲೈಟ್ ಲೆಫ್ಟಿನೆಂಟ್ ಮೊಹಮ್ಮದ್ ಟೋಕಿರ್ ಇಸ್ಲಾಂ ಸಾಗರ್ ಚಲಾಯಿಸುತ್ತಿದ್ದರು. ಈ ದುರ್ಘಟನೆಯಲ್ಲಿ ಅವರೂ ಬದುಕುಳಿದಿಲ್ಲ. ಭಾರತದ ಗುಜರಾತ್‌ನ ಅಹಮದಾಬಾದ್‌ನಲ್ಲಿ ಇತ್ತೀಚಿಗೆ ಸಂಭವಿಸಿದ ಭೀಕರ ಏರ್ ಇಂಡಿಯಾ ವಿಮಾನ ಅಪಘಾತ ಪ್ರಕರಣವನ್ನು ಈ ಘಟನೆ ನೆನಪಿಸಿದೆ.**

# ಗಾಜಾ ಬಿಕ್ಕಟ್ಟಿಗೆ ಕಳವಳ ವ್ಯಕ್ತಪಡಿಸಿದ ಭಾರತ

**ವಿಶ್ವಸಂಸ್ಥೆ:** ಗಾಜಾದಲ್ಲಿ ಮುಂದುವರಿದಿರುವ ಮಾನವೀಯ ಬಿಕ್ಕಟ್ಟಿನ ಬಗ್ಗೆ ಕಳವಳ ವ್ಯಕ್ತಪಡಿಸಿದ ಭಾರತ. ಕದನ ವಿರಾಮವನ್ನು ಜಾರಿಗೆ ತರಬೇಕು ಎಂದು ಪ್ರತಿಪಾದಿಸಿತು, ಹಗೆತನದಲ್ಲಿ ಮಧ್ಯಂತರ ವಿರಾಮಗಳು ಈ ಪ್ರದೇಶದ ಜನರು ಎದುರಿಸುತ್ತಿರುವ ಸವಾಲುಗಳ ಪ್ರಮಾಣವನ್ನು ಪರಿಹರಿಸಲು ಸಾಕಾಗುವುದಿಲ್ಲ ಎಂದು ಒತ್ತಿ ಹೇಳಿದೆ.

ಇಂದಿನ ಸಭೆ ಗಾಜಾದಲ್ಲಿ ನಿರಂತರ ಮಾನವೀಯ ಬಿಕ್ಕಟ್ಟಿನ ಹಿನ್ನೆಲೆಯಲ್ಲಿ ನಡೆಯುತ್ತಿದೆ ಎಂದು ವಿಶ್ವಸಂಸ್ಥೆಯಲ್ಲಿ ಭಾರತದ ಖಾಯಂ ಪ್ರತಿನಿಧಿ ರಾಯಭಾರಿ ಪರ್ವತನೇನಿ ಹರೀಶ್ ವಿಶ್ವಸಂಸ್ಥೆಯ ಭದ್ರತಾ ಮಂಡಳಿಯಲ್ಲಿ ಮುಕ್ತ ಚರ್ಚೆಯನ್ನು ಉದ್ದೇಶಿಸಿ ಹೇಳಿದರು. ಆಹಾರ ಮತ್ತು ಇಂಧನದ ತೀವ್ರ ಕೊರತೆ, ಅಸಮರ್ಪಕ ವೈದ್ಯಕೀಯ ಸೇವೆಗಳು ಮತ್ತು ಶಿಕ್ಷಣದ ಪ್ರವೇಶದ ಕೊರತೆಯಿಂದ ಪ್ರತಿದಿನ ಬಳಲುತ್ತಿರುವ ಜನರು ಎದುರಿಸುತ್ತಿರುವ ಮಾನವೀಯ ಸವಾಲುಗಳ ಪ್ರಮಾಣವನ್ನು ಪರಿಹರಿಸಲು ಯುದ್ಧದಲ್ಲಿ ಮಧ್ಯಂತರ ವಿರಾಮಗಳು ಸಾಕಾಗುವುದಿಲ್ಲ ಎಂದು ಪ್ಯಾಲೆಸ್ಟೀನಿಯನ್ ಪ್ರಶ್ನೆ ಸೇರಿದಂತೆ ಮಧ್ಯಪ್ರಾಚ್ಯದ ಪರಿಸ್ಥಿತಿ ಕುರಿತ ಮುಕ್ತ ಚರ್ಚೆಯಲ್ಲಿ ಹರೀಶ್ ಹೇಳಿದರು. ಮುಂದಿನ ದಾರಿ ಸ್ಪಷ್ಟವಾಗಿದೆ ಎಂದು ಒತ್ತಿ ಹೇಳುತ್ತಾ ಮತ್ತು ಈ ವಿಷಯದಲ್ಲಿ ಭಾರತದ ಸ್ಥಿರವಾದ



ನಿಲುವನ್ನು ಎತ್ತಿ ತೋರಿಸುತ್ತಾ ನಡೆಯುತ್ತಿರುವ ಮಾನವ ಸಂಕಷ್ಟ ಮುಂದುವರಿಯಲು ಬಿಡಬಾರದು ಎಂದು ಹರೀಶ್ ಹೇಳಿದರು. ಮಾನವೀಯ ನೆರವು ಸುರಕ್ಷಿತ. ಸುಸ್ಥಿರ ಮತ್ತು ಸಕಾಲಿಕ ರೀತಿಯಲ್ಲಿ ಒದಗಿಸಬೇಕಾಗಿದೆ. ಶಾಂತಿಗೆ ಪರ್ಯಾಯ ಮಾರ್ಗವಿಲ್ಲ. ಕದನ ವಿರಾಮವನ್ನು ಜಾರಿಗೆ ತರಬೇಕು. ಎಲ್ಲಾ ಒತ್ತೆಯಾಳುಗಳನ್ನು ಬಿಡುಗಡೆ ಮಾಡಬೇಕು. ಈ ಉದ್ದೇಶಗಳನ್ನು ಸಾಧಿಸಲು ಸಂವಾದ, ರಾಜತಾಂತ್ರಿಕತೆ ಮಾತ್ರ ಕಾರ್ಯಸಾಧ್ಯವಾದ ಮಾರ್ಗಗಳಾಗಿವೆ. ಬೇರೆ ಯಾವುದೇ ಪರಿಹಾರಗಳು ಅಥವಾ ಪರಿಹಾರಗಳಿಲ್ಲ ಎಂದು ಅವರು ಹೇಳಿದರು. ನಾವು ಯಾವಾಗಲೂ ಅವರ ಪರವಾಗಿ ನಿಂತಿದ್ದೇವೆ ಮತ್ತು ಪ್ಯಾಲೆಸ್ಟೀನಿಯನ್ ಉದ್ದೇಶದ ಬಗೆಗಿನ ನಮ್ಮ ಬದ್ಧತೆಯು ಅಚಲವಾಗಿದೆ ಎಂದು ಅವರು ಹೇಳಿದರು. ಪ್ಯಾಲೆಸ್ತಾನ್ ರಾಜ್ಯವನ್ನು ಗುರುತಿಸಿದ ಮೊದಲ ಅರಬ್ ಅಲ್ಲದ ದೇಶ ಭಾರತ ಎಂದು ಅವರು ಹೇಳಿದರು. ಗಾಜಾದಲ್ಲಿನ ಆರೋಗ್ಯ ಮತ್ತು ಶಿಕ್ಷಣ ಪರಿಸ್ಥಿತಿಯನ್ನು ವಿಶೇಷವಾಗಿ ತೊಂದರೆದಾಯಕ ಎಂದು ವಿವರಿಸಿದ ಹರೀಶ್, ಗಾಜಾದಲ್ಲಿನ ಎಲ್ಲಾ ಆಸ್ಪತ್ರೆಗಳಲ್ಲಿ ಸುಮಾರು 95 ಪ್ರತಿಶತ ಹಾನಿಗೊಳಗಾಗಿವೆ ಅಥವಾ ನಾಶವಾಗಿವೆ ಎಂದು ವಿಶ್ವ ಆರೋಗ್ಯ ಸಂಸ್ಥೆ ಅಂದಾಜಿಸಿದೆ ಎಂದು ಹೇಳಿದರು. ಮಾನವ ಹಕ್ಕುಗಳ ಹೈಕಮಿಷನರ್ ಕಚೇರಿಯ ವರದಿಯ ಪ್ರಕಾರ, 650,000 ಕ್ಕೂ ಹೆಚ್ಚು ಮಕ್ಕಳು 20 ತಿಂಗಳಿಗೂ ಹೆಚ್ಚು ಕಾಲ ಶಾಲಾ ಶಿಕ್ಷಣವನ್ನು ಹೊಂದಿಲ್ಲ ಎಂದು ಅವರು ಹೇಳಿದರು. ಜುಲೈ 28-30 ರಂದು ನಡೆಯಲಿರುವ ಎರಡು-ರಾಜ್ಯ ಪರಿಹಾರದ ಅನುಷ್ಠಾನದ ಕುರಿತು ಉನ್ನತ ಮಟ್ಟದ ಅಂತರರಾಷ್ಟ್ರೀಯ ಸಮ್ಮೇಳನವನ್ನು ಭಾರತ ಗಮನಿಸುತ್ತದೆ ಎಂದು ಹರೀಶ್ ಹೇಳಿದರು.

ಮುಂದಕ್ಕೆ ಒಲವು ತೋರುವ ಮತ್ತು ರಚನಾತ್ಮಕ ರೀತಿಯಲ್ಲಿ ತೊಡಗಿಸಿಕೊಂಡಿರುವಾಗ, ಈ ಸಮ್ಮೇಳನವು ಎರಡು-ರಾಜ್ಯ ಪರಿಹಾರವನ್ನು ಸಾಧಿಸುವ ಕಡೆಗೆ ಕಾಂಕ್ರೀಟ್ ಹೆಜ್ಜೆಗಳಿಗೆ ದಾರಿ ಮಾಡಿಕೊಡುತ್ತದೆ ಎಂಬುದು ನಮ್ಮ ಆಶಯಬಿಟಿ ಎಂದು ಹರೀಶ್ ಹೇಳಿದರು. ಪ್ಯಾಲೆಸ್ಟೀನಿಯನ್ನರಿಗೆ ಭರವಸೆಯನ್ನು ಪುನಸ್ಥಾಪಿಸುವ ಮತ್ತು ಮಧ್ಯಪ್ರಾಚ್ಯದಲ್ಲಿ ನಿರಂತರ ಶಾಂತಿಯನ್ನು ಸಾಧಿಸುವ ರಾಜಕೀಯ ದಿಗಂತವನ್ನು ರೂಪಿಸುವ ಗುರಿಯನ್ನು ಹೊಂದಿರುವ ಪ್ರಯತ್ನಗಳಿಗೆ ಕೊಡುಗೆ ನೀಡಲು ಭಾರತ ತನ್ನ ಸಿದ್ಧತೆಯನ್ನು ಒತ್ತಿಹೇಳುತ್ತದೆ ಎಂದು ಅವರು ಹೇಳಿದರು. ಸೌದಿ ಅರೇಬಿಯಾ ಮತ್ತು ಫ್ರಾನ್ಸ್ ಜಂಟಿಯಾಗಿ ಅಧ್ಯಕ್ಷತೆ ವಹಿಸಿದ್ದ ಉನ್ನತ ಮಟ್ಟದ ಸಮ್ಮೇಳನವು ಸಮಾಧಾನಪಡಿಸಲು ನಿರ್ಧರಿಸಲಾಗಿತ್ತು.

> **ಇಸ್ರೇಲ್-ಪ್ಯಾಲೆಸ್ತಾನ್ ಸಂಘರ್ಷದ ಕುರಿತು ಮುಂಬರುವ ವಿಶ್ವಸಂಸ್ಥೆಯ ಸಮ್ಮೇಳನವು ಎರಡು-ರಾಜ್ಯ ಪರಿಹಾರವನ್ನು ಸಾಧಿಸುವ ಕಡೆಗೆ ನಿರ್ದಿಷ್ಟ ಹೆಜ್ಜೆಗಳಿಗೆ ದಾರಿ ಮಾಡಿಕೊಡುತ್ತದೆ ಎಂದು ಅವರು ಆಶಿಸಿದರು. ಜುಲೈ ತಿಂಗಳಲ್ಲಿ ಪಾಕಿಸ್ತಾನದ ಅಧ್ಯಕ್ಷತೆಯಲ್ಲಿ ಭದ್ರತಾ ಮಂಡಳಿಯ ನಡೆದ ಕೌನ್ಸಿಲ್ ಚರ್ಚೆಯಲ್ಲಿ ಭಾರತವು ತನ್ನ ಪ್ಯಾಲೆಸ್ಟೀನಿಯನ್ ಸಹೋದರ ಸಹೋದರಿಯರೊಂದಿಗೆ ಐತಿಹಾಸಿಕ ಮತ್ತು ಬಲವಾದ ಸಂಬಂಧಗಳನ್ನು ಹಂಚಿಕೊಳ್ಳುತ್ತದೆ ಎಂದು ಹರೀಶ್ ಹೇಳಿದರು.**

## 12 ಅಪರಾಧಿಗಳ ಖುಲಾಸೆಗೊಳಿಸಿದ್ದ ಎಚ್‌ಸಿ ತೀರ್ಪಿಗೆ ಎಸ್‌ಸಿ ತಡೆ

• **ಉದಯವಾಹಿನಿ, ನವದೆಹಲಿ**



2006ರಲ್ಲಿ 180ಕ್ಕೂ ಹೆಚ್ಚು ಜನರ ಸಾವಿಗೆ ಕಾರಣವಾಗಿದ್ದ ಮುಂಬೈ ರೈಲು ಸ್ಫೋಟ ಪ್ರಕರಣದ 12 ತಪ್ಪಿತಸ್ಥರನ್ನು ಖುಲಾಸೆಗೊಳಿಸಿದ್ದ ಬಾಂಬೆ ಹೈಕೋರ್ಟ್ ತೀರ್ಪಿಗೆ ಸುಪ್ರೀಂ ಗುರುವಾರ ತಡೆ ನೀಡಿದೆ. ಹೈಕೋರ್ಟ್ ಆದೇಶವನ್ನು ಅಂತಿಮ ಎಂದು ಪರಿಗಣಿಸದೇ ಪ್ರಕರಣದಲ್ಲಿ ಭಾಗಿಯಾಗಿದ್ದಾರೆ ಎನ್ನಲಾದ 12 ಆರೋಪಿಗಳನ್ನು ಮರಳಿ ಜೈಲಿಗೆ ಕರತರಬೇಕು ಎಂದು ನ್ಯಾ. ಎಂ.ಎಂ. ಸುಂದ್ರೇಶ್ ಮತ್ತು ನ್ಯಾ. ಎನ್. ಕೋಟೇಶ್ವರ್ ಸಿಂಗ್ ಅವರಿದ್ದ ಪೀಠ ಹೇಳಿತು. ಎಲ್ಲಾ ಆರೋಪಿಗಳಿಗೆ ನೋಟಿಸ್ ಜಾರಿ ಮಾಡಿದ ಸುಪ್ರೀಂ ಕೋರ್ಟ್, ಈ ವಿಷಯದಲ್ಲಿ ಮೇಲ್ಮನವಿ ಸಲ್ಲಿಸಿದ ರಾಜ್ಯ ಸರ್ಕಾರದ ಪ್ರತಿಕ್ರಿಯೆ ಕೇಳಿತು. ಎಲ್ಲಾ ಆರೋಪಿಗಳನ್ನು ಖುಲಾಸೆಗೊಳಿಸಲಾಗಿದ್ದು, ಅವರೆಲ್ಲರನ್ನೂ ಮರಳಿ ಜೈಲಿಗೆ ಕರೆತರಬೇಕು. ಆದಾಗ್ಯೂ, ಸಾಲಿಸಿಟರ್ ಜನರಲ್ ಅವರು ಕಾನೂನಿನ ಪ್ರಶ್ನೆ ಎತ್ತಿದ್ದು, ಆಕ್ಷೇಪಾರ್ಹ ತೀರ್ಪನ್ನು ಪೂರ್ವನಿರ್ದೇಶನ ಎಂದು ಪರಿಗಣಿಸಲು ಸಾಧ್ಯವಿಲ್ಲ.

ಹೀಗಾಗಿ ಈ ಆಕ್ಷೇಪಾರ್ಹ ತೀರ್ಪಿಗೆ ತಡೆ ನೀಡಲಾಗುವುದು ಎಂದು ಪೀಠ ಹೇಳಿತು. ಮಹಾರಾಷ್ಟ್ರ ಸರ್ಕಾರದ ಪರವಾಗಿ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ವಾದ ಮಂಡಿಸಿದರು.

2006ರಲ್ಲಿ ನಡೆದ ಮುಂಬೈ ರೈಲು ಸ್ಫೋಟ ಪ್ರಕರಣದಲ್ಲಿ 12 ಆರೋಪಿಗಳನ್ನು ಖುಲಾಸೆಗೊಳಿಸಿದ್ದ ಬಾಂಬೆ ಹೈಕೋರ್ಟ್‌ನ ತೀರ್ಪನ್ನು ಮಹಾರಾಷ್ಟ್ರ ಸರ್ಕಾರವು ಸುಪ್ರೀಂ ಕೋರ್ಟ್‌ನಲ್ಲಿ ಪ್ರಶ್ನಿಸಿತ್ತು. ಮಹಾರಾಷ್ಟ್ರ ಸಂಘಟಿತ ಅಪರಾಧಗಳ ನಿಯಂತ್ರಣ ಕಾಯ್ದೆಯನ್ನು ಹೈಕೋರ್ಟ್ ಪರಿಗಣಿಸಿಲ್ಲ ಎಂದು ಆರೋಪಿಸಿತ್ತು. 2006ರ ಜುಲೈ 11ರಂದು ಮುಂಬೈ ಲೋಕಲ್ ರೈಲು ಸಂಚರಿಸುವ ಹಲವು ಮಾರ್ಗಗಳಲ್ಲಿ ಏಳು ಕಡೆ ಸ್ಫೋಟ ಸಂಭವಿಸಿ 180ಕ್ಕೂ ಹೆಚ್ಚು ಜನರು ಮೃತಪಟ್ಟಿದ್ದರು.

ಈ ಪ್ರಕರಣದಲ್ಲಿ ಭಾಗಿಯಾಗಿದ್ದಾರೆ ಎನ್ನಲಾದ 12 ಆರೋಪಿಗಳನ್ನು ತಪ್ಪಿತಸ್ಥರು ಎಂದು ಅಭಿಪ್ರಾಯಪಟ್ಟಿದ್ದ ವಿಶೇಷ ನ್ಯಾಯಾಲಯ 2015ರಲ್ಲಿ ಶಿಕ್ಷೆ ಪ್ರಕಟಿಸಿತ್ತು.

ಐವರಿಗೆ ಮರಣದಂಡನೆ ಮತ್ತು ಏಳು ಅಪರಾಧಿಗಳಿಗೆ ಜೀವಾವಧಿ ಶಿಕ್ಷೆ ಪ್ರಕಟಿಸಿತ್ತು. ಶಿಕ್ಷೆ ಪ್ರಶ್ನಿಸಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಲಾಗಿತ್ತು. ಅರ್ಜಿಯ ವಿಚಾರಣೆ ನಡೆಸಿದ ಬಾಂಬೆ ಹೈ ಕೋರ್ಟ್, ಈ ಪ್ರಕರಣದಲ್ಲಿ 12 ಆರೋಪಿಗಳ ವಿರುದ್ಧ ಆರೋಪ ಸಾಬೀತುಪಡಿಸುವಲ್ಲಿ ಪ್ರಾಸಿಕ್ಯೂಷನ್ ಸಂಪೂರ್ಣವಾಗಿ ವಿಫಲವಾಗಿದೆ. ಹೀಗಾಗಿ ಬಾಂಬ್ ಸ್ಫೋಟ ಇವರೇ ನಡೆಸಿದ್ದಾರೆ ಎಂದು ನಂಬುವುದು ತೀರಾ ಕಷ್ಟ ಎಂದು ನ್ಯಾ. ಅನಿಲ್ ಕಿಲೋರ್, ನ್ಯಾಯಮೂರ್ತಿ ಶ್ಯಾಮ್ ಚಂಡಕ್ ಅವರನ್ನೊಳಗೊಂಡ ವಿಶೇಷ ಪೀಠವು ಅಭಿಪ್ರಾಯಪಟ್ಟಿತು.

## 6 ಅಡಿ ಎತ್ತರದವರೆಗಿನ ಗಣೇಶ ಮೂರ್ತಿಗಳನ್ನು ಕೃತಕ ತೊಟ್ಟಿಯಲ್ಲೇ ವಿಸರ್ಜಿಸಿ: ಕೋರ್ಟ್

**ಮುಂಬೈ:** ಆಗಸ್ಟ್ 27ರಿಂದ ಆಚರಿಸಲಾಗುವ 10 ದಿನಗಳ ಗಣೇಶ ಉತ್ಸವದಲ್ಲಿ ಪ್ರತಿಷ್ಠಾಪಿಸುವ ಆರು ಅಡಿ ಎತ್ತರದವರೆಗಿನ ಎಲ್ಲಾ ಮಾದರಿಯ ಗಣೇಶ ಮೂರ್ತಿಗಳನ್ನು ಕೃತಕ ತೊಟ್ಟಿಗಳಲ್ಲೇ ವಿಸರ್ಜಿಸಬೇಕು ಎಂದು ಬಾಂಬೆ ಹೈಕೋರ್ಟ್ ಗುರುವಾರ ಆದೇಶಿಸಿದೆ. ಪ್ಲಾಸ್ಟರ್ ಆಫ್ ಪ್ಯಾರೀಸ್ (ಪಿಒಪಿ) ವಿಗ್ರಹಗಳಿಗೆ ಸಂಬಂಧಿಸಿದಂತೆ ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿಯ (ಸಿಪಿಸಿಬಿ) ಪರಿಷ್ಕೃತ ಮಾರ್ಗಸೂಚಿಗಳನ್ನು ಜಾರಿಗೆ ತರುವಂತೆ ಕೋರಿ ಸಲ್ಲಿಸಲಾದ ಅರ್ಜಿಗಳ ವಿಚಾರಣೆ ಸಂದರ್ಭದಲ್ಲಿ ನ್ಯಾಯಮೂರ್ತಿ ಅಲೋಕ್ ಆರಾಧೆ. ಸಂದೀಪ್ ಮಾರ್ನೆ ನೇತೃತ್ವದ ನ್ಯಾಯಪೀಠವು ಈ ತೀರ್ಪು ನೀಡಿದೆ.

ಮೂರ್ತಿಗಳ ವಿಸರ್ಜನೆಯಿಂದ ಪರಿಸರದ ಮೇಲೆ ಆಗುವಂತಹ ದುಷ್ಪರಿಣಾಮಗಳನ್ನು ತಡೆಗಟ್ಟುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ. ಆದ್ದರಿಂದ 6 ಅಡಿ ಎತ್ತರದವರೆಗಿನ ಎಲ್ಲಾ ವಿಗ್ರಹಗಳನ್ನು ಕೃತಕ ನೀರಿನ ತೊಟ್ಟಿಗಳಲ್ಲಿ ಕಡ್ಡಾಯವಾಗಿ ವಿಸರ್ಜಿಸಬೇಕು ಎಂದೂ ನ್ಯಾಯಪೀಠ ಹೇಳಿದೆ. ಪಿಒಪಿ ಗಣೇಶ ಮೂರ್ತಿಗಳು ಸೇರಿದಂತೆ ವಿವಿಧ ದೇವತೆಗಳ ಮೂರ್ತಿಗಳನ್ನು ವಿಸರ್ಜಿಸುವ ಅಗತ್ಯವಿರುವ ಹಬ್ಬಗಳಿಗೂ ಅನ್ವಯವಾಗುವಂತೆ ಈ ಆದೇಶವು ಮುಂದಿನ ವರ್ಷದ (2026) ಮಾರ್ಚ್‌ವರೆಗೆ ಜಾರಿಯಲ್ಲಿರುತ್ತದೆ ಎಂದು ಕೋರ್ಟ್ ತಿಳಿಸಿದೆ. ಸ್ಥಳೀಯ ಸಂಸ್ಥೆಗಳು ಆರು ಅಡಿ ಎತ್ತರದವರೆಗಿನ ಗಣೇಶ ಮೂರ್ತಿಗಳನ್ನು ಕೃತಕ ನೀರಿನ ತೊಟ್ಟಿಗಳಲ್ಲಿ ವಿಸರ್ಜಿಸುವುದನ್ನು ಖಚಿತಪಡಿಸಿಕೊಳ್ಳಬೇಕು. ಜತೆಗೆ, ಗಣೇಶ ಮೂರ್ತಿಗಳನ್ನು ವಿಸರ್ಜಿಸುವ ಬಗ್ಗೆ ತನ್ನ ನೀತಿಯ ಅನುಷ್ಠಾನವನ್ನು ಖಚಿತಪಡಿಸಿಕೊಳ್ಳುವಂತೆ ಹೈಕೋರ್ಟ್ ರಾಜ್ಯ ಸರ್ಕಾರಕ್ಕೆ ತಾಕೀತು ಮಾಡಿದೆ.



**ಪಿಒಪಿ ವಸ್ತುಗಳ ಮರುಬಳಕೆ**

**ಗಣೇಶ ಮೂರ್ತಿಗಳನ್ನು ತಯಾರಿಸಲು ಬಳಸುವ ಪಿಒಪಿ ವಸ್ತುಗಳನ್ನು ಮರುಬಳಕೆ ಮಾಡುವ ಕ್ರಮಗಳನ್ನು ಸೂಚಿಸಲು ತಜ್ಞರ ಸಮಿತಿಯನ್ನು ರಚಿಸುವಂತೆ ಹೈಕೋರ್ಟ್ ಸರ್ಕಾರ ನಿರ್ದೇಶನ ನೀಡಿದೆ. ಜತೆಗೆ, ಪರಿಸರ ಸ್ನೇಹಿ ರೀತಿಯಲ್ಲಿ ವಿಗ್ರಹಗಳನ್ನು ವಿಸರ್ಜಿಸಲು ಸಾಧ್ಯವಾಗುವಂತೆ ಕ್ರಮಗಳನ್ನು ತೆಗೆದುಕೊಳ್ಳುವಂತೆಯೂ ಕೋರ್ಟ್ ಆದೇಶಿಸಿದೆ.**

# ಚುನಾವಣಾ ಆಯೋಗದ ವಿರುದ್ಧ ತೀವ್ರ ವಾಗ್ದಾಳಿ

### ನಿಮ್ಮನ್ನು ಈ ಬಾರಿ ಬಿಡಲ್ಲ; ಮತ್ತೆ ಚುನಾವಣಾ ಆಯೋಗದ ವಿರುದ್ಧ ಗುಡುಗಿದ ರಾಹುಲ್ ಗಾಂಧಿ

**ವಿಚಾರ ಇಲ್ಲಿಗೇ ಬಿಡುವುದಿಲ್ಲ**



**ಹೊಸದಿಲ್ಲಿ:** ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಚುನಾವಣಾ ಆಯೋಗದ ವಿರುದ್ಧ ಮತ್ತೆ ಮುಗಿಬಿದ್ದಿದ್ದಾರೆ. ಗುರುವಾರ ಆಯೋಗಕ್ಕೆ ನೇರ ಸವಾಲು ಹಾಕಿರುವ ಅವರು, ನೀವು ನಿಮ್ಮ ಜವಾಬ್ದಾರಿಯಿಂದ ತಪ್ಪಿಸಿಕೊಳ್ಳಲು ಸಾಧ್ಯವಿಲ್ಲ. ನಿಮ್ಮನ್ನು ಬಿಡುವುದಿಲ್ಲ ಎನ್ನುವ ಅರ್ಥದಲ್ಲಿ ಗುಡುಗಿದ್ದಾರೆ. ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಬಿಹಾರದಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆಯನ್ನು ಸಮರ್ಥಿಸಿಕೊಂಡ ನಂತರ ಅವರು ಈ ತಿರುಗೇಟು ನೀಡಿದ್ದಾರೆ. ಸತ್ತ ಮತದಾರರನ್ನು ಮತದಾರರ ಪಟ್ಟಿಯಲ್ಲಿ ಸೇರಿಸಲು ಅನುಮತಿ ನೀಡಬೇಕಾ? ಎಂದು ಚುನಾವಣಾ ಆಯೋಗ ಪ್ರಶ್ನಿಸಿತ್ತು.

ಮತದಾರರ ಪಟ್ಟಿ ಪರಿಷ್ಕರಣೆ ಬಳಿಕ ಬಿಹಾರದಲ್ಲಿ 50 ಲಕ್ಷಕ್ಕೂ ಹೆಚ್ಚು ಜನರು ಮತದಾನದ ಹಕ್ಕುಗಳನ್ನು ಕಳೆದುಕೊಳ್ಳುತ್ತಿದ್ದಾರೆ ಎಂಬ ಕಾರಣಕ್ಕೆ, ಆರ್‌ಜೆಡಿ ಮತ್ತು ಕಾಂಗ್ರೆಸ್ ಚುನಾವಣಾ ಆಯೋಗದ ಮೇಲೆ ಮುಗಿಬಿದ್ದಿವೆ. ಈ ಸಂಬಂಧ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿರುವ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್, ನಕಲಿ ಮತದಾರರ ಫೋಟೋ ಗುರುತಿನ ಚೀಟಿಗಳು ಹೊಂದಿರುವ ಜನರು ಮತ್ತು ವಿದೇಶಿಯರನ್ನು ಮತದಾರರ ಪಟ್ಟಿಯಲ್ಲಿ ಸೇರಿಸಲು ಅನುಮತಿಸಬೇಕೇ? ಎಂದು ಖಾರವಾಗಿ ಪ್ರಶ್ನಿಸಿದ್ದರು. ಇದು ವಿರೋಧ ಪಕ್ಷಗಳ ಕಣ್ಣು ಕೆಂಪಗಾಗಿಸಿದೆ. ಈ ಸಂಬಂಧ ಸಂಸತ್ತಿನ ಹೊರಗೆ ಸುದ್ದಿಗಾರರೊಂದಿಗೆ ಮಾತನಾಡಿರುವ ರಾಹುಲ್ ಗಾಂಧಿ, ಕರ್ನಾಟಕದ ಲೋಕಸಭಾ ಕ್ಷೇತ್ರಗಳನ್ನು ಅಧ್ಯಯನ ಮಾಡಲಾಗಿದ್ದು, ಮತ ಕಳ್ಳತನದ ಕಾರ್ಯವಿಧಾನವನ್ನು ಪತ್ತೆ ಹಚ್ಚಿದ್ದೇವೆ ಎಂದು ತಿಳಿಸಿದರು. ಮತ ಕಳ್ಳತನ ಹೇಗೆ ನಡೆಯುತ್ತಿದೆ ಎಂಬುದನ್ನು ಕಾಂಗ್ರೆಸ್ ಪಕ್ಷ ಚುನಾವಣಾ ಆಯೋಗದ ಮುಂದೆ ಸ್ಪಷ್ಟವಾಗಿ ತೆರೆದಿಡಲಿದೆ. ನಾವು ಈ ವಿಚಾರವನ್ನು ಇಲ್ಲಿಗೇ ಬಿಡುವುದಿಲ್ಲ ಎಂದರು. ಇದು ಕೇವಲ 52 ಲಕ್ಷ ಮತದಾರರ ಪ್ರಶ್ನೆ ಅಲ್ಲ. ಇದು ಕೇವಲ ಬಿಹಾರಕ್ಕೂ ಸೀಮಿತವಾಗಿಲ್ಲ. ಮಹಾರಾಷ್ಟ್ರದಲ್ಲಿಯೂ ಮೋಸ ಮಾಡಿದ್ದಾರೆ. ನಾವು ಚುನಾವಣಾ ಆಯೋಗಕ್ಕೆ ಪ್ರಶ್ನೆಗಳನ್ನು ಕೇಳಿದ್ದು, ಮತದಾರರ ಪಟ್ಟಿಯನ್ನು ತೋರಿಸಲು ಹೇಳಿದ್ದೇವೆ. ಆದರೆ ಅವರು ಮತದಾರರ ಪಟ್ಟಿಯನ್ನು ತೋರಿಸಿಲ್ಲ. ವಿಡಿಯೋಗ್ರಫಿ ಕೇಳಿದಾಗ, ಕಾನೂನನ್ನೇ ಬದಲಾಯಿಸಿದರು. ಮಹಾರಾಷ್ಟ್ರದಲ್ಲಿ ಒಂದು ಕೋಟಿ ಹೊಸ ಮತದಾರರು ಬಂದಿದ್ದರು. ಈ ಮೂಲಕ ಚುನಾವಣೆಯನ್ನೇ ಬುಡಮೇಲು ಮಾಡಿದ್ದರು ಎಂದು ವಿರೋಧ ಪಕ್ಷದ ನಾಯಕರು ಸಂಸತ್ತಿನ ಆವರಣದಲ್ಲಿ ಸುದ್ದಿಗಾರರಿಗೆ ತಿಳಿಸಿದರು.

**ತಪ್ಪಿಸಿಕೊಳ್ಳಲು ಸಾಧ್ಯವಿಲ್ಲ**

**ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಚುನಾವಣಾ ಆಯೋಗದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದು, ಜವಾಬ್ದಾರಿಯಿಂದ ತಪ್ಪಿಸಿಕೊಳ್ಳಲು ಸಾಧ್ಯವಿಲ್ಲ ಎಂದು ಗುರುವಾರ ಗುಡುಗಿದ್ದಾರೆ. ಬಿಹಾರದಲ್ಲಿ ಮತದಾರರ ಪಟ್ಟಿ ಪರಿಷ್ಕರಣೆಯಲ್ಲಿ ಅಕ್ರಮ ನಡೆದಿದೆ ಎಂದು ಆರೋಪಿಸಿರುವ ಅವರು, ಮಹಾರಾಷ್ಟ್ರದಲ್ಲಿಯೂ ಈ ಹಿಂದೆ ಮೋಸ ನಡೆದಿದೆ ಎಂದು ದೂರಿದ್ದಾರೆ. ಈ ಬಗ್ಗೆ ಚುನಾವಣಾ ಆಯೋಗದ ನಡೆಯನ್ನು ಪ್ರಶ್ನಿಸಿ ಕಾಂಗ್ರೆಸ್ ನಿರಂತರವಾಗಿ ಟೀಕೆ ಮಾಡುತ್ತಿದೆ.**

- **ಚುನಾವಣಾ ಆಯೋಗದ ವಿರುದ್ಧ ಮುಗಿಬಿದ್ದಿದ್ದಾರೆ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ**
- **ಮತದಾರರ ಪಟ್ಟಿಯ ಪರಿಷ್ಕರಣೆಯ ಬಗ್ಗೆ ಆಯೋಗವನ್ನು ಪ್ರಶ್ನಿಸಿದ್ದಾರೆ ವಿರೋಧ ಪಕ್ಷದ ನಾಯಕ**
- **ನಕಲಿ ಮತದಾರರ ಮಾಹಿತಿಯನ್ನು ಮತದಾರರ ಪಟ್ಟಿಯಲ್ಲಿ ಸೇರಿಸಲು ಅನುಮತಿಸಬೇಕೇ ಎಂದು ಪ್ರಶ್ನಿಸಿದ್ದ ಆಯೋಗ**


ಉದಯ ವಾಹಿನಿ

ಪ್ರಾದೇಶಿಕ

ಶುಕ್ರವಾರ 25 ಜುಲೈ 2025 | 07


## ಮಿನಿ ನ್ಯೂಸ್

### ಏರ್ ಇಂಡಿಯಾ ಎಕ್ಸ್‌ಪ್ರೆಸ್ ವಿಮಾನದಲ್ಲಿ ತಾಂತ್ರಿಕ ದೋಷ, ಟೇಕ್ ಆಫ್ ಸ್ಥಗಿತ

**ನವದೆಹಲಿ:** ಸುಮಾರು 160 ಪ್ರಯಾಣಿಕರೊಂದಿಗೆ ಮುಂಬೈಗೆ ಹೊರಟಿದ್ದ ಏರ್ ಇಂಡಿಯಾ ಎಕ್ಸ್‌ಪ್ರೆಸ್ ವಿಮಾನವು ತಾಂತ್ರಿಕ ದೋಷದಿಂದಾಗಿ ಸ್ಥಗಿತಗೊಂಡ ಘಟನೆ ಇಲ್ಲಿ ನಡೆದಿದೆ. ದಿಲ್ಲಿಯಿಂದ ಹೊರಟಿದ್ದ ವಿಮಾನದಲ್ಲಿ ಪೈಲೆಟ್ ತಾಂತ್ರಿಕ ಸಮಸ್ಯೆ ಗುರುತ್ತಿಸಿದ ನಂತರ ಸುರಕ್ಷತಾ ದೃಷ್ಟಿಯಿಂದ ಮೇಲೆ ಹಾರುವ ಸಂದರ್ಭದಲ್ಲಿ ನಿಂತಿದೆ ಎಂದು ಏರ್ ಇಂಡಿಯಾ ಎಕ್ಸ್‌ಪ್ರೆಸ್ ವಕ್ತಾರರು ತಿಳಿಸಿದ್ದಾರೆ. ಕಾಕ್ ಪಿಟ್‌ನಲ್ಲಿ ವೇಗದ ನಿಯತಾಂಕಗಳನ್ನು ಪ್ರದರ್ಶಿಸುವ ಪರದೆಗಳಲ್ಲಿ ದೋಷ ಕಂಡುಬಂದ ಕಾರಣ ಪೈಲಟ್ ಟೇಕ್ ಆಫ್‌ಅನ್ನು ಸ್ಥಗಿತಗೊಳಿಸಲು ನಿರ್ಧರಿಸಿದ್ದಾರೆ ಎಂದು ಮೂಲವೊಂದು ತಿಳಿಸಿದೆ. ಪ್ರಯಾಣಿಕರನ್ನು ಕೆಳಗಿಳಿಸಿ ಮುಂಬೈಗೆ ಹೊರಟಿದ್ದ ಪರ್ಯಾಯ ವಿಮಾನದಲ್ಲಿ ಕಳುಹಿಸಲಾಯಿತು ಎಂದು ವಕ್ತಾರರು ತಿಳಿಸಿದ್ದಾರೆ. ಅನಾನುಕೂಲತೆಗೆ ವಿಷಾದ ವ್ಯಕ್ತಪಡಿಸುತ್ತಾ ಸುರಕ್ಷತೆ ಮುಖ್ಯ ಎಂದು ವಿಮಾನಯಾನ ಸಂಸ್ಥೆ ಪುನರುಚ್ಚರಿಸಿದೆ.

### ಗಡಿ ಸ್ಥಿತಿ; ಭಾರತದೊಂದಿಗೆ ಮಾತುಕತೆ ಮುಕ್ತವಾಗಿತ್ತು: ಚೀನಾ

**ಬೀಜಿಂಗ್:** ಗಡಿ ಪರಿಸ್ಥಿತಿಯ ಬಗ್ಗೆ ಭಾರತದ ಜೊತೆಗಿನ ರಾಜತಾಂತ್ರಿಕ ಮಾತುಕತೆ ಮುಕ್ತವಾಗಿತ್ತು ಎಂದು ಚೀನಾ ಗುರುವಾರ ಹೇಳಿದೆ. ಗಡಿ ವಿಚಾರದ ಬಗ್ಗೆ ನವದೆಹಲಿಯಲ್ಲಿ ಉಭಯ ದೇಶಗಳು ಬುಧವಾರ ಮಾತುಕತೆ ನಡೆಸಿದ್ದವು. ಸಭೆಯ ಕುರಿತು ಇಲ್ಲಿ ಪತ್ರಿಕಾ ಹೇಳಿಕೆ ನೀಡಿರುವ ಚೀನಾ ವಿದೇಶಾಂಗ ಸಚಿವಾಲಯ, ಮಾತುಕತೆಯು ಯಾವುದೇ ಮುಚ್ಚುಮರೆಯಿಲ್ಲದೆ ಮುಕ್ತವಾಗಿ ನಡೆಯಿತು ಎಂದು ಹೇಳಿದೆ.

ಚೀನಾ-ಭಾರತ ಗಡಿ ಕುರಿತ 23ನೇ ವಿಶೇಷ ಪ್ರತಿನಿಧಿಗಳ ಸಭೆಯಲ್ಲಿನ ತೀರ್ಮಾನಗಳನ್ನು ಜಾರಿಗೆ ತರಲು ಎರಡೂ ದೇಶಗಳು ಗಂಭೀರವಾಗಿ ಚರ್ಚಿಸಿ, 24ನೇ ವಿಶೇಷ ಪ್ರತಿನಿಧಿಗಳ ಸಭೆಗೆ ಒಟ್ಟಾಗಿ ಸಿದ್ಧತೆ ನಡೆಸಲು ಒಪ್ಪಿಕೊಂಡವು ಎಂದು ಚೀನಾ ವಿದೇಶಾಂಗ ಸಚಿವಾಲಯ ಹೇಳಿದೆ.

### ಥಾಯ್ಲೆಂಡ್-ಕಾಂಬೋಡಿಯಾ ಸೇನೆಗಳ ಸಂಘರ್ಷ: 12 ಸಾವು

**ಬ್ಯಾಂಕಾಂಕ್:** ಥಾಯ್ಲೆಂಡ್, ಕಾಂಬೋಡಿಯಾ ಸೇನೆಗಳು ಗುರುವಾರ ಪರಸ್ಪರ ದಾಳಿ ನಡೆಸಿದ್ದು, ಕನಿಷ್ಠ 12 ಮಂದಿ ಮೃತಪಟ್ಟಿದ್ದಾರೆ. ಮೃತರಲ್ಲಿ ಹೆಚ್ಚಿನವರು ನಾಗರಿಕರಾಗಿದ್ದಾರೆ. ರಾಕೆಟ್, ಫಿರಂಗಿ ಶೆಲ್‌ಗಳನ್ನು ಥಾಯ್ಲೆಂಡ್ ಮೇಲೆ ಕಾಂಬೋಡಿಯಾ ಹಾರಿಸಿದೆ. ಥಾಯ್ಲೆಂಡ್ ಎಫ್-16 ಜೆಟ್ ಸಹಾಯದಿಂದ ವೈಮಾನಿಕ ದಾಳಿ ನಡೆಸಿದೆ. ಕಾಬೋಡಿಯಾದ ಭೂಸೇನೆಯನ್ನು ಗುರಿಯಾಗಿಸಿಕೊಂಡು ವೈಮಾನಿಕ ದಾಳಿ ನಡೆಸಲಾಗಿದೆ ಎಂದು ಥಾಯ್ಲೆಂಡ್ ಸೇನೆ ತಿಳಿಸಿದೆ. ಒಬ್ಬರು ಸೈನಿಕರು ಮತ್ತು 11 ಮಂದಿ ನಾಗರಿಕರು ಮೃತಪಟ್ಟಿದ್ದಾರೆ. ಪೆಟ್ರೋಲ್ ಬಂಕ್‌ವೊಂದರ ಮೇಲೆ ರಾಕೆಟ್ ದಾಳಿ ನಡೆದಿದ್ದು, ಹೆಚ್ಚಿನವರು ಈ ದಾಳಿಯಲ್ಲಿ ಮೃತಪಟ್ಟಿದ್ದಾರೆ. 35 ನಾಗರಿಕರು ಗಾಯಗೊಂಡಿದ್ದಾರೆ ಎಂದು ಥಾಯ್ಲೆಂಡ್ ಆರೋಗ್ಯ ಸಚಿವಾಲಯ ತಿಳಿಸಿದೆ. ಗಡಿಯುದ್ದಕ್ಕೂ ಕನಿಷ್ಠ ಆರು ಪ್ರಾಂತ್ಯಗಳಲ್ಲಿ ಘರ್ಷಣೆ ಮುಂದುವರೆದಿದೆ ಎಂದು ಥಾಯ್ಲೆಂಡ್ ರಕ್ಷಣಾ ಸಚಿವಾಲಯದ ವಕ್ತಾರ ಸುರಸಂತ್ ಕೊಂಗ್ರಿರಿ ಹೇಳಿದ್ದಾರೆ. ಥಾಯ್ಲೆಂಡ್ ತನ್ನ ನಾಗರಿಕರಿಗೆ ಕಾಂಬೋಡಿಯಾ ತೊರೆಯುವಂತೆ ಒತ್ತಾಯಿಸಿದ್ದು, ಎಲ್ಲಾ ಭೂಗಡಿಗಳನ್ನು ಮುಚ್ಚಿದೆ. ಮೇ ತಿಂಗಳಲ್ಲಿ ನಡೆದ ಸಶಸ್ತ್ರ ಮುಖಾಮುಖಿಯಲ್ಲಿ ಕಾಂಬೋಡಿಯಾದ ಸೈನಿಕರೊಬ್ಬರು ಮೃತಪಟ್ಟ ಬಳಿಕ ಎರಡೂ ದೇಶಗಳ ನಡುವಿನ ಸಂಬಂಧ ಹದಗೆಟ್ಟಿದೆ.

### ದೇಶದ್ರೋಹ ಆರೋಪ: ಮಾಜಿ ಮುಖ್ಯ ನ್ಯಾಯಮೂರ್ತಿ ಖೈರುಲ್ ಹಕಿ ಬಂಧನ

**ಢಾಕಾ:** ದೇಶದ್ರೋಹ ಸೇರಿದಂತೆ ಮೂರು ಕ್ರಿಮಿನಲ್ ಪ್ರಕರಣಗಳಲ್ಲಿ ಬಾಂಗ್ಲಾದೇಶದ ಮಾಜಿ ಮುಖ್ಯ ನ್ಯಾಯಮೂರ್ತಿ ಎಬಿಎಂ ಖೈರುಲ್ ಹಕಿ ಅವರನ್ನು ಬಂಧಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. 2010ರಿಂದ 2011ರವರೆಗೆ 19ನೇ ಮುಖ್ಯ ನ್ಯಾಯಮೂರ್ತಿಯಾಗಿ ಹಕಿ ಕಾರ್ಯನಿರ್ವಹಿಸಿದ್ದರು. ಢಾಕಾದ ಧನಮೊಂಡಿ ಪ್ರದೇಶದಲ್ಲಿರುವ ಅವರ ನಿವಾಸದಿಂದ ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

2011ರಲ್ಲಿ ಹಂಗಾಮಿ ಸರ್ಕಾರ ವ್ಯವಸ್ಥೆ, ಮಧ್ಯಂತರ ಸರ್ಕಾರದ ವ್ಯವಸ್ಥೆ ಅಸಂವಿಧಾನಿಕ ಎಂಬ ತೀರ್ಪು ಸೇರಿದಂತೆ ಮಹತ್ವದ ತೀರ್ಪುಗಳನ್ನು ಹಕಿ ಅವರು ನೀಡಿದ್ದರು. ಮೂರು ಪ್ರಕರಣಗಳಲ್ಲಿ ಆರೋಪಿಯಾಗಿದ್ದು, ಕಾನೂನು ಪ್ರಕ್ರಿಯೆ ನಡೆಯುತ್ತಿದೆ. ನ್ಯಾಯಾಲಯಕ್ಕೆ ಹಾಜರುಪಡಿಸುವ ಮೊದಲು ಅವರ ಬಂಧನ ಒಂದು ಪ್ರಕರಣದಲ್ಲಾದರೂ ಆಗಿದೆ ಎಂಬುದನ್ನು ತೋರಿಸಲಾಗುವುದು ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. 2024ರ ಆಗಸ್ಟ್‌ನಲ್ಲಿ ಹಕಿ ವಿರುದ್ಧ ವಿವಿಧ ವಕೀಲರು ದೂರು ದಾಖಲಿಸಿದ್ದರು. ಆಗಸ್ಟ್ 5ರಂದು ಪ್ರಧಾನ ಮಂತ್ರಿ ಅವಾಮಿ ಲೀಗ್ ಪಕ್ಷದ ಶೇಖ್ ಹಸೀನಾ ಅವರ ಸರ್ಕಾರ ಪತನಗೊಂಡಿತು. ಆ ಸಮಯದಲ್ಲಿ ಹಕಿ ಅವರು ಕಾನೂನು ಆಯೋಗದ ಅಧ್ಯಕ್ಷರಾಗಿದ್ದರು. ಅ.13ರಂದು ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು. ಢಾಕಾದಲ್ಲಿ ಮೊದಲು ವಂಚನೆ ಮತ್ತು ಸರ್ಕಾರಿ ವ್ಯವಸ್ಥೆಗೆ ಸಂಬಂಧಿಸಿದ 13 ನೇ ಸಾಂವಿಧಾನಿಕ ತಿದ್ದುಪಡಿಯನ್ನು ರದ್ದುಗೊಳಿಸುವ ತೀರ್ಪನ್ನು ಬದಲಾಯಿಸುವಲ್ಲಿ ನಕಲಿ ಸಹಿ ಹಾಕಿದ್ದಾರೆ ಎಂದು ಆರೋಪಿಸಲಾಗಿದೆ. ವಾರದ ಬಳಿಕ ಅದೇ ವಿಚಾರಕ್ಕೆ ಢಾಕಾದ ಹೊರವಲಯದಲ್ಲಿ ರಿವರ್ ಪೋರ್ಟ್ ಟೌನ್‌ನಲ್ಲಿ ಪ್ರಕರಣ ದಾಖಲಾಗಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

### ಮುಕ್ತ ವ್ಯಾಪಾರ ಒಪ್ಪಂದಕ್ಕೆ ಭಾರತ-ಬ್ರಿಟನ್ ಸಹಿ

**ಲಂಡನ್:** ಭಾರತ, ಬ್ರಿಟನ್ ದೇಶಗಳು ಐತಿಹಾಸಿಕ ಮುಕ್ತ ವ್ಯಾಪಾರ ಒಪ್ಪಂದಕ್ಕೆ ಸಹಿ ಹಾಕಿವೆ. ಲಂಡನ್‌ನಲ್ಲಿ ಪ್ರಧಾನಿ ನರೇಂದ್ರ ಓದಿ ಮತ್ತು ಬ್ರಿಟನ್ ಪ್ರಧಾನಿ ಸ್ಟಾರ್ಮರ್ ಸಮ್ಮುಖದಲ್ಲಿ ಉಭಯ ದೇಶಗಳ ವಾಣಿಜ್ಯ ಸಚಿವರು ಒಪ್ಪಂದಗಳಿಗೆ ಸಹಿ ಹಾಕಿದ್ದಾರೆ. ಇದು ಉಭಯ ದೇಶಗಳಿಗೂ ಮಾರುಕಟ್ಟೆ ಪ್ರವೇಶವನ್ನು ಗಮನಾರ್ಹವಾಗಿ ಸುಧಾರಿಸುತ್ತದೆ. ವಾರ್ಷಿಕವಾಗಿ ಸುಮಾರು 34 ಶತಕೋಟಿ ಡಾಲರ್‌ನಷ್ಟು ದ್ವಿಪಕ್ಷೀಯ ವ್ಯಾಪಾರವನ್ನು ಹೆಚ್ಚಿಸುತ್ತದೆ. ಈ ಒಪ್ಪಂದದಿಂದಾಗಿ ಭಾರತವು ಶೇ 99ರಷ್ಟು ರಫ್ತಿನ ಮೇಲೆ ಸುಂಕ ರಹಿತ ಪ್ರಯೋಜನವನ್ನು ಪಡೆಯುತ್ತದೆ. ಬ್ರಿಟಿಷ್ ಸಂಸ್ಥೆಗಳು ಒಟ್ಟಾರೆ ವ್ಯಾಪಾರ ಪ್ರಮಾಣವನ್ನು ಹೆಚ್ಚಿಸುವುದರ ಜೊತೆಗೆ ಭಾರತಕ್ಕೆ ವಿಸ್ಕಿ, ಕಾರುಗಳು ಮತ್ತು ಇತರ ಉತ್ಪನ್ನಗಳನ್ನು ಮುಕ್ತವಾಗಿ ರಫ್ತು ಮಾಡಲು ಅನುವು ಮಾಡಿಕೊಡುತ್ತದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಮೂರು ವರ್ಷಗಳ ಮಾತುಕತೆಗಳ ನಂತರ ದೃಢೀಕರಿಸಲ್ಪಟ್ಟ ಈ ವ್ಯಾಪಾರ ಒಪ್ಪಂದವು ಎಲ್ಲಾ ವಲಯಗಳಲ್ಲಿ ಭಾರತೀಯ ಸರಕುಗಳಿಗೆ ಸಮಗ್ರ ಮಾರುಕಟ್ಟೆ ಪ್ರವೇಶವನ್ನು ಖಚಿತಪಡಿಸುತ್ತದೆ ಎಂದು ವರದಿ ತಿಳಿಸಿದೆ. ಈ ಒಪ್ಪಂದ ಜಾರಿಗೆ ಬರಲು ಬ್ರಿಟನ್ ಸಂಸತ್ತಿನ ಅನುಮೋದನೆಯ ಅಗತ್ಯವಿದೆ. ಈ ಪ್ರಕ್ರಿಯೆಯು ಸುಮಾರು ಒಂದು ವರ್ಷ ತೆಗೆದುಕೊಳ್ಳಬಹುದು ಎನ್ನಲಾಗಿದೆ.

